ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 4 ಮಂಗಳವಾರ 2023

ಸಂಪುಟ: 43 | ಸಂಚಿಕೆ: 344 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹ 4

ಒಳಪುಟಗಳಲ್ಲಿ

ಏ.8ಕ್ಕೆ ಬಿಜೆಪಿ ಮೊದಲ ಪಟ್ಟಿ, ನಾಳೆ ಕಾಂಗ್ರೆಸ್ ಅಭ್ಯರ್ಥಿಗಳ 2ನೇ ಪಟ್ಟಿ ಪ್ರಕಟ

ಬೆಂಗಳೂರು, ಏ.3(ಕೆಎಂಶಿ)– ಆಡಳಿತಾರೂಢ ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿ ಏ.8ರಂದು ಪ್ರಕಟಗೊಂಡರೆ, ಕಾಂಗ್ರೆಸ್‌ನ 60 ಅಭ್ಯರ್ಥಿಗಳ ಎರಡನೇ ಪಟ್ಟಿ ಏ.5ರಂದು ಹೊರಬೀಳಲಿದೆ.

ರಾಜ್ಯ ವಿಧಾನಸಭೆಗೆ ಚುನಾವಣಾ ವೇಳಾಪಟ್ಟಿ ಪ್ರಕಟಗೊಂಡರೂ ಬಿಜೆಪಿ ಇನ್ನೂ ಅಭ್ಯರ್ಥಿಗಳ ಆಯ್ಕೆಗೆ ಕಸರತ್ತು ನಡೆಸುತ್ತಲೇ ಇದೆ. ರಾಜ್ಯ ಘಟಕ ಎಷ್ಟೇ ಪ್ರಯತ್ನ ನಡೆಸಿದರೂ ವರಿಷ್ಠರು ತಮ್ಮಲ್ಲಿರುವ ಮಾಹಿತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಗುರುತಿಸಿ ಅಂತಿಮಗೊಳಿಸುತ್ತಾರೆ. ವರಿಷ್ಠರ ತೀರ್ಮಾನದಂತೆ ಅಚ್ಚರಿ ಮುಖಗಳು ಹೊರಬರಲಿದ್ದು, ಇದರಿಂದ ಹಾಲಿ ಶಾಸಕರು ಮತ್ತು ಪ್ರಭಾವಿ ಆಕಾಂಕ್ಷಿಗಳಿಗೆ ಹಿನ್ನಡೆಯಾಗಲಿದೆ. ಪಕ್ಷದ ಟಿಕೆಟ್ ವಂಚಿತರು ಕಾಂಗ್ರೆಸ್ ಮತ್ತು ಜೆಡಿಎಸ್ ಕದ ತಟ್ಟಬಹುದು ಎಂಬ ಹಿನ್ನೆಲೆಯಲ್ಲಿ ನಾಳೆ ಹೊರಬರಬೇಕಿದ್ದ ಪಟ್ಟಿ ಮತ್ತಷ್ಟು ವಿಳಂಬವಾಗುತ್ತಿದೆ.

ಬಿಜೆಪಿ ಪಟ್ಟಿಗಾಗಿ ಎರಡೂ ವಿರೋಧ ಪಕ್ಷಗಳ ನಾಯಕರು ಕಾದು ಕುಳಿತಿದ್ದಾರೆ. ಇದರಿಂದ ಒಂದಷ್ಟು ಲಾಭವಾಗಬಹುದೆಂಬ ನಿರೀಕ್ಷೆಯ ಲೆಕ್ಕಾಚಾರ ಅವರದಾಗಿದೆ. ತಮಗೆ ಅನುಕೂಲವಾಗಲಿದೆ ಎಂಬ ಕ್ಷೇತ್ರಗಳಿಗೆ ತಡ ಮಾಡದೇ ಕಾಂಗ್ರೆಸ್ ಮತ್ತು ಜೆಡಿಎಸ್ ಈಗಾಗಲೇ ಮೊದಲ ಪಟ್ಟಿ ಬಿಡುಗಡೆ ಮಾಡಿವೆ. ಕಾಂಗ್ರೆಸ್‌ನ ಸ್ಕ್ರೀನಿಂಗ್ ಕಮಿಟಿ ಕಳೆದ ಎರಡು ದಿನಗಳಿಂದ ಕಸರತ್ತು ನಡೆಸಿ 60 ಕ್ಷೇತ್ರಗಳಿಗೆ ಒಂದೇ ಹೆಸರನ್ನು ವರಿಷ್ಠರಿಗೆ ಶಿಫಾರಸ್ಸು ಮಾಡಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ನಾಳೆ ಚುನಾವಣಾ ಸಮಿತಿ ಸಭೆ ಸೇರಿ ಏ.5ರಂದು ಎರಡನೇ ಪಟ್ಟಿ ಬಿಡುಗಡೆ ಮಾಡಲಿದೆ ಇನ್ನು ಉಳಿದ ಕ್ಷೇತ್ರಗಳಿಗೆ ಬಿಜೆಪಿಯ ಪಟ್ಟಿ ಹೊರಬಂದ ನಂತರವೇ ಅಭ್ಯರ್ಥಿಗಳನ್ನು ಅಂತಿಮಗೊಳಿಸಲು ಕಾಂಗ್ರೆಸ್ ತೀರ್ಮಾನಿಸಿದೆ. ಜೆಡಿಎಸ್ ಮೊದಲ ಪಟ್ಟಿ ಬಿಡುಗಡೆ ಮಾಡಿದ್ದು, ಉಳಿದ ಕ್ಷೇತ್ರಗಳಿಗೆ ಬಿಜೆಪಿ ಮತ್ತು ಕಾಂಗ್ರೆಸ್‌ನಿಂದ ಹೊರಬರುವ ಮುಖಂಡರಿಗೆ ಅವಕಾಶ ಮಾಡಿಕೊಟ್ಟು ಅದರಿಂದ ಲಾಭ ಪಡೆಯುವ ನಿರೀಕ್ಷೆಯಲ್ಲಿದೆ.

ನಾಳಿನ ಸಭೆಯಲ್ಲಿ ಭಾಗವಹಿಸಲು ಕಾಂಗ್ರೆಸ್‌ನ ರಾಜ್ಯ ಮುಖಂಡರು ಇಂದು ದೆಹಲಿಗೆ ತೆರಳಿದ್ದಾರೆ.

ಈ ನಡುವೆ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಏ.8ರಂದು ಹೊರಬೀಳಲಿದೆ ಎಂದರು. ಪಕ್ಷದ ಮಾಧ್ಯಮ ಕೇಂದ್ರ ಉದ್ಘಾಟನೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಭ್ಯರ್ಥಿಗಳ ಆಯ್ಕೆಗೆ ಹಲವು ಹಂತದ ಕಸರತ್ತು ನಡೆದಿದೆ. ಈ ಪ್ರಕ್ರಿಯೆ ಪೂರ್ಣಗೊಳ್ಳುತ್ತಿದ್ದಂತೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಡ್ಡಾ ಅವರ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿ ಸಂಸದೀಯ ಮಂಡಳಿ ಸಭೆ ಸೇರಿ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಿದ್ದಾರೆ.

ಸಂಸದೀಯ ಮಂಡಳಿ ಸಭೆ ನಾಳೆ ನಡೆಯಬೇಕಿತ್ತು. ಆದರೆ, ಸ್ಥಳೀಯ ಮಟ್ಟದಲ್ಲಿ ಚುನಾವಣೆ ಮೂಲಕ ಅಭ್ಯರ್ಥಿಗಳ ಆಯ್ಕೆ ಕಸರತ್ತು ನಡೆದ ಕಾರಣ ಮೂರ್‍ನಾಲ್ಕು ದಿನ ಮುಂದೂಡಲ್ಪಟ್ಟಿದೆ ಎಂದರು.

ಮಾ.31ರವರೆಗೆ ಪಾಲಿಕೆಯಿಂದ ದಾಖಲೆಯ 310.49 ಕೋಟಿ ತೆರಿಗೆ ಸಂಗ್ರಹ

■ 16,900 ಲಕ್ಷ ರೂ. ಆಸ್ತಿ ತೆರಿಗೆ ■ 9,310 ಲಕ್ಷ ರೂ. ನೀರಿನ ಶುಲ್ಕ ■ 1,440 ಲಕ್ಷ ರೂ. ಅನುಮೋದನೆ ಶುಲ್ಕ ■ 668 ಲಕ್ಷ ರೂ. ಟ್ರೇಡ್ ಲೈಸೆನ್ಸ್ ಫೀ ■ 352 ಲಕ್ಷ ರೂ. ವಾಣಿಜ್ಯ ಸಂಕೀರ್ಣಗಳ ಬಾಡಿಗೆ ■ 64 ಲಕ್ಷ ರೂ. ಜಾಹೀರಾತು ಶುಲ್ಕ ಹಾಗೂ ಇತರ ಬಾಬ್ತಿನಿಂದ 2,313 ಲಕ್ಷ ರೂ. ವಸೂಲಿ



● ಎಸ್.ಟಿ.ರವಿಕುಮಾರ್

ಮೈಸೂರು, ಏ.3(ಆರ್‌ಕೆ)– ನಾಗರಿಕರಿಗೆ ಕುಡಿಯುವ ನೀರು ಪೂರೈಕೆ, ಒಳಚರಂಡಿ, ರಸ್ತೆ ನಿರ್ವಹಣೆ, ಸ್ವಚ್ಛತೆ, ಪಾರ್ಕ್ ಅಭಿವೃದ್ಧಿ, ಸ್ಮಶಾನ ಸೌಲಭ್ಯ ಸೇರಿದಂತೆ ಮೂಲಸೌಕರ್ಯ ಒದಗಿಸುವ ಜವಾಬ್ದಾರಿ ಹೊತ್ತಿರುವ ಮೈಸೂರು ಮಹಾನಗರ ಪಾಲಿಕೆ (ಎಂಸಿಸಿ)ಯು ತೆರಿಗೆ ಸಂಗ್ರಹದಲ್ಲಿ ದಾಖಲೆ ನಿರ್ಮಿಸಿದೆ. ವಿವಿಧ ಬಾಬ್ತುಗಳಿಗೆ ವೆಚ್ಚ ಮಾಡುವ ಹಣವನ್ನು ಸ್ಥಳೀಯವಾಗಿಯೇ ಸಂಪನ್ಮೂಲ ಕ್ರೋಢೀಕರಿಸಿ, ಬರೀ ಸರ್ಕಾರದ ಅನುದಾನ ಅವಲಂಬಿಸದೇ ಆರ್ಥಿಕವಾಗಿ ಸ್ವಾವಲಂಬನೆ ಸಾಧಿಸುವಲ್ಲಿ ಮೈಸೂರು ಮಹಾನಗರ ಪಾಲಿಕೆಯು ದಾಪುಗಾಲಿಡುತ್ತಿದೆ. ಮೈಸೂರು ನಗರದ ಸ್ವಚ್ಛತೆ ಜೊತೆಗೆ ಆರೋಗ್ಯ, ಶಿಕ್ಷಣ, ರಸ್ತೆ ಅಭಿವೃದ್ಧಿ, ಬೀದಿ ದೀಪ ನಿರ್ವಹಣೆ, ● 9ನೇ ಪುಟಕ್ಕೆ

> “ಕೋವಿಡ್ ಸಂಕಷ್ಟ ಪರಿಸ್ಥಿತಿಯಲ್ಲಿ ಸಾರ್ವಜನಿಕರು ತೆರಿಗೆ ಪಾವತಿಸಲು ಕಷ್ಟವಾಗುತ್ತಿದ್ದರಿಂದ ಸ್ವಲ್ಪ ಹಿಂಜರಿಯುತ್ತಿದ್ದರು. ತದನಂತರ ಆನ್‌ಲೈನ್ ಪಾವತಿಗೆ ವ್ಯವಸ್ಥೆ ಕಲ್ಪಿಸಿದ ಹಿನ್ನೆಲೆಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ಪಾವತಿಸಲು ನಾಗರಿಕರು ಮುಂದೆ ಬರುತ್ತಿದ್ದಾರಲ್ಲದೆ, ಪಾಲಿಕೆಯ ಕಂದಾಯ ವಿಭಾಗ ಮತ್ತು ವಾಣಿವಿಲಾಸ ವಾಟರ್ ವರ್ಕ್ಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಉತ್ತಮವಾಗಿ ಕಾರ್ಯ ನಿರ್ವಹಿಸಿ ಕಂದಾಯ ವಸೂಲಾತಿಯಲ್ಲಿ ಗುರಿ ತಲುಪುತ್ತಿದ್ದಾರೆ. ಏಪ್ರಿಲ್ ತಿಂಗಳಲ್ಲಿ ನಿಗದಿಯಾಗಿದ್ದ ಬೇಡಿಕೆಯ ಗುರಿ ತಲುಪುವ ನಿರೀಕ್ಷೆ ಇದೆ. ಆದ್ದರಿಂದ ಅಭಿವೃದ್ಧಿ ಕಾರ್ಯ ಮತ್ತು ನಿರ್ವಹಣೆ ಸುಲಭವಾಗುತ್ತಿದೆ.
>
> –ಜಿ. ಲಕ್ಷ್ಮೀಕಾಂತರೆಡ್ಡಿ, ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ.



ಆಂತರಿಕ ಸಮಸ್ಯೆ: ಜೆಡಿಎಸ್ 2ನೇ ಪಟ್ಟಿ ಬಿಡುಗಡೆ ಮುಂದೂಡಿಕೆ!

ಬೆಂಗಳೂರು, ಏ.3– ಜೆಡಿಎಸ್ ಎರಡನೇ ಪಟ್ಟಿ ಬಿಡುಗಡೆ ಮುಂದೂಡಿಕೆಯಾಗಿದೆ. ಪಕ್ಷದಲ್ಲಿನ ಆಂತರಿಕ ಸಮಸ್ಯೆ, ಗೊಂದಲಗಳಿಂದ ಪಟ್ಟಿ ಬಿಡುಗಡೆ ಮುಂದಕ್ಕೆ ಹೋಗಿದೆ. ಇಂದು ಎರಡನೇ ಪಟ್ಟಿ ಬಿಡುಗಡೆ ಆಗಬೇಕಿತ್ತು. ಕುಮಾರಸ್ವಾಮಿ ಅವರು ಕೆಆರ್ ಪೇಟೆಯಿಂದ ಬೆಂಗಳೂರಿಗೆ ಬರುವುದು ತಡವಾದ ಹಿನ್ನೆಲೆಯಲ್ಲಿ ಎರಡನೇ ಪಟ್ಟಿ ಬಿಡುಗಡೆ ಮಾಡಲಾಗಲಿಲ್ಲ. ಹೀಗಾಗಿ ಏಪ್ರಿಲ್ 5ರಂದು ಎರಡನೇ ಪಟ್ಟಿ ಬಿಡುಗಡೆ ಆಗುವ ಸಾಧ್ಯತೆ ಇದೆ. ಮೊದಲ ಪಟ್ಟಿಯಲ್ಲಿ 90 ಅಭ್ಯರ್ಥಿಗಳ ಪಟ್ಟಿಯನ್ನು ಜೆಡಿಎಸ್ ರಿಲೀಸ್ ಮಾಡಿದೆ. ● 9ನೇ ಪುಟಕ್ಕೆ

ಮಂಡ್ಯ ಜಿಲ್ಲೆಯಲ್ಲಿ ಎರಡು ಪ್ರತ್ಯೇಕ ಅಪಘಾತ

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಸೇರಿ 31ಕ್ಕೂ ಅಧಿಕ ಮಂದಿಗೆ ಗಾಯ

■ ಪಾಂಡವಪುರ ಬಳಿ ಎತ್ತಿನಗಾಡಿಗೆ ಬಸ್ ಡಿಕ್ಕಿ ಹೊಡೆದು ಕಬ್ಬಿನ ಗದ್ದೆಗೆ ನುಗ್ಗಿದ ಪರಿಣಾಮ 20ಕ್ಕೂ ಅಧಿಕ ಮಂದಿಗೆ ಗಾಯ
■ ಶ್ರೀರಂಗಪಟ್ಟಣದ ಮಹದೇವಪುರ ಬಳಿ ಗೂಡ್ಸ್ ಆಟೋ ಉರುಳಿ ಅದರಲ್ಲಿ ಪ್ರಯಾಣಿಸುತ್ತಿದ್ದ 11 ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಗಾಯ





ಆಸ್ಪತ್ರೆಯಲ್ಲೇ ಪರೀಕ್ಷೆ ಬರೆಯಲು ಅವಕಾಶ

> “ಮಕ್ಕಳು ಪರೀಕ್ಷೆ ಮುಗಿಸಿಕೊಂಡು ವಾಪಸ್ಸಾಗುವಾಗ ಗೂಡ್ಸ್ ಆಟೋ ಪಲ್ಟಿಯಾಗಿ ಈ ಘಟನೆ ಸಂಭವಿಸಿದೆ. ಘಟನೆಗೆ ಆಟೋ ಚಾಲಕ ಕುಡಿದು ವಾಹನ ಚಾಲನೆ ಮಾಡಿದ್ದೇ ಕಾರಣವಾಗಿದ್ದು, ಆತನ ವಿರುದ್ಧ ದೂರು ದಾಖಲಿಸಲಾಗಿದೆ. ಈಗಾಗಲೇ ನಾನು ಜಿಲ್ಲಾಧಿಕಾರಿ, ಜಿಪಂ ಸಿಇಓಗೆ ಮಾಹಿತಿ ನೀಡಿದ್ದು, ಆಸ್ಪತ್ರೆಯಲ್ಲೇ ಮುಂದಿನ ಪರೀಕ್ಷೆ ಬರೆಯಲು ವ್ಯವಸ್ಥೆ ಕಲ್ಪಿಸಲಾಗುವುದು. ಪ್ರಕರಣ ಸಂಬಂಧ ಯಾರೇ ತಪ್ಪು ಮಾಡಿದ್ದರೂ ಅವರಿಗೆ ಶಿಕ್ಷೆಯಾಗಲಿದೆ. –ಜವರೇಗೌಡ, ಡಿಡಿಪಿಐ.


ಮಂಡ್ಯ, ಏ.3–ಜಿಲ್ಲೆಯಲ್ಲಿ ಸೋಮವಾರ ನಡೆದ ಎರಡು ಪ್ರತ್ಯೇಕ ಅಪಘಾತಗಳಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳೂ ಸೇರಿದಂತೆ 31ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಜಿಲ್ಲೆಯ ಪಾಂಡವಪುರ ತಾಲೂಕಿನ ಕನಗನಮರಡಿ ಬಳಿ ರಸ್ತೆ ಬದಿ ನಿಂತಿದ್ದ ಎತ್ತಿನಗಾಡಿಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದು ಬಸ್‌ನಲ್ಲಿದ್ದ 20ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡರೆ, ಮತ್ತೊಂದು ಪ್ರಕರಣದಲ್ಲಿ ಶ್ರೀರಂಗಪಟ್ಟಣ ತಾಲೂಕಿನ ಮಹದೇವಪುರ ● 9ನೇ ಪುಟಕ್ಕೆ





ವಿಧಾನಸಭಾವಾರು ಮತಗಟ್ಟೆಗಳಿಗೆ ಇವಿಎಂಗಳ ವಿಂಗಡಣೆ

ರಾಜಕೀಯ ಪಕ್ಷಗಳ ಮುಖಂಡರ ಸಮ್ಮುಖದಲ್ಲಿ ಮತಯಂತ್ರಗಳು, ವಿವಿ ಪ್ಯಾಟ್‌ಗಳ ವಿಂಗಡಣೆ ಪ್ರಕ್ರಿಯೆಗೆ ಜಿಲ್ಲಾ ಚುನಾವಣಾಧಿಕಾರಿಯೂ ಆದ ಡಿಸಿ ಡಾ.ಕೆ.ವಿ.ರಾಜೇಂದ್ರ ಚಾಲನೆ



> “ಕೇಂದ್ರದ ಒಳ–ಹೊರ ಆವರಣ, ಕಟ್ಟಡದ ಸುತ್ತಲೂ ಸಿಸಿ ಟಿವಿ ಕ್ಯಾಮರಾಗಳನ್ನು ಅಳವಡಿಸಿದ್ದು, ದಿನದ 24 ಗಂಟೆಯೂ ಶಸ್ತ್ರಸಜ್ಜಿತ ಪೊಲೀಸರನ್ನು ನಿಂಯೋಜಿಸಿ, ಭಾರೀ ಕಟ್ಟೆಚ್ಚರ ವಹಿಸಲಾಗಿದೆ. ಚುನಾವಣೆ ಸಮೀಪಿಸುತ್ತಿದ್ದಂತೆಯೇ ಇವಿಎಂಗಳನ್ನು ಆಯಾ ಕ್ಷೇತ್ರದ ಚುನಾವಣಾಧಿಕಾರಿಗಳ ವಶಕ್ಕೆ ಒಪ್ಪಿಸಲಾಗುವುದು.
>
> -ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ

ಮೈಸೂರು, ಏ.3(ಆರ್‌ಕೆ)–ವಿಧಾನಸಭಾ ಚುನಾವಣೆ ಸಮೀಪಿಸುತ್ತಿದ್ದಂತೆಯೇ ಮೈಸೂರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಇಂದು ಇವಿಎಂ ಮತ್ತು ವಿವಿ ಪ್ಯಾಟ್‌ಗಳ ವಿಂಗಡಣೆ ಪ್ರಕ್ರಿಯೆಗೆ ಚಾಲನೆ ನೀಡಿದರು.

ಮೈಸೂರಿನ ಸಿದ್ಧಾರ್ಥ ಬಡಾವಣೆ ಬಳಿ ಬನ್ನೂರು ರಸ್ತೆಯಲ್ಲಿರುವ ಇವಿಎಂ ಉಗ್ರಾಣದಲ್ಲಿ ಸುರಕ್ಷಿತವಾಗಿ ಇರಿಸಲಾಗಿರುವ ಇವಿಎಂ ಹಾಗೂ ವಿವಿ ಪ್ಯಾಟ್‌ಗಳನ್ನು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಮತಗಟ್ಟೆಗಳಿಗೆ ನಂಬರ್ ಸಮೇತ ನಿಯಮಾನುಸಾರ ಹಂಚಿಕೆ ಮಾಡಲಾಗುತ್ತಿದೆ. ● 6ನೇ ಪುಟಕ್ಕೆ



ಚುನಾವಣಾ ನಿಯಂತ್ರಣ ಕೊಠಡಿಗಳು

ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಮೈಸೂರು ಜಿಲ್ಲಾಡಳಿತವು ಡಿಸಿ ಕಚೇರಿಯಲ್ಲಿ ಜಿಲ್ಲೆಯ ಎಲ್ಲಾ 11 ವಿಧಾನ ಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಕಂಟ್ರೋಲ್ ರೂಂಗಳನ್ನು ತೆರೆದಿದ್ದು, ಸಾರ್ವಜನಿಕರು ಈ ದೂರವಾಣಿ ಸಂಖ್ಯೆಗಳಿಂದ ಮಾಹಿತಿ ಪಡೆಯಬಹುದು.

ಕ್ಷೇತ್ರ	ಕಂಟ್ರೋಲ್ ರೂಂ ನಂಬರ್
ಕೃಷ್ಣರಾಜ	0821–2418800
ನರಸಿಂಹರಾಜ	9449841195/96
ಚಾಮರಾಜ	0821–2418816
ಚಾಮುಂಡೇಶ್ವರಿ	0821–2414812
ಡಿಸಿ ಕಚೇರಿ ಕಂಟ್ರೋಲ್ ರೂಂ	1077
ಚು. ತಹಸೀಲ್ದಾರ್ ರಾಂಪ್ರಸಾದ್	9448422510
ಸಹಾಯವಾಣಿ	1950
ಪಿರಿಯಾಪಟ್ಟಣ	08223–274007
ಕೆ.ಆರ್.ನಗರ	08223–262371
ಹುಣಸೂರು	08222–251550
ಹೆಚ್.ಡಿ.ಕೋಟೆ	08228–255325
ನಂಜನಗೂಡು	08221–223108
ವರುಣಾ	08221–223108
ತಿ.ನರಸೀಪುರ	08227–260210

ಚುನಾವಣಾ ಅಕ್ರಮ: ಗೋಡೌನ್‌ಗಳ ಮೇಲೆ ದಿಢೀರ್ ದಾಳಿ

ಮದ್ಯ, ಸೀರೆ, ಗೃಹೋಪಯೋಗಿ ವಸ್ತುಗಳ ದಾಸ್ತಾನು ಶಂಕೆ, 18 ಠಾಣೆಗಳ 35 ತಂಡದಿಂದ ಏಕಕಾಲದಲ್ಲಿ ಪರಿಶೀಲನೆ









ಮೈಸೂರು,ಏ.3(ಆರ್‌ಕೆ)– ಮೈಸೂರು ನಗರದಾದ್ಯಂತ ಎಲ್ಲಾ ಗೋಡೌನ್‌ಗಳು, ದಾಸ್ತಾನು ಮಳಿಗೆಗಳ ಮೇಲೆ ಇಂದು ಏಕಕಾಲಕ್ಕೆ ಪೊಲೀಸರು ದಿಢೀರ್ ದಾಳಿ ಮಾಡಿ, ಪರಿಶೀಲನೆ ನಡೆಸಿದರು.

ಚುನಾವಣೆಗಾಗಿ ಮತದಾರರಿಗೆ ಹಂಚಲು ಸೀರೆ, ಕುಕ್ಕರ್, ಮಿಕ್ಸಿ, ಮದ್ಯ ಇನ್ನಿತರ ಗೃಹೋಪಯೋಗಿ ವಸ್ತುಗಳನ್ನು ರಾಜಕೀಯ ಪಕ್ಷದವರು ನೀತಿ ಸಂಹಿತೆ ಜಾರಿಗೆ ಬರುವ ಮೊದಲೇ ದಾಸ್ತಾನು ಮಾಡಿರಬಹುದೆಂಬ ಸಂಶಯದಿಂದ ಪೊಲೀಸರು ಇಂದು ಬೆಳಗ್ಗೆ 11ರಿಂದ ರಾತ್ರಿ 9 ಗಂಟೆವರೆಗೆ ದಾಳಿ ಮಾಡಿ ಶೋಧ ಕಾರ್ಯ ನಡೆಸಿದರು.

ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ನಿರ್ದೇಶನದಂತೆ ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ ಮೇಲ್ವಿಚಾರಣೆಯಲ್ಲಿ ಎಲ್ಲಾ ಉಪ ವಿಭಾಗಗಳಲ್ಲಿ ಬರುವ 18 ಪೊಲೀಸ್ ಠಾಣೆಗಳ ಇನ್‌ಸ್ಪೆಕ್ಟರ್‌ಗಳನ್ನೊಳಗೊಂಡ 35 ತಂಡದಲ್ಲಿ ದಾಳಿ ನಡೆಸಲಾಯಿತು.

ಲಷ್ಕರ್ ಮೊಹಲ್ಲಾದ ಹಳ್ಳದಕೇರಿ, ಎನ್.ಆರ್.ಮೊಹಲ್ಲಾದ ಶಿವಾಜಿ ರಸ್ತೆ, ಮಂಡಿ ಮೊಹಲ್ಲಾದ ಕೆಟಿ ಸ್ಟ್ರೀಟ್, ಆಲನಹಳ್ಳಿ, ಮೇಟಗಳ್ಳಿ, ಹೆಬ್ಬಾಳು ಇಂಡಸ್ಟ್ರಿಯಲ್ ಏರಿಯಾ, ಜೆ.ಪಿ. ನಗರದ ಇಂಡಸ್ಟ್ರಿಯಲ್, ನಗರದಾದ್ಯಂತ ಇರುವ ಎಲ್ಲಾ ವೇರ್‌ಹೌಸ್‌ಗಳು, ಗೋದಾಮು, ದಾಸ್ತಾನು ಮಳಿಗೆಗಳಲ್ಲಿ ಶೋಧ ನಡೆಸಿ ಶೇಖರಿಸಿರುವ ವಸ್ತುಗಳನ್ನು ಪರಿಶೀಲಿಸಿ ಇನ್‌ವಾಯ್ಸ್, ಜಿಎಸ್‌ಟಿ ಬಿಲ್ಲುಗಳು, ಹಣ ಪಾವತಿಸಿದ ಬಗ್ಗೆ ಗೋಡೌನ್ ಮಾಲೀಕರಿಂದ ವಿವರಣೆ ಪಡೆದರು.

ಈವರೆಗೆ ನಡೆಸಿದ ದಾಳಿಯಲ್ಲಿ ಅಕ್ರಮವಾಗಿ ದಾಸ್ತಾನು ಮಾಡಿರುವ ಬಗ್ಗೆ ಕಂಡು ಬಂದಿಲ್ಲವಾದರೂ, ಕೆಲವೆಡೆ ಸ್ಥಳದಲ್ಲಿ ದಾಖಲಾತಿ ತೋರಿಸಿಲ್ಲ. ಗೋಡೌನ್ ಮಾಲೀಕರು ಮತ್ತು ವ್ಯವಸ್ಥಾಪಕರು ಯಾರೂ ಇಲ್ಲದಿದ್ದ ಕಾರಣ ನಂತರ ಠಾಣಾಧಿಕಾರಿಗಳಿಗೆ ಮಾಹಿತಿ ತಲುಪಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಲಾಗಿದೆ ಎಂದು ಉನ್ನತ ಪೊಲೀಸ್ ಮೂಲಗಳು ತಿಳಿಸಿವೆ. ಚುನಾವಣೆಯಲ್ಲಿ ಮತದಾರರಿಗೆ ಹಣ, ಮದ್ಯ, ಉಡುಗೊರೆ ನೀಡಿ ಆಮಿಷವೊಡ್ಡಬಹುದೆಂದು ಮೈಸೂರು ನಗರ ಪೊಲೀಸ್ ಆಯುಕ್ತ ಬಿ. ರಮೇಶ್, ಪೊಲೀಸ್ ಕಾರ್ಯಾಚರಣೆಯನ್ನು ಚುರುಕುಗೊಳಿಸಿದ್ದು, ತಾವೇ ರಾತ್ರಿ ಗಸ್ತು ನಡೆಸಿ ಚೆಕ್‌ಪೋಸ್ಟ್ ಹಾಗೂ ನಗರದಾದ್ಯಂತ ವಾಹನ ತಪಾಸಣೆಯಲ್ಲಿ ನಿರತರಾಗಿದ್ದಾರೆ. ಈಗಾಗಲೇ ರೌಡಿ ಪರೇಡ್, ರೌಡಿಶೀಟರ್‌ಗಳ ಮನೆಗಳ ಮೇಲೆ ಪೊಲೀಸ್ ಇಲಾಖೆ ನಿಗಾ ಸೇರಿದಂತೆ ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತ ಮತದಾನಕ್ಕೆ ಕಾರ್ಯಾಚರಣೆ ತೀವ್ರಗೊಳಿಸಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

'ರಾಷ್ಟ್ರೀಯ ಆರಕ್ಷಕ್ ಮಂಚ್' ಪಕ್ಷ ಅಸ್ತಿತ್ವಕ್ಕೆ



ಮೈಸೂರು,ಏ.3(ಪಿಎಂ)–'ರಾಷ್ಟ್ರೀಯ ಆರಕ್ಷಕ್ ಮಂಚ್' ರಾಜಕೀಯ ಪಕ್ಷವನ್ನು ಅಸ್ತಿತ್ವಕ್ಕೆ ತರಲಾಗಿದ್ದು, ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಎಲ್ಲಾ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಚಿಂತನೆ ಇದೆ ಎಂದು ಪಕ್ಷದ ಸಂಸ್ಥಾಪಕ ಅಧ್ಯಕ್ಷ ಗೋಪಾಲಕೃಷ್ಣ ನಾಯಕ್ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ನಮ್ಮ ಪಕ್ಷದ ಉದ್ಘಾಟನೆಯಾಯಿತು. ಈ ಬಾರಿಯ ಚುನಾವಣೆಯಲ್ಲಿ ಯುವ ಜನತೆಗೆ ಆದ್ಯತೆ ನೀಡಲಾಗುವುದು. ಆಸಕ್ತರು ಮೊ.ಸಂ. 93428 41851 ಅನ್ನು ಸಂಪರ್ಕಿಸಬಹುದು ಎಂದರು.

ನಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಹಲವು ಮಹತ್ತರ ವಿಚಾರಗಳನ್ನು ಜನತೆ ಮುಂದೆ ಇಡಲಾಗಿದೆ. ಅವುಗಳೆಂದರೆ, ಕೂಲಿ ಕಾರ್ಮಿಕರಿಗೆ ಭವಿಷ್ಯ ನಿಧಿ ಸ್ಥಾಪನೆ, ಸನಾತನ ಹಿಂದೂ ಧರ್ಮ ರಕ್ಷಣೆಗಾಗಿ ಬಲಿದಾನ ಮಾಡಿದವರ ಸ್ಮರಣಾರ್ಥ ಶ್ರೀರಂಗಪಟ್ಟಣದಲ್ಲಿ ಸನಾತನ ಧರ್ಮ ಸಂಘರ್ಷ ಸ್ಮಾರಕ ನಿರ್ಮಾಣ, ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ಏಕಗವಾಕ್ಷಿ ಯೋಜನೆ, ಕುಟುಂಬಕ್ಕೊಂದು ಉದ್ಯೋಗ, ನಾಗರಿಕರ ಸೇವೆಯಲ್ಲಿ ಪೊಲೀಸರೊಂದಿಗೆ ಸಹಕರಿಸಲು ಕೇಸರಿ ಸೇನೆ ರಚನೆ ಮಾಡುವುದು ನಮ್ಮ ಅಜೆಂಡಗಳಾಗಿವೆ ಎಂದರು. ಪಕ್ಷದ ರಾಜ್ಯಾಧ್ಯಕ್ಷ ಡಾ.ಸಿ.ಹರೀಶ್, ಪ್ರಧಾನ ಕಾರ್ಯದರ್ಶಿಗಳಾದ ಬಿ.ಶ್ರೀಕಂಠಪ್ಪ, ರವಿ ಅರಸ್, ಖಜಾಂಚಿ ಸಿ.ಪಿ.ಗಿರೀಶ್ ಗೋಷ್ಠಿಯಲ್ಲಿದ್ದರು.



ಮೈಸೂರಿನ ಚಾಮುಂಡಿಬೆಟ್ಟದ ಪಾದದಲ್ಲಿರುವ ಅಂಬಾಭವಾನಿ ಟ್ರಸ್ಟ್ ವತಿಯಿಂದ ಛತ್ರಪತಿ ಶಿವಾಜಿ ಮಹಾರಾಜ್ ಪುಣ್ಯಸ್ಮರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು. ಈ ವೇಳೆ ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಅಂಬಾಭವಾನಿ ಸಮಾಜದ ಅಧ್ಯಕ್ಷರಾದ ಸವಿತಾ ಘಾಟ್ಕೆ, ಭಾಗ್ಯವತಿ, ಲತಾ, ಮಂಗಳ, ಅಂಬಿಕಾ, ಪ್ರಮೀಳಾ, ವನಿತಾ, ಶಶಿ, ಪ್ರೇಮ, ಸುಷ್ಮಾ, ಅನಿತಾ ಇನ್ನಿತರರು ಉಪಸ್ಥಿತರಿದ್ದರು.

ಶೀಘ್ರದಲ್ಲಿ 'ಶ್ರೀಮಂತ' ಚಿತ್ರ ತೆರೆಗೆ



ಮೈಸೂರು,ಏ.3(ಪಿಎಂ)–ಗೋಲ್ಡನ್ ರೈನ್ ಮೂವೀಸ್ ಬ್ಯಾನರ್‌ನಡಿ ನಿರ್ಮಾಣಗೊಂಡಿರುವ 'ಶ್ರೀಮಂತ' ಕನ್ನಡ ಸಿನಿಮಾ ಏಪ್ರಿಲ್ 2ನೇ ವಾರದಲ್ಲಿ ಬಿಡುಗಡೆಯಾಗಲಿದೆ ಎಂದು ಸಿನಿಮಾದ ಸಹಾಯಕ ನಿರ್ದೇಶಕ ಶಿವರಾಜ್ ದಳವಾಯಿ ತಿಳಿಸಿದರು.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರ ದೈನಂದಿನ ಬದುಕು ಸಿನಿಮಾದಲ್ಲಿ ಅನಾವರಣಗೊಂಡಿದೆ. ರೈತನೇ ಜಗತ್ತಿನ ಅತೀ ದೊಡ್ಡ ಶ್ರೀಮಂತ ಎಂದು ಸಾಕ್ಷೀಕರಿಸಲಾಗಿದೆ. ಹಾಸನ್ ರಮೇಶ್ ನಿರ್ದೇಶನ, ಡಾ.ಹಂಸಲೇಖ ಅವರ ಸಾಹಿತ್ಯ–ಸಂಗೀತದಲ್ಲಿ ಸಿನಿಮಾ ಮೂಡಿಬಂದಿದೆ ಎಂದರು. ಚಿತ್ರದ ನಿರ್ಮಾಪಕ ಸಂಜಯ್‌ಬಾಬು, ನಟ ಕ್ರಾಂತಿ, ನಿವೃತ್ತ ಪ್ರಾಧ್ಯಾಪಕ ಡಾ.ಸಿ.ರಾಮಸ್ವಾಮಿ ಗೋಷ್ಠಿಯಲ್ಲಿದ್ದರು.

ನಿಧನ

ಅಲ್‌ಹಾಜ ಸಲೀಂ ಬಿ

ಮೈಸೂರು,ಏ.3–ಮೈಸೂರಿನ ಸಿದ್ದಿಖಿನಗರದ 3ನೇ ಕ್ರಾಸ್ ನಿವಾಸಿ ದಿವಂಗತ ಸೈಯದ್ ಬಿ.ಎಂ.ಅಮೀರ್ ಅವರ ಪತ್ನಿ ಅಲ್‌ಹಾಜ ಸಲೀಂ ಬಿ ಸೋಮವಾರ ಬೆಳಗ್ಗೆ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ನಿವೃತ್ತ ಕೆಇಬಿ ನೌಕರ ಸೈಯದ್ ಅಲ್ತಾಫ್ ಪಾಷಾ ಸೇರಿದಂತೆ ನಾಲ್ವರು ಪುತ್ರರು, ಇಬ್ಬರು ಪುತ್ರಿಯರು, ಸ್ನೇಹಿತರು ಹಾಗೂ ಬಂಧು ವರ್ಗ ಅಗಲಿದ್ದಾರೆ. ನಮಾಜ್–ಇ–ಜನಾಜ ಅಶೋಕ ರಸ್ತೆಯಲ್ಲಿರುವ ಮಜೀದಿ–ಅಜಾಮ್‌ನಲ್ಲಿ ನಡೆದು ನಂತರ ಟಿಪ್ಪು ವೃತ್ತದಲ್ಲಿರುವ ಮುಸ್ಲಿಂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶೇಖ್ ಮೊಹಮ್ಮದ್ ನಸೀರ್



ನಿವೃತ್ತ ಪ್ರೌಢಶಾಲೆ ಉಪಾಧ್ಯಾಯರು ಹಾಗೂ ಮೈಸೂರಿನ ಉದಯಗಿರಿ ನಿವಾಸಿ ಶೇಕ್ ಮೊಹಮ್ಮದ್ ನಸೀರ್ ಭಾನುವಾರ ನಿಧನರಾದರು. ಮೃತರು ಮೂವರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ನಮಾಜ್–ಇ–ಜನಾಜ ಉದಯಗಿರಿಯ ಮಜೀದಿ–ಇ–ಬಲಾಲ್‌ನಲ್ಲಿ ನಡೆದು ನಂತರ ಟಿಪ್ಪು ವೃತ್ತದಲ್ಲಿರುವ ಮುಸ್ಲಿಂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಯುವೆಟ್ಟೆ



ಶ್ರೀರಂಗಪಟ್ಟಣ: ಶ್ರೀರಂಗಪಟ್ಟಣದ ಸ್ಕಾಟ್ಸ್ ಬಂಗ್ಲೋ ನಿವಾಸಿ ಯುವೆಟ್ಟೆ (95) ಮಾ. 31 ರಂದು ನಿಧನರಾದರು. ಮೃತರು ಮೂವರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಏ.4) ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎ. ರಾಮು




ಪೊನ್ನಂಪೇಟೆ: ತಾಲೂಕಿನ ಹಳ್ಳಿಗಟ್ಟು ಕನ್ನಂಬಾಡಿಯಮ್ಮ ದೇವಸ್ಥಾನದ ಮಾಜಿ ಅಧ್ಯಕ್ಷರು ಹಾಗೂ ಮಹಾತ್ಮ ಗಾಂಧಿನಗರದ ನಿವಾಸಿ ಎ.ರಾಮು ಅವರು ಮೈಸೂರಿನ ಜಯದೇವ ಆಸ್ಪತ್ರೆಯಲ್ಲಿ ಮಾ.31ರಂದು ನಿಧನರಾದರು. ಮೃತರು ಪತ್ನಿ ಚೆನ್ನಾಜಮ್ಮ, ಇಬ್ಬರು ಪುತ್ರರು, ಸಹೋದರಿ, ಸಹೋದರ ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಕಳೆದ ಶುಕ್ರವಾರ ಪೊನ್ನಂಪೇಟೆ ಬಾಳೆಲೆ ರಸ್ತೆಯ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಣ್ಣೇಗೌಡ



ಕೆ.ಆರ್.ಪೇಟೆ: ತಾಲೂಕಿನ ಜೈನಹಳ್ಳಿ ನಿವಾಸಿ ಚನ್ನೇಗೌಡ (ಗೆಂಡೇಗೌಡ) ಅವರ ಮಗ ಸಣ್ಣೇಗೌಡ (62) ಭಾನುವಾರ ನಿಧನರಾದರು. ಮೃತರು ಓರ್ವ ಮಗ, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ವರ್ಗ ಅಗಲಿದ್ದು, ಅಂತ್ಯಕ್ರಿಯೆಯು ಮೃತರ ಸ್ವಗ್ರಾಮದ ಜಮೀನಿನಲ್ಲಿ ಸೋಮವಾರ ನೆರವೇರಿತು.

ಕೆ.ವಿ.ಸತ್ಯನಾರಾಯಣ ಶೆಟ್ಟಿ



ಮೈಸೂರಿನ ಇಟ್ಟಿಗೆಗೂಡು(ಇಂದಿರಾನಗರ) ನಿವಾಸಿ, ವರ್ತಕ ಕೆ.ವಿ.ಸತ್ಯನಾರಾಯಣ ಶೆಟ್ಟಿ (78) ಸೋಮವಾರ ಸಂಜೆ ನಿಧನರಾದರು. ಶ್ರೀ ಕನ್ನಿಕಾ ಪರಮೇಶ್ವರಿ ಸಹಕಾರ ಬ್ಯಾಂಕಿನ ನಿರ್ದೇಶಕರಾಗಿ, ಶಿವರಾಂ ಪೇಟೆಯ ವರ್ತಕ ಸಮೂಹವಾದ ಡೂಪ್ಲೆನ್ ಕಾಂಪ್ಲೆಕ್ಸ್‌ನ ಅಧ್ಯಕ್ಷರಾಗಿದ್ದ ಇವರು ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುವರ್ಗ ಅಗಲಿದ್ದಾರೆ. ನಾಳೆ(ಏ.4) ಮಧ್ಯಾಹ್ನ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

ಎಸ್.ಎನ್.ಸಂತೋಷ್



ಮೈಸೂರಿನ ಟಿ.ಕೆ.ಬಡಾವಣೆ ನಿವಾಸಿ ಎಸ್.ಎನ್. ಸಂತೋಷ್ (40), ಸೋಮವಾರ ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೃತರು ಪತ್ನಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಏ.4) ಬೆಳಗ್ಗೆ 11 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ಏ.5ರಿಂದ 11ರವರೆಗೆ ಅಖಿಲ ಭಾರತ ಅಂತರ ವಿವಿ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿ

ಬಿಸಿಸಿಐ ಅಧ್ಯಕ್ಷ ರೋಜರ್ ಬಿನ್ನಿ ಅವರಿಂದ ಪಂದ್ಯಾವಳಿ ಉದ್ಘಾಟನೆ



ಮೈಸೂರು,ಏ.3(ಪಿಎಂ)– ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯದ (ಜೆಎಸ್‌ಎಸ್ ಎಸ್‌ಟಿಯು) ವತಿಯಿಂದ ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ಶ್ರೀ ಜಯಚಾಮರಾಜೇಂದ್ರ ಇಂಜಿನಿಯರಿಂಗ್ ಕಾಲೇಜಿನ (ಎಸ್‌ಜೆಸಿಇ) ವಜ್ರ ಮಹೋತ್ಸವ ಪ್ರಯುಕ್ತ ಏ.5ರಿಂದ 11ರವರೆಗೆ ಅಖಿಲ ಭಾರತ ಅಂತರ ವಿಶ್ವವಿದ್ಯಾನಿಲಯ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಜೆಎಸ್‌ಎಸ್ ಎಸ್‌ಟಿಯು ಕುಲಪತಿ ಡಾ.ಎ.ಎನ್.ಸಂತೋಷ್‌ಕುಮಾರ್ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಖಿಲ ಭಾರತ ವಿಶ್ವವಿದ್ಯಾನಿಲಯಗಳ ಒಕ್ಕೂಟದ ಸಹಯೋಗದೊಂದಿಗೆ ಆಯೋಜಿಸಿರುವ ಈ ಪಂದ್ಯಾವಳಿಯಲ್ಲಿ ದೇಶದ 16 ವಿಶ್ವವಿದ್ಯಾನಿಲಯಗಳ ಮಹಿಳಾ ಕ್ರಿಕೆಟ್ ತಂಡಗಳು ಪಾಲ್ಗೊಳ್ಳಲಿವೆ. ಮೈಸೂರು ವಿವಿಯ ಗ್ಲೇಡ್ಸ್ ಮೈದಾನ, ಜೆಎಸ್‌ಎಸ್ ಎಚ್‌ಇಆರ್ ಮೈದಾನ, ಮಹಾರಾಜ ಕಾಲೇಜು ಮೈದಾನ ಮತ್ತು ಜೆಎಸ್‌ಎಸ್ ಕೆಎಸ್‌ಸಿಎ (ಜೆಎಸ್‌ಎಸ್ ಎಸ್‌ಟಿಯು) ಗ್ಲೇಡ್ಸ್ ಮೈದಾನದಲ್ಲಿ ಪಂದ್ಯಗಳು ನಡೆಯಲಿವೆ ಎಂದರು.

ಏ.5ರಂದು ಸಂಜೆ 4.30ಕ್ಕೆ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಛಯದಲ್ಲಿರುವ ಕೆಎಸ್‌ಸಿಎ ಮೈದಾನದಲ್ಲಿ ಪಂದ್ಯಾವಳಿಗೆ ಚಾಲನೆ ದೊರೆಯಲಿದೆ. ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಬಿಸಿಸಿಐ ಅಧ್ಯಕ್ಷ ರೋಜರ್ ಬಿನ್ನಿ ಅವರು ಪಂದ್ಯಾವಳಿ ಉದ್ಘಾಟಿಸಲಿದ್ದಾರೆ. ಅಖಿಲ ಭಾರತ ವಿಶ್ವವಿದ್ಯಾನಿಲಯಗಳ ಒಕ್ಕೂಟದ ಜಂಟಿ ಕಾರ್ಯದರ್ಶಿ ಡಾ.ಬಲ್ಜಿತ್ ಸಿಂಗ್ ಸೆಖೋನ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಏ.11ರಂದು ಫೈನಲ್ ಪಂದ್ಯ ನಡೆಯಲಿದ್ದು, ಬಳಿಕ ಸಂಜೆ 3ಕ್ಕೆ ಕಾಲೇಜಿನ ಸುವರ್ಣ ಮಹೋತ್ಸವ ಭವನದ ಸೆಮಿನಾರ್ ಹಾಲ್‌ನಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ದೇಶದ ಪೂರ್ವ, ದಕ್ಷಿಣ, ಉತ್ತರ ಮತ್ತು ಪಶ್ಚಿಮ ವಲಯಗಳಿಂದ ತಲಾ ನಾಲ್ಕು ವಿವಿ ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿವೆ. ದಕ್ಷಿಣ ವಲಯದಲ್ಲಿ ರಾಜ್ಯದ ಯಾವುದೇ ವಿವಿ ತಂಡ ಆಯ್ಕೆಯಾಗಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಜೆಎಸ್‌ಎಸ್ ಎಸ್‌ಟಿಯು ಕುಲಸಚಿವ ಡಾ.ಎಸ್.ಎ.ಧನ್‌ರಾಜ್, ಎಸ್‌ಜೆಸಿಇ ಕಾಲೇಜು ಪ್ರಾಂಶುಪಾಲ ಡಾ.ಎಸ್.ಬಿ.ಕಿವಾಡೆ, ಪಂದ್ಯಾವಳಿ ಸಂಚಾಲಕ ಡಾ.ಸಿ.ರೇವಣ್ಣ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ದ್ವಿತೀಯ ಪಿಯುಸಿ ಮೌಲ್ಯಮಾಪನ ಆರಂಭ

ಚುನಾವಣಾ ಕಾರ್ಯಕ್ಕೂ ನಿಯೋಜಿಸುವ ಉದ್ದೇಶದಿಂದ ಸಮಯ ಹೊಂದಾಣಿಕೆಗೆ ಪ್ರಯತ್ನ



ಮೈಸೂರು,ಏ.3(ಆರ್‌ಕೆ)–ಮಾರ್ಚ್ ಮಾಹೆಯಲ್ಲಿ ನಡೆದ 2022–23ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷಾ ಉತ್ತರ ಪತ್ರಿಕೆ ಮೌಲ್ಯಮಾಪನ ಕಾರ್ಯ ಇಂದಿನಿಂದ ಆರಂಭವಾಗಿದೆ.

ಮೈಸೂರಿನ ಮಹಾರಾಜ, ಮಹಾರಾಣಿ, ಮಹಾಜನ, ವಿದ್ಯಾವರ್ಧಕ, ಸೇಂಟ್ ಫಿಲೋಮಿನಾ, ಎಂ.ಜಿ.ಕೊಪ್ಪಲು ಸರ್ಕಾರಿ ಪಿಯು ಕಾಲೇಜು ಸೇರಿದಂತೆ ಮೈಸೂರು ನಗರದಲ್ಲಿ ಒಟ್ಟು 9 ಕೇಂದ್ರಗಳಲ್ಲಿ ಮೌಲ್ಯಮಾಪನ ಕಾರ್ಯ ನಡೆಯುತ್ತಿದ್ದು, 5ರಿಂದ 10 ದಿನದೊಳಗೆ ಪೂರ್ಣಗೊಳ್ಳುವ ನಿರೀಕ್ಷೆ ಇದೆ ಎಂದು ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ ಉಪನಿರ್ದೇಶಕ ನಾಗಮಲ್ಲೇಶ್ ತಿಳಿಸಿದ್ದಾರೆ.

ಮೊದಲ ದಿನವಾದ ಇಂದು ಉಪ ಮುಖ್ಯ ಪರೀಕ್ಷಕರು (Deputy Chief Examiner) ಮೌಲ್ಯಮಾಪನ ಕೇಂದ್ರಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಪೂರ್ವ ತಯಾರಿ ಪೂರ್ಣಗೊಳಿಸಿದ್ದಾರೆ. ಸಹಾಯಕ ಪರೀಕ್ಷಕರುಗಳು ನಾಳೆ (ಏ.4) ಬರಲಿದ್ದು, ಆಯಾ ವಿಷಯದ ಹಂಚಿಕೆಯಾಗಿರುವ ಉತ್ತರ ಪತ್ರಿಕೆಗಳನ್ನು ಪಡೆದು ಮೌಲ್ಯಮಾಪನ ಪ್ರಕ್ರಿಯೆ ಆರಂಭಿಸುವರು ಎಂದು ತಿಳಿಸಿದರು.

ಮೌಲ್ಯಮಾಪನ ಕಾರ್ಯಕ್ಕೆ ಸಕಲ ಸಿದ್ಧತೆ ಮಾಡಲಾಗಿದ್ದು ಅಗತ್ಯ ಮೂಲ ಸೌಕರ್ಯ ಒದಗಿಸಲಾಗಿದೆ. ನೇಮಕಗೊಂಡಿರುವ ಸಹಾಯಕ ಪರೀಕ್ಷಕರ ಪೈಕಿ ಎಲ್ಲರೂ ಹಾಜರಾದಲ್ಲಿ ನಿಗದಿತ ಅವಧಿಯೊಳಗೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ. ಎಲ್ಲಾ ಕೇಂದ್ರಗಳಿಗೆ ಭದ್ರತೆ ಒದಗಿಸಲಾಗಿದ್ದು, ಎಲ್ಲಾ ರೀತಿಯ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಪಿಯು ಉಪನ್ಯಾಸಕರನ್ನು ಮೌಲ್ಯಮಾಪನ ಕಾರ್ಯಕ್ಕೆ ನಿಯೋಜನೆ ಮಾಡಿಕೊಂಡಿದ್ದು, ಅವರನ್ನು ಚುನಾವಣಾ ಕರ್ತವ್ಯಕ್ಕೂ ಬಳಸಿಕೊಳ್ಳುತ್ತಿರುವುದರಿಂದ ತೊಂದರೆಯಾಗುತ್ತದೆ ಎಂದು ಹೇಳಲಾಗಿದೆಯಾದರೂ, ಏಪ್ರಿಲ್ 15 ರೊಳಗಾಗಿ ಮೌಲ್ಯಮಾಪನ ಕಾರ್ಯ ಮುಗಿಯುವ ಕಾರಣ ಅಂತಹ ಸಮಸ್ಯೆ ಉದ್ಭವವಾಗುವುದಿಲ್ಲ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

ಅದೇ ರೀತಿ ಎಸ್‌ಎಸ್‌ಎಲ್‌ಸಿ ಮೌಲ್ಯಮಾಪನ ಪ್ರಕ್ರಿಯೆಗೂ ಅಡ್ಡಿಯಾಗುತ್ತಿದೆ ಎಂದು ಹೇಳಲಾಗುತ್ತಿದೆಯಾದರೂ, ಮೇ 10ರಂದು ಮತದಾನವಿರುವುದರಿಂದ ಬಹುತೇಕ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜನೆ ಮಾಡಲಾಗುತ್ತಿದೆ. ಎಸ್‌ಎಸ್‌ಎಲ್‌ಸಿ ಮೌಲ್ಯಮಾಪನ ಮಾಡುವವರು ಹೈಸ್ಕೂಲ್ ಶಿಕ್ಷಕರಾಗಿರುವ ಕಾರಣ ತೊಂದರೆಯಾಗುವುದಿಲ್ಲ. ಅಲ್ಲದೇ ಏಪ್ರಿಲ್ ಕಡೇ ವಾರದವರೆಗೆ ಮೌಲ್ಯಮಾಪನ ಕೆಲಸವೂ ಮುಗಿದು ಹೈಸ್ಕೂಲ್ ಶಿಕ್ಷಕರೂ ಮತದಾನದಂದು ಕರ್ತವ್ಯ ನಿರ್ವಹಿಸಬಹುದಾಗಿದೆ ಎಂದು ಹೇಳಲಾಗುತ್ತಿದೆ. ಮೌಲ್ಯಮಾಪನ ಕಾರ್ಯ ಸಹ ಶಿಕ್ಷಕರ ಕರ್ತವ್ಯದ ಒಂದು ಭಾಗವಾಗಿದೆ. ಹಾಗೆಯೇ ಚುನಾವಣಾ ಕೆಲಸವೂ ಮುಖ್ಯವಾಗಿರುವುದರಿಂದ ಯಾವುದನ್ನೂ ನಿರ್ಲಕ್ಷ್ಯ ಮಾಡುವಂತಿಲ್ಲ. ಸಮಯ ನೋಡಿಕೊಂಡು ಶಿಕ್ಷಕರಿಗೆ ಚುನಾವಣಾ ಸಂಬಂಧ ತರಬೇತಿ ನೀಡಲು ಜಿಲ್ಲಾಡಳಿತ ಸಿದ್ಧತೆ ಮಾಡಿಕೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೃಷಿ ಲಕ್ಷ್ಮಿ ಮಹಿಳಾ ಸಾಧಕಿ ಪ್ರಶಸ್ತಿ ಪ್ರದಾನ



ಮೈಸೂರು, ಏ.3– ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ವತಿಯಿಂದ 'ಕೃಷಿ ಲಕ್ಷ್ಮಿ' ಮಹಿಳಾ ಸಾಧಕಿ ಪ್ರಶಸ್ತಿ ಪ್ರದಾನ ಮಾಡಿ, ಗೌರವಿಸಲಾಯಿತು.

ಇಲ್ಲಿನ ರೋಟರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೆಂಪಮ್ಮ ಜವರೇಗೌಡ (ಎಚ್.ಡಿ.ಕೋಟೆ), ಸುಮಾ ಬಿ.ಪಿ. ನಾಗರಾಜ್ (ಕೆ.ಬೆಳ್ತೂರು ಎಚ್.ಡಿ.ಕೋಟೆ), ಕಮಲಮ್ಮ ಪುರುಷೋತ್ತಮ (ಕೋಳಗಾಲ ಎಚ್.ಡಿ.ಕೋಟೆ), ಸುಧಾ ಜವರನಾಯಕ (ಯಡಿಯಾಲ), ಕಲ್ಪನಾ ನಾಗನಹಳ್ಳಿ (ಹುಣಸೂರು), ಚಿತ್ರ ಜಯಪ್ರಕಾಶ್ (ಹುಂಡಿಮಾಳ ಹುಣಸೂರು), ಅಖಿಲ ಪಾಟೀಲ್ (ನಂಜನಗೂಡು), ಜೈ ಮಾಲ ಬೀರೇಗೌಡ (ನಂಜನಗೂಡು) ಮತ್ತು ಚೈತ್ರ ರಾಜ್ ರಾಜೂರು (ಎಚ್.ಡಿ.ಕೋಟೆ) ಇವರಿಗೆ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್ ಗೌಡ ಕೃಷಿ ಲಕ್ಷ್ಮಿ ಮಹಿಳಾ ಸಾಧಕಿ ಪ್ರಶಸ್ತಿ ಪ್ರದಾನ ಮಾಡಿದರು.


ಈ ವೇಳೆ ಚಂದನ್‌ಗೌಡ ಮಾತನಾಡಿ, ಸಾಂಪ್ರದಾಯಕ ಹಾಗೂ ಸಾವಯವ ಕೃಷಿ ಮಹತ್ವವನ್ನು ತಿಳಿಸಿಕೊಟ್ಟರಲ್ಲದೆ, ಉತ್ಕೃಷ್ಟ ಮತ್ತು ಉತ್ತಮವಾದಂತಹ ಕೇರನ್ ಸಂಸ್ಥೆಯ ಬಯೋ ಉತ್ಪನ್ನಗಳನ್ನು ಬಿಡುಗಡೆ ಮಾಡಿ, ಜೈವಿಕ ವ್ಯವಸಾಯ ದತ್ತ ಕೃಷಿಕರು ಆದ್ಯತೆ ನೀಡಬೇಕೆಂದು ಮನವಿ ಮಾಡಿದರು. ಇದೇ ವೇಳೆ ರೈತ ಕಲ್ಯಾಣ ಸಂಘದ ಪದಾಧಿಕಾರಿಗಳ ನೇಮಕಾತಿ ಪತ್ರ ವಿತರಣೆ ಮತ್ತು ರಾಜ್ಯ ಪದಾಧಿಕಾರಿಗಳಿಗೆ ಗೌರವ ಸಮರ್ಪಣೆ ಕಾರ್ಯಕ್ರಮ ಕೂಡ ನಡೆಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಘಟಕದ ಪದಾಧಿಕಾರಿಗಳು, ತಾಲೂಕು ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಹೋಬಳಿ ಗ್ರಾಮದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಭಾಗವಹಿಸಿದ್ದರು.

ಅಂಚೆ ಮತ ಪತ್ರದ ಮೂಲಕ ಮತದಾನ ಮಾಡಲು ನಮೂನೆ–12ಡಿ

ಮೈಸೂರು,ಏ.3–ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023ರ ಸಂಬಂಧ ಜಿಲ್ಲೆಯಲ್ಲಿ ಅಗತ್ಯ ಸೇವೆಗಳ ಮತದಾರರು ಮತದಾನದ ದಿನದಂದು ಕರ್ತವ್ಯದ ಮೇಲಿದ್ದಾರೆ ಎಂದು ಪ್ರಮಾಣೀಕರಿಸುವ ಹಾಗೂ ಅಂತಹವರು ಮತಗಟ್ಟೆಯಲ್ಲಿ ಮತದಾನ ಮಾಡಲು ಸಾಧ್ಯವಿಲ್ಲದ ಕಾರಣ ಅಂತಹ ಅಧಿಕಾರಿ, ನೌಕರರು ಸೇವಾ ಪ್ರವರ್ಗದಲ್ಲಿನ ಗೈರು ಹಾಜರಿ ಮತದಾರರಾಗಿ (ಎವಿಇಎಸ್) ಅಂಚೆ ಮತ ಪತ್ರದ ಮೂಲಕ ಮತದಾನ ಮಾಡಲು ಅನುವಾಗುವಂತೆ, ಗೈರು ಹಾಜರಿ ಮತದಾರರ ಹೆಸರು ಮತ್ತು ವಿಳಾಸ, ಮತದಾರರ ಪಟ್ಟಿಯಲ್ಲಿ ಹೆಸರಿಸಿರುವ ಜಿಲ್ಲೆಯ ಹೆಸರು, ಕ್ಷೇತ್ರದ ಹೆಸರು, ಭಾಗದ ಸಂಖ್ಯೆ, ಕ್ರಮ ಸಂಖ್ಯೆ, ಎಪಿಕ್ ಸಂಖ್ಯೆ ಹೊಂದಿರುವ ಪಟ್ಟಿಯಲ್ಲಿ ನಮೂನೆ 12ಡಿ ಸಂಖ್ಯೆಯನ್ನು ಸಂಬಂಧಪಟ್ಟ ಚುನಾವಣಾ ಅಧಿಕಾರಿಗಳಿಗೆ ಒದಗಿಸಿ, ಜಿಲ್ಲಾ ಅಂಚೆ ಮತ ಪತ್ರ ನೋಡಲ್ ಅಧಿಕಾರಿಗಳ ಕಚೇರಿಗೆ ಮಾಹಿತಿ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

4.4.2023 ಮಂಗಳವಾರ, ಮಳೆ ನಕ್ಷತ್ರ: ರೇವತಿ, 31.03.2023 ರಿಂದ 13.04.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಪುಬ್ಬ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಮೈಸೂರು ನಗರ (ಜಿಲ್ಲಾ) ಕಾಂಗ್ರೆಸ್ ಪ್ರಚಾರ ಸಮಿತಿ :** ಪದವೀಧರರ ಸಮಿತಿಯ ನೂತನ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ, ಉಪಸ್ಥಿತರು : ಶಾಸಕರಾದ ಡಾ. ಯತೀಂದ್ರ ಸಿದ್ದರಾಮಯ್ಯ, ತನ್ವೀರ್ ಸೇಠ್, ಮಾಜಿ ಶಾಸಕರಾದ ವಾಸು, ಎಂ.ಕೆ. ಸೋಮಶೇಖರ್, ಆರ್. ಮೂರ್ತಿ, ವಿಜಯಕುಮಾರ್, ಲಕ್ಷ್ಮಣ್, ಕೆ.ಹರೀಶ್‌ಗೌಡ, ನವೀನ್‌ಕುಮಾರ್, ಪ್ರದೀಪ್ ಕುಮಾರ್, ಸ್ಥಳ: ಇಂದಿರಾ ಗಾಂಧಿ ಕಾಂಗ್ರೆಸ್ ಭವನ, ರೈಲ್ವೆ ಸ್ಟೇಷನ್ ಹತ್ತಿರ, ಬೆಳಗ್ಗೆ 10ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ಪಂಡಿತ್ ಅನಿರುದ್ಧಾಚಾರ್ ಪಾಂಡುರಂಗಿ ಅವರಿಂದ ಪದ್ಮಪುರಾಣ ಕುರಿತು ಪ್ರವಚನ, ಸ್ಥಳ: ಶ್ರೀರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ.

ನಗರದಲ್ಲಿ ವಿವಿಧೆಡೆ ಶ್ರೀರಾಮೋತ್ಸವ

■ **ಶ್ರೀ ರಾಮ ಸೇವಾ ಚಾರಿಟಬಲ್ ಟ್ರಸ್ಟ್‌ನ ಅಂಗ ಸಂಸ್ಥೆ ಶ್ರೀ ರಾಮ ಸೇವಾ ಮಂಡಲಿ :** 70ನೇ ವರ್ಷದ ಶ್ರೀ ರಾಮೋತ್ಸವ, ವಿದ್ವಾನ್ ಗಣಪತಿ ಭಟ್, ಸುಂಕದಗುಡಿ ಮತ್ತು ಬಳಗದವರಿಂದ ತಾಳಮದ್ದಳೆ, ಪ್ರಸಂಗ – ರಾವಣನ ವಧೆ, ಸ್ಥಳ: ಶ್ರೀ ಅವನಿ ಶಂಕರ ಮಠ, ವಿದ್ಯಾರಣ್ಯಪುರಂ,

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ–ಡಾ. ಟಿ.ಎಸ್. ಗೋಪಾಲ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಸರಣಿ, ಗಾಯನ– ಅಂಬಯ್ಯನುಲಿ, ಪಿ.ಎಸ್. ರಂಜನಿ, ಎಂ.ರಾಘವೇಂದ್ರ, ವ್ಯಾಖ್ಯಾನ–ಡಾ.ಹೆಚ್.ಎನ್.ಮಂಜುರಾಜ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ದೂರ ಸರಿದರು ಕಾದಂಬರಿಯ ಪ್ರಸ್ತುತಿ–ಉಮೇಶ್.ಎಸ್.ಎಸ್., 8.45 ಕರೆಗೊಂದು ಗೀತೆ, 10.00 ಮೌನದಾಚೆಯ ಬೆಳಕು–ಸದಾಶಿವ ಬ್ರಹ್ಮೇಂದ್ರರ ಜೀವನ ಹಾಗೂ ರಚನೆಗಳನ್ನಾಧರಿಸಿದ ವಿಶೇಷ ಕಾರ್ಯಕ್ರಮ ಸರಣಿ. ನಿರ್ದೇಶನ ಹಾಗೂ ನಿರೂಪಣ ಸಾಹಿತ್ಯ–ಎಸ್.ಶಂಕರ್, ನಿರ್ಮಾಣ–ಗೀತಾ ರಮಾನಂದ್ **ಮಧ್ಯಾಹ್ನ:** 12.30 ದೇವರನಾಮ–ಕೆ.ಜಿ.ರಾಮಸ್ವಾಮಿ, ಆರ್.ಎಸ್.ರಮಾಕಾಂತ, 1.20 ಭಾವಗೀತೆಗಳು–ಎನ್.ಹೇಮಾ, 3.00 ಡಾ.ಬಿ.ದೇವೇಂದ್ರಪ್ಪ–ಜಲತರಂಗ ವಾದನ, 4.00 ಕಥಾ ಕಾಲಕ್ಷೇಪ "ನಳ ದಮಯಂತಿ", ಪ್ರಸ್ತುತಿ–ವಿದ್ವಾನ್ ಆರ್.ಗುರುರಾಜುಲು ನಾಯ್ಡು, 6.50 ಕೃಷಿರಂಗ–ಕಿಸಾನ್‌ವಾಣಿ–ಬಹುಬೆಳೆ ಪದ್ಧತಿ ಹಾಗೂ ಫಲವತ್ತತೆ ಕುರಿತು ಆರ್.ರೋಹಿತ್ ಅವರೊಂದಿಗೆ ಸಂದರ್ಶನ. ಸಂದರ್ಶಕರು– ಎಸ್.ಸುಬ್ರಹ್ಮಣ್ಯ, 9.15 ಯಕ್ಷಗಾನದ ಹಾಡುಗಳು–ಭೀಷ್ಮ ವಿಜಯ ಪ್ರಸಂಗದ ಹಾಡುಗಳು – ಹರೀಶ್ ಶೆಟ್ಟಿ ಸೂಡ, 9.30 ಮೈಸೂರು ಎಂ.ನಾಗರಾಜ್–ವಯೋಲಿನ್ ವಾದನ

■ **ಶ್ರೀ ಕಾಶೀಮಠದ ಶ್ರೀರಾಮ ಮಂದಿರ :** ರಾಮನವಮಿ ವಿಶೇಷ ಕಾರ್ಯಕ್ರಮ, ಮೈಸೂರಿನ ಧರಣಿ ಭಜನಾ ಮಂಡಳಿಯವರಿಂದ ಭಜನೆ ಕಾರ್ಯಕ್ರಮ, ಸ್ಥಳ: ಶ್ರೀರಾಮ ಮಂದಿರ, ಶಿವರಾಮ ಪೇಟೆ, ಸಂಜೆ 6.30ರಿಂದ.



■ **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್ :** ಶ್ರೀ ರಾಮೋತ್ಸವ, ವಿದುಷಿ ಅನುಪಮ ಭಾಗವತ್ ಅವರಿಂದ ಸಿತಾರ್ ವಾದನ, ಪಂಡಿತ್ ರವೀಂದ್ರ ಯಾವಗಲ್ – ತಬಲ, ಸ್ಥಳ: ಶ್ರೀಮತಿ ಆಲಮ್ಮನವರ ಛತ್ರ, ಕುಂಚಿಟಿಗರ ಸಂಘ, ಶ್ರೀರಾಮಪೇಟೆ, ಸಂಜೆ 6.30ಕ್ಕೆ.

■ **ಶ್ರೀ ರಾಮ ಮಂದಿರ :** ಶ್ರೀ ರಾಮನವಮಿ, ಗಾಯಕರಾದ ಮೈಸೂರು ಎನ್. ಶ್ರೀನಾಥ್ ಅವರ ಮಗನಾದ ರಜತ್‌ಶರ್ಮ ಅವರಿಂದ ಭಕ್ತಿ ಗಾಯನ, ಸ್ಥಳ: ಶ್ರೀ ರಾಮಮಂದಿರ, ಜಯನಗರ, ಸಂಜೆ 6.30ಕ್ಕೆ

ಎನ್‌ಆರ್‌ನಲ್ಲಿ ಜೆಡಿಎಸ್‌ನಿಂದ ಸ್ಪರ್ಧಿಸಲ್ಲ

ಪಕ್ಷದ ರಾಜ್ಯ ಕಾರ್ಯದರ್ಶಿ ಅಬ್ದುಲ್ಲಾ ಹೇಳಿಕೆ



ಮೈಸೂರು, ಏ.3– ಈ ಬಾರಿಯ ಚುನಾವಣೆಯಲ್ಲಿ ನಾನು ನರಸಿಂಹರಾಜ ವಿಧಾನ ಸಭಾ ಕ್ಷೇತ್ರದಿಂದ ಜೆಡಿಎಸ್‌ನಿಂದ ಸ್ಪರ್ಧಿಸುವುದಿಲ್ಲ ಎಂದು ಪಕ್ಷದ ರಾಜ್ಯ ಕಾರ್ಯದರ್ಶಿ ಅಬ್ದುಲ್ ಅಜೀಜ್(ಅಬ್ದುಲ್ಲಾ) ತಿಳಿಸಿದರು.

ಸೋಮವಾರ ಬೆಂಬಲಿಗರೊಂದಿಗೆ ಬನ್ನಿಮಂಟಪದ ತಮ್ಮ ನಿವಾಸದಲ್ಲಿ ಸಭೆ ನಡೆಸಿದ ಅವರು, ಕ್ಷೇತ್ರದ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಪಕ್ಷದವರು ವಿಳಂಬ ನೀತಿ ಅನುಸರಿಸುತ್ತಿರುವುದು ತೀವ್ರ ಬೇಸರ ಮೂಡಿಸಿದೆ. ಇನ್ನಾದರೂ ವರಿಷ್ಠರು ಎಚ್ಚೆತ್ತುಕೊಳ್ಳಬೇಕು. ಕೂಡಲೇ ತಮ್ಮ ನಿರ್ಧಾರವನ್ನು ಪ್ರಕಟಿಸಬೇಕು. ಇಲ್ಲದಿದ್ದರೆ ಬೇರೆ ಪಕ್ಷಕ್ಕೆ ಬೆಂಬಲ ಕೊಡಬೇಕಾಗುತ್ತದೆ ಎಂದು ಹೇಳಿದರು.

ಪಕ್ಷವು ನನ್ನನ್ನು ಕಡೆಗಣಿಸುತ್ತಿದೆ. ನನ್ನ ಬೆಂಬಲಿಗರನ್ನೂ ಮೂಲೆಗುಂಪು ಮಾಡಲಾಗುತ್ತಿದೆ. ಇದರಿಂದ ಬೇಸರವಾಗಿದೆ ಹೀಗಾಗಿ, ಸಂಘಟನೆಯಿಂದ ದೂರ ಉಳಿದಿದ್ದೇನೆ. ಕ್ಷೇತ್ರದಲ್ಲಿ ಪಕ್ಷವನ್ನು ಬಲಪಡಿಸಲು ಶ್ರಮಿಸಿದ್ದ ನನ್ನನ್ನು ಕಡೆಗಣಿಸಿರುವುದು ನೋವು ತಂದಿದೆ. ಆದ್ದರಿಂದ, ನನ್ನ ಮುಂದಿನ ನಡೆಯನ್ನು ಕೆಲವೇ ದಿನಗಳಲ್ಲಿ ತಿಳಿಸುತ್ತೇನೆ ಎಂದರು.

ನರಸಿಂಹರಾಜ ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಸಿ.ಎಂ. ಇಬ್ರಾಹಿಂ ಎರಡು ತಿಂಗಳ ಹಿಂದೆಯೇ ಹೇಳಿದ್ದರು. ಅದಕ್ಕೆ ನಾನು ಸಂಪೂರ್ಣವಾಗಿ ಒಪ್ಪಿಗೆ ನೀಡಿ ಸ್ವಾಗತಿಸಿದ್ದೆ. ಆದರೆ, ಅವರು ಇನ್ನೂ ಕ್ಷೇತ್ರದತ್ತ ಬಂದಿಲ್ಲ. ಅಲ್ಲದೇ, ಬೇರೆಯವರಿಗೆ ಜವಾಬ್ದಾರಿ ಕೊಡಲು ಹೊರಟಿದ್ದಾರೆ. ಇದರಿಂದಾಗಿ ನನಗೆ ಅಸಮಾಧಾನ ಆಗಿರುವುದು ನಿಜ. ಈ ಕಾರಣದಿಂದಾಗಿಯೇ, ಮೈಸೂರಿನಲ್ಲಿ ನಡೆದ ಪಂಚರತ್ನ ಯಾತ್ರೆ ಸಮಾರೋಪದಲ್ಲೂ ಪಾಲ್ಗೊಳ್ಳಲಿಲ್ಲ ಎಂದು ನಂತರ ಮಾಧ್ಯಮ ಪ್ರತಿನಿಧಿಗಳಿಗೆ ತಿಳಿಸಿದರು.

ತರಾತುರಿಯಲ್ಲಿ ಕಣಕ್ಕಿಳಿಯುವಂತೆ ಹೇಳಿದರೆ ಸ್ಪರ್ಧಿಸುವುದಿಲ್ಲ. ನನಗೆ ಯಾವ ಪಕ್ಷ ಸೂಕ್ತ ಎನಿಸುತ್ತದೆಯೋ ಅದಕ್ಕೆ ನನ್ನ ಬೆಂಬಲ ನೀಡುತ್ತೇನೆ. ಈ ನಿಟ್ಟಿನಲ್ಲಿ ಬೆಂಬಲಿಗರೊಂದಿಗೆ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸಿದ್ದೇನೆ ಎಂದು ಹೇಳಿದರು. ಕಳೆದ ಚುನಾವಣೆಯಲ್ಲಿ ಅಬ್ದುಲ್ಲಾ ಜೆಡಿಎಸ್‌ನಿಂದ ಸ್ಪರ್ಧಿಸಿದ್ದರು.

ನಕ್ಕರೆ ಅದೇ ಸ್ವರ್ಗ

ಮಾಸ್ಟರ್ : ರಾಮನಿಗೂ ರಾವಣನಿಗೂ ಯುದ್ಧ ಏಕೆ ಆಯಿತು?
ವಿದ್ಯಾರ್ಥಿ : ನನಗೆ ಗೊತ್ತಿಲ್ಲ ಸಾರ್
ಮಾಸ್ಟರ್ : (ಗದರಿಸುತ್ತಾ) ಅದಕ್ಕೆ ಮಹಾಭಾರತ ಓದು ಅಂತ ಬಡ್ಕೊಳ್ಳೋದು!

ಮೈಸೂರು ಮಿತ್ರ

ಮಂಗಳವಾರ, 4 ಏಪ್ರಿಲ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)


ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........
ಜೀವನದ ಉದ್ದೇಶ ಚೆನ್ನಾಗಿ ಬಾಳುವುದು – ಟಾಲ್‌ಸ್ಟಾಯ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹತ್ತೆಮ್ಮೆ ಕರೆಯೋನು ಒಂದೆಮ್ಮೆ ಕರೆಯೋನ ಮನೆಗೆ ಹಾಲಿಗೆ ಹೋದಂತೆ

ಸ್ವರಾಜ್ಯ ಪುನರ್ ನಿರ್ಮಾಣದತ್ತ ದಿಟ್ಟ ಪಥ, ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶಪಥ





ಡಾಕ್ಟರ್ ಕೇಶವ ಬಲಿರಾಮ್ ಹೆಡ್ಗೆವಾರ

ಸಮಾಜದ ಎಲ್ಲಾ ವರ್ಗಗಳಿಗೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವ, ಸರ್ವಾಂಗೀಣ ವಿಕಾಸಕ್ಕೆ ಅವಕಾಶ ನೀಡುವ ಮತ್ತು ಸುಸ್ಥಿರ ಅಭಿವೃದ್ಧಿ ಹಾಗೂ ತಂತ್ರಜ್ಞಾನಗಳು ಮಿಳಿತಗೊಂಡಂತಹ ಭಾರತೀಯ ಮೌಲ್ಯಾಧಾರಿತ ಹೊಸ ಮಾದರಿಗಳನ್ನು ನಿರ್ಮಿಸುವ ಅಗತ್ಯತೆಯ ಕುರಿತು ಅಖಿಲ ಭಾರತೀಯ ಪ್ರತಿನಿಧಿ ಸಭಾ ಕಾರ್ಯನಿರ್ವಹಿಸುವ ಸಂಕಲ್ಪವನ್ನು ಕೈಗೊಂಡಿರುವುದನ್ನು ದಿಟ್ಟ ನಡೆಯೆಂದೇ ಹೇಳಬಹುದು. ಏಕೆಂದರೆ ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ಸಮಾಜದ ಅಂತರ್ಯ ಸ್ವರೂಪ ವ್ಯವಸ್ಥೆ ಮತ್ತು ಕುಟುಂಬವನ್ನಾಗಿ ಬೆಳೆಸಬೇಕೆಂಬುದು ಡಾಕ್ಟರ್ ಜೀಯವರ ಪ್ರಮುಖ ಉದ್ದೇಶವಾಗಿತ್ತು.

ಭಾರತದ ಇತಿಹಾಸದ ಮಜಲುಗಳನ್ನು ಅತ್ಯಂತ ಕೂಲಂಕುಷವಾಗಿ ಗಮನಿಸಿದ್ದೇ ಆದಲ್ಲಿ, ವಿಭಿನ್ನ ಸಾಂಸ್ಕೃತಿಕ, ಪಾರಂಪರಿಕ ಮತ್ತು ಜಾನಪದೀಯ ನೆಲೆಗಟ್ಟಿನ ಹಿನ್ನೆಲೆಯಲ್ಲಿ ಎಂದೆಲ್ಲ ಈ ವೈವಿಧ್ಯ ಅಂತಸ್ಸತ್ವಗಳಿಗೆ ಧಕ್ಕೆಯಾಗುವ ಪ್ರಯತ್ನವಾಗಿದೆಯೋ ಅಂದೆಲ್ಲ ಅವುಗಳ ಸಂರಕ್ಷಣೆಗೆ ಒಂದಿಲ್ಲೊಂದು ರೂಪದಲ್ಲಿ ಶಕ್ತಿ ಸಂಘಟನೆಯಾದದ್ದನ್ನು ಕಾಣಬಹುದು.

ಒಂದು ದೇಶದ ಸ್ವಾವಲಂಬಿತನಕ್ಕೆ ಬೇಕಾದ ಸರ್ವ ರೀತಿಯ ಪರಂಪರೆ ಮತ್ತು ಸಂಸ್ಕೃತಿಗಳು ಅದಾಗಲೇ ಅಸ್ತಿತ್ವದಲ್ಲಿದ್ದರೂ ಅವುಗಳ ಪರಿಚಯ, ಉಳಿವು ಮತ್ತು ವಿಕಸನ ಮಾತ್ರ ಶುದ್ಧ ಚಾರಿತ್ರ್ಯ ಸಂಪನ್ನ ನಾಯಕರಿಂದ ಸಾಧ್ಯ. ಒಂದು ಸ್ವಸ್ಥ ಸಮಾಜದಲ್ಲಿ ಅದರ ಬೆಳವಣಿಗೆಗೆ ಬೇಕಾದ ಗತಿವಿಧಿಗಳೆಲ್ಲವೂ ತನ್ನಷ್ಟಕ್ಕೆ ತಾನೇ ಘಟಿಸುತ್ತವೆ. ಒಂದು ವೇಳೆ ಇಂತಹ ವಿಧಿಗಳ ಹುಟ್ಟಿಗಾಗಿ ಮೇಲಿಂದ ಮೇಲೆ ಪ್ರಯತ್ನಗಳ ಅವಶ್ಯಕತೆ ಬೇಕಾಗಿದೆ ಎಂದರೆ ಆ ಸಮಾಜದಲ್ಲಿ ಕೊರತೆಗಳಿವೆ ಎಂದರ್ಥ. ಇನ್ನು ಅಂತಹ ಆ ಕೊರತೆಗಳನ್ನು ನೀಗಿಸದೆ ಹೋದಲ್ಲಿ ಅದರುತ್ಥಾನಕ್ಕಾಗಿ ಮಾಡಿದ ಪ್ರಯತ್ನಗಳೆಲ್ಲವೂ ಅಪೂರ್ಣವಾಗಿಯೋ, ತಾತ್ಕಾಲಿಕವಾಗಿಯೇ ಉಳಿಯಬಹುದು. ಹೀಗಾಗಿ ಅಂತಹ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲು ಅದೇ ಸಮಾಜದಲ್ಲಿ ಆದರ್ಶ ಆಚರಣೆಯ ಮೂಲಕ ವಿಶ್ವಾಸಾರ್ಹ ನಡವಳಿಕೆ ತೋರಬಲ್ಲ, ಅದರ ಮೂಲಕ ಸಮಾಜದ ಆಮೂಲಾಗ್ರ ಬದಲಾವಣೆಗೆ ಕಾರಣರಾಗಬಲ್ಲ ಶಕ್ತಿಶಾಲಿ ವ್ಯಕ್ತಿತ್ವಗಳನ್ನು ನಿರ್ಮಾಣ ಮಾಡಬೇಕೆನ್ನುವುದು ರಾಷ್ಟ್ರದ ಪ್ರಮುಖ ಆದರ್ಶ ವ್ಯಕ್ತಿತ್ವಗಳಲ್ಲಿ ಒಬ್ಬರಾದ **ಡಾಕ್ಟರ್ ಕೇಶವ ಬಲಿರಾಮ್ ಹೆಡ್ಗೆವಾರರ** ದೂರದೃಷ್ಟಿಯಾಗಿತ್ತು.

ಅಂತೆಯೇ ಸ್ವಾತಂತ್ರ ಸಂಗ್ರಾಮದ ಸಂದರ್ಭದಲ್ಲಿ, ಶತಮಾನಗಳ ಕಾಲ ಗುರಿಯಿಲ್ಲದೇ, ದಾರಿ ಕಾಣದೇ ಆಂತರಿಕವಾಗಿ ಜರ್ಝರಿತಗೊಂಡಿದ್ದ ಭಾರತಕ್ಕೆ ತನ್ನ ಮೂಲ ಸಂಸ್ಕೃತಿಯ ಬೇರುಗಳನ್ನು ಸಂರಕ್ಷಿಸಿಕೊಳ್ಳುವ ಜೊತೆಜೊತೆಗೆ ಎದುರಾಗುತ್ತಿದ್ದ ರಾಜಕೀಯ ಮತ್ತು ಸಾಮಾಜಿಕ ಬದಲಾವಣೆಗಳ ನಿರಂತರ ಪರ್ವಗಳ ಬಿರುಗಾಳಿಯನ್ನು ಸಶಕ್ತವಾಗಿ ಎದುರಿಸಲು ಒಂದು ಪ್ರಬಲ ಸಂಘಟನೆಯ ಅವಶ್ಯಕತೆಯಿರುವುದನ್ನು ಮನಗಂಡಿದ್ದ, ಡಾಕ್ಟರ್ ಕೇಶವ ಬಲಿರಾಮ್ ಹೆಡ್ಗೆವಾರರು 1925ರಲ್ಲಿ ಸಮಾಜಕ್ಕೆ ಮಾದರಿಯಾಗಿ ನೆರವಾಗಬಲ್ಲ, ರಾಷ್ಟ್ರದ ಹಿತಕ್ಕಾಗಿ ಸದಾ ದುಡಿಯುವ ಸ್ವಯಂ ಸೇವಕರನ್ನು ನಿರ್ಮಿಸುವ ಸದುದ್ದೇಶದಿಂದ **'ರಾಷ್ಟ್ರೀಯ ಸ್ವಯಂ ಸೇವಕ ಸಂಘ'** ಸ್ಥಾಪಿಸಿದರು.

ಅಂದಿನಿಂದಲೂ ಕೂಡ ಸಂಘವು ಸಮಾಜದಲ್ಲಿ ಜಾಗೃತಿಯನ್ನು ಮೂಡಿಸಿ, ಆಂತರಿಕವಾಗಿ ಜನಮಾನಸವೆಲ್ಲ ಸಂಘಟಿತರಾಗುವಂತೆ ಮಾಡಿ, ರಾಷ್ಟ್ರದ ಪುನರ್ನಿರ್ಮಾಣದ ಜೊತೆಗೆ ರಾಷ್ಟ್ರೀಯತೆಯ ಯಜ್ಞದಲ್ಲಿ ತನ್ನ ಸ್ವಧರ್ಮವನ್ನು ಕಾಪಾಡಿಕೊಂಡು ಬಂದಿದೆ. ಇದೇ ಮಾರ್ಚ್ 12–14ರಂದು ಹರಿಯಾಣದ ಸೇವಾ ಸಾಧನಾ ಗ್ರಾಮವಿಕಾಸ ಕೇಂದ್ರ–ಪಟ್ಟಿಕಲ್ಯಾಣ, ಪಾಣಿಪತ್‌ನಲ್ಲಿ 'ಅಖಿಲ ಭಾರತ ಪ್ರತಿನಿಧಿ ಸಭಾದ' ಸಮಾವೇಶ ಜರುಗಿತು. ಅದರಲ್ಲಿ 21ನೇಯ ಶತಮಾನದ ಅನಿಶ್ಚಿತ ಸಾಂದರ್ಭಿಕತೆಯ ಮಧ್ಯೆ ಕೂಡ ಭಾರತ ತನ್ನ ಸ್ವ–ತ್ವವನ್ನು ಕಾಪಾಡಿಕೊಂಡು ಬಂದಿರುವುದು ಅತ್ಯಂತ ವಿಶೇಷವೆಂದು ಪರಿಗಣಿಸಿ ಅದಕ್ಕೆ ಮೂಲ ಪ್ರೇರಣಾ ಸ್ತೋತ್ರದಂತಿರುವ ಸ್ವಧರ್ಮ, ಸ್ವದೇಶಿ ಮತ್ತು ಸ್ವರಾಜ್ಯ ಎಂಬ 'ಸ್ವ'– ತ್ರಯಗಳು, ಮತ್ತವುಗಳ ಪ್ರಾಪ್ತಿಯಲ್ಲಿ ನಿರಂತರವಾಗಿ ಶ್ರಮಿಸಿದ್ದ ಮತ್ತು ಶ್ರಮಿಸುತ್ತಿರುವ ಅನೇಕ ಸಂತರು ಹಾಗೂ ಮಹಾನ್ ವ್ಯಕ್ತಿಗಳನ್ನು ಸ್ಮರಿಸಲಾಯಿತು. ಶತಮಾನಗಳ ನಿರಂತರ ದಬ್ಬಾಳಿಕೆಗೆ ಒಳಪಟ್ಟರೂ ಕೂಡ ಭಾರತ ಸ್ವಾತಂತ್ರ್ಯದ ನಂತರ ಕೆಲವೇ ದಶಕಗಳಲ್ಲಿ ವಿಶ್ವದ ಕಣ್ಣು ಕುಕ್ಕುವಂತೆ ಬೆಳೆಯಲು, ಆರ್ಥಿಕ, ಸಾಮಾಜಿಕ, ರಾಜಕೀಯ, ವೈಜ್ಞಾನಿಕ, ತಂತ್ರಜ್ಞಾನ ಮತ್ತು ಸೇನೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಪರಿಮಿತ ಸಂಘರ್ಷದ ಮಧ್ಯೆಯಲ್ಲಿಯೂ ಸ್ವ–ತ್ವವನ್ನು ಕಾಪಾಡಿಕೊಂಡು ಬಂದಿರುವುದು ಹೆಮ್ಮೆ ಪಡುವಂತಹ ಸಂಗತಿಯಾಗಿದೆ.

19ನೇ ಶತಮಾನದ ಪೂರ್ವಾರ್ಧದಲ್ಲಿ 'ಮೆಕಾಲೆ ಶಿಕ್ಷಣ' ನೀತಿ ಆರಂಭವಾಗಿ ಸರಿಸುಮಾರು ಒಂದೂವರೆ ಶತಮಾನವಾದರೂ ತನ್ನ ಬೇರುಗಳನ್ನಿನ್ನೂ ಹಿಡಿದಿಟ್ಟುಕೊಂಡಿರುವ ಕಾಲದಲ್ಲೇ ಸನಾತನ ಮೌಲ್ಯಗಳನ್ನು ಉಳಿಸಿಕೊಂಡು ಭಾರತದ ಪುನರುತ್ಥಾನಕ್ಕೆ ಶ್ರಮಿಸುತ್ತಿರುವ ಸಂಘದ ಧ್ಯೇಯ ಶ್ಲಾಘನೀಯ. ಸಂಸ್ಥಾಪಿತಗೊಂಡು ಇನ್ನೇನು ನೂರು ವರ್ಷದ ಹೊಸ್ತಿಲಿನಲ್ಲಿ ನಿಂತಿರುವಾಗ ಸಕಾಲವೆಂಬಂತೆ ತನ್ನ ಸಂಸ್ಥಾಪಕರ ಮುಖ್ಯ ಧ್ಯೇಯೋದ್ದೇಶಗಳನ್ನು ಪೂರ್ಣಗೊಳಿಸಲು ಪ್ರಯತ್ನಿಸುತ್ತಿದೆ. ಆದರೆ ಹಾದಿ ಎಂದಿನಂತೆ ಸುಲಭವಿಲ್ಲ ಎಂಬ ಸತ್ಯದರಿವೂ ಸಂಘಕ್ಕೂ ಇರುವಂತಿದೆ. ಸುಸಂಘಟಿತ, ವೈಭವಶಾಲಿ ಮತ್ತು ಸಮೃದ್ಧ ಭಾರತ ನಿರ್ಮಾಣದ ಪ್ರಕ್ರಿಯೆಗಾಗಿ, ಸಮಾಜದ ಎಲ್ಲಾ ವರ್ಗಗಳಿಗೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವ, ಸರ್ವಾಂಗೀಣ ವಿಕಾಸಕ್ಕೆ ಅವಕಾಶ ನೀಡುವ ಮತ್ತು ಸುಸ್ಥಿರ ಅಭಿವೃದ್ಧಿ ಹಾಗೂ ತಂತ್ರಜ್ಞಾನಗಳು ಮಿಳಿತಗೊಂಡಂತಹ ಭಾರತೀಯ ಮೌಲ್ಯಾಧಾರಿತ ಹೊಸ ಮಾದರಿಗಳನ್ನು ನಿರ್ಮಿಸುವ ಅಗತ್ಯತೆಯ ಕುರಿತು ಅಖಿಲ ಭಾರತೀಯ ಪ್ರತಿನಿಧಿ ಸಭಾ ಕಾರ್ಯನಿರ್ವಹಿಸುವ ಸಂಕಲ್ಪವನ್ನು ಕೈಗೊಂಡಿರುವುದನ್ನು ದಿಟ್ಟ ನಡೆಯೆಂದೇ ಹೇಳಬಹುದು. ಏಕೆಂದರೆ ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ಸಮಾಜದ ಅಂತರ್ಯ ಸ್ವರೂಪ ವ್ಯವಸ್ಥೆ ಮತ್ತು ಕುಟುಂಬವನ್ನಾಗಿ ಬೆಳೆಸಬೇಕೆಂಬುದು ಡಾಕ್ಟರ್ ಜೀಯವರ ಪ್ರಮುಖ ಉದ್ದೇಶವಾಗಿತ್ತು.

ದೇಶದ ಸ್ವಾತಂತ್ರ್ಯ ಸಂಘರ್ಷದ ಕಾಲದಲ್ಲಿ ವಿದೇಶಿಯರ ಶಾಸನದಿಂದ ಮುಕ್ತಾಗುವುದಕ್ಕಾಗಿ ಯಾವ ರೀತಿಯ ತ್ಯಾಗ ಬಲಿದಾನದ ಅವಶ್ಯಕತೆ ಇತ್ತೋ ಅದೇ ರೀತಿಯಲ್ಲಿ ಇಂದು ದೇಶದ ಪುನರ್ನಿರ್ಮಾಣದಂತಹ ಮಹತ್ತರ ಉದ್ದೇಶವನ್ನು ನೆರವೇರಿಸಲು ಪ್ರತಿಬದ್ಧರಾಗುವ ಮತ್ತು ವಸಾಹತುಶಾಹಿ ಮಾನಸಿಕತೆಯಿಂದ ಮುಕ್ತವಾದ ಸಮಾಜ ಜೀವನವನ್ನು ಕಟ್ಟುವಾಗಲೂ ತ್ಯಾಗ ಬಲಿದಾನಗಳ ಅಗತ್ಯವಿದೆ. ಸ್ವಾಮಿ ವಿವೇಕಾನಂದರು ಭಾರತೀಯ ತರುಣರಿಗೆ ಸದಾ 'ನಿರ್ಭೀತರಾಗಿರುವ' ಪಾಠವನ್ನು ತಮ್ಮ ಬೋಧನೆಯಲ್ಲಿ ಹೇಳಿಕೊಟ್ಟಿದ್ದರು. ಸದ್ಯದ 'ಅಖಿಲ ಭಾರತೀಯ ಪ್ರತಿನಿಧಿ ಸಭಾ' ಅದೇ ಪಾಠದ ಮುಂದುವರಿದ ಭಾಗವನ್ನು ಸಮಾಜಕ್ಕೆ ತಿಳಿಯಪಡಿಸಲು ಹೊರಟಿರುವಂತಿದೆ. ಏಕೆಂದರೆ ಮೇಲೆ ತಿಳಿಸಿದಂತಹ ತ್ಯಾಗ ಬಲಿದಾನಗಳು ದುರ್ಬಲ ಮನಸ್ಥಿತಿಯ ಸಮಾಜದಿಂದೆಂದಿಗೂ ನಿರೀಕ್ಷಿಸಲಾಗದು. ಆಂತರಿಕವಾಗಿ ಸಮುದಾಯವೊಂದು ಬಲಿಷ್ಠಗೊಂಡಾಗಲೇ ವಿಶ್ವವನ್ನೆದುರಿಸಲು ಸಾಧ್ಯವೆಂಬುದಕ್ಕೆ ಇತಿಹಾಸದ ಹಲವು ಮಜಲುಗಳೇ ಸಾಕ್ಷಿಯಾಗಿವೆ. ನಿರಂತರವಾಗಿ ಶತಮಾನಗಳ ಕಾಲ ಪರಕೀಯರ ಆಡಳಿತದಲ್ಲೇ ಇದ್ದ ಭಾರತ, ತನ್ನ ಕಾಲ ಮೇಲೆ ಮತ್ತೆ ತಾನು ನಿಂತು, ಸಾರ್ವಭೌಮನಾಗಿ ತಲೆಯೆತ್ತುವ ಕಾಲ ಸನಿಹವಿರುವುದಂತೂ ಸುಳ್ಳಲ್ಲ. ಹೀಗಿರುವಾಗ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸಂದರ್ಭದಲ್ಲಿ ಪ್ರಧಾನ ಮಂತ್ರಿಯರು ನೀಡಿದ ಐದು ವಿಚಾರಗಳ ಅನುಷ್ಠಾನವೂ ಅಷ್ಟೇ ಮುಖ್ಯವಾಗುತ್ತದೆ.

ಆದರೆ ಈ ವಿಚಾರಗಳ ಅನುಷ್ಠಾನಕ್ಕೆ ಸಮಾಜದ ಎಲ್ಲ ವರ್ಗಗಳು ಕೂಡ ಶ್ರಮಿಸಬೇಕಿದೆ. ಭಾರತ ತನ್ನ ಸ್ವ–ತ್ವ ವನ್ನು ಅರಿತುಕೊಂಡು ಸುಶಾಸನಕ್ಕೆ ಮುನ್ನುಡಿ ಬರೆಯುತ್ತಿರುವಂತಹ ಸಂಗತಿಯನ್ನು ಜಾಗತಿಕ ಮಟ್ಟದಲ್ಲಿ ಅರಗಿಸಿ ಕೊಳ್ಳಲು ಕೆಲ ರಾಷ್ಟ್ರಗಳಿಗಾಗುತ್ತಿಲ್ಲವೆಂಬುದು ಎಷ್ಟು ಸತ್ಯವೋ, ಆಂತರಿಕವಾಗಿ ಕೂಡ ದೇಶವನ್ನು ದುರ್ಬಲ ಗೊಳಿಸಲು ಯತ್ನಿಸುತ್ತಿರುವವರ ಮುಂದೆಯೇ ದೇಶ ಅಪ್ರತಿಮವಾಗಿ ಎಲ್ಲಾ ರಂಗಗಳಲ್ಲಿಯೂ ಸಬಲಗೊಳ್ಳುತ್ತಿದೆಯೆಂಬ ವಿಚಾರ ಇಲ್ಲಿನ ಅವರ ಕಣ್ಣು ಕುಕ್ಕುವಂತೆ ಮಾಡಿದೆ ಎಂಬುದು ಕೂಡ ಅಷ್ಟೇ ಸತ್ಯ. ಹೀಗಾಗಿ ಅಂತಹವರ ಯೋಜನೆಗಳನ್ನು ವಿಫಲಗೊಳಿಸಲು ಸ್ವಯಂ ಹೊಣೆಗಾರಿಕೆಯ ಜೊತೆಗೆ, ಕುಟುಂಬ ವ್ಯವಸ್ಥೆಯ ಸಬಲೀಕರಣ, ವಿವಿಧ ಸಮಾಜಗಳ ಆಂತರಿಕ ಸಧೃಢತೆ ಮತ್ತು ವಿಚಾರ ಅನುಷ್ಠಾನಿತ ಪರಿಪಾಲನೆಯೊಡನೆ ವೈಯುಕ್ತಿಕವಾಗಿ ದೇಶದ ನಾಗರಿಕರೆಲ್ಲರೂ ಭಾಗಿಯಾಗಬೇಕಾಗುತ್ತದೆ. ಅಂದಾಗ ಮಾತ್ರವೇ ಭಾರತೀಯ ಚಿಂತನೆಯ ಬೆಳಕಿನಲ್ಲಿ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ಪ್ರಜಾತಾಂತ್ರಿಕ ನ್ಯಾಯಾಂಗ ಸಂಸ್ಥೆಗಳ ಸಹಿತ ಸಮಾಜಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಯುಗಾನುಕೂಲ ಮಾದರಿಗಳನ್ನು ವಿಕಸಿತಗೊಳಿಸುವ ಕಾರ್ಯದಲ್ಲಿ ಸಂಪೂರ್ಣ ಸಾಮರ್ಥ್ಯವನ್ನು ಪ್ರಕಟಗೊಳಿಸಲು ಸಂಘಕ್ಕೆ ಸಾಧ್ಯವಾಗುತ್ತದೆ. ಜೊತೆಗೆ ಸ್ವರಾಜ್ಯ ಪುನರ್ನಿರ್ಮಾಣದತ್ತ, ರಾಷ್ಟ್ರೀಯ ಸ್ವಯಂ ಸೇವಕ ಸಂಘ ಹರಿಸಿರುವ ಚಿತ್ತಕ್ಕೂ ನಾಗರಿಕ ಮಂಡಳಿ ನ್ಯಾಯ ಸಲ್ಲಿಸಿದಂತಾಗುತ್ತದೆ.

● **ಸೋಮೇಶ್ವರ ಆರ್. ಗುರುಮಠ, ವಾಗ್ಮಿ, ಅಂಕಣಕಾರ**

ನಿಮ್ಮ ಪತ್ರಗಳು

ಚುನಾವಣಾ ಕಾನೂನಿಗೆ ಮಾರ್ಪಾಡು ಈಗಂತೂ ತುರ್ತು ಅವಶ್ಯಕವಾಗಿದೆ

ಮಾನ್ಯರೇ,

ಕರ್ನಾಟಕ ರಾಜ್ಯ ವಿಧಾನಸಭೆಗೆ ಸಾರ್ವತ್ರಿಕ ಚುನಾವಣೆಗಳು ಘೋಷಣೆಯಾಗಿವೆ.ಅಂತೆಯೇ ಪಕ್ಷಗಳು ಭರಾಟೆಯಿಂದ, ತರಹೇವಾರಿ ಪರಸ್ಪರ ನಿಂದಿಸುವುದರಲ್ಲಿ ತಾನೇ ಮುಂದು ಎನ್ನುತ್ತಿರುವುದನ್ನು ಪ್ರತಿನಿತ್ಯ ಪತ್ರಿಕೆಗಳಲ್ಲಿ ಓದುತ್ತಿರುತ್ತೇವೆ. ಚುನಾವಣೆಗಳು ಹತ್ತಿರ ಬಂದ ಹಾಗೆಲ್ಲ ಕೆಲವು ರಾಜಕಾರಣಿಗಳಿಗೆ ಮಂಗನ ಕಾಯಿಲೆ ಅಂಟಿಕೊಳ್ಳುತ್ತಿದೆ. ಅರ್ಥಾತ್, ಪಕ್ಷದಿಂದ ಪಕ್ಷಕ್ಕೆ ಹಾರುವ ಕಾಯಿಲೆ. ಅಧಿಕಾರಕ್ಕಾಗಿ ಹಪಹಪಿಸುವ ಕೆಲ ಮಂದಿಯಂತೂ ತಮ್ಮ ಇಳಿವಯಸ್ಸನ್ನು ಲೆಕ್ಕಿಸದೇ, ಉಮೇದುವಾರಿಕೆ ಸಲ್ಲಿಸಲು ಹಾತೊರೆಯುತ್ತಿದ್ದಾರೆ.

ಸಾಲದೆಂಬಂತೆ ತಮಗೆ ಸಂಶಯ ಬಂದಲ್ಲಿ ಎರಡೆರಡು ಕ್ಷೇತ್ರಗಳಿಂದ ನಿಲ್ಲುವುದಕ್ಕೂ ಯೋಚಿಸುತ್ತಿದ್ದಾರೆ. ಈಗಾಗಲೇ ಮಾಜಿ ಮುಖ್ಯಮಂತ್ರಿಯೊಬ್ಬರು ಈ ಹಿಂದೆಯೂ ಎರಡು ಕ್ಷೇತ್ರಗಳಲ್ಲಿ ನಿಂತು ನಂತರ ಒಂದನ್ನು ತೆರವುಗೊಳಿಸಿ ಉಪ ಚುನಾವಣೆಯಲ್ಲಿ ಅಲ್ಲಿಂದ ತಮ್ಮ ಕುಟುಂಬದವರನ್ನು ಗೆಲ್ಲಿಸಿದ್ದಾರೆ. ಈ ನಿಟ್ಟಿನಲ್ಲಿ ಚುನಾವಣಾ ಆಯೋಗ ಕೆಲವು ಮಾರ್ಪಾಡುಗಳನ್ನು ಜರೂರು ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ.

ಅವುಗಳಲ್ಲಿ ಮುಖ್ಯವಾಗಿ ಎರಡು ಕ್ಷೇತ್ರಗಳಿಂದ ಸ್ಪರ್ಧಿಸಿ ಎರಡೂ ಕಡೆಗಳಲ್ಲಿಯೂ ಒಂದೇ ಅಭ್ಯರ್ಥಿ ಗೆದ್ದಲ್ಲಿ, ಮತ್ತು ಆತ ಒಂದನ್ನು ತೆರವುಗೊಳಿಸಿದರೆ, ತೆರವುಗೊಳಿಸಿದ ಕ್ಷೇತ್ರದಲ್ಲಿ ಉಪಚುನಾವಣೆ ನಡೆಸುವ ಬದಲಿಗೆ ಎರಡನೆಯ ಸ್ಥಾನದಲ್ಲಿರುವ ಅಭ್ಯರ್ಥಿಯನ್ನು ವಿಜಯಿ ಎಂದು ಘೋಷಿಸಬೇಕು.

ಸಂವಿಧಾನದ ಹಕ್ಕನ್ನು ಬಳಸಿಕೊಂಡು ಅಭ್ಯರ್ಥಿ ತಾನು ಮೊದಲು ಪ್ರತಿನಿಧಿಸುತ್ತಿದ್ದ ಸ್ವಕ್ಷೇತ್ರದಿಂದಲೇ ಸ್ಪರ್ಧಿಸುವುದು ಉತ್ತಮ. ಅದು ಹೊರತುಪಡಿಸಿ ಇತರೆಡೆ ಉಮೇದುವಾರಿಕೆ ಸಲ್ಲದು. ಇನ್ನು ಸರ್ಕಾರದ ರಚನೆ ವಿಷಯ ಬಂದಾಗ, ಅತೀ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವ ರಾಜಕೀಯ ಪಕ್ಷಕ್ಕೆ ಮೊದಲ ಅವಕಾಶ ನೀಡಬೇಕು. ಹಳೆಯ ಕಾನೂನು, ಒಟ್ಟು ಸ್ಥಾನಗಳಲ್ಲಿ ಅರ್ಧಕ್ಕಿಂತ ಅಧಿಕ ಸ್ಥಾನ ಪಡೆಯುವ ಲೆಕ್ಕಕ್ಕೆ ಮಂಗಳ ಹಾಡಬೇಕು. ಅಭ್ಯರ್ಥಿಯು ಚುನಾವಣೆಗೆ ಮುನ್ನ ಘೋಷಿಸಿರುವ ಸಂಪತ್ತು ಆದಾಯಕ್ಕೆ ಅನುಗುಣವಾಗಿ, ವಿಧಾನಸಭೆ ವಿಸರ್ಜನೆಯಾದಾಗ ಅದನ್ನು ಅಂದಿನ ಆತನ ಆದಾಯಕ್ಕೆ ತಾಳೆ ಹೊಂದಿಸಬೇಕು. ಇವೆಲ್ಲವೂ ಆದಾಗ ಮಾತ್ರ ಮತದಾರ ಸ್ವಲ್ಪ ಮಟ್ಟಿಗೆ ಚುನಾವಣಾ ಪ್ರಕ್ರಿಯೆಯಲ್ಲಿ ಆಸಕ್ತಿ ಹೊಂದಬಹುದು.

– ವಿಜಯ್ ಹೆಮ್ಮಿಗೆ, ಮೈಸೂರು

ಒಳಮೀಸಲಾತಿ ಜಾರಿ ಮಾಡಿದ ಸರ್ಕಾರಕ್ಕೆ ಧನ್ಯವಾದಗಳು

ಮಾನ್ಯರೆ,

ಒಳಮೀಸಲಾತಿಯನ್ನು ಜಾರಿ ಮಾಡಿದ ಸರ್ಕಾರಕ್ಕೆ ಧನ್ಯವಾದಗಳು. ನಮ್ಮ ಮಾದಿಗ ಸಮುದಾಯ ಮೂರು ದಶಕಗಳಿಂದ ಮೀಸಲಾತಿ ವರ್ಗೀಕರಣಕ್ಕಾಗಿ ಕರ್ನಾಟಕ ರಾಜ್ಯಾದ್ಯಂತ ಪ್ರತಿಭಟನೆ, ಧರಣಿ, ತಮಟೆ ಚಳವಳಿ, ಸಮಾವೇಶಗಳು ಮುಂತಾದ ಹೋರಾಟಗಳನ್ನು ಮಾಡಿಕೊಂಡು ಬಂದಿದ್ದು ಸಾರ್ಥಕವಾಯಿತು. ನಾನು ಕೂಡ ನಮ್ಮ ಸಮುದಾಯದ ಮುಖಂಡರೊಂದಿಗೆ ಭಾಗವಹಿಸಿ ಮೈಸೂರು ಜಿಲ್ಲಾಧಿಕಾರಿ ಕಚೇರಿ, ತಾಲೂಕು ಕಚೇರಿ, ಪುರಭವನ ಆವರಣ, ರೈಲ್ವೆ ಸ್ಟೇಷನ್, ಗಾಂಧಿ ಚೌಕ ಇನ್ನೂ ಮುಂತಾದ ಪ್ರದೇಶಗಳಲ್ಲಿ ನಡೆಸಿದ ಹೋರಾಟಕ್ಕೆ ಸದ್ಯ ಜಯ ಸಿಕ್ಕಿದಂತಾಯಿತು. 30 ವರ್ಷಗಳಿಂದ ಬಗೆಹರಿಯದ ಸಮಸ್ಯೆಯನ್ನು ನಿವಾರಣೆ ಮಾಡಿ ಒಳಮೀಸಲಾತಿ ಜಾರಿ ಮಾಡಿದ ಬಿಜೆಪಿ ಸರ್ಕಾರಕ್ಕೆ ಹಾಗೂ ರಾಜಕೀಯ ಪ್ರತಿನಿಧಿಗಳಿಗೆ ಧನ್ಯವಾದಗಳು.

–ಹೆಚ್. ಮಣಿಕಂಠ, ಚಟ್ಟಿಹುಂಡಿ, ಮೈಸೂರು ತಾ.

ರೈಲು ಪ್ರಯಾಣ ದರದಲ್ಲಿ ಹಿರಿಯ ನಾಗರಿಕರಿಗೆ ರಿಯಾಯಿತಿ ನೀಡಲಿ

ಮಾನ್ಯರೆ,

ಕೇಂದ್ರ ಸರ್ಕಾರ ಹಿರಿಯ ನಾಗರಿಕರಿಗೆ ನೀಡುತ್ತಿದ್ದ ರೈಲು ಪ್ರಯಾಣ ದರ ರಿಯಾಯಿತಿಯನ್ನು ರದ್ದುಪಡಿಸಿ ಹಿರಿಯ ನಾಗರಿಕರಿಗೆ ತುಂಬಾ ಸಂಕಷ್ಟ ಹಾಗೂ ಅಪಮಾನ ಉಂಟು ಮಾಡಿದೆ. ಹಿರಿಯ ನಾಗರಿಕರು ತಮಗೆ ಬರುವ ಅಲ್ಪ ಆದಾಯದಲ್ಲಿ ತಮ್ಮ ಹಾಗೂ ಅವಲಂಬಿತ ಹಿತ ಕಾಪಾಡಿಕೊಂಡು ಸಂಸಾರ ನಿರ್ವಹಿಸುವುದು ಅಸಾಧ್ಯವಾಗಿದೆ. ಈ ಬಗ್ಗೆ ಕೇಂದ್ರ ಸರ್ಕಾರ ತುರ್ತಾಗಿ ಗಮನಹರಿಸಿ, ಹಿರಿಯ ನಾಗರಿಕರಿಗೆ ಈ ಹಿಂದೆ ನೀಡುತ್ತಿದ್ದ ರೈಲು ಪ್ರಯಾಣ ದರದಲ್ಲಿ ರಿಯಾಯಿತಿ ನೀಡಬೇಕೆಂದು ಮನವಿ.

–ನೊಂದ ಅಸಂಖ್ಯಾತ ಹಿರಿಯ ನಾಗರಿಕರ ಪರವಾಗಿ, ಮೈಸೂರು.

ಚಾಮರಾಜ ಕ್ಷೇತ್ರದ ಶಾಸಕರಲ್ಲಿ ಮನವಿ

ಮಾನ್ಯರೆ,

ಹಲವಾರು ವರ್ಷಗಳ ಹಿಂದೆ ಕುಂಬಾರಕೊಪ್ಪಲು ಬಡಾವಣೆಯಿಂದ ಮೈಸೂರು ನಗರ ಬಸ್ ನಿಲ್ದಾಣಕ್ಕೆ ರೂಟ್ ನಂ. 118, 140 (ಪಡುವಾರಹಳ್ಳಿ ಬಳಿಯ ನೂತನ ಮಹಾರಾಣಿ ಮಹಿಳಾ ಕಾಲೇಜು ಮಾರ್ಗವಾಗಿ) ರೂಟ್ ನಂ. 111, 117 ಸಿಟಿ ಬಸ್‌ಗಳು ಸಂಚರಿಸುತ್ತಿದ್ದವು. ಚಾಮರಾಜ ಕ್ಷೇತ್ರದ ಶಾಸಕರಾದ ಎಲ್. ನಾಗೇಂದ್ರ ಅವರು ಕುಂಬಾರಕೊಪ್ಪಲು ಬಸ್ ಸ್ಟಾಪ್‌ನಲ್ಲಿ ಸುಸಜ್ಜಿತ ಪ್ರಯಾಣಿಕರ ತಂಗುದಾಣವನ್ನು ನಿರ್ಮಿಸಿದ್ದಾರೆ. ಆದರೆ ಏನು ಪ್ರಯೋಜನ? ಬಸ್ ಸೌಲಭ್ಯವೇ ಇಲ್ಲದಂತಾಗಿದೆ. ಕೆಲವರ ಅನಗತ್ಯ ಆಕ್ಷೇಪದ ಹಿನ್ನಲೆಯಲ್ಲಿ ಗ್ರಾಮದೊಳಗೆ ಬಸ್ ಬರುತ್ತಿಲ್ಲ ಎಂದು ಹೇಳಲಾಗುತ್ತಿದೆ. ಗ್ರಾಮದಲ್ಲಿನ ಬಡವರು, ಆರ್ಥಿಕವಾಗಿ ದುರ್ಬಲರು ಬಸ್‌ಗಾಗಿ ಸ್ಯಾನಿಟೋರಿಯಂ ಮುಂದೆ ಕೆ.ಆರ್.ಎಸ್. ರಸ್ತೆಗೆ ನಡೆದುಕೊಂಡು ಬಂದು ಬಸ್ ಹತ್ತಬೇಕಿದೆ. ಇದರಿಂದಾಗಿ ಕಾಲೇಜು ವಿದ್ಯಾರ್ಥಿಗಳಿಗೆ, ಹಿರಿಯ ನಾಗರಿಕರಿಗೆ, ಕಾರ್ಮಿಕರಿಗೆ ಬಹಳ ತೊಂದರೆಯಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಈ ಸಮಸ್ಯೆಯನ್ನು ಬಗೆಹರಿಸುವಂತೆ ಮನವಿ ಮಾಡುತ್ತೇವೆ.

–ಕುಂಬಾರಕೊಪ್ಪಲು ಗ್ರಾಮಸ್ಥರು, ಮೈಸೂರು.


ಅಸ್ತ (ಸ್ತು)!

ಮಾನ್ಯರೆ,

ಶ್ರವಣಬೆಳಗೊಳ ಧವಳ ಧಾರ್ಮಿಕ ವಿಭೂತಿ ಅಸ್ತಮಿಸಿತ್ತೆ! ಇನ್ನೆಲ್ಲಿ ಆ ತೇಜ, ಶ್ರೀ ಮಹಾವೀರ ಗೊಮ್ಮಟಸಾರ? ಪ್ರಾಕೃತವೊ ಕನ್ನಡವೊ–ಸರ್ವತ್ರ ಸರ್ವಧರ್ಮ ಸಮನ್ವಯದ ನಿಲುವು ಬೆಳಗಲ್ಯೆ:ಜೈನೇಯ ಹಿಂಸಾವಿರತಿಯಿಂದ ಶುಭಮಸ್ತು ಜಗತೀ ನಮಸ್ತಕ್ಕೆ!

– ಸಿಪಿಕೆ, ಮೈಸೂರು.


ಈಶ್ವರಪ್ಪಗೆ ಬಿಜೆಪಿ ಟಿಕೆಟ್ ಕೈ ತಪ್ಪುವ ಸಾಧ್ಯತೆ: ಪುತ್ರನ ಪರ ಲಾಬಿ



ಬೆಂಗಳೂರು: ಮಾಜಿ ಸಚಿವ ಹಾಗೂ ಬಿಜೆಪಿಯ ಹಿರಿಯ ನಾಯಕ ಕೆ.ಎಸ್.ಈಶ್ವರಪ್ಪ ಅವರಿಗೆ ಟಿಕೆಟ್ ನೀಡುವ ವಿಚಾರದಲ್ಲಿ ಬಿಜೆಪಿ ಎರಡು ಮನಸ್ಸಿನಲ್ಲಿದೆ. ಟಿಕೆಟ್ ನೀಡದಿರಲು ಪಕ್ಷವು ಈಗಾಗಲೇ ನಿರ್ಧಾರ ಕೈಗೊಂಡಿದ್ದು, ಹೊಸ ಮುಖಕ್ಕಾಗಿ ಹುಡುಕಾಟ ನಡೆಸುತ್ತಿದೆ ಎಂದು ಪಕ್ಷದ ಮೂಲಗಳು ಖಚಿತಪಡಿಸಿವೆ. ಈಶ್ವರಪ್ಪ ಬಿಜೆಪಿಯಲ್ಲಿ ಕುರುಬ ಸಮುದಾಯದ ಪ್ರಮುಖ ನಾಯಕರಾಗಿದ್ದು, ಕಟ್ಟಾ ಹಿಂದುತ್ವವಾದಿಯೂ ಹೌದು. ಕೆಂಪು ಕೋಟೆಯ ಮೇಲೆ 'ಭಗವಾ' ಧ್ವಜಾರೋಹಣ, ಆಜಾನ್ ಮತ್ತು ಅಲ್ಪಸಂಖ್ಯಾತರ ವಿರೋಧಿ, ವಿಶೇಷವಾಗಿ ಮುಸ್ಲಿಂ ಮೂಲಭೂತವಾದದ ವಿರುದ್ಧ ಅವರ ಹೇಳಿಕೆಗಳು ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಗಿವೆ. ಈಶ್ವರಪ್ಪ ಮತ್ತು ಯಡಿಯೂರಪ್ಪ ಸಮಕಾಲೀನರು. ಯಡಿಯೂರಪ್ಪ ಅವರಿಗೆ ಚುನಾವಣಾ ರಾಜಕೀಯದಲ್ಲಿ ಮುಂದುವರಿಯಲು ಅವಕಾಶ ನಿರಾಕರಿಸಿರುವಾಗ ಈಶ್ವರಪ್ಪ ಅವರಿಗೆ ಈ ಬಾರಿ ಟಿಕೆಟ್ ಸಿಗುವ ಸಾಧ್ಯತೆಯಿಲ್ಲ ಎಂದು ಪಕ್ಷದ ಮೂಲಗಳು ತಿಳಿಸಿವೆ. ಆದರೆ, ಈ ಬೆಳವಣಿಗೆಯಿಂದ ಅಸಮಾಧಾನಗೊಂಡಿರುವ ಈಶ್ವರಪ್ಪ ತಮ್ಮ ಪುತ್ರ ಕಾಂತೇಶ್‌ಗಾಗಿ ಟಿಕೆಟ್‌ಗಾಗಿ ಈಗಾಗಲೇ ಲಾಬಿ ಆರಂಭಿಸಿದ್ದಾರೆ. ಈಶ್ವರಪ್ಪ ಶಿವಮೊಗ್ಗ ನಗರ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಅವರು ಉಪ ಮುಖ್ಯಮಂತ್ರಿಯಾಗಿಯೂ ಕೆಲಸ ಮಾಡಿದ್ದಾರೆ. ಗುತ್ತಿಗೆದಾರ ಹಾಗೂ ಬಿಜೆಪಿ ಮುಖಂಡ ಸಂತೋಷ್ ಪಾಟೀಲ್ ಆತ್ಮಹತ್ಯೆ ಪ್ರಕರಣದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಂಪುಟಕ್ಕೆ ಈಶ್ವರಪ್ಪ ರಾಜೀನಾಮೆ ನೀಡಬೇಕಾಯಿತು. ತಮ್ಮ ಪರಿಸ್ಥಿತಿಗೆ ಈಶ್ವರಪ್ಪ ಅವರೇ ಕಾರಣ ಎಂದು ಸಂತೋಷ್ ಪಾಟೀಲ್ ಸೂಸೈಡ್ ನೋಟ್‌ನಲ್ಲಿ ಉಲ್ಲೇಖಿಸಿದ್ದರು. ಆದಾಗ್ಯೂ, ತದನಂತರ ನಡೆದ ತನಿಖೆಯಲ್ಲಿ ಈಶ್ವರಪ್ಪ ಅವರಿಗೆ ಕ್ಲೀನ್ ಚಿಟ್ ನೀಡಲಾಗಿತ್ತು. ಕ್ಲೀನ್ ಚಿಟ್ ಇದ್ದರೂ ಈಶ್ವರಪ್ಪ ಮತ್ತೆ ಸಂಪುಟ ಸೇರಲು ಸಾಧ್ಯವಾಗಲಿಲ್ಲ. ಅವರ ಸೇವೆಯನ್ನು ಸಂಘಟನಾ ಚಟುವಟಿಕೆಗಳಿಗೆ ಬಳಸಿಕೊಳ್ಳಲು ಪಕ್ಷ ಚಿಂತನೆ ನಡೆಸಿದೆ. ಯಡಿಯೂರಪ್ಪ ಅವರಿಗೆ ಆಪ್ತರಾಗಿರುವ ಸ್ಥಳೀಯ ಮುಖಂಡ ಆಯನೂರು ಮಂಜುನಾಥ್ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ. ಸಂಘ ಪರಿವಾರದ ನಿಕಟವರ್ತಿ, ಸಾಮಾಜಿಕ ಕಾರ್ಯಕರ್ತ, ಚಾಣಾಕ್ಷ ವ್ಯಕ್ತಿ ಧನಂಜಯ ಅವರಿಗೆ ಟಿಕೆಟ್ ಸಿಗಬಹುದು ಎಂದು ಪಕ್ಷದ ಮೂಲಗಳು ತಿಳಿಸಿವೆ.

ನಂಜನಗೂಡು: ತೆರಿಗೆ ಪಾವತಿಗೆ ಸೂಚನೆ

ಮೈಸೂರು,ಏ.3–ನಂಜನಗೂಡು ನಗರಸಭಾ ವ್ಯಾಪ್ತಿಯಲ್ಲಿ ಬರುವ ವಾಸ, ವಾಣಿಜ್ಯ, ಕೈಗಾರಿಕೆಗಳು, ಕಟ್ಟಡ, ಖಾಲಿ ಜಾಗಗಳ ತೆರಿಗೆಯನ್ನು ಆಸ್ತಿ ಮಾಲೀಕರು, ತೆರಿಗೆದಾರರು ಏ.1ರಿಂದ 2024ರ ಮಾ.31ರವರೆಗೆ ಸ್ವಯಂ ಘೋಷಿತ ಆಸ್ತಿ ತೆರಿಗೆಯನ್ನು ಪರಿಷ್ಕೃತ ದರಗಳಲ್ಲಿ ಪಾವತಿಸಬಹುದು ಎಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.



ಚಾಮರಾಜ ಕ್ಷೇತ್ರ ವ್ಯಾಪ್ತಿಯ ವಾರ್ಡ್ ನಂ.1ರ ಲಕ್ಷ್ಮಿಕಾಂತನಗರ ವ್ಯಾಪ್ತಿಯಲ್ಲಿ ಸುಮಾರು 80ಕ್ಕೂ ಹೆಚ್ಚು ಮಹಿಳೆಯರು ಶಾಸಕ ಎಲ್.ನಾಗೇಂದ್ರ ಸಮ್ಮುಖದಲ್ಲಿ ತ್ರಿವೇಣಿಯವರ ನೇತೃತ್ವದಲ್ಲಿ ಬಿಜೆಪಿ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ನಗರ ಯುವ ಮೋರ್ಚಾ ಅಧ್ಯಕ್ಷ ಎಂ.ಜೆ.ಕಿರಣ್‌ಗೌಡ, ವಾರ್ಡಿನ ಅಧ್ಯಕ್ಷ ಕಿರಣ್ ಸುಖಧರೆ, ಮುಖಂಡರಾದ ಜಯಪ್ಪ, ನಗರ ಪಾಲಿಕೆ ಸದಸ್ಯರಾದ ಚಿಕ್ಕವೆಂಕಟು, ಪ್ರಧಾನ ಕಾರ್ಯದರ್ಶಿ ಪುನೀತ್, ವಾರ್ಡಿನ ಪ್ರಮುಖರಾದ ಅರುಣ್ ಕಾಟ್ಕರ್, ಕಾರ್ತಿಕ್, ಆದರ್ಶ ಕಾಮತ್, ಪ್ರವೀಣ್‌ಕುಮಾರ್, ಶಿವಸ್ವಾಮಿ, ಗುರು, ಸಂತೋಷ್‌ಕುಮಾರ್, ಶುಭಂ ಇತರರು ಹಾಜರಿದ್ದರು.

420 ಬೊಮ್ಮಾಯಿ ಸರ್ಕಾರ: ಸುರ್ಜೇವಾಲ ಹೇಳಿಕೆಗೆ ಸಿಎಂ ತಿರುಗೇಟು



ಬೆಂಗಳೂರು: ಮೀಸಲಾತಿ ಕುರಿತು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ನೀಡಿರುವ ಹೇಳಿಕೆಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೋಮವಾರ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಮೀಸಲಾತಿ ನೀಡಿರುವುದಕ್ಕೆ ಕಾಂಗ್ರೆಸ್ ನಾಯಕರು ಅಕ್ರಮ, ಸಂವಿಧಾನ ವಿರೋಧಿ ಪದ ಬಳಸಿದ್ದಾರೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ವಕ್ತಾರ ಮತ್ತು ರಾಜ್ಯ ಉಸ್ತುವಾರಿ ಸುರ್ಜೇವಾಲ ಟ್ವೀಟ್ ಕುರಿತು ಪ್ರತಿಕ್ರಿಯಿಸಿದ ಬೊಮ್ಮಾಯಿ, ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿ ನೀಡಲು ಡಾ.ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಅವಕಾಶ ಕಲ್ಪಿಸಿದ್ದರು. ಅದರಂತೆ, ರಾಜ್ಯ ಸರ್ಕಾರ ಎಸ್ಸಿ/ಎಸ್ಟಿ ಸಮುದಾಯಗಳ ಬಹುಕಾಲದ ಬೇಡಿಕೆಯನ್ನು ಈಡೇರಿಸಿದ್ದು, ಸಂವಿಧಾನದ ಒಂಬತ್ತನೇ ಶೆಡ್ಯೂಲ್‌ಗೆ ಸೇರಿಸಲು ಶಿಫಾರಸು ಮಾಡಿದೆ. ಕಾಂಗ್ರೆಸ್ ಪಕ್ಷಕ್ಕೆ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಮತ್ತು ಅವರು ಬರೆದಿರುವ ಸಂವಿಧಾನದ ಮೇಲೆ ನಂಬಿಕೆ ಇಲ್ಲ ಎಂದರು.

ಬಿಜೆಪಿ ಈಗ ಜನರಿಗೆ ದ್ರೋಹ ಬಗೆದ ಪಕ್ಷವಾಗಿದೆ. 420 ಬಿಜೆಪಿ ಬೊಮ್ಮಾಯಿ ಸರ್ಕಾರದ ಮೀಸಲಾತಿ ದ್ವೇಷ, ವೈಷಮ್ಯ ಮತ್ತು ಘರ್ಷಣೆಯನ್ನು ಸೃಷ್ಟಿಸುವ ಕುಶಲ ರಾಜಕೀಯವನ್ನು ಮತ್ತಷ್ಟು ಸ್ಪಷ್ಟಪಡಿಸುತ್ತದೆ ಎಂದು ಸುರ್ಜೇವಾಲ ಟ್ವೀಟ್ ಮಾಡಿದ್ದರು. ಕಾಂಗ್ರೆಸ್ ತನ್ನ ಅಧಿಕಾರಾವಧಿಯಲ್ಲಿ ಎಸ್ಸಿ/ಎಸ್ಟಿ ಸಮುದಾಯಗಳಿಗೆ ಏನನ್ನೂ ಮಾಡಿಲ್ಲ ಮತ್ತು ಅವರನ್ನು ಮತ ಬ್ಯಾಂಕಾಗಿ ಬಳಸಿಕೊಂಡಿದೆ. ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ವರದಿಯನ್ನು ನಾಲ್ಕು ವರ್ಷಗಳ ಹಿಂದೆ ಸಲ್ಲಿಸಲಾಗಿದೆ ಎಂದು ಸುಳ್ಳು ಹೇಳುತ್ತಿದ್ದಾರೆ. ಬಿ.ಎಸ್. ಯಡಿಯೂರಪ್ಪ ಸರ್ಕಾರ ಆಯೋಗದ ಅವಧಿಯನ್ನು ಆರು ತಿಂಗಳು ವಿಸ್ತರಿಸಿದೆ ಎಂಬುದು ಸತ್ಯ ಎಂದು ಮುಖ್ಯಮಂತ್ರಿ ತಿಳಿಸಿದರು.

ತಮ್ಮ ಆಡಳಿತಾವಧಿಯಲ್ಲಿ ಸರ್ವಪಕ್ಷ ಸಭೆ ಕರೆದು ಒಪ್ಪಿಗೆ ನೀಡಲಾಯಿತು. ನಂತರ ರಾಜ್ಯ ಸಚಿವ ಸಂಪುಟದಲ್ಲಿ ಎಸ್ಸಿ/ಎಸ್ಟಿ ಸಮುದಾಯಗಳ ಪರವಾಗಿ ನಿರ್ಣಯ ಕೈಗೊಳ್ಳಲಾಯಿತು. ಶೆಡ್ಯೂಲ್ 9 ಸೇರ್ಪಡೆ ಶಿಫಾರಸ್ಸನ್ನೂ ಮಾಡಲಾಗಿದೆ ಎಂದು ಹೇಳಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com



ವಿಧಾನಸಭಾ ಚುನಾವಣೆ–2023





ಮೈಸೂರು ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಅಧಿಕಾರಿಗಳ ಮಾಹಿತಿ

–ಎಂ.ಟಿ.ಯೋಗೇಶ್ ಕುಮಾರ್

● ಪಾರದರ್ಶಕ, ಗೊಂದಲ ಮುಕ್ತ ಮತದಾನಕ್ಕೆ ಈ ಕ್ರಮ ● 2905 ಕೇಂದ್ರಗಳಲ್ಲೂ ಮತಗಟ್ಟೆ ಅಧಿಕಾರಿ ಹೆಸರು, ಮೊಬೈಲ್ ಸಂಖ್ಯೆ ಪ್ರದರ್ಶನ ● ಮತದಾರರ ಪಟ್ಟಿಯಲ್ಲಿ ಹೆಸರು ಖಾತರಿಪಡಿಸಿಕೊಳ್ಳಲು ಇನ್ನೂ ಇದೆ ಅವಕಾಶ

ಮೈಸೂರು,ಏ.3– ರಾಜ್ಯ ವಿಧಾನಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಶೇ.100ರಷ್ಟು ಪಾರದರ್ಶಕ ಮತದಾನ ಆಗಬೇಕೆಂಬ ಆಶಯದೊಂದಿಗೆ ಚುನಾವಣಾ ಆಯೋಗ ವಿಶೇಷ ಕ್ರಮಗಳನ್ನು ಕೈಗೊಂಡಿದೆ.


ಇಡೀ ರಾಷ್ಟ್ರದ ಗಮನ ಸೆಳೆದಿರುವ ಕರ್ನಾಟಕ ವಿಧಾನ ಸಭೆ ಚುನಾವಣೆಯನ್ನು ಅಚ್ಚುಕಟ್ಟಾಗಿ ನಡೆಸಲು ಚುನಾವಣಾ ಆಯೋಗ ನಿರಂತರ ಸಿದ್ಧತೆಯಲ್ಲಿ ತೊಡಗಿದೆ. ಶೇ.100ರಷ್ಟು ಮತದಾನ ಸಾಧನೆಗೆ ಮತದಾರರನ್ನು ಪ್ರೋತ್ಸಾಹಿಸಲು ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಮತದಾರರ ಪಟ್ಟಿಗೆ ನೋಂದಣಿ, ಪರಿಷ್ಕರಣೆ, ಪರಿಶೀಲನೆ ಹೀಗೆ ಎಲ್ಲಾ ಪ್ರಕ್ರಿಯೆ ಬಗ್ಗೆಯೂ ಸಾರ್ವಜನಿಕರಿಗೆ ಮಾಹಿತಿ ತಲುಪಿಸುವುದರ ಜೊತೆಗೆ ಕಡ್ಡಾಯ ಮತದಾನಕ್ಕೆ ಆಹ್ವಾನಿಸಲಾಗುತ್ತಿದೆ. ಜೊತೆಗೆ ಮತದಾನದ ದಿನ ಉಂಟಾಗಬಹುದಾದ ಗೊಂದಲ ನಿವಾರಣೆ ಸೇರಿದಂತೆ ಪಾರದರ್ಶಕ ಚುನಾವಣೆ ಉದ್ದೇಶದಿಂದ ಮತಗಟ್ಟೆ ಅಧಿಕಾರಿ ಹೆಸರು ಹಾಗೂ ಅವರ ಮೊಬೈಲ್ ಸಂಖ್ಯೆಯನ್ನು ಸಾರ್ವಜನಿಕವಾಗಿ ಪ್ರಕಟಿಸಲಾಗುತ್ತಿದೆ.

ಮೈಸೂರಲ್ಲೂ ಕ್ರಮ: ಜಿಲ್ಲಾ ಚುನಾವಣಾಧಿಕಾರಿಗಳ ನಿರ್ದೇಶನದಂತೆ ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ಮತಗಟ್ಟೆ ಅಧಿಕಾರಿ ಹೆಸರು ಹಾಗೂ ಅವರ ಮೊಬೈಲ್ ಸಂಖ್ಯೆಯನ್ನು ಪ್ರಕಟಿಸುವ ಕಾರ್ಯ ನಡೆದಿದೆ. ಈ ಹಿಂದಿನ ಹಲವು ಚುನಾವಣೆಗಳಲ್ಲಿ ಸಾಕಷ್ಟು ಗೊಂದಲ ಸೃಷ್ಟಿಯಾಗಿದ್ದವು. ಮತಪಟ್ಟಿಯಿಂದ ಹೆಸರುಗಳೇ ಮಾಯವಾಗುವುದು, ಮತಗಟ್ಟೆ ಕೇಂದ್ರಗಳ ಬದಲಾವಣೆ ಇನ್ನಿತರ ಗೋಜಲುಗಳಿಂದ ಅದೆಷ್ಟೋ ಮತದಾರರು, ತಮ್ಮ ಹಕ್ಕು ಚಲಾಯಿಸದೆಯೇ ವಾಪಸ್ಸಾಗುತ್ತಿದ್ದರು. ಯಾವ ಮತಗಟ್ಟೆ ವ್ಯಾಪ್ತಿಯಲ್ಲಿ ತಮ್ಮ ಹೆಸರಿದೆ ಎನ್ನುವುದನ್ನು ತಿಳಿಯಲಾಗದೆ ಅದೆಷ್ಟೋ ಜನ ಮನೆಯಿಂದ ಹೊರಗೇ ಬರುತ್ತಿರಲಿಲ್ಲ. ಪರಿಣಾಮ ಮತದಾನ ಪ್ರಮಾಣ ಕಡಿಮೆಯಾಗುತ್ತಿತ್ತು. ಅದರಲ್ಲೂ ನಗರ ಪ್ರದೇಶದಲ್ಲೇ ಅತೀ ಕಡಿಮೆ ಮತದಾನವಾಗುತ್ತಿತ್ತು.

ಗೊಂದಲ ಪರಿಹರಿಸುವ ಪ್ರಯತ್ನ: ಮತದಾನದ ದಿನ ಯಾವುದೇ ಗೊಂದಲಗಳು ಸೃಷ್ಟಿಯಾಗಬಾರದು. ಎಲ್ಲರೂ ತಮ್ಮ ವ್ಯಾಪ್ತಿಯ ಮತಗಟ್ಟೆಗೆ ತೆರಳಿ ಸುಲಲಿತವಾಗಿ ಮತ ಚಲಾಯಿಸಬೇಕು. ಅದರಲ್ಲೂ ನಗರ ಪ್ರದೇಶಗಳಲ್ಲಿ ಮತಗಟ್ಟೆ ಹುಡುಕಾಟಕ್ಕೆ ಪರಿತಪಿಸುವ ಸ್ಥಿತಿ ನಿರ್ಮಾಣವಾಗಬಾರದು ಎಂಬ ಉದ್ದೇಶದಿಂದ ತಿಂಗಳ ಮುಂಚೆಯೇ ಮತಗಟ್ಟೆಗಳಲ್ಲಿ ಅಧಿಕಾರಿ ಹೆಸರು ಹಾಗೂ ಮೊಬೈಲ್ ಸಂಖ್ಯೆ ಪ್ರಕಟಿಸಲಾಗುತ್ತಿದೆ. ಇದು ಎಲ್ಲಾ ಸಮಸ್ಯೆಗಳಿಗೆ ಪರಿಹಾರವಲ್ಲವಾದರೂ ಸಣ್ಣಪುಟ್ಟ ಗೊಂದಲಗಳಿಂದ ಮತದಾನದಿಂದ ವಂಚಿತರಾಗದಂತೆ ತಡೆಯುವ ಈ ಕ್ರಮ ಕೈಗೊಳ್ಳಲಾಗಿದೆ.

ಪ್ರಯೋಜನಗಳೇನು?: ಮೈಸೂರು ನಗರ ಹಾಗೂ ಗ್ರಾಮೀಣ ಪ್ರದೇಶದ ಎಲ್ಲಾ ಮತಗಟ್ಟೆಗಳಲ್ಲಿ, ಆ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರದ ಹೆಸರು, ಕ್ರಮಸಂಖ್ಯೆ, ಮತಗಟ್ಟೆ ಸಂಖ್ಯೆ ಜೊತೆಗೆ ಮತಗಟ್ಟೆ ಅಧಿಕಾರಿ ಹೆಸರು ಹಾಗೂ ಮೊಬೈಲ್ ಸಂಖ್ಯೆ ಬರೆಸಲಾಗುತ್ತದೆ. ಆ ಮತಗಟ್ಟೆ ವ್ಯಾಪ್ತಿಯ ಮತದಾರರು ಅಧಿಕಾರಿಯನ್ನು ಸಂಪರ್ಕಿಸಿ, ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರಿರುವುದನ್ನು ಖಚಿತಪಡಿಸಿಕೊಳ್ಳಬಹುದು. ನಿಗದಿತ ಅವಧಿಯೊಳಗೆ ಹೊಸದಾಗಿ ಪಟ್ಟಿಗೆ ಸೇರ್ಪಡೆ ಮಾಡಿಸುವುದು ಅಥವಾ ಮತದಾರರ ಗುರುತಿನ ಚೀಟಿಯಲ್ಲಿ ತಿದ್ದುಪಡಿಯಾಗಬೇಕಿದ್ದರೂ ಆ ಅಧಿಕಾರಿಯಿಂದ ಮಾರ್ಗದರ್ಶನ ಪಡೆಯಬಹುದು. ಈ ರೀತಿ ಮತದಾನಕ್ಕೆ ಸಂಬಂಧಪಟ್ಟ ಗೊಂದಲಗಳನ್ನು ಪರಿಹರಿಸಿಕೊಳ್ಳಲು ಅನುವಾಗುತ್ತದೆ.





ಮೈಸೂರಿನ ತ್ಯಾಗರಾಜ ರಸ್ತೆಯಲ್ಲಿರುವ ಅಕ್ಕನ ಬಳಗ ಶಾಲೆಯ ಗೋಡೆ ಮೇಲೆ ಮತಗಟ್ಟೆ ಹಾಗೂ ಮತಗಟ್ಟೆ ಅಧಿಕಾರಿ ವಿವರ ನಮೂದಿಸುತ್ತಿರುವುದು. ಮತ್ತೊಂದು ಚಿತ್ರದಲ್ಲಿ ಮತದಾರರಿಗೆ ಅನುಕೂಲಕಾರಿಯಾಗಿ ಗೋಡೆ ಮೇಲೆ ನಮೂದಿಸಿರುವ ಆಯಾಯ ಕ್ಷೇತ್ರಗಳ ಸಂಪೂರ್ಣ ವಿವರ.

ತುಂಬಾ ಉಪಯುಕ್ತ

ಮತಗಟ್ಟೆಗಳಲ್ಲಿ ಅಧಿಕಾರಿ ಹೆಸರು ಹಾಗೂ ಮೊಬೈಲ್ ಸಂಖ್ಯೆ ಪ್ರಕಟಿಸುತ್ತಿರುವುದು ಉಪಯುಕ್ತ ಕ್ರಮವಾಗಿದೆ. ಮತದಾನದ ವೇಳೆ ನಗರ ಪ್ರದೇಶದ ಜನ ಸಾಕಷ್ಟು ಸಮಸ್ಯೆ ಎದುರಿಸುತ್ತಿದ್ದರು. ಕಳೆದ ಚುನಾವಣೆಯಲ್ಲಿ ಮತದಾನ ಮಾಡಿದ ಮತಗಟ್ಟೆ ವ್ಯಾಪ್ತಿಯ ಪಟ್ಟಿಯಲ್ಲಿ ಹೆಸರೇ ನಾಪತ್ತೆಯಾಗಿರುತ್ತಿತ್ತು. ಅದಕ್ಕೂ ಮುನ್ನ ಮತದಾರರ ಪಟ್ಟಿಯಲ್ಲಿ ನಮ್ಮ ಹೆಸರಿದೆಯೇ? ಯಾವ ಮತಗಟ್ಟೆಯಲ್ಲಿ ಮತದಾನ ಮಾಡಬೇಕು ಎಂದು ತಿಳಿದುಕೊಳ್ಳುವುದಕ್ಕೂ ಕಷ್ಟವಾಗುತ್ತಿತ್ತು. ಈ ಎಲ್ಲಾ ಗೋಜಲುಗಳಿಂದ ಅನೇಕ ಹಿರಿಯರು ಮತ ಹಾಕುವ ಚಿಂತನೆಯನ್ನೇ ಮಾಡುತ್ತಿರಲಿಲ್ಲ. ಈಗ ಮತಗಟ್ಟೆ ಅಧಿಕಾರಿಯನ್ನು ಸಂಪರ್ಕಿಸಿ ಖಾತ್ರಿಪಡಿಸಿಕೊಳ್ಳಲು ಅವಕಾಶ ಸಿಕ್ಕಿದೆ. –ಪ್ರೇಮಾ ಬೋಧಿ, ಕುವೆಂಪುನಗರದ ನಿವಾಸಿ

2,905 ಮತಗಟ್ಟೆ: ಸುಗಮ ಹಾಗೂ ಸುಲಲಿತ ಮತದಾನಕ್ಕಾಗಿ ಜಿಲ್ಲೆಯಲ್ಲಿ ಒಟ್ಟು 2,905 ಮತಗಟ್ಟೆ ತೆರೆಯಲಾಗಿದೆ. ಬಹುತೇಕ ಶಾಲಾ ಕೊಠಡಿಗಳಲ್ಲೇ ಮತಗಟ್ಟೆ ತೆರೆಯಲಾಗಿದ್ದು, ಅಗತ್ಯ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ಪಿರಿಯಾಪಟ್ಟಣದಲ್ಲಿ 235 ಮತಗಟ್ಟೆ, ಕೆ.ಆರ್.ನಗರ 250, ಹುಣಸೂರು 273, ಹೆಚ್.ಡಿ.ಕೋಟೆ 282, ನಂಜನಗೂಡು 249, ಚಾಮುಂಡೇಶ್ವರಿ ಕ್ಷೇತ್ರದಲ್ಲಿ 337, ಕೆಆರ್.ಕ್ಷೇತ್ರ 265, ಚಾಮರಾಜ 244, ನರಸಿಂಹರಾಜ 282, ವರುಣಾ ಕ್ಷೇತ್ರದಲ್ಲಿ 261 ಹಾಗೂ ತಿ.ನರಸೀಪುರ ಕ್ಷೇತ್ರದಲ್ಲಿ 227 ಮತಗಟ್ಟೆಗಳಿದ್ದು, ಎಲ್ಲಾ ಕೇಂದ್ರಗಳಲ್ಲೂ ಮತಗಟ್ಟೆ ಅಧಿಕಾರಿ ಹೆಸರು ಹಾಗೂ ಮೊಬೈಲ್ ಸಂಖ್ಯೆ ಇರಲಿದೆ.

ಚಾಮುಂಡೇಶ್ವರಿಯಲ್ಲಿ 68 ಸೂಕ್ಷ್ಮ ಮತಗಟ್ಟೆ

ಮೈಸೂರು, ಏ.3(ಎಂಕೆ)– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿರುವ 337 ಮತಗಟ್ಟೆಗಳಲ್ಲಿ 68 ಸೂಕ್ಷ್ಮ ಮತಗಟ್ಟೆಗಳಿದ್ದು, ಸಿಂಧುವಳ್ಳಿಯ ಮೂರು ಮತಗಟ್ಟೆಗಳು (ಮತಗಟ್ಟೆ ಸಂಖ್ಯೆ 312, 313, 314) ಪ್ರಭಾವಿಗಳಿಂದ ಒತ್ತಡಕ್ಕೆ ಒಳಗಾಗುವ ಸಾಧ್ಯತೆಯ ಮತಗಟ್ಟೆಗಳೆಂದು ಗುರುತಿಸಲಾಗಿದೆ ಎಂದು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಕಮಲಾಬಾಯಿ ತಿಳಿಸಿದರು.



ಕಮಲಾಬಾಯಿ

ಮೈಸೂರು ತಾಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ಪತ್ರಿಕಾಗೋಷ್ಠಿ ನಡೆಸಿದ ಅವರು, ಹೆಚ್ಚು ಮತಗಟ್ಟೆಗಳನ್ನು ಹೊಂದಿರುವ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಚುನಾವಣಾ ನೀತಿಸಂಹಿತೆ ಪಾಲನೆಗಾಗಿ 6 ಚೆಕ್ ಪೋಸ್ಟ್ ಹಾಗೂ 7 ಫ್ಲೈಯಿಂಗ್ ಸ್ಕ್ವಾಡ್‌ಗಳನ್ನು ನಿಯೋಜಿಸಲಾಗಿದೆ. 34 ವಲಯ ಕಚೇರಿಗಳಿದ್ದು, ಆಯಾ ವ್ಯಾಪ್ತಿಯ ಸಂಪೂರ್ಣ ಮಾಹಿತಿ ನೀಡಲಿದೆ ಎಂದರು.

ಈ ಹಿಂದೆ ಕಳಸವಾಡಿ ಬಳಿ ಚೆಕ್ ಪೋಸ್ಟ್ ಅಳವಡಿಸಿದ್ದೆವು. ಆದರೆ ಅಲ್ಲಿ ಜನಸಂದಣಿ ಕಡಿಮೆ ಇರುವುದನ್ನು ಗಮನದಲ್ಲಿರಿಸಿ ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಪ್ರಾರಂಭವಾಗುವ ಮಣಿಪಾಲ್ ಆಸ್ಪತ್ರೆ ವೃತ್ತದ ಬಳಿ 2 ಚೆಕ್‌ಪೋಸ್ಟ್ ನಿರ್ಮಿಸಲಾಗಿದೆ. ಹಾಗೆಯೇ ಮೈದುನಹಳ್ಳಿ, ಜೆಕೆ ಟಯರ್ ಫ್ಯಾಕ್ಟರಿ, ಹಾರೋಹಳ್ಳಿ, ಕಡಕೊಳ ಹಾಗೂ ರಮ್ಮನಹಳ್ಳಿಯಲ್ಲಿ ಚೆಕ್‌ಪೋಸ್ಟ್ ನಿರ್ಮಿಸಲಾಗಿದೆ ಎಂದರು.

ಒಂದೊಂದು ಚೆಕ್‌ಪೋಸ್ಟ್‌ನಲ್ಲಿಯೂ 5–6 ಜನರ ತಂಡ ಇರಲಿದ್ದು, ದಿನದ ಮೂರು ಪಾಳಿಯಲ್ಲಿ ಕಾರ್ಯನಿರ್ವಹಿಸಲಿದ್ದಾರೆ. ಎಲ್ಲಾ ಕಡೆ ಟಿವಿ ಕ್ಯಾಮೆರಾ ಕಣ್ಗಾವಲು ಇದೆ. ಹಾಗೆಯೇ 7 ಫ್ಲೈಯಿಂಗ್ ಸ್ಕ್ವಾಡ್ ಟೀಂ ಇದ್ದು, ಅವರಲ್ಲಿ ಒಬ್ಬರಿಗೆ ನ್ಯಾಯದಂಡಾಧಿಕಾರಿ ಅಧಿಕಾರ ನೀಡಲಾಗಿದೆ. ಜಯಪುರ, ಇಲವಾಲ, ಆಲನಹಳ್ಳಿ, ವಿಜಯನಗರ, ಮೈಸೂರು ದಕ್ಷಿಣದಲ್ಲಿ ಫ್ಲೈಯಿಂಗ್ ಸ್ಕ್ವಾಡ್ ತಂಡಗಳನ್ನೂ ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ವ್ಯಕ್ತಿಯೊಬ್ಬರು ತಮ್ಮ ಗೋಡೌನ್‌ನಲ್ಲಿ ಸಂಗ್ರಹಿಸಿಟ್ಟಿದ್ದ ಅಗತ್ಯ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ. ಚೆಕ್‌ಪೋಸ್ಟ್ ತಪಾಸಣೆಯಲ್ಲಿ ವ್ಯಕ್ತಿಯೊಬ್ಬರ ಬಳಿಯಿದ್ದ 75 ಸಾವಿರ ರೂ. ವಶಕ್ಕೆ ಪಡೆದಿದ್ದು, ಆದರೆ ಸೂಕ್ತ ದಾಖಲೆ ನೀಡಿದ ಬಳಿಕ ಹಣ ವಾಪಸ್ ನೀಡಲಾಗಿದೆ. ಆದ್ದರಿಂದ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿದ್ದು, 50 ಸಾವಿರ ರೂ.ಗಿಂತ ಹೆಚ್ಚು ನಗದು ಹಣ ಸಾಗಿಸುವುದು, ಮತದಾರರಿಗೆ ಹಂಚುವುದಕ್ಕೆ ಅಗತ್ಯ ವಸ್ತುಗಳನ್ನು ಸಂಗ್ರಹಿಸಿಡುವುದು ಕಾನೂನು ಉಲ್ಲಂಘನೆಯಾಗುತ್ತದೆ ಎಂದು ಕಮಲಾಬಾಯಿ ಎಚ್ಚರಿಸಿದರು. ಹಾಗೆಯೇ ನೀತಿ ಸಂಹಿತೆ ಉಲ್ಲಂಘನೆಯ ವೇಳೆ ದೂ.ಸಂ 0821–2414812 ಕರೆ ಮಾಡಿ ದೂರು ನೀಡುವಂತೆ ಮನವಿ ಮಾಡಿದರು. ತಹಶೀಲ್ದಾರ್ ಗಿರೀಶ್, ಚಾಮುಂಡೇಶ್ವರಿ ಕ್ಷೇತ್ರ ವ್ಯಾಪ್ತಿಯ ಪೊಲೀಸ್ ಠಾಣೆಗಳ ಇನ್ಸ್‌ಪೆಕ್ಟರ್‌ಗಳು ಉಪಸ್ಥಿತರಿದ್ದರು.

ಸಿಎಂ ಸುದ್ದಿಗೋಷ್ಠಿ ನಡೆಸುತ್ತಿರುವಾಗಲೇ ಕಚೇರಿ ಮೇಲೆ ದಾಳಿ

ಬೆಂಗಳೂರು: ನೀತಿ ಸಂಹಿತೆ ವಿಚಾರವಾಗಿ ರಾಜ್ಯ ಚುನಾವಣಾಧಿಕಾರಿಗಳು ಬಿಜೆಪಿಗೆ ಶಾಕ್ ನೀಡಿದ್ದಾರೆ. ಮಲ್ಲೇಶ್ವರಂನಲ್ಲಿರುವ ಪಕ್ಷದ ಮುಖ್ಯ ಕಚೇರಿಯಲ್ಲಿ ಸೋಮವಾರ ಸಿಎಂ ಬೊಮ್ಮಾಯಿ ಸುದ್ದಿಗೋಷ್ಠಿ ನಡೆಸುತ್ತಿದ್ದ ಹೊತ್ತಲ್ಲೇ ದಾಳಿ ನಡೆಸಿದ 15 ಅಧಿಕಾರಿಗಳ ತಂಡ ಕೇಸರಿ ತೋರಣಗಳನ್ನು ಕಿತ್ತು ಹಾಕಿದ್ದಾರೆ. ಚುನಾವಣೆ ಹೊತ್ತಲ್ಲಿ ಕೇಸರಿ ತೋರಣ ಕಟ್ಟಿ ಸಂಭ್ರಮಕ್ಕೆ ಮುಂದಾಗಿದ್ದ ಬಿಜೆಪಿ ಮುಖಂಡರಿಗೆ ಅಧಿಕಾರಿಗಳ ದಾಳಿ ಮುಜುಗರ ತಂದಿದೆ. ಮಲ್ಲೇಶ್ವರಂನಲ್ಲಿ ಉದ್ಘಾಟನೆಗೊಂಡಿದ್ದ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ಸಚಿವರೊಂದಿಗೆ ಸಿಎಂ ಸುದ್ದಿಗೋಷ್ಠಿಯಲ್ಲಿ ತೊಡಗಿದ್ದ ವೇಳೆಯಲ್ಲೇ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇಷ್ಟೇ ಅಲ್ಲದೇ ಚುನಾವಣಾಧಿಕಾರಿಗಳು ಬಿಜೆಪಿಯ ಕೃಷ್ಣಯ್ಯಶೆಟ್ಟಿ ಮನೆಯಲ್ಲಿ ಸಂಗ್ರಹಿಸಿದ್ದ ಆಹಾರದ ಕಿಟ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಭಾನುವಾರ ಅವಧಿ ಮೀರಿ ಸಭೆ ನಡೆಸಿದ್ದ ರೇಣುಕಾಚಾರ್ಯ ವಿರುದ್ಧ ನೀತಿ ಸಂಹಿತೆ ಉಲ್ಲಂಘನೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಕಾರಟಗಿಯಲ್ಲಿ ಬಿಜೆಪಿಯಿಂದ ಆಯೋಜಿಸಿದ್ದ ಬಾಡೂಟಕ್ಕೆ ದಾಳಿ ನಡೆಸಿ ತಡೆದಿದ್ದಾರೆ.

ಮಾದರಿ ನೀತಿ ಸಂಹಿತೆ ಉಲ್ಲಂಘನೆ ಕಂಡು ಬಂದರೆ ನಿರ್ದಾಕ್ಷಿಣ್ಯ ಪ್ರಕರಣ ದಾಖಲಿಸಿ

ಚಾಮುಂಡೇಶ್ವರಿ, ಚಾಮರಾಜ ಕ್ಷೇತ್ರದ ಚುನಾವಣಾ ಸಿಬ್ಬಂದಿಗೆ ಡಾ.ಕೆ.ವಿ.ರಾಜೇಂದ್ರ ಕಟ್ಟುನಿಟ್ಟಿನ ಸೂಚನೆ

ಮೈಸೂರು, ಏ.3– ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘಿಸುವಂತಹ ಯಾವುದೇ ರೀತಿಯ ಚಟುವಟಿಕೆಗಳು ಜಿಲ್ಲೆಯಲ್ಲಿ ಕಂಡು ಬಂದರೆ ನಿರ್ದಾಕ್ಷಿಣ್ಯವಾಗಿ ಪ್ರಕರಣ ದಾಖಲಿಸಿ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023ರ ಸಂಬಂಧ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಚಾಮುಂಡೇಶ್ವರಿ ಮತ್ತು ಚಾಮರಾಜ ವಿಧಾನಸಭಾ ಕ್ಷೇತ್ರಗಳ ಫ್ಲೈಯಿಂಗ್ ಸ್ಕ್ವಾಡ್ ಹಾಗೂ ಸ್ಟಾಟಿಸ್ಟಿಕ್ ಸರ್ವೇಲೆನ್ಸ್ ತಂಡದ ಸದಸ್ಯರು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಚುನಾವಣೆಗೆ ನಿಯೋಜನೆಗೊಂಡಿರುವ ಅಧಿಕಾರಿಗಳು ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು. ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರಿಕೆ ವಹಿಸಿ ಕರ್ತವ್ಯ ನಿರ್ವಹಿಸಬೇಕು. ಜಿಲ್ಲೆಯಲ್ಲಿ ಈಗಾಗಲೇ ತೆರೆದಿರುವ ಚೆಕ್ ಪೋಸ್ಟ್‌ಗಳಲ್ಲಿ ಸೂಕ್ಷ್ಮವಾಗಿ ವಾಹನ ತಪಾಸಣೆ ಮಾಡಬೇಕು. ತಪಾಸಣೆ ವೇಳೆ ಸಾರ್ವಜನಿಕರಿಗೆ ತೊಂದರೆಯಾಗಬಾರದು ಎಂದು ತಿಳಿಸಿದರು.





ದೇವಸ್ಥಾನ, ಚರ್ಚ್, ಮಸೀದಿ ಬಳಿ ಪ್ರಚಾರ ಕೂಡದು: ಜಿಲ್ಲಾ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ ಮಾತನಾಡಿ, ಇದು ಚುನಾವಣಾ ಹಬ್ಬ. ಸರ್ಕಾರವನ್ನು ರಚನೆ ಮಾಡಲು ನಾಯಕರನ್ನು ಆಯ್ಕೆ ಮಾಡುವ ಚುನಾವಣೆ ಪ್ರಕ್ರಿಯೆಯಲ್ಲಿ ತಾವು ಭಾಗಿಗಳಾಗುತ್ತಿದ್ದೀರಿ ಎಂಬ ಹೆಮ್ಮೆ ಇರಲಿ ಎಂದರು. ತಮಗೆ ಯಾವುದೇ ಗೊಂದಲಗಳಿದ್ದರೆ ರಿಟರ್ನಿಂಗ್ ಆಫೀಸರ್‌ಗಳ ಹತ್ತಿರ ಬಗೆಹರಿಸಿಕೊಳ್ಳಿ. ಚರ್ಚ್, ಮಸೀದಿ ಹಾಗೂ ದೇವಸ್ಥಾನಗಳ ಮುಂದೆ ಯಾವುದೇ ರೀತಿ ಪ್ರಚಾರ ಮಾಡುವಂತಿಲ್ಲ. ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಮೆರವಣಿಗೆಗೆ, ಸಭೆ ಸಮಾರಂಭಗಳಿಗೆ ಕಡ್ಡಾಯವಾಗಿ ಅನುಮತಿ ಪಡೆದಿರಬೇಕು. ವಿಡಿಯೋ ವ್ಯಾನ್‌ಗಳಿಗೆ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಗಳ ಕಚೇರಿಯಲ್ಲಿ ಅನುಮತಿ ಪಡೆದಿರಬೇಕು. ಮತದಾನ ಮುಕ್ತಾಯವಾಗುವ 48 ಗಂಟೆ ಮುಂಚೆ ಬಹಿರಂಗ ಪ್ರಚಾರಗಳು ಅಂತ್ಯವಾಗಬೇಕು. ಚುನಾವಣಾ ಪ್ರಚಾರಕ್ಕೆ ಮಕ್ಕಳನ್ನು ಮತ್ತು ಪ್ರಾಣಿಗಳನ್ನು ಬಳಸಿಕೊಳ್ಳುವಂತಿಲ್ಲ ಎಂದು ತಿಳಿಸಿದರು.

ಸೂಕ್ತ ಮಾರ್ಗದರ್ಶನ : ಪ್ರಾಚ್ಯ ವಸ್ತು ಸಂಗ್ರಹಾಲಯದ ಆಯುಕ್ತ ದೇವರಾಜ್ ಮಾತನಾಡಿ, ಚುನಾವಣೆ ಕರ್ತವ್ಯದಲ್ಲಿ ಯಾವುದೇ ಲೋಪಗಳು ಆಗಬಾರದು. ನಾವು ಮಾಡುವ ಕೆಲಸದಲ್ಲಿ ಅರಿವು ಇಲ್ಲದೆ ಇದ್ದಾಗ ಲೋಪಗಳು ಉಂಟಾಗುತ್ತವೆ. ಆದ್ದರಿಂದ ಈ ತರಬೇತಿ ನೀಡಲಾಗುತ್ತಿದೆ. ಈ ಹಿಂದೆ ಅಸಂಖ್ಯಾತ ಬ್ಯಾನರ್‌ಗಳು, ಮೈಕ್‌ಗಳಲ್ಲಿ ಪ್ರಚಾರ ಹೆಚ್ಚಾಗಿ ಇರುತ್ತಿತ್ತು, ಆದರೆ ಈಗ ಎಲ್ಲವೂ ನಿಯಮ ಬದ್ಧವಾಗಿ ಅನುಮತಿ ಪಡೆದುಕೊಂಡು ಮಾಡಬೇಕು. ಎಫ್.ಎಸ್.ಟಿ ತಂಡದವರಿಗೆ ತಮ್ಮ ವ್ಯಾಪ್ತಿಯ ಬಗ್ಗೆ ಸಂಪೂರ್ಣ ಮಾಹಿತಿ ಇರಬೇಕು ಎಂದು ಸೂಚಿಸಿದರು.

ಪೋಸ್ಟರ್, ಬ್ಯಾನರ್ ನಿರ್ಬಂಧ: ಯಾವುದೇ ಅಧಿಕಾರಿಗಳು ಮತ್ತು ಪಕ್ಷಗಳು ವೈಯಕ್ತಿಕ ಟೀಕೆಗಳನ್ನು ಮಾಡುವಂತಿಲ್ಲ. ಯಾವುದೇ ಸರ್ಕಾರಿ ಕಚೇರಿ ಕಾಂಪೌಂಡ್‌ಗಳ ಮೇಲೆ ಪೋಸ್ಟರ್ ಮತ್ತು ಬ್ಯಾನರ್‌ಗಳನ್ನು ಅಂಟಿಸುವಂತಿಲ್ಲ. ಬಹಿರಂಗ ಸಭೆ, ಸಮಾರಂಭಗಳ ವಿಡಿಯೋ ರೆಕಾರ್ಡಿಂಗ್ ಆಗಬೇಕು. ಬೈಕ್ ರ‍್ಯಾಲಿ ಹಾಗೂ ಕಾರು ರ‍್ಯಾಲಿಗಳಿಗೆ ಬೈಕ್ ಹಾಗೂ ಕಾರುಗಳ ನೋಂದಣಿ ಸಂಖ್ಯೆ ಸಮೇತ ಅನುಮತಿ ಪಡೆದಿರಬೇಕು. ಬೇರೆ ವಾಹನಗಳನ್ನು ಬಳಸಲು ಅವಕಾಶ ಇರುವುದಿಲ್ಲ. ಪೋಸ್ಟರ್ ಮತ್ತು ಪಾಂಪ್ಲೆಟ್ಸ್‌ಗಳಲ್ಲಿ ಪ್ರಿಂಟರ್ಸ್ ಮತ್ತು ಪಬ್ಲಿಕೇಷನ್ಸ್ ಹೆಸರು, ವಿಳಾಸ, ಪ್ರತಿಗಳ ಸಂಖ್ಯೆ ಮುದ್ರಣ ಕಡ್ಡಾಯವಾಗಿರಬೇಕು. ರಾತ್ರಿ 10ರಿಂದ ಬೆಳಗ್ಗೆ 6ರವರೆಗೆ ಪ್ರಚಾರ ಮಾಡುವಂತಿಲ್ಲ ಎಂದರು. ತರಬೇತಿಯಲ್ಲಿ ಉಪ ಪೊಲೀಸ್ ಆಯುಕ್ತ ಮುತ್ತುರಾಜ್, ವಾಣಿಜ್ಯ ತೆರಿಗೆ ಇಲಾಖೆ ಜಂಟಿ ನಿರ್ದೇಶಕ ತಂಬಣ್ಣ ಇತರರು ಭಾಗವಹಿಸಿದ್ದರು.

ಕರುನಾಡಿನ ಗಡಿಯ 'ವನಸಿರಿ ನಾಡು' ಆಳುವ ಭಾಗ್ಯ ಯಾರದು....?

ಮೋಹನ್ ಕಾಯಕ

ರಾಜ್ಯದ ಗಡಿ ಭಾಗದಲ್ಲಿರುವ 'ವನಸಿರಿಯ ನಾಡು' ಹೆಗ್ಗಡದೇವನಕೋಟೆ(ಹೆಚ್.ಡಿ.ಕೋಟೆ) ವಿಧಾನಸಭಾ ಕ್ಷೇತ್ರದಲ್ಲಿ ಕೋಟೆ ಕಟ್ಟುವವರ್‍ಯಾರು...!

ರಾಜ್ಯದ ಅತ್ಯಂತ ಹಿಂದುಳಿದ ತಾಲೂಕುಗಳಲ್ಲಿ ಒಂದಾದ ಹೆಚ್.ಡಿ.ಕೋಟೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯದ ಮತದಾರರೇ ಹೆಚ್ಚಾಗಿದ್ದು, 2023ರ ವಿಧಾನ ಸಭಾ ಚುನಾವಣೆಯಲ್ಲಿ ಮತದಾರರು ಯಾರ ಕೈ ಹಿಡಿಯಲಿದ್ದಾರೆ ಎಂಬ ಕದನ ಕುತೂಹಲ ಕೆರಳಿಸಿದೆ. ಕಾಂಗ್ರೆಸ್–ಜೆಡಿಎಸ್ ನಡುವೆ ಪ್ರಬಲ ಪೈಪೋಟಿ ಏರ್ಪಡುವ ಕ್ಷೇತ್ರದಲ್ಲಿ ಇದುವರೆಗೆ ನಡೆದಿರುವ 13 ಚುನಾವಣೆಗಳಲ್ಲಿ ಕಾಂಗ್ರೆಸ್ 6, ಜೆಡಿಎಸ್ 3 ಬಾರಿ ಗೆದ್ದಿದೆ.

1952ರ ಮೊದಲ ಸಾರ್ವತ್ರಿಕ ಚುನಾವಣೆಯಲ್ಲಿ ಗುಂಡ್ಲುಪೇಟೆ ಹಾಗೂ 1957ರ 2ನೇ ಸಾರ್ವತ್ರಿಕ ಚುನಾವಣೆಯಲ್ಲಿ ಹುಣಸೂರು ದ್ವಿಸದಸ್ಯ ಕ್ಷೇತ್ರಕ್ಕೆ ಸೇರ್ಪಡೆಯಾಗಿದ್ದ ಹೆಚ್.ಡಿ.ಕೋಟೆ ಕ್ಷೇತ್ರವನ್ನು 1962ರಲ್ಲಿ ಪ್ರತ್ಯೇಕ ಪ.ಜಾತಿ ಮೀಸಲು ಕ್ಷೇತ್ರವನ್ನಾಗಿ ಅಸ್ತಿತ್ವಗೊಳಿಸಲಾಯಿತು. 1962ರ ಸಾರ್ವತ್ರಿಕ ಚುನಾವಣೆಯಲ್ಲಿ ಸ್ವತಂತ್ರ ಪಾರ್ಟಿಯ ಆರ್.ಪೀರಣ್ಣ, ಕಾಂಗ್ರೆಸ್ ಅಭ್ಯರ್ಥಿ ಎನ್.ರಾಚಯ್ಯ ಅವರನ್ನು ಸೋಲಿಸಿದರು. ಅಲ್ಲದೆ 1967ರಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಆರ್.ಪೀರಣ್ಣ ಪುನರಾಯ್ಕೆಯಾದರು. 1972ರ ಚುನಾವಣೆಯಲ್ಲಿ ಸಂಸ್ಥಾ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಆರ್.ಪೀರಣ್ಣ ಮತ್ತೊಮ್ಮೆ ಶಾಸಕರಾಗಿ ಆಯ್ಕೆಯಾಗುವ ಮೂಲಕ ಆರಂಭದ 3 ಚುನಾವಣೆಯಲ್ಲಿ ಗೆದ್ದು, ಹ್ಯಾಟ್ರಿಕ್ ಸಾಧನೆ ಮಾಡಿದರು.

1978ರಲ್ಲಿ ಇಂದಿರಾ ಕಾಂಗ್ರೆಸ್‌ನಿಂದ ಸ್ಪರ್ಧಿಸಿದ್ದ ಸುಶೀಲಾ ಚಲುವರಾಜ್, ಜನತಾಪಕ್ಷದ ಹೆಚ್.ಬಿ.ಚಲುವಯ್ಯ ವಿರುದ್ಧ ಜಯಭೇರಿ ಬಾರಿಸಿದರು. 1983ರ ಚುನಾವಣೆಯಲ್ಲಿ ಜನತಾಪಕ್ಷದ ಹೆಚ್.ಬಿ.ಚಲುವಯ್ಯ ಗೆಲ್ಲುವ ಮೂಲಕ ಏಟಿಗೆ ಎದಿರೇಟು ನೀಡಿದ್ದರು. 1985ರಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಶಿವಣ್ಣ, ಜನತಾಪಕ್ಷದ ಹೆಚ್.ಬಿ.ಚಲುವಯ್ಯ ಅವರನ್ನು ಸೋಲಿಸಿ ಮತ್ತೆ ಕ್ಷೇತ್ರದಲ್ಲಿ ಕಾಂಗ್ರೆಸ್ ಪ್ರಾಬಲ್ಯ ಹೆಚ್ಚಿಸಿದರು. 1989ರಲ್ಲಿ ಸಮಾಜವಾದಿ ಜನತಾ ಪಕ್ಷದ ಎಂ.ಪಿ.ವೆಂಕಟೇಶ್ ಜಯಗಳಿಸಿದರೆ, 1994ರ ಚುನಾವಣೆಯಲ್ಲಿ ಜನತಾದಳದ ಅಭ್ಯರ್ಥಿ ಎನ್.ನಾಗರಾಜು ಜಯ ಗಳಿಸುವ ಮೂಲಕ ಜನತಾದಳಕ್ಕೆ ಮೊದಲ ಗೆಲುವು ತಂದು ಕೊಟ್ಟರು. 1999ರಲ್ಲಿ ಕಾಂಗ್ರೆಸ್‌ನ ಎಂ.ಶಿವಣ್ಣ, 2004ರಲ್ಲಿ ಜೆಡಿಎಸ್‌ನ ಎಂ.ಪಿ.ವೆಂಕಟೇಶ್ ವಿಧಾನಸಭೆ ಪ್ರವೇಶಿಸಿದರು.

ಹೆಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾದವರು...

ವರ್ಷ	ಗೆದ್ದವರು	ಪಕ್ಷ	ಪಡೆದ ಮತಗಳು
1962	ಆರ್.ಪೀರಣ್ಣ	ಸ್ವತಂತ್ರ ಪಾರ್ಟಿ	14,788
1967	ಆರ್.ಪೀರಣ್ಣ	ಕಾಂಗ್ರೆಸ್	18,818
1972	ಆರ್.ಪೀರಣ್ಣ	ಸಂಸ್ಥಾ ಕಾಂಗ್ರೆಸ್	21,859
1978	ಸುಶೀಲಾ ಚಲುವರಾಜ್	ಇಂದಿರಾ ಕಾಂಗ್ರೆಸ್	27,821
1983	ಹೆಚ್.ಬಿ.ಚಲುವಯ್ಯ	ಜನತಾಪಕ್ಷ	33,840
1985	ಎಂ.ಶಿವಣ್ಣ	ಕಾಂಗ್ರೆಸ್	26,286
1989	ಎಂ.ಪಿ.ವೆಂಕಟೇಶ್	ಸಜಪ	29,676
1994	ಎನ್.ನಾಗರಾಜು	ಜನತಾದಳ	41,208
1999	ಎಂ.ಶಿವಣ್ಣ	ಕಾಂಗ್ರೆಸ್	45,136
2004	ಎಂ.ಪಿ.ವೆಂಕಟೇಶ್	ಜೆಡಿಎಸ್	50,729
	ಪ.ಪಂಗಡ ಕ್ಷೇತ್ರವಾಗಿ ಬದಲಾದ ನಂತರ...		
2008	ಚಿಕ್ಕಣ್ಣ	ಕಾಂಗ್ರೆಸ್	43,222
2013	ಎಸ್.ಚಿಕ್ಕಮಾದು	ಜೆಡಿಎಸ್	48,606
2018	ಅನಿಲ್ ಚಿಕ್ಕಮಾದು	ಕಾಂಗ್ರೆಸ್	76,652

ಪರಿಶಿಷ್ಟ ಪಂಗಡ ಕ್ಷೇತ್ರವಾಗಿ ಮಾರ್ಪಾಡು: ಆರಂಭದಿಂದಲೂ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರವಾಗಿದ್ದ ಹೆಚ್.ಡಿ.ಕೋಟೆ, 2008ರ ಚುನಾವಣೆ ವೇಳೆಗೆ ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರವಾಗಿ ಬದಲಾಯಿತು. ಅದೇ ವರ್ಷದ ಚುನಾವಣೆಯಲ್ಲಿ ಕಾಂಗ್ರೆಸ್‌ನ ಚಿಕ್ಕಣ ಆಯ್ಕೆಯಾದರೆ, 2013ರಲ್ಲಿ ಸೋಲು ಅನುಭವಿಸಿದರು. 2013ರಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿದ್ದ ಎಸ್.ಚಿಕ್ಕಮಾದು 2017ರ ನ.1ರಂದು ನಿಧನರಾದರು.

ಕಾಂಗ್ರೆಸ್ ಸೆಳೆತ: ಜೆಡಿಎಸ್‌ನಿಂದ ಜಿಪಂ ಸದಸ್ಯರಾಗಿದ್ದ ಎಸ್.ಚಿಕ್ಕಮಾದು ಪುತ್ರ ಸಿ.ಅನಿಲ್ ಚಿಕ್ಕಮಾದು ಅವರನ್ನು ಕಾಂಗ್ರೆಸ್ ತನ್ನ ಕಡೆ ಸೆಳೆದುಕೊಂಡು 2018ರ ಚುನಾವಣೆಯಲ್ಲಿ ತನ್ನ ಅಭ್ಯರ್ಥಿಯಾಗಿ ಘೋಷಣೆ ಮಾಡಿತು. ಜೆಡಿಎಸ್‌ನಿಂದ ಮಾಜಿ ಶಾಸಕ ಚಿಕ್ಕಣ್ಣ, ಬಿಜೆಪಿಯಿಂದ ವಿಧಾನಪರಿಷತ್ ಸದಸ್ಯ ಸಿದ್ದರಾಜು ನಡುವೆ ನಡೆದ ತ್ರಿಕೋನ ಸ್ಪರ್ಧೆಯಲ್ಲಿ ಅಂತಿಮವಾಗಿ ಕಾಂಗ್ರೆಸ್‌ನ ಸಿ.ಅನಿಲ್ ಚಿಕ್ಕಮಾದು ಜಯಗಳಿಸಿ, ಮೊದಲ ಬಾರಿಗೆ ವಿಧಾನಸಭೆ ಪ್ರವೇಶ ಪಡೆದರು. ಸಿ.ಅನಿಲ್ ಕುಮಾರ್ (ಅನಿಲ್ ಚಿಕ್ಕಮಾದು) 76,652 ಮತಗಳನ್ನು ಪಡೆದು ಗೆದ್ದು ಬೀಗಿದರು. ಜೆಡಿಎಸ್‌ನ ಚಿಕ್ಕಣ್ಣ 54,559 ಮತ, ಬಿಜೆಪಿ ಸಿದ್ದರಾಜು 34,425 ಮತ ಪಡೆದರು.


ಸೋತವರು ಶಾಸಕರಾದರು!: ಹೆಚ್.ಡಿ.ಕೋಟೆ ಕ್ಷೇತ್ರದಲ್ಲಿ ಸೋತವರು ಮತ್ತೆ ಸ್ಪರ್ಧಿಸಿ ಶಾಸಕರಾಗಿದ್ದಾರೆ. ಅವರಲ್ಲಿ ಹೆಚ್.ಬಿ.ಚಲುವಯ್ಯ, ಎಂ.ಶಿವಣ್ಣ, ಎಂ.ಪಿ.ವೆಂಕಟೇಶ್, ಎನ್.ನಾಗರಾಜು ಪ್ರಮುಖರಾಗಿದ್ದಾರೆ. ಕಾಂಗ್ರೆಸ್‌ನಿಂದ ಮೂರು ಬಾರಿ, ಎಸ್‌ಎಸ್‌ಪಿ ಹಾಗೂ ಪಕ್ಷೇತರ ಅಭ್ಯರ್ಥಿಯಾಗಿ ಸೇರಿ ಒಟ್ಟು 5 ಬಾರಿ ಸ್ಪರ್ಧಿಸಿದ ಎಂ.ಶಿವಣ್ಣ 2 ಬಾರಿ ಶಾಸಕರಾದರು. ಹಾಗೆಯೇ ಹೆಚ್.ಬಿ.ಚಲುವಯ್ಯ 3 ಬಾರಿ ಜನತಾ ಪಕ್ಷದಿಂದ, ಕಾಂಗ್ರೆಸ್, ಜನತಾದಳ ಹಾಗೂ ಪಕ್ಷೇತರ ಅಭ್ಯರ್ಥಿಯಾಗಿ ಸೇರಿ ಒಟ್ಟು ಆರು ಬಾರಿ ಸ್ಪರ್ಧಿಸಿ ಒಂದು ಅವಧಿಯಲ್ಲಿ ಮಾತ್ರ ಶಾಸಕರಾಗಿ ಆಯ್ಕೆಯಾದರು.

ಖಾತೆ ತೆರೆಯದ ಬಿಜೆಪಿ: 13 ಚುನಾವಣೆಗಳ ಕಂಡಿರುವ ಹೆಚ್.ಡಿ.ಕೋಟೆ ಕ್ಷೇತ್ರದಲ್ಲಿ ಬಿಜೆಪಿ ತನ್ನ ಖಾತೆ ತೆರೆದಿಲ್ಲ. 1994ರಲ್ಲಿ ಚಾ.ನಂಜುಂಡಮೂರ್ತಿ, 2004ರಲ್ಲಿ ಎನ್.ನಾಗರಾಜು, 2008ರಲ್ಲಿ ಚಿಕ್ಕವೀರನಾಯಕ, 2013 ಮತ್ತು 2018ರಲ್ಲಿ ಸಿದ್ದರಾಜು ಬಿಜೆಪಿಯಿಂದ ಸ್ಪರ್ಧಿಸಿದ್ದರೂ ಗೆಲುವು ಪಡೆಯುವಲ್ಲಿ ಸಫಲರಾಗಿಲ್ಲ.



ಕ್ಷೇತ್ರದ ಭೌಗೋಳಿಕ ಹಿನ್ನೆಲೆ...

ಕರ್ನಾಟಕ ರಾಜ್ಯದ ಕೇರಳ ಗಡಿ ಭಾಗದಲ್ಲಿರುವ ಹೆಚ್.ಡಿ.ಕೋಟೆ ತಾಲೂಕು ಸುಮಾರು 1,622 ಚದರ ಕಿ.ಮೀ ವಿಸ್ತೀರ್ಣ ಹೊಂದಿದ್ದು, ಮೈಸೂರಿನ ನೈರುತ್ಯ ಭಾಗದಲ್ಲಿದೆ. ಪಶ್ಚಿಮ ಮತ್ತು ದಕ್ಷಿಣ ಭಾಗಗಳು ದಟ್ಟವಾದ ಅರಣ್ಯದಿಂದ ಆವೃತ್ತವಾಗಿದೆ. ಕಪ್ಪು ಹಾಗೂ ಕೆಂಪು ಮಣ್ಣು ಹೊಂದಿದ್ದು ವ್ಯವಸಾಯಕ್ಕೆ ಯೋಗ್ಯವಾಗಿದೆ. ಇಲ್ಲಿ ಪ್ರಮುಖವಾಗಿ 4 ಜಲಾಶಯಗಳು ಹರಿಯುತ್ತಿದ್ದು, ಮಳೆಯನ್ನೇ ನಂಬಿಕೊಂಡಿರುವ ರೈತರ ಸಂಖ್ಯೆ ಹೆಚ್ಚಾಗಿದೆ. ಇಲ್ಲಿ ಅಪಾರವಾಗಿ ಅರಣ್ಯ ಸಂಪತ್ತಿದ್ದು ಕಾಡು ಕುರುಬ, ಜೇನು ಕುರುಬ, ಸೋಲಿಗ, ಪಣಿಯ, ಯರವ ಮುಂತಾದ ಬುಡಕಟ್ಟು ಸಮುದಾಯ ಗಳು ಹಾಡಿಗಳಲ್ಲಿ ವಾಸಿಸುತ್ತಿದ್ದು, ಹುಲಿ, ಜಿಂಕೆ, ಕಾಡು ನಾಯಿ, ಕಾಡೆಮ್ಮೆ ಮುಂತಾದ ಪ್ರಮುಖ ಪ್ರಾಣಿಗಳ ವಾಸಸ್ಥಾನವಾಗಿದೆ. ಏಷ್ಯಾದಲ್ಲೇ ಹೆಚ್ಚಾಗಿ ಆನೆಗಳಿರುವುದನ್ನು ಇಲ್ಲಿ ಕಾಣಬಹುದಾಗಿದೆ.



ಮತದಾರರ ವಿವರ.....

ಪುರುಷರು	1,12,464
ಮಹಿಳೆಯರು	1,11,629
ಇತರೆ	11
ಒಟ್ಟು	2,24,104
ವಿಕಲಚೇತನರು	3,438
80 ವರ್ಷ ಮೇಲ್ಪಟ್ಟವರು	6,484

2018ರಲ್ಲಿ ಶೇ.79.11ರಷ್ಟು ಮತದಾನ...

ಕಳೆದ 2018ರ ಚುನಾವಣೆಯಲ್ಲಿ ಹೆಚ್.ಡಿ.ಕೋಟೆ ಕ್ಷೇತ್ರದಲ್ಲಿ ಶೇ.79.11 ರಷ್ಟು ಮತದಾನವಾಗಿತ್ತು. 2,14,824 ಮತದಾರರ ಪೈಕಿ 1,69,941 ಮತದಾರರು ಹಕ್ಕು ಚಲಾಯಿಸಿದ್ದರು.

ಆಕಾಂಕ್ಷಿಗಳು: 2023ರ ವಿಧಾನಸಭಾ ಚುನಾವಣೆಗೆ ಕೋಟೆ ಅಖಾಡ ಸಿದ್ಧವಾಗಿದ್ದು, ಈಗಾಗಲೇ ಕಾಂಗ್ರೆಸ್‌ನಿಂದ ಹಾಲಿ ಶಾಸಕ ಅನಿಲ್ ಚಿಕ್ಕಮಾದು ಹೆಸರನ್ನು ಘೋಷಣೆ ಮಾಡಲಾಗಿದೆ. ಜೆಡಿಎಸ್‌ನಿಂದ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದ ಕೃಷ್ಣ ನಾಯಕ ಬಂಡಾಯವೆದ್ದು ಬಿಜೆಪಿ ಸೇರಿದ್ದಾರೆ. ಜೆಡಿಎಸ್‌ನಲ್ಲಿ ಜಯಪ್ರಕಾಶ್ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ.

ಬಿಜೆಪಿಯಿಂದ ವಿಧಾನಪರಿಷತ್ ಮಾಜಿ ಸದಸ್ಯ ಸಿದ್ದರಾಜು, ಅಪ್ಪಣ್ಣ ಪ್ರಬಲ ಆಕಾಂಕ್ಷಿಗಳಾಗಿದ್ದು, ಇದೀಗ ಜೆಡಿಎಸ್‌ನಿಂದ ಬಿಜೆಪಿ ಸೇರಿರುವ ಕೃಷ್ಣನಾಯಕ ಕೂಡ ಈ ಪಕ್ಷದ ಆಕಾಂಕ್ಷಿಯಾಗಿದ್ದಾರೆ.

ಮಂಡ್ಯದಲ್ಲಿ ನಮೋ, ಅಮಿತ್ ಶಾ ನೂರು ಬಾರಿ ಪ್ರಚಾರ ಮಾಡಿದರೂ

ಜೆಡಿಎಸ್ ಭದ್ರಕೋಟೆ ಅಲುಗಾಡಿಸಲು ಸಾಧ್ಯವಿಲ್ಲ

ಈ ಬಾರಿಯೂ ಏಳೂ ಕ್ಷೇತ್ರಗಳಲ್ಲೂ ಜಯ: ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ವಿಶ್ವಾಸ



ಕೆ.ಆರ್.ಪೇಟೆ, ಏ.3– ಸಕ್ಕರೆ ನಾಡು ಮಂಡ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ನೂರು ಬಾರಿ ಪ್ರಚಾರ ಮಾಡಿದರೂ ಜೆಡಿಎಸ್ ಭದ್ರಕೋಟೆ ಅಲುಗಾಡಿಸಲು ಸಾಧ್ಯವಿಲ್ಲ. ಈ ಬಾರಿಯೂ ಜಿಲ್ಲೆಯ 7 ವಿಧಾನಸಭಾ ಕ್ಷೇತ್ರಗಳಲ್ಲಿಯೂ ಜೆಡಿಎಸ್ ಅಭ್ಯರ್ಥಿಗಳು ಜಯ ಗಳಿಸಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಅಗ್ರಹಾರ ಬಡಾವಣೆಯಲ್ಲಿ ಸೋಮವಾರ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ತಾಲೂಕು ಬಿಜೆಪಿ ಮುಖಂಡ ಹಾಗೂ ಹಾಲಿ ದರಖಾಸ್ತು ಕಮಿಟಿ ಸದಸ್ಯ ಕೆ.ಆರ್.ಹೇಮಂತಕುಮಾರ್, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ಎಸ್.ರಾಮೇಗೌಡ, ಪುರಸಭೆ ಸದಸ್ಯರಾದ ಗಿರೀಶ್, ಇಂದ್ರಾಣಿ ವಿಶ್ವನಾಥ್, ನೇಕಾರ ಸಮಾಜದ ನಾಯಕ ಕೆ.ಆರ್.ಪುಟ್ಟಸ್ವಾಮಿ, ತಾಲೂಕು ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಚಿಕ್ಕೋನಹಳ್ಳಿ ಶಿವರಾಮೇಗೌಡ ಮತ್ತಿತರರನ್ನು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಅವರು ಮಾತನಾಡಿದರು.

ರಾಜ್ಯದಲ್ಲಿ ಪ್ರಾದೇಶಿಕ ಪಕ್ಷ ಜೆಡಿಎಸ್ ಪರ ಅಲೆ ಜೋರಾಗಿ ಬೀಸುತ್ತಿದೆ. ಪಂಚರತ್ನ ಯೋಜನೆ ಅನುಷ್ಠಾನಕ್ಕೆ ಪೂರಕವಾದ ವಾತಾವರಣ ಕಂಡು ಬರುತ್ತಿದೆ. ಮಾಧ್ಯಮಗಳಲ್ಲಿ ರಾಷ್ಟ್ರೀಯ ಪಕ್ಷಗಳ ಪರ ಬರುತ್ತಿರುವ ಸಮೀಕ್ಷೆಗಳು ದುಡ್ಡು ಕೊಟ್ಟು ಮಾಡಿಸುತ್ತಿರುವ ಸಮೀಕ್ಷೆಯಾಗಿದೆ. ಇದಕ್ಕೆ ರಾಜ್ಯದ ಜನತೆ ಹೆಚ್ಚಿನ ಮಹತ್ವ ಕೊಡುವ ಅಗತ್ಯವಿಲ್ಲ. ಈ ಬಾರಿ ಜೆಡಿಎಸ್ ರಾಜ್ಯದಲ್ಲಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬರುವುದು ಖಚಿತ. ಜೆಡಿಎಸ್ ಕೇವಲ ಹಳೇ ಮೈಸೂರು ಭಾಗಕ್ಕೆ ಮಾತ್ರ ಸೀಮಿತ ಎಂದು ಕಾಂಗ್ರೆಸ್, ಬಿಜೆಪಿ ಪಕ್ಷಗಳು ಹೇಳುತ್ತಿವೆ. ಆದರೆ ನನ್ನ ಪ್ರಕಾರ ನಮ್ಮ ಪಕ್ಷ ರಾಜ್ಯಾದ್ಯಂತ ಉತ್ತಮ ಜನಬೆಂಬಲ ಹೊಂದಿರುವ ಪಕ್ಷವಾಗಿದ್ದು, ಈ ಬಾರಿ ನನಗೆ ರಾಜ್ಯದ ಜನತೆ 5 ವರ್ಷಗಳ ಕಾಲ ಆಡಳಿತ ನಡೆಸಲು ಅವಕಾಶ ಮಾಡಿಕೊಡಲಿದ್ದಾರೆ.

ನಾನು ಈಗಾಗಲೇ 2 ಬಾರಿ ಮುಖ್ಯಮಂತ್ರಿಯಾಗಿದ್ದೇನೆ. ಆದರೆ ನಾನು ಅಂದುಕೊಂಡಂತೆ ರೈತ, ಬಡವರ ಹಾಗೂ ದೀನ ದಲಿತರ ಪರ ಅಭಿವೃದ್ಧಿ ಕಾರ್ಯ ಮಾಡಲು 5 ವರ್ಷ ಸಂಪೂರ್ಣ ಅಧಿಕಾರ ನೀಡಿದರೆ ರಾಜ್ಯವನ್ನು ಸುವರ್ಣಾಕ್ಷರದಲ್ಲಿ ಬರೆದಿಡುವಂತಹ ಅಧಿಕಾರ ನೀಡುತ್ತೇನೆ. ಪಂಚರತ್ನ ಯೋಜನೆಯಲ್ಲಿ ಜನರಿಗೆ ಬಹುಮುಖ್ಯವಾಗಿ ಬೇಕಾಗುವ ಶಿಕ್ಷಣ, ಆರೋಗ್ಯ, ವಸತಿ ಯೋಜನೆಗಳನ್ನು ಜಾರಿಗೊಳಿಸುತ್ತೇನೆ. ಇದರಿಂದ ಬಡವರಿಗೆ ಉಚಿತ ಶಿಕ್ಷಣ ಸಿಗುತ್ತದೆ. ಅಲ್ಲದೇ ಎಲ್ಲಾ ಖಾಯಿಲೆಗಳಿಗೂ ಉಚಿತ ಚಿಕಿತ್ಸೆ ನೀಡಲಾಗುವುದು. ಎಲ್ಲರಿಗೂ ಸ್ವಂತ ಸೂರು ಕಲ್ಪಿಸುವ ಆಶ್ರಯ ಯೋಜನೆ ಜಾರಿಗೊಳಿಸಲಾಗುವುದು. ಆ ಮೂಲಕ ರಾಜ್ಯದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಾಗುವುದು. ದೇವೇಗೌಡರ ಬಗ್ಗೆ ಅಪಾರ ಗೌರವ ಇಟ್ಟುಕೊಂಡಿರುವ ಕೆ.ಆರ್.ಪೇಟೆ ಜನತೆ ಜೆಡಿಎಸ್ ಅಭ್ಯರ್ಥಿ ಮಂಜು ಅವರನ್ನು ಈ ಬಾರಿ ಗೆಲ್ಲಿಸುವ ಮೂಲಕ ನನಗೆ ಮುಖ್ಯಮಂತ್ರಿಯಾಗಲು ಅವಕಾಶ ನೀಡುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶಾಸಕ ಸಿ.ಎಸ್.ಪುಟ್ಟರಾಜು, ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹೆಚ್.ಟಿ.ಮಂಜು, ಜಿಲ್ಲಾಧ್ಯಕ್ಷ ಡಿ.ರಮೇಶ್, ಉಪಾಧ್ಯಕ್ಷ ಬಿ.ಎಲ್.ನಾಗೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಎಂ.ಕಿರಣ್, ತಾಲೂಕು ಜೆಡಿಎಸ್ ಅಧ್ಯಕ್ಷ ಜಾನಕೀರಾಂ, ತಾಲೂಕು ಜೆಡಿಎಸ್ ಕಾನೂನು ಘಟಕದ ಅಧ್ಯಕ್ಷ ವಿ.ಎಸ್.ಧನಂಜಯ ಕುಮಾರ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಹೆಚ್.ಕೆ.ಅಶೋಕ್, ಮನ್‌ಮುಲ್ ಮಾಜಿ ಅಧ್ಯಕ್ಷ ಎಂ.ಬಿ.ಹರೀಶ್, ತಾಲೂಕು ಯುವ ಜೆಡಿಎಸ್ ಅಧ್ಯಕ್ಷ ಅಶ್ವಿನ್‌ಕುಮಾರ್, ತಾಪಂ ಮಾಜಿ ಸದಸ್ಯ ಮೋಹನ್, ಟಿಎಪಿಸಿಎಂಎಸ್ ನಿರ್ದೇಶಕರಾದ ದಿನೇಶ್, ಬಲದೇವ್, ಮುಖಂಡರಾದ ಕೆ.ಎನ್.ಕೃಷ್ಣೇಗೌಡ, ಮಹದೇವ್, ಲೋಕೇಶ್‌ಗೌಡ, ತನ್ವೀರ್ ಪಾಷಾ, ಅತೀಕ್, ಲೋಕಿ, ಶ್ರೀನಿವಾಸ್ ಮುತ್ತಣ್ಣ ಸೇರಿದಂತೆ ಇತರರಿದ್ದರು.

ಸಚಿವ ನಾರಾಯಣಗೌಡ ಆತ್ಮಾವಲೋಕನ ಮಾಡಿಕೊಳ್ಳಲಿ

ಕೆ.ಆರ್.ಪೇಟೆ ಅಭಿವೃದ್ಧಿಗೆ ನಾನು ಮತ್ತು ಹೆಚ್.ಡಿ.ರೇವಣ್ಣ ಕೊಡುಗೆ ನೀಡಿಲ್ಲ ಎಂದು ಬುರುಡೆ ಬಿಡುತ್ತಿರುವ ಸಚಿವ ನಾರಾಯಣಗೌಡ ಆತ್ಮಾವಲೋಕನ ಮಾಡಿಕೊಳ್ಳಲಿ. ಉಂಡ ಮನೆಗೆ ಕೇಡು ಬಯಸಿದರೆ ಆ ದೇವರೂ ಕೂಡ ಕ್ಷಮಿಸಲ್ಲ ಎಂಬ ಅರಿವಿರಲಿ. ಮುಂಬೈನಲ್ಲಿದ್ದ ನಾರಾಯಣಗೌಡನನ್ನು ಕೆ.ಆರ್.ಪೇಟೆಗೆ ಕರೆತಂದು 2 ಬಾರಿ ಶಾಸಕನನ್ನಾಗಿ ಮಾಡಿದ್ದು ಜೆಡಿಎಸ್ ಪಕ್ಷ ಎಂಬ ಅರಿವಿರಲಿ. ನಾನು ಮುಖ್ಯಮಂತ್ರಿಯಾಗಿದ್ದಾಗ ಸಂತೇಬಾಚಹಳ್ಳಿ ಏತ ನೀರಾವರಿ ಯೋಜನೆ ಮಂಜೂರು ಮಾಡಿ ಆಡಳಿತಾತ್ಮಕ ಒಪ್ಪಿಗೆ ನೀಡಿದ್ದೆ ಎಂದ ಕುಮಾರಸ್ವಾಮಿ, ಕಳೆದ ಉಪಚುನಾವಣೆಯಲ್ಲಿ ಅತಿಯಾದ ಆತ್ಮವಿಶ್ವಾಸವೇ ನಮ್ಮ ಅಭ್ಯರ್ಥಿ ಸೋಲಿಗೆ ಕಾರಣವಾಯಿತು. ಈಗ ಬಿ.ಎಲ್.ದೇವರಾಜು ಕಾಂಗ್ರೆಸ್ ಪಕ್ಷದಲ್ಲಿದ್ದಾರೆ. ಅವರಿಗೆ ಶುಭವಾಗಲಿ ಎಂದು ಹಾರೈಸುತ್ತೇನೆ. ಆದರೆ ನಮ್ಮ ಅಭ್ಯರ್ಥಿ ಹೆಚ್.ಟಿ.ಮಂಜು ಗೆಲುವನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ಮತದಾನದ ಬಗ್ಗೆ ಜಾಗೃತಿ ಮೂಡಿಸಲು ನಿರಂತರ ಶ್ರಮ: ಡಿಸಿ ಡಾ. ಗೋಪಾಲಕೃಷ್ಣ



ಮಂಡ್ಯ, ಏ.3– ಜಿಲ್ಲಾದ್ಯಂತ ಈ ಬಾರಿ ಮತದಾನದ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಮತದಾರರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲು ಜಿಲ್ಲಾಡಳಿತ ನಿರಂತರವಾಗಿ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ಕಳೆದ ಚುನಾವಣೆಯಲ್ಲಿ ಅತೀ ಕಡಿಮೆ ಮತದಾನವಾಗಿದ್ದ ಮಂಡ್ಯ ಕ್ಷೇತ್ರದ (ಶೇ.72ರಷ್ಟು) 112 ಮತಗಟ್ಟೆಯಲ್ಲಿ ವಿಶೇಷವಾಗಿ ಮತದಾನದ ಬಗ್ಗೆ ಜಾಗೃತಿ ಕಾರ್ಯ ಹಮ್ಮಿಕೊಂಡಿದ್ದೇವೆ ಎಂದು ಜಿಲ್ಲಾಧಿಕಾರಿ ಡಾ.ಗೋಪಾಲಕೃಷ್ಣ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ನಡೆಯುತ್ತಿವೆ. ಅದರಲ್ಲೂ ವಿಶೇಷವಾಗಿ ಏ.13 ರಂದು ಮಂಡ್ಯ ಚುನಾವಣಾ ಸ್ವೀಪ್ ಐಕಾನ್ ಚಿತ್ರನಟ ನೀನಾಸಂ ಸತೀಶ್ ನೇತೃತ್ವದಲ್ಲಿ ಮತದಾನದ ಅರಿವು ಕಾರ್ಯಕ್ರಮ ಜರುಗಲಿದೆ ಎಂದರು.

ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ತಡೆಗೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಹದ್ದಿನ ಕಣ್ಣಿಟ್ಟಿದ್ದು, ಚುನಾವಣೆ ಘೋಷಣೆಗೂ ಮುನ್ನ ದಾಖಲೆ ಇಲ್ಲದ 45,03,240 ರೂ. ವಶಪಡಿಸಿಕೊಳ್ಳಲಾಗಿದೆ. ಜೊತೆಗೆ ಅಕ್ರಮವಾಗಿ ಸಾಗಿಸುತ್ತಿದ್ದ 3,95,392 ರೂ. ಮೌಲ್ಯದ 1009 ಲೀಟರ್ ಮದ್ಯ, 3.525 ಕೆಜಿ ಗಾಂಜಾ, 4,988 ಸಾಮಗ್ರಿ ವಶಕ್ಕೆ ಪಡೆದಿದ್ದು, ಇದು 1,05,75,200 ರೂ. ಬೆಲೆ ಬಾಳಲಿದೆ ಎಂದು ವಿವರಿಸಿದರು.

ಚುನಾವಣೆ ಘೋಷಣೆ ಬಳಿಕ 4,99,000 ರೂ., 34,58,564 ರೂ. ಮೌಲ್ಯದ 9562 ಲೀಟರ್ ಮದ್ಯ ವಶಕ್ಕೆ ಪಡೆಯಲಾಗಿದೆ. ಐದು ಸಾವಿರ ರೂ. ಮೌಲ್ಯದ 555 ಗ್ರಾಂ ಗಾಂಜಾ ಸಹ ಸಿಕ್ಕಿದ್ದು, ಇದರ ಜೊತೆಗೆ 852 ಬೆಲೆ ಬಾಳುವ ವಸ್ತುಗಳು ವಶಕ್ಕೆ ಪಡೆದಿದ್ದು, ಇದರ ಮೌಲ್ಯ 16,98,856 ರೂ.ಗಳಾಗಿದೆ ಎಂದರು.

ಜಿಲ್ಲೆಯಲ್ಲಿ 15,17,302 ಮತದಾರರಿದ್ದು, ಏ.13ರವರೆಗೂ 18 ವರ್ಷ ತುಂಬಿರುವವರು ಮತದಾನದ ಹಕ್ಕು ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ. ಈಗಾಗಲೇ ವಿದ್ಯುನ್ಮಾನ ಮತ ಕೇಂದ್ರಗಳನ್ನು ರಾಜಕೀಯ ಮುಖಂಡರ ಸಮ್ಮುಖದಲ್ಲೇ ಜಿಲ್ಲೆಯ 7 ವಿಧಾನಸಭಾ ಕ್ಷೇತ್ರಗಳಿಗೆ ರವಾನಿಸಲಾಗಿದೆ. ಈಗಾಗಲೇ ಮತ ಯಂತ್ರಗಳು ಮಸ್ಟರಿಂಗ್ ಹಾಗೂ ಡಿಮಸ್ಟರಿಂಗ್ ಕೇಂದ್ರಗಳಾದ ಮಳವಳ್ಳಿ ಶಾಂತಿ ಕಾಲೇಜು, ಮದ್ದೂರಿನ ಹೆಚ್.ಕೆ. ವೀರಣ್ಣಗೌಡ ಕಾಲೇಜು, ಮೇಲುಕೋಟೆಯ ಪಿಎಸ್‌ಎಸ್‌ಕೆ ಪ್ರೌಢಶಾಲೆ, ಮಂಡ್ಯದ ಮಂಡ್ಯ ವಿಶ್ವವಿದ್ಯಾನಿಲಯ, ಶ್ರೀರಂಗಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗಮಂಗಲದ ಸರ್ಕಾರಿ ಜೂನಿಯರ್ ಕಾಲೇಜು ಹಾಗೂ ಕೆ.ಆರ್.ಪೇಟೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ರವಾನಿಸಲಾಗಿದೆ ಎಂದರು.

ಜಿಲ್ಲಾದ್ಯಂತ ಚುನಾವಣಾ ಅಕ್ರಮ ತಡೆಯಲು 34 ಚೆಕ್‌ಪೋಸ್ಟ್ ನಿರ್ಮಿಸಿದ್ದು, ಅನಧಿಕೃತ ಹಣ ಮತ್ತು ಇನ್ನಿತರೆ ಆಮಿಷ ಒಡ್ಡುವಂತಹ ವಸ್ತುಗಳ ಸಾಗಾಣಿಕೆ ಮೇಲೆ ನಿಗಾ ವಹಿಸಲಾಗಿದೆ. ಪಾರದರ್ಶಕವಾಗಿ ಚುನಾವಣೆ ನಡೆಸಲು ಎಲ್ಲಾ ರೀತಿಯ ಸಿದ್ಧತೆ ನಡೆಯುತ್ತಿದೆ ಎಂದರು.

ಚುನಾವಣೆ ನಡುವೆಯೇ ಜಿಲ್ಲಾಡಳಿತ ಮೇಲುಕೋಟೆ ವೈರಮುಡಿ ಉತ್ಸವವನ್ನು ಯಶಸ್ವಿಯಾಗಿ ನಡೆಸಿದೆ. ಸುಮಾರು 3 ಲಕ್ಷ ಮಂದಿ ಭಾಗವಹಿಸಿದ್ದ ಮಹೋತ್ಸವ ಯಶಸ್ವಿಯಾಗಿ ನಡೆದಿದ್ದು, ಏ.4 ರಂದು ಮೇಲುಕೋಟೆಯಲ್ಲಿ ಶ್ರೀಮನ್ನಹಾರಥೋತ್ಸವ ಜರುಗಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಹಾಗೆಯೇ ಏ.5ರಂದು ಮೇಲುಕೋಟೆಯಲ್ಲಿ ತೆಪ್ಪೋತ್ಸವ ನಡೆಸಲು ಜಿಲ್ಲಾಡಳಿತ ಎಲ್ಲಾ ಸಿದ್ಧತೆ ಮಾಡಿಕೊಂಡಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ನಾಗರಾಜು, ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್, ವಾರ್ತಾಧಿಕಾರಿ ನಿರ್ಮಲಾ ಉಪಸ್ಥಿತರಿದ್ದರು.

"ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ರ್‍ಯಾಲಿ ಸಂದರ್ಭ ಹಣ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಇದಲ್ಲದೇ ಚುನಾವಣಾ ಭದ್ರತೆ ಹಿನ್ನೆಲೆಯಲ್ಲಿ ಈಗಾಗಲೇ ಮಂಡ್ಯಕ್ಕೆ ಐದು ಸಿಐಎಸ್‌ಎಫ್ ತಂಡ ಆಗಮಿಸಿದ್ದು, ತಂಡವೊಂದರಲ್ಲಿ ನೂರು ಜನ ಇರಲಿದ್ದಾರೆ. ನಾಳೆಯಿಂದ ಅಧಿಕೃತವಾಗಿ ಅವರು ತಮ್ಮ ಕೆಲಸ ಆರಂಭಿಸಲಿದ್ದಾರೆ.

- ಎನ್.ಯತೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

ಕಮಲಮ್ಮ ನಿಧನ



ಕೆ.ಆರ್.ಪೇಟೆ, ಏ.3– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿ ಬಿಜೆಪಿ ಓಬಿಸಿ ಮೋರ್ಚಾ ಘಟಕದ ಅಧ್ಯಕ್ಷ ಬಿ.ಸೋಮಶೇಖರ್ ಅವರ ತಾಯಿ ಕಮಲಮ್ಮ(55) ಭಾನುವಾರ ರಾತ್ರಿ ನಿಧನರಾದರು. ಮೃತರು ಪತಿ ನಿವೃತ್ತ ಕೆಇಬಿ ಇಂಜಿನಿಯರ್ ನಂಜಪ್ಪಶೆಟ್ಟಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಮೃತರ ಸ್ವಗ್ರಾಮ ಸಂತೇಬಾಚಹಳ್ಳಿ ಗ್ರಾಮದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜಯಂತಿಗಳ ಸರಳ, ಸಾಂಕೇತಿಕ ಆಚರಣೆ

ಮಂಡ್ಯ, ಏ.3– ಚುನಾವಣಾ ನೀತಿ ಸಂಹಿತೆ ಜಾರಿಯಾಗಿರುವ ಹಿನ್ನೆಲೆಯಲ್ಲಿ ಏ.4ರಂದು ಭಗವಾನ್ ಮಹಾವೀರ ಜಯಂತಿ, ಏ.6ರಂದು ಅಕ್ಕಮಹಾದೇವಿ ಜಯಂತಿ (ರಾಜ್ಯ ಮಟ್ಟದಲ್ಲಿ ಮಾತ್ರ), ಏ.23ರಂದು ಬಸವ ಜಯಂತಿ, ಏ.25ರಂದು ಶ್ರೀಶಂಕರಾಚಾರ್ಯ ಜಯಂತಿ, ಏ.27ರಂದು ಶ್ರೀಭಗೀರಥ ಜಯಂತಿ ಮತ್ತು ಮೇ 10ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಗಳನ್ನು ಸರಳ ಹಾಗೂ ಸಾಂಕೇತಿಕವಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶ್ರೀನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದರ ದರ್ಶಕ ಶಸ್ತ್ರಚಿಕಿತ್ಸಾ ಶಿಬಿರ

ಮಂಡ್ಯ, ಏ.3– ಜಿಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಏ.6 ರಿಂದ 27ರವರೆಗೆ ಉದರದರ್ಶಕ ಶಸ್ತ್ರಚಿಕಿತ್ಸಾ ಶಿಬಿರ ಆಯೋಜಿಸಲಾಗಿದೆ.

ಏ.6ರಂದು ಕೀಲಾರ ಪ್ರಾಥಮಿಕ ಆರೋಗ್ಯ ಕೇಂದ್ರ, ಏ.12ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರ, ಏ.13 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, ಏ.15 ರಂದು ಬಸರಾಳು ಪ್ರಾಥಮಿಕ ಆರೋಗ್ಯ ಕೇಂದ್ರ, ಏ.18 ರಂದು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ ಹಾಗೂ ಮಧ್ಯಾಹ್ನ 1 ಗಂಟೆಗೆ ನಾಗಮಂಗಲ ಸರ್ಕಾರಿ ಆಸ್ಪತ್ರೆ, ಏ.19 ರಂದು ಕೆ.ಎಂ.ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, ಏ.21 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, ಏ.25 ರಂದು ಮದ್ದೂರು ತಾಲೂಕು ಆಸ್ಪತ್ರೆ, ಏ.26 ರಂದು ಪಾಂಡವಪುರ ಉಪವಿಭಾಗ ಆಸ್ಪತ್ರೆ ಮತ್ತು ಏ.27 ರಂದು ಕೆರೆಗೋಡು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೆಳಗ್ಗೆ 10 ಗಂಟೆಗೆ ಉದರದರ್ಶಕ ಶಸ್ತ್ರಚಿಕಿತ್ಸಾ ಶಿಬಿರ ನಡೆಯಲಿದೆ ಎಂದು ಜಿಪಂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೌಶಲ್ಯ ವೃತ್ತಿ ತರಬೇತಿಗೆ ನೋಂದಣಿ

ಮಂಡ್ಯ, ಏ.3– ಮಂಡ್ಯದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸಿಎಂಕೆಕೆವೈ ಹಾಗೂ ಪಿಎಂಕೆವಿವೈ ಯೋಜನೆಯಡಿ ಕೌಶಲ್ಯ ವೃತ್ತಿ ತರಬೇತಿಗಳು ಪ್ರಾರಂಭವಾಗುತ್ತಿವೆ. ಈ ಅಲ್ಪಾವಧಿ ವೃತ್ತಿ ತರಬೇತಿಗಳಿಗೆ 15 ರಿಂದ 35ರ ವಯೋಮಾನದ ಶಾಲೆ ಬಿಟ್ಟ ವಿದ್ಯಾರ್ಥಿಗಳು ಹಾಗೂ ನಿರುದ್ಯೋಗಿಗಳು ನೋಂದಣಿಯಾಗುವಂತೆ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ದೂ: 08232–297054 ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕತ್ತೆ ಹಾಲಿನ ಸಾಬೂನಿನಿಂದ ಮಹಿಳೆಯರು ಸುಂದರವಾಗುತ್ತಾರೆ

ಬಿಜೆಪಿ ನಾಯಕಿ ಮೇನಕಾ ಗಾಂಧಿ



ಲಕ್ನೋ, ಏ.3– ಮಹಿಳೆಯರ ಸೌಂದರ್ಯವರ್ಧನೆಯ ಬಗ್ಗೆ ಮೇನಕಾ ಗಾಂಧಿ ಮಾತನಾಡಿದ್ದು, ಕತ್ತೆಯ ಹಾಲಿನ ಸಾಬೂನು ಯಾವಾಗಲೂ ಮಹಿಳೆಯರ ದೇಹವನ್ನು ಸುಂದರವಾಗಿ ಇಡುತ್ತದೆ ಎಂದು ಹೇಳಿದ್ದಾರೆ.

ಮಾಜಿ ಕೇಂದ್ರ ಸಚಿವೆ ಹಾಗೂ ಬಿಜೆಪಿ ಸಂಸದೆ ಮೇನಕಾ ಗಾಂಧಿ ಅವರ ಹೇಳಿಕೆಯೊಂದು ಸಾಮಾಜಿಕ ಜಾಲತಾಣದಲ್ಲಿ ಭಾರೀ ಸದ್ದು ಮಾಡುತ್ತಿದೆ. ಅದಲ್ಲದೇ ಈಜಿಪ್ಟ್ ರಾಣಿ ಕ್ಲಿಯೋಪಾತ್ರಾ ಕೂಡ ಕತ್ತೆಯ ಹಾಲಿನಿಂದ ಸ್ನಾನ ಮಾಡುತ್ತಿದ್ದರು ಎಂದು ಹೇಳಿರುವ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗಿದೆ.

ಉತ್ತರ ಪ್ರದೇಶದ ಸುಲ್ತಾನ್‌ಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈಜಿಪ್ಟ್ ಪ್ರಸಿದ್ಧ ರಾಣಿ ಕ್ಲಿಯೋಪಾತ್ರಾ ಕತ್ತೆ ಹಾಲಿನಲ್ಲಿ ಸ್ನಾನ ಮಾಡುತ್ತಿದ್ದರು. ಕತ್ತೆ ಹಾಲಿನಿಂದ ತಯಾರಿಸಿದ ಸೋಪುಗಳಿಗೆ ದಿಲ್ಲಿಯಲ್ಲಿ 500 ರೂ. ಬೆಲೆ ಇದೆ. ನಾವು ಮೇಕೆ ಹಾಲು ಮತ್ತು ಕತ್ತೆಯ ಹಾಲಿನೊಂದಿಗೆ ಸಾಬೂನು ತಯಾರಿಸಲು ಏಕೆ ಪ್ರಾರಂಭಿಸಬಾರದು? ಎಂದು ಮೇನಕಾ ಗಾಂಧಿ ಹೇಳಿದ್ದಾರೆ. ಇದಷ್ಟೇ ಅಲ್ಲದೇ, ಲಡಾಖ್ ಸಮುದಾಯವು ಸಾಬೂನು ತಯಾರಿಸಲು ಕತ್ತೆಯ ಹಾಲನ್ನು ಬಳಸುತ್ತದೆ ಎಂದು ಮೇನಕಾ ಗಾಂಧಿ ತಮ್ಮ ಭಾಷಣದಲ್ಲಿ ಉಲ್ಲೇಖಿಸಿದ್ದಾರೆ. ಇದರ ಜೊತೆಯೇ ನೀವು ಕತ್ತೆಯನ್ನು ನೋಡಿ ಎಷ್ಟು ದಿನವಾಯಿತು? ಅವುಗಳ ಸಂಖ್ಯೆ ಕುಸಿಯುತ್ತಿದೆ. ದೋಬಿಗಳು ಕೂಡ ಕತ್ತೆಗಳನ್ನು ಬಳಸುವುದನ್ನು ನಿಲ್ಲಿಸಿದ್ದಾರೆ ಎಂದು ಹೇಳಿದ್ದಾರೆ.

ತಾ.ಬಿಜೆಪಿ ಅಧ್ಯಕ್ಷ ಸ್ಥಾನಕ್ಕೆ ರಘು ರಾಜೀನಾಮೆ

ಮಂಡ್ಯ, ಏ.3– ಮದ್ದೂರು ಬಿಜೆಪಿ ತಾಲೂಕು ಘಟಕದ ಅಧ್ಯಕ್ಷ ಪಿ.ಸಿ.ರಘು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಈ ಕುರಿತು ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಧ್ಯಕ್ಷ ಸಿ.ಪಿ.ಉಮೇಶ್ ವರ್ತನೆಗೆ ಬೇಸತ್ತು ರಾಜೀನಾಮೆ ನೀಡುತ್ತಿದ್ದು, ಅವರ ಒಳ ಒಪ್ಪಂದದ ರಾಜಕಾರಣ ಸಹಿಸದೇ ಮತ್ತು ಸರ್ವಾಧಿಕಾರಿ ಧೋರಣೆ ಖಂಡಿಸಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವುದಾಗಿ ಹೇಳಿದರು.

ಒಂದನೇ ಪುಟದಿಂದ

ಮತಗಟ್ಟೆಗಳಿಗೆ ಇವಿಎಂಗಳ ವಿಂಗಡಣೆ

ಮೇ 10ರಂದು ನಡೆಯಲಿರುವ ಮತದಾನದ ಬ್ಯಾಲೆಟ್ ಮತ್ತು ಕಂಟ್ರೋಲ್ ಯೂನಿಟ್ ಜೊತೆಗೆ ವಿವಿ ಪ್ಯಾಟ್ ಉಪಕರಣಗಳನ್ನು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಹೈದರಾಬಾದ್‌ನಿಂದ ತರಿಸಲಾ ಗಿದ್ದು, ಪ್ರತಿಯೊಂದಕ್ಕೂ ಸಂಖ್ಯೆಗಳನ್ನು ನೀಡಲಾಗಿದೆ.

ಇಂದು ಅವುಗಳನ್ನು ಮತದಾರರ ಸಂಖ್ಯೆಗನುಸಾರ ಮೈಸೂರು ನಗರದ ಚಾಮರಾಜ, ಕೃಷ್ಣರಾಜ, ನರಸಿಂಹರಾಜ, ಚಾಮುಂಡೇಶ್ವರಿ, ಗ್ರಾಮಾಂತರ ಪ್ರದೇಶಗಳಾದ ವರುಣ, ತಿ.ನರಸೀಪುರ, ನಂಜನಗೂಡು, ಹೆಚ್.ಡಿ.ಕೋಟೆ, ಹುಣಸೂರು, ಪಿರಿಯಾಪಟ್ಟಣ ಹಾಗೂ ಕೆ.ಆರ್.ನಗರ ವಿಧಾನಸಭಾ ಕ್ಷೇತ್ರಗಳಿಗೆ ವಿದ್ಯುನ್ಮಾನ ಮತಯಂತ್ರಗಳನ್ನು ವಿವಿ ಪ್ಯಾಟ್‌ನೊಂದಿಗೆ ಹಂಚಿಕೆ ಮಾಡಲಾ ಗಿದ್ದು, ಆಯಾ ಕ್ಷೇತ್ರದ ಚುನಾವಣಾಧಿಕಾರಿ (ರಿಟರ್ನಿಂಗ್ ಆಫೀಸರ್), ಸಹಾಯಕ ಚುನಾವಣಾಧಿಕಾರಿಗಳು, ರಾಜಕೀಯ ಪಕ್ಷಗಳ ಮುಖಂಡರ ಸಮ್ಮುಖದಲ್ಲಿ ಜಿಲ್ಲಾ ಚುನಾವಣಾಧಿ ಕಾರಿಗಳು ಈ ಪ್ರಕ್ರಿಯೆ ನಡೆಸಿದರು. ಅದೇ ರೀತಿ ಕ್ಷೇತ್ರವಾರು ಬರುವ ಎಲ್ಲಾ ಮತಗಟ್ಟೆಗಳಿಗೂ ಕ್ರಮ ಸಂಖ್ಯೆ ಇರುವ ಇವಿಎಂ ಗಳನ್ನು ಇಂದೇ ಹಂಚಿಕೆ ಮಾಡಿದ್ದು, ಮತದಾನದ ದಿನ ಅಭ್ಯರ್ಥಿಗಳಾಗಲೀ, ಅವರ ಏಜೆಂಟರಾಗಲೀ ವಿದ್ಯುನ್ಮಾನ ಮತಯಂತ್ರ ಗಳ ಬಗ್ಗೆ ಸಂಶಯ ವ್ಯಕ್ತಪಡಿಸಬಾರದು ಎಂಬ ಕಾರಣಕ್ಕಾಗಿ ಅವರೆದುರೇ ವಿಂಗಡಣೆ ಪ್ರಕ್ರಿಯೆ ನಡೆಸುತ್ತಿರುವುದಾಗಿ ಡಾ. ಕೆ.ವಿ. ರಾಜೇಂದ್ರ ತಿಳಿಸಿದರು. ಮುಕ್ತ ಹಾಗೂ ಪಾರದರ್ಶಕ ಮತದಾನಕ್ಕೆ ಅವಕಾಶ ಕಲ್ಪಿಸುವ ದೃಷ್ಟಿಯಿಂದ ಹಂಚಿಕೆಯಾದ ಮತಯಂತ್ರದ ಸಂಖ್ಯೆ, ಬಾರ್‌ಕೋಡ್ ಸಮೇತ ಎಲ್ಲಾ ಮಾಹಿತಿ ಗಳನ್ನು ಚುನಾವಣಾಧಿಕಾರಿಗಳಿಗೆ ಒದಗಿಸಲಾಗುತ್ತಿದೆ. ಹಂಚಿಕೆಯಾದ ಬ್ಯಾಲೆಟ್ ಮತ್ತು ಕಂಟ್ರೋಲ್ ಯೂನಿಟ್‌ಗಳನ್ನು ಪ್ರತ್ಯೇಕಿಸಿ ಕ್ಷೇತ್ರವಾರು ಕೊಠಡಿಗಳಲ್ಲಿ ಕ್ರಮಸಂಖ್ಯೆ ಅನುಸಾರ ಜೋಡಿಸಲಾಗುತ್ತಿದೆ. ಇವಿಎಂ ನೋಡಲ್ ಅಧಿಕಾರಿಯಾಗಿರುವ ಮುಡಾ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್, ಚುನಾವಣಾ ತಹಸೀಲ್ದಾರ್ ರಾಮಪ್ರಸಾದ್, ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ ರೆಡ್ಡಿ, ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಇತರರು ಪರಿಶೀಲನೆ ಹಾಗೂ ಖಚಿತತೆ ಪ್ರಕ್ರಿಯೆ ವೇಳೆ ಹಾಜರಿದ್ದರು. ಇವಿಎಂ ದಾಸ್ತಾನು ಕೇಂದ್ರಕ್ಕೆ ಭಾರೀ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಜಿಲ್ಲಾ ಚುನಾವಣಾಧಿಕಾರಿ ಸೇರಿದಂತೆ ಯಾರೂ ಮೊಬೈಲ್ ಫೋನ್ ಅಥವಾ ಇನ್ನಿತರ ವಸ್ತುಗಳನ್ನು ಕೊಂಡೊಯ್ಯುವಂತಿಲ್ಲ. ಪರಿಶೀಲನೆ ಹಾಗೂ ಖಾತರಿ ಪ್ರಕ್ರಿಯೆಗೆ ಆಗಮಿಸಿದ ಡಾ.ಕೆ.ವಿ.ರಾಜೇಂದ್ರ ಅವರನ್ನು ಮೆಟಲ್ ಡೋರ್ ಡಿಟೆಕ್ಟರ್ ಮೂಲಕ ತಪಾಸಣೆ ಮಾಡಲಾಯಿತು.

ಮಂಡ್ಯದಲ್ಲಿ ಈ ಬಾರಿಯೂ ಜೆಡಿಎಸ್ ವಿರುದ್ಧ ಕುತಂತ್ರದ ರಾಜಕೀಯ

ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಆರೋಪ

ಮಂಡ್ಯ: ಜಿಲ್ಲೆಯಲ್ಲಿ ಕಳೆದ ಲೋಕಸಭಾ ಚುನಾವಣೆಯ ರೀತಿ ಈ ಬಾರಿಯೂ ಜೆಡಿಎಸ್ ವಿರುದ್ಧ ಕುತಂತ್ರದ ರಾಜಕೀಯಕ್ಕೆ ಕಾಂಗ್ರೆಸ್, ಬಿಜೆಪಿ ಹಾಗೂ ರೈತ ಸಂಘ ಒಟ್ಟಾಗಿವೆ ಎಂದು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಕೆ.ಆರ್.ಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಮಣಿಸಲು ಮಂಡ್ಯ ಜಿಲ್ಲೆಯಲ್ಲಿ ಮತ್ತೆ ಕುತಂತ್ರದ ರಾಜಕೀಯ ಶುರುವಾಗಿದೆ. ಜಿಲ್ಲೆಯ ಜನರಿಗೆ ಕಾಂಗ್ರೆಸ್, ಬಿಜೆಪಿ ಹಾಗೂ ರೈತ ಸಂಘ ಮೋಸ ಮಾಡಲು ಮುಂದಾಗಿವೆ. ಇಂತಹ ಕುತಂತ್ರಗಳ ವಿರುದ್ಧ ಮತದಾರರೇ ಸರಿಯಾದ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದಿದ್ದಾರೆ.

ಕುತಂತ್ರದ ರಾಜಕೀಯಕ್ಕೆ ಮೇಲುಕೋಟೆ ಕ್ಷೇತ್ರ ಹೆಸರಿಗೆ ಅಷ್ಟೇ ಒಂದು ಉದಾಹರಣೆ. ಜೆಡಿಎಸ್ ಬಗ್ಗೆ ಎಲ್ಲಾ ಕಡೆ ಮಾತನಾಡು ತ್ತಿದ್ದಾರೆ. ಕಾಂಗ್ರೆಸ್ ಹಾಗೂ ಬಿಜೆಪಿ ಆಂತರಿಕ ಒಳ ಒಪ್ಪಂದಗಳು ಬಹಳ ವರ್ಷ ದಿಂದ ಇದೆ. ಆಪರೇಶನ್ ಕಮಲದಿಂದಲೂ ಇದು ನಡೆಯುತ್ತಿದೆ. ಈ ಸೇಡನ್ನೂ ಜೆಡಿಎಸ್ ಹಾಗೂ ಮತದಾರರು ತೀರಿಸಿಕೊಳ್ಳುತ್ತಾರೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ಮಹಿಳೆಯರಿಗೆ ಸಿಗದ ಉಚಿತ ಬಸ್ ಪಾಸ್

ಘೋಷಣೆಗೆ ಸೀಮಿತವಾಯ್ತೇ ಸರ್ಕಾರದ ಭರವಸೆ?



ಬೆಂಗಳೂರು: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ್ದ ಯೋಜನೆ ಕೇವಲ ಘೋಷಣೆಗೆ ಮಾತ್ರ ಸೀಮಿತವಾಗಿದೆ. ಉಚಿತ ಬಸ್ ಪಾಸ್ ನಿರೀಕ್ಷೆಯಲ್ಲಿದ್ದ ರಾಜ್ಯದ 30 ಲಕ್ಷ ದುಡಿಯುವ ಮಹಿಳೆಯರು ಭಾರೀ ನಿರಾಸೆಗೊಳಗಾಗಿದ್ದಾರೆ.

ಕಳೆದ ಫೆಬ್ರವರಿ 17ರಂದು 2023–24ನೇ ಸಾಲಿನ ರಾಜ್ಯ ಬಜೆಟ್ ಮಂಡನೆ ಮಾಡಿದ್ದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು, ಮಹಿಳೆಯರ ಸಬಲೀಕರಣಕ್ಕೆ ಗೃಹಿಣಿ ಶಕ್ತಿ ಯೋಜನೆ ರೂಪಿಸಿ ಉಚಿತ ಬಸ್ ಪಾಸ್ ನೀಡುವುದಾಗಿ ಘೋಷಣೆ ಮಾಡಿದ್ದರು.

ಮುಖ್ಯಮಂತ್ರಿಗಳ ಘೋಷಣೆಯಂತೆ ಏಪ್ರಿಲ್ 1 ರಿಂದ ದುಡಿಯುವ ಮಹಿಳೆಯರಿಗೆ ಉಚಿತ ಬಸ್‌ಗಳನ್ನು ನೀಡಬೇಕಾಗಿತ್ತು. ಆದರೆ, ಕೊಟ್ಟ ಮಾತಿನಂತೆ ಮಹಿಳೆಯರಿಗೆ ಉಚಿತ ಬಸ್ ಪಾಸ್ ನೀಡಲಾಗಿಲ್ಲ. ಈ ಉಚಿತ ಬಸ್ ಪಾಸ್‌ಗೆ ರಾಜ್ಯ ಬಜೆಟ್‌ನಲ್ಲಿ 1 ಸಾವಿರ ಕೋಟಿ ರೂಪಾಯಿ ಮೀಸಲಿರಿಸಲಾಗಿತ್ತು.

ಪ್ರಧಾನಿ ಮೋದಿಯಿಂದ ದೇಶದಲ್ಲಿ ಮಹತ್ತರ ಬದಲಾವಣೆ ಆಗಿದೆ

■ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಮರ್ಥನೆ ■ ರಾಜ್ಯದಲ್ಲಿ ಬಿಜೆಪಿ ಬೆಳವಣಿಗೆಗೆ ಯಡಿಯೂರಪ್ಪ, ಅನಂತ್‌ಕುಮಾರ್ ಶ್ರಮವೇ ಕಾರಣ ■ ಬಿಜೆಪಿ ಮಾಧ್ಯಮ ಕೇಂದ್ರ ಉದ್ಘಾಟನೆ



ಬೆಂಗಳೂರು, ಏ.3(ಕೆಎಂಸಿ)– ದೇಶದಲ್ಲಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಬಂದ ನಂತರ ಈ ದೇಶದಲ್ಲಿ ದೊಡ್ಡ ಬದಲಾವಣೆ ಆಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಇಂದು ಬಿಜೆಪಿ ಮಾಧ್ಯಮ ಕೇಂದ್ರ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಬಿಜೆಪಿ ಇಡೀ ವಿಶ್ವದಲ್ಲಿಯೇ ಅತಿ ದೊಡ್ಡ ಪಕ್ಷ. ಕರ್ನಾಟಕದಲ್ಲೂ ಬಹಳ ಆಳವಾಗಿ ಬೇರೂರಿರುವ ಪಕ್ಷವಾಗಿದ್ದು, ಅತ್ಯಂತ ಉತ್ತಮ ಸಂಘಟನೆ ಹೊಂದಿರುವ ಪಕ್ಷ. ಕರ್ನಾಟಕದಲ್ಲಿ ಬಿಜೆಪಿ ಬೆಳೆದು ಬಂದು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಏಕಾಂಗಿಯಾಗಿ ಪಕ್ಷ ಬೆಳೆಸಿದವರು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು. ಅವರ ನೇತೃತ್ವದಲ್ಲಿ ಬಿಜೆಪಿ ಬೃಹದಾಕಾರವಾಗಿ ಬೆಳೆಯುತ್ತಾ ಬಂದಿದೆ. ದಿವಂಗತ ಅನಂತ ಕುಮಾರ್ ಅವರ ಅಧ್ಯಕ್ಷತೆಯಲ್ಲೂ ಬೆಳೆದ ಪಕ್ಷ, ರೈತರಿಗೆ ವಿಶೇಷ ಬಜೆಟ್ ಕೊಡುವುದರ ಜೊತೆಗೆ ಎಲ್ಲಾ ವರ್ಗಗಳಿಗೂ ಹಲವು ಯೋಜನೆಗಳನ್ನು ನೀಡಿದೆ ಎಂದರು.

ದೇಶದಲ್ಲಿ ಇದ್ದ ಯುಪಿಎ ಸರ್ಕಾರ ದೇಶದಲ್ಲಿ ಅಸ್ಥಿರತೆ ಉಂಟು ಮಾಡಿತ್ತು. ಆರ್ಥಿಕವಾಗಿ ಅಸ್ಥಿರತೆ ಜೊತೆಗೆ ಭ್ರಷ್ಟಾಚಾರದ ಸುರಿಮಳೆಯೇ ಆಯಿತು. ಅಭಿವೃದ್ಧಿಯಿಂದ ಪ್ರತಿಯೊಬ್ಬ ನಾಗರಿಕನಿಗೆ ಆತ್ಮವಿಶ್ವಾಸ ಮೂಡಬೇಕು. ನಾವು ಸುರಕ್ಷಿತವಾಗಿ ಇದ್ದೇವೆ ಎಂಬ ಭಾವನೆ ಬರಬೇಕು. ಈ ನಿಟ್ಟಿನಲ್ಲಿ ದೇಶದಲ್ಲಿ ಅತಿ ಹೆಚ್ಚು ಕಿ.ಮೀ ರಸ್ತೆ, ವಿಮಾನ ನಿಲ್ದಾಣ ಎಲ್ಲವೂ ಅಭಿವೃದ್ಧಿ ಆಗಿದೆ. ಪ್ರಧಾನಿ ನರೇಂದ್ರ ಮೋದಿಯವರು ಸ್ವಚ್ಛ ಭಾರತ್ ಬಗ್ಗೆ ಮಾತಾಡುವಾಗ ವಿರೋಧ ಪಕ್ಷಗಳು ಹಾಸ್ಯ ಮಾಡಿದವು. ಒಂದು ಮನೆಯ ಸ್ವಚ್ಛತೆಯ ಬಗ್ಗೆ ಅರ್ಥ ಮಾಡಿಕೊಳ್ಳದೇ ಇರುವವರು 70 ವರ್ಷ ಆಡಳಿತ ಮಾಡಿದ್ದು ದುರ್ದೈವದ ಸಂಗತಿ ಎಂದರು. ಕರ್ನಾಟಕದಲ್ಲಿ ಮೂರು ವರ್ಷಗಳಲ್ಲಿ 40 ಲಕ್ಷ ಮನೆಗಳಿಗೆ ಶುದ್ಧ ಕುಡಿಯುವ ನೀರು ಒದಗಿಸಲಾಗಿದೆ ಇದು ಬಿಜೆಪಿ ನರೇಂದ್ರಮೋದಿ, ಡಬಲ್ ಇಂಜಿನ್ ಸರ್ಕಾರದ ಕೆಲಸ. ಶೌಚಾಲಯ, ಮನೆ ಮನೆಗೆ ಬೆಳಕು ನೀಡಲಾಗಿದೆ. ಮಹಿಳೆಯರಿಗಾಗಿ ಸ್ತ್ರೀ ಸಾಮರ್ಥ್ಯ ಯೋಜನೆ, ಸ್ವಾಮಿ ವಿವೇಕಾನಂದ ಯುವ ಶಕ್ತಿ ಯೋಜನೆ, ಮಹಿಳಾ ಶಕ್ತಿ ಕಾಯಕ ಯೋಜನೆ, ನೀಡಿ ದುಡಿಯುವ ವರ್ಗಕ್ಕೆ ಗೌರವ ಮತ್ತು ಅವಕಾಶ ಮಾಡಿಕೊಟ್ಟಿದ್ದು ನಮ್ಮ ಸರ್ಕಾರ ಎಂದು ಹೇಳಿದರು.

ದುಡ್ಡೇ ದೊಡ್ಡಪ್ಪ ಎನ್ನುವುದನ್ನು ಬದಲಾಯಿಸಿ ದುಡಿಮೆಯೇ ದೊಡ್ಡಪ್ಪ ಎಂದು ನಿರೂಪಿಸಿದ್ದು ನಮ್ಮ ಸರ್ಕಾರ. ಬರೀ ಕಾಲಹರಣ ಮಾಡಿದ ಶ್ರೇಯಸ್ಸು ಕಾಂಗ್ರೆಸ್‌ಗೆ ಸೇರುತ್ತದೆ. ಸುಮಾರು 1.5 ಲಕ್ಷ ಮಂದಿ ನೆಲೆಸಿರುವ ಲಂಬಾಣಿ ತಾಂಡಗಳ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿ, ಹಕ್ಕುಪತ್ರ ನೀಡಿದ್ದು ನಮ್ಮ ಸರ್ಕಾರ ಎಂದರು.


ಕೊರೊನಾ, ಪ್ರವಾಹದ ನಡುವೆಯೂ ಮೂರು ವರ್ಷಗಳಲ್ಲಿ ಸರ್ವಾಂಗೀಣ ಅಭಿವೃದ್ಧಿ ಮಾಡಲಾಗಿದೆ. ಏನು ಮಾಡಲಾಗಿದೆ ಎಂದು ಪ್ರಶ್ನಿಸುವ ಕಾಂಗ್ರೆಸ್ ಏನು ಮಾಡಿಲ್ಲ ಎಂದು ಸಿದ್ದರಾಮಯ್ಯನ ಮಾತಿನ ಶೈಲಿಯಲ್ಲೇ ಮಾತನಾಡಿ, ವ್ಯಂಗ್ಯವಾಡಿದ ಮುಖ್ಯಮಂತ್ರಿಗಳು, ನಿಮ್ಮ ಆಡಳಿತದ ಅವಧಿಯಲ್ಲಿ ಏನು ಮಾಡಿದ್ದೀರಿ ಎಂದು ತೋರಿಸಿ ಎಂದು ಹೇಳಿದರು.

ಚುನಾವಣೆಗೆ ಬಿಜೆಪಿ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಂಡಿದ್ದು, ನಾವು ಮಾಡಿದ ಸಾಧನೆಯ ವರದಿ ಹಿಡಿದು ಮತ ಕೇಳುತ್ತಿದ್ದೇವೆ. ಜೊತೆಗೆ ಕಾಂಗ್ರೆಸ್‌ನ ದುರಾಡಳಿತದ ಬಗ್ಗೆಯೂ ಜನರಿಗೆ ತಿಳಿಸಲಾಗುವುದು. ಕಾಂಗ್ರೆಸ್ ಧರ್ಮ ಒಡೆಯುವ ಕೆಲಸ ಮಾಡಿದರು. ಆದರೆ ನಾವು ಧರ್ಮಗಳನ್ನು ಜೋಡಣೆ ಮಾಡುವ ಕೆಲಸ ಮಾಡಿದ್ದೇವೆ. ಕಾಂಗ್ರೆಸ್ ಸರ್ಕಾರ ಇದ್ದಾಗ ಕೋಮು ಗಲಭೆಗಳಾದವು. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದು ಹೋಗಿತ್ತು, ರಾಜ್ಯ ಅಭಿವೃದ್ಧಿಯೇ ಆಗಿರಲಿಲ್ಲ. ಹೀಗಾಗಿ ಅವು ಕರಾಳ ದಿನಗಳು ಎಂದರು.

ಕಾಂಗ್ರೆಸ್ ಸರ್ಕಾರ ಇದ್ದಾಗ 50ಕ್ಕೂ ಹೆಚ್ಚು ಹಗರಣಗಳು ನಡೆದವು. ಲೋಕಾಯುಕ್ತ ನಿಷ್ಕ್ರಿಯಗೊಳಿಸಿ, ಎಸಿಬಿಯನ್ನು ರಚಿಸಿ ನಾವು ಏನೂ ಮಾಡಿಲ್ಲ ಎಂದು ಜನರ ಕಣ್ಣಿಗೆ ಮಣ್ಣೆರಚಿದ್ದಾರೆ. ಅವರ ಕಾಲದಲ್ಲಿ ಲೋಕಾಯುಕ್ತ ಇದ್ದಿದ್ದರೆ, 100 ಪ್ರಕರಣಗಳು ಅವರ ಮೇಲೆ ಇರುತ್ತಿದ್ದವು. ನಮ್ಮ ಕಾಲದಲ್ಲಿ ಭ್ರಷ್ಟಾಚಾರದೊಂದಿಗೆ ರಾಜೀ ಇಲ್ಲ. 40 ಪರ್ಸೆಂಟ್ ಕಮಿಷನ್ ಆರೋಪ ಮಾಡಿದ ಅವರು, ಅದರ ಬಗ್ಗೆ ದಾಖಲೆ ಕೊಡಲಿ. ಭ್ರಷ್ಟಾಚಾರದ ಬಗ್ಗೆ ಮಾತಾಡಲು ಇವರಿಗೆ ಯಾವುದೇ ನೈತಿಕ ಹಕ್ಕು ಇಲ್ಲ ಎಂದರು.

ಎಸ್ಸಿ ಪಟ್ಟಿಯಿಂದ ತೆಗೆಯುವ ಪ್ರಶ್ನೆಯೇ ಇಲ್ಲ: ಬಂಜಾರ ಸಮುದಾಯವನ್ನು ನಾವು ಕರೆದು ಮಾತನಾಡುತ್ತೇವೆ. ಬಂಜಾರ, ಭೋವಿ, ಕೊರಮ, ಕೊರಚ, ಈ ನಾಲ್ಕನ್ನು ಎಸ್ಸಿ ಪಟ್ಟಿಯಿಂದ ತೆಗೆಯುವ ಪ್ರಶ್ನೆಯೇ ಇಲ್ಲ. ನ್ಯಾ.ಸದಾಶಿವ ಆಯೋಗ ಬಿಟ್ಟು, ಸಚಿವ ಸಂಪುಟ ಉಪ ಸಮಿತಿ ಪ್ರಕಾರ ಇದನ್ನು ಮಾಡಿದ್ದೇವೆ. ಅವರಿಗೆ ಮೀಸಲಾತಿ ಪ್ರಮಾಣ ಕೂಡ ಜಾಸ್ತಿಯಾಗಿದೆ. ಇದರ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ. ಕಾಂಗ್ರೆಸ್ ನೇತಾರರು ಎಲ್ಲೆಲ್ಲಿ ಸ್ಪರ್ಧೆ ಮಾಡುತ್ತಾರೋ ಅಲ್ಲಿ ಇದನ್ನು ರಾಜಕೀಯವಾಗಿ ಬಳಸಿಕೊಳ್ಳಲು ಯೋಜನೆ ಮಾಡಿದ್ದಾರೆ. ಆದರೆ ಇದನ್ನು ನಾವು ರಾಜಕೀಯವಾಗಿ ಹೋರಾಡಲು ಮಾಡಲು ಸಿದ್ಧರಿದ್ದೇವೆ ಎಂದು ಹೇಳಿದರು.

ಕಾಂಗ್ರೆಸ್‌ಗೆ ಅಂಬೇಡ್ಕರ್ ಇಲ್ಲವೇ ಅವರು ಬರೆದ ಸಂವಿಧಾನದ ಮೇಲೆ ನಂಬಿಕೆ ಇಲ್ಲ



ಬೆಂಗಳೂರು, ಏ.3 (ಕೆಎಂಸಿ)– ಕಾಂಗ್ರೆಸ್‌ಗೆ ಅಂಬೇಡ್ಕರ್ ಅವರ ಮೇಲಾಗಲಿ, ಅವರು ಬರೆದಿರುವ ಸಂವಿಧಾನದ ಮೇಲೆಯಾಗಲಿ ನಂಬಿಕೆ ಇಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು. ಕಾಂಗ್ರೆಸ್ ವಕ್ತಾರರು ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲಾ ಅವರು, ಮೀಸಲಾತಿ ಬಗ್ಗೆ ಟ್ವೀಟ್ ಮಾಡಿರುವ ಕುರಿತು ಇಂದು ಪ್ರತಿಕ್ರಿಯೆ ನೀಡಿದ ಅವರು, ಮೀಸಲಾತಿ ನೀಡಿರುವುದು ಕಾನೂನು ಬಾಹಿರ, ಸಂವಿಧಾನ ವಿರೋಧಿ ಎಂದು ಕೆಳಮಟ್ಟದ ಶಬ್ದಗಳನ್ನು ಬಳಸಿದ್ದಾರೆ. ಜನಸಂಖ್ಯೆ ಆಧಾರಿತವಾಗಿ ಮೀಸಲಾತಿ ನೀಡಬೇಕು ಎಂದು ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಅವಕಾಶ ಕಲ್ಪಿಸಲಾಗಿದೆ. ಎಸ್.ಸಿ, ಎಸ್.ಟಿ ಸಮುದಾಯಗಳ ಬಹು ವರ್ಷಗಳ ಬೇಡಿಕೆಯನ್ನು ಈಡೇರಿಸಿ, ಸಂವಿಧಾನದ ಪರಿಚ್ಛೇದ 9ಕ್ಕೆ ಸೇರಿಸಲು ಶಿಫಾರಸ್ಸು ಮಾಡಲಾಗಿದೆ ಎಂದರು.

ಅವರ ಕಾಲದಲ್ಲಿ ಏನೂ ಮಾಡದೇ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದದವರನ್ನು ಬರೀ ಮತ ಬ್ಯಾಂಕ್‌ಗಾಗಿ ಬಳಕೆ ಮಾಡಲಾಗಿತ್ತು ಎಂದ ಅವರು, ನ್ಯಾ.ನಾಗಮೋಹನ್ ದಾಸ್ ವರದಿ ಬಂದು 4 ವರ್ಷ ಆಗಿದೆ ಎಂದು ಸುಳ್ಳು ಹೇಳುತ್ತಿದ್ದಾರೆ ಎಂದರು. ಯಡಿಯೂರಪ್ಪನವರ ಅವಧಿಯಲ್ಲಿ ವರದಿ ಬಂದ ಆರು ತಿಂಗಳಲ್ಲಿ ಕ್ರಮಕೈಗೊಂಡರು. ನನ್ನ ಅವಧಿಯಲ್ಲಿ ಸರ್ವಪಕ್ಷಗಳ ಸಭೆ ಕರೆದು ಒಪ್ಪಿಗೆ ಪಡೆಯಲಾಯಿತು. ನಂತರ ಸಚಿವ ಸಂಪುಟದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಪರ ನಿರ್ಣಯ ಕೈಗೊಳ್ಳಲಾಯಿತು. ಸರ್ಕಾರ ಆದೇಶ ಹೊರಡಿಸಿ ಶೆಡ್ಯೂಲ್ 9 ಕ್ಕೆ ಸೇರಿಸಲಾಗಿದೆ ಎಂದು ಹೇಳಿದರು. ನಾವು ಸಾಮಾಜಿಕ ನ್ಯಾಯದ ಪರಿಪಾಲನೆ ಮಾಡಿರುವುದನ್ನು ಟೀಕೆ ಮಾಡುತ್ತಿದ್ದಾರೆ. ಕಾಂಗ್ರೆಸ್ ದಲಿತ, ಹಿಂದುಳಿದ ವರ್ಗದ, ಲಿಂಗಾಯತ, ಒಕ್ಕಲಿಗರ ವಿರೋಧಿಯಾಗಿದೆ. ಎಲ್ಲರಿಗೂ ನ್ಯಾಯ ಕೊಡಿಸುವ ಕೆಲಸ ಮಾಡುತ್ತಿದ್ದೇವೆ ಎಂದರು. ಅಧಿಕಾರಕ್ಕೆ ಬಂದ ಮೇಲೆ ಹಿಂಪಡೆಯುವುದಾಗಿ ಕಾಂಗ್ರೆಸ್ ಹೇಳುತ್ತಿದೆ. ಅವರು ಅಧಿಕಾರಕ್ಕೆ ಬರುವ ಪ್ರಶ್ನೆಯೇ ಇಲ್ಲ. ಇದನ್ನು ಹಿಂದೆ ತೆಗೆದುಕೊಳ್ಳುವ ಪ್ರಶ್ನೆಯೇ ಇಲ್ಲ. ಅವರಿಗೆ ಶಕ್ತಿಯೂ ಇಲ್ಲ ಅವಕಾಶವೂ ಇಲ್ಲ. ಇದನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ ಎಂದ ಮುಖ್ಯಮಂತ್ರಿಗಳು, ನಮ್ಮ ಕೆಲಸ ನೋಡಿ ತಳಮಳಗೊಂಡು ಈ ರೀತಿ ಮಾಡುತ್ತಿದ್ದಾರೆ ಎಂದರು.

ಮತದಾರರಿಗೆ ಬ್ಯಾಂಕ್ ಡಿಡಿ ಹಂಚುತ್ತಿದ್ದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಕೆಜಿಎಫ್ ಬಾಬು!



ಬೆಂಗಳೂರು, ಏ. 3– ಹಣ, ಮದ್ಯ, ಸೀರೆ, ಕುಕ್ಕರ್ ಇನ್ನಿತರ ವಸ್ತುಗಳನ್ನು ಚುನಾವಣಾ ಸಂದರ್ಭದಲ್ಲಿ ಮತದಾರರಿಗೆ ಹಂಚುವುದನ್ನು ಕೇಳಿದ್ದೇವೆ. ಆದರೆ, ಬ್ಯಾಂಕ್ ಡಿಡಿ ಮೂಲಕ ಹಣ ಹಂಚಿಕೆ ಮಾಡಿರುವ ಪ್ರಕರಣ ರಾಜಧಾನಿ ಬೆಂಗಳೂರಿನಿಂದ ವರದಿಯಾಗಿದೆ.

ಚಿಕ್ಕಪೇಟೆ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಕೆಜಿಎಫ್ ಬಾಬು ಅವರು ಜನರಿಗೆ ಡಿಡಿಗಳನ್ನು ಹಂಚುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಇಂದು ಸಂಜೆ ಕಿಂಗ್ ಕಾಲೋನಿಯಲ್ಲಿ ಜನರನ್ನು ಗುಂಪು ಕಟ್ಟಿಕೊಂಡು ಕೆಜಿಎಫ್ ಬಾಬು ಡಿಡಿ ಹಂಚುತ್ತಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಸಿದ್ದಾಪುರ ಠಾಣೆ ಪೊಲೀಸರು ದಾಳಿ ನಡೆಸಿದರು. ಸಾವಿರಾರು ಮಂದಿಯ ಗುಂಪು ಡಿಡಿ ಪಡೆಯಲು ಮುಗಿ ಬೀಳುತ್ತಿದ್ದುದನ್ನು ಕಂಡ ಪೊಲೀಸರು ಪರಿಶೀಲನೆ ನಡೆಸಿದ ವೇಳೆ ತಲಾ 1105 ರೂನಂತೆ ಒಟ್ಟು 3 ಸಾವಿರ ಮಂದಿ ಹೆಸರಿನಲ್ಲಿ ಕೆಜಿಎಫ್ ಬಾಬು ಹೊಂದಿದ್ದ ಡಿಡಿಗಳನ್ನು ಪೊಲೀಸರು ವಶಪಡಿಸಿಕೊಂಡರು.

ನಾನು ಮತದಾರರಿಗೆ ಆಮಿಷ ಒಡ್ಡಲು ಡಿಡಿ ಕೊಡುತ್ತಿರಲಿಲ್ಲ ಎಂದು ಪೊಲೀಸರಿಗೆ ತಿಳಿಸಿ ಕೆಜಿಎಫ್ ಬಾಬು, ರಂಜಾನ್ ತಿಂಗಳಿನಲ್ಲಿ ಬಡವರಿಗೆ ದಾನ ಮಾಡುವುದು ಸಂಪ್ರದಾಯವಾಗಿದ್ದು, ಅದರಂತೆ ತಾನು ಬಡ ಜನತೆಗೆ ದಾನ ಮಾಡುತ್ತಿದ್ದೆ ಎಂದು ಸ್ಪಷ್ಟಪಡಿಸಿದರು ಎನ್ನಲಾಗಿದೆ. ಆದರೂ ಪೊಲೀಸರು ಡಿಡಿಗಳನ್ನು ವಶಪಡಿಸಿಕೊಂಡು ಠಾಣೆಗೆ ಕೊಂಡೊಯ್ದಿದ್ದಾರೆ ಎಂದು ವರದಿಗಳು ತಿಳಿಸಿವೆ. ಈ ಸಂಬಂಧ ರಾತ್ರಿವರೆಗೂ ಪೊಲೀಸರು ಪ್ರಕರಣ ದಾಖಲಿಸಿರಲಿಲ್ಲ. ಆದರೆ, ಈ ಸಂಬಂಧ ಚುನಾವಣಾಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬಣ ರಾಜಕಾರಣ, ಹಸ್ತಕ್ಷೇಪ, ಬೇಕಾಬಿಟ್ಟಿ ಹೇಳಿಕೆ ನೀಡಿದರೆ ಕ್ರಮ

ಬಿಜೆಪಿ ಹೈಕಮಾಂಡ್ ಎಚ್ಚರಿಕೆ

ಬೆಳಗಾವಿ: ಬಣ ರಾಜಕಾರಣ ಮಾಡುವಂತಿಲ್ಲ, ಬೇರೊಬ್ಬರ ಕ್ಷೇತ್ರದಲ್ಲಿ ಹಸ್ತಕ್ಷೇಪ ಅಕ್ಷಮ್ಯ, ಅನುಮತಿ ಇಲ್ಲದೇ ಬಹಿರಂಗ ಹೇಳಿಕೆ ನೀಡಿದರೆ ದಿಟ್ಟ ಕ್ರಮ. ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ ಜೋಶಿ ಹಾಗೂ ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ನಿರ್ಮಲಕುಮಾರ ಸುರಾನಾ ನೇತೃತ್ವದಲ್ಲಿ, ನಗರದಲ್ಲಿ ಸೋಮವಾರ ನಡೆದ ಬಿಜೆಪಿ ಜಿಲ್ಲಾ ಕೋರ್ ಕಮಿಟಿ ಸಭೆಯಲ್ಲಿ ಈ ಮೂರೂ ವಿಷಯಗಳು ತೀವ್ರ ಚರ್ಚೆಗೆ ಒಳಗಾದವು ಎಂದು ಪಕ್ಷದ ಮೂಲಗಳು ಮಾಹಿತಿ ನೀಡಿವೆ.

ಟಿಕೆಟ್ ಆಕಾಂಕ್ಷಿಗಳ ಅಭಿಪ್ರಾಯ ಸಂಗ್ರಹ, ಬಂಡಾಯ ಶಮನ ಹಾಗೂ ಗುಂಪುಗಾರಿಕೆಗೆ ತಡೆಯೊಡ್ಡುವ ನಿಟ್ಟಿನಲ್ಲಿ ಈ ಸಭೆ ಮಹತ್ವ ಪಡೆದಿತ್ತು. ಶಾಸಕ ರಮೇಶ ಜಾರಕಿಹೊಳಿ ಹಾಗೂ ವಿಧಾನ ಪರಿಷತ್ ಸದಸ್ಯ ಲಕ್ಷ್ಮಣ ಸವದಿ ಬಣ ರಾಜಕಾರಣ ಬಿಡಬೇಕು. ಬೇರೊಬ್ಬರ ಕ್ಷೇತ್ರದಲ್ಲಿ ಹಸ್ತಕ್ಷೇಪ ಮಾಡುವುದನ್ನು ರಮೇಶ ಜಾರಕಿಹೊಳಿ ನಿಲ್ಲಿಸಬೇಕು. ಅಲ್ಲದೇ, ಮಾಧ್ಯಮಗಳ ಮುಂದೆ ಹೇಳಿಕೆ ನೀಡುವ ಮುನ್ನ ವರಿಷ್ಠರ ಅನುಮತಿ ಪಡೆಯುವುದು ಎಲ್ಲರಿಗೂ ಕಡ್ಡಾಯ. ಬೇಕಾಬಿಟ್ಟಿ ಹೇಳಿಕೆ ನೀಡಿದರೆ ಶಿಸ್ತುಕ್ರಮ ಕಟ್ಟಿಟ್ಟಬುತ್ತಿ ಎಂಬ ಸಂದೇಶವನ್ನು ಹೈಕಮಾಂಡ್ ನೀಡಿದೆ. ಪ್ರಹ್ಲಾದ ಜೋಶಿ ಇದನ್ನು ಎಲ್ಲರಿಗೂ ಮನವರಿಕೆ ಮಾಡಿದರು ಎಂದೂ ಮೂಲಗಳು ಹೇಳಿವೆ.

ಅಥಣಿಯಿಂದ ಸೇರಿದಂತೆ ಜಿಲ್ಲೆಯ ಏಳು ಕ್ಷೇತ್ರಗಳಲ್ಲಿ ತಾವು ಹೇಳಿದವರಿಗೆ ಟಿಕೆಟ್ ನೀಡಬೇಕು ಎಂದು ರಮೇಶ ಜಾರಕಿಹೊಳಿ ಪಟ್ಟು ಹಿಡಿದಿದ್ದಾರೆ. ಈ ಸಂಬಂಧ ಲಕ್ಷ್ಮಣ ಸವದಿ, ಸಂಸದರಾದ ಅಣ್ಣಾಸಾಹೇಬ ಜೊಲ್ಲೆ, ಸಂಸದ ಈರಣ್ಣ ಕಡಾಡಿ ಸೇರಿದಂತೆ ಹಲವು ನಾಯಕರು ಬಹಿರಂಗವಾಗಿ ಟೀಕಾಪ್ರಹಾರ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು.

ಈ ಬಾರಿ ಚುನಾವಣೆಗೆ ಸ್ಪರ್ಧಿಸುವುದಿಲ್ಲ




ಉಡುಪಿ: ಕರಾವಳಿಯ ವಾಜಪೇಯಿ ಎಂದೇ ಖ್ಯಾತಿ ಪಡೆದಿದ್ದ ಕುಂದಾಪುರ ವಿಧಾನಸಭಾ ಕ್ಷೇತ್ರದಿಂದ ಐದು ಬಾರಿ ಶಾಸಕರಾಗಿರುವ ಹಾಲಾಡಿ ಶ್ರೀನಿವಾಸ ಶೆಟ್ಟಿ ಅವರು ಈ ಬಾರಿ ಚುನಾವಣಾ ಕಣದಿಂದ ಹಿಂದೆ ಸರಿದಿದ್ದಾರೆ. 1999 ರಿಂದ ಇಲ್ಲಿಯವರೆಗೆ ಸೋಲಿಲ್ಲದ ಸರದಾರ ಎನಿಸಿಕೊಂಡಿದ್ದ 72 ವರ್ಷದ ಹಾಲಾಡಿ ಶ್ರೀನಿವಾಸ್ ಶೆಟ್ಟಿ ಅವರು, ತಾವು ಈ ಬಾರಿ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಸೋಮವಾರ ಪತ್ರಿಕಾ ಪ್ರಕಟಣೆ ನೀಡಿದ್ದಾರೆ. ಕುಂದಾಪುರ ವಿಧಾನಸಭಾ ಕ್ಷೇತ್ರದ ಶಾಸಕನಾಗಿ ಸತತ 5 ಅವಧಿಗೆ ಬಹು ನಿರೀಕ್ಷೆಯೊಂದಿಗೆ ಆಯ್ಕೆ ಮಾಡಿದ ಕ್ಷೇತ್ರದ ಎಲ್ಲ ಜಾತಿ, ಧರ್ಮದ ಮತದಾರ ಬಾಂಧವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಸ್ವಇಚ್ಛೆಯಿಂದ ಸ್ಪರ್ಧಿಸದಿರಲು ನಿಶ್ಚಯಿಸಿದ್ದೇನೆ ಎಂದು ಹೇಳಿದ್ದಾರೆ. ವಿಧಾನಸಭಾ ಸದಸ್ಯನಾಗಿ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ಮಾಡಿ ನಿಷ್ಠೆಯಿಂದ ಜವಾಬ್ದಾರಿ ನಿಭಾಯಿಸಿದ್ದೇನೆ. ಕುಂದಾಪುರ ಬಹಳಷ್ಟು ಗ್ರಾಮೀಣ ಭಾಗಗಳನ್ನು ಹೊಂದಿರುವ ಕ್ಷೇತ್ರವಾಗಿದ್ದು, ಎಲ್ಲ ವರ್ಗದ ಮತದಾರರಿಗೂ ಬೇಡಿಕೆಗಳನ್ನು ಹೇಳಿಕೊಳ್ಳಲು ಅವಕಾಶ ಮಾಡಿಕೊಟ್ಟು, ನೋವು ಸಂಕಷ್ಟಗಳಿಗೆ ಸ್ಪಂದಿಸಿದ ಹಾಗೂ ಜನರ ಆಶೋತ್ತರಗಳನ್ನು ಈಡೇರಿಸಿದ ಸಂತೃಪ್ತಿ ಇದೆ ಎಂದರು.

ವಿಧಾನಸಭಾ ಚುನಾವಣೆ–2023

ಪ್ರತಿಷ್ಠಿತ ವರುಣಾದಲ್ಲಿ ಸಿದ್ದರಾಮಯ್ಯ ಸ್ಪರ್ಧೆಯಿಂದ ಸದ್ದು!





ವರ್ಷ	ಗೆದ್ದವರು	ಪಕ್ಷ	ಪಡೆದ ಮತ
2008	ಸಿದ್ದರಾಮಯ್ಯ	ಕಾಂಗ್ರೆಸ್	53071
2013	ಸಿದ್ದರಾಮಯ್ಯ	ಕಾಂಗ್ರೆಸ್	84385
2018	ಡಾ.ಯತೀಂದ್ರ	ಕಾಂಗ್ರೆಸ್	96,435

2023ರ ಮತದಾರರ ವಿವರ	
ಪುರುಷರು	1,15,811
ಮಹಿಳೆಯರು	1,15,907
ಇತರೆ	12
ಒಟ್ಟು	2,31,730
ಮತಗಟ್ಟೆಗಳು	261

2018ರ ಮತದಾನ ಪ್ರಮಾಣ	
ಒಟ್ಟು ಮತ	2,21,050
ಚಲಾವಣೆಯಾಗಿದ್ದು	1,74,457
ಶೇಕಡ	78.92

■ ಎಸ್.ಬಿ.ದೇವರಾಜ

ಮೈಸೂರು ಜಿಲ್ಲೆಯ ವರುಣಾ ವಿಧಾನಸಭಾ ಕ್ಷೇತ್ರ 2008ರಲ್ಲಿ ರಚನೆಯಾಗಿ, ಈವರೆಗೆ ಮೂರು ಚುನಾವಣೆಗಳು ನಡೆದಿದ್ದು, 4ನೇ ಚುನಾವಣೆಗೆ ಸಜ್ಜಾಗಿದೆ.

ಮೊದಲ ಅವಧಿಯಲ್ಲಿ ಪ್ರತಿಪಕ್ಷ ನಾಯಕ ಹಾಗೂ 2ನೇ ಅವಧಿಯಲ್ಲಿ ಮುಖ್ಯಮಂತ್ರಿ ನೀಡಿದ ಹೆಗ್ಗಳಿಕೆ ಈ ಕ್ಷೇತ್ರ ಹೊಂದಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತೆ ಅಖಾಡಕ್ಕಿಳಿದಿರುವ ಕಾರಣದಿಂದ ಈ ಬಾರಿಯೂ ಹೈ ವೋಲ್ಟೇಜ್ ಕ್ಷೇತ್ರವಾಗಿ ರಾಜ್ಯದ ಗಮನ ಸೆಳೆದಿದೆ.

ಕುಲದೀಪ್‌ಸಿಂಗ್ ನೇತೃತ್ವದ ಕ್ಷೇತ್ರ ಮರು ವಿಂಗಡಣಾ ವರದಿಯಂತೆ 2008ರಲ್ಲಿ ಮೈಸೂರು, ನಂಜನಗೂಡು ಹಾಗೂ ತಿ.ನರಸೀಪುರ ತಾಲೂಕುಗಳ ಭಾಗಶಃ ಪ್ರದೇಶಗಳನ್ನು ಒಳಗೊಂಡಂತೆ ವರುಣಾ ಕ್ಷೇತ್ರ ರಚನೆಯಾಗಿದೆ. 2008ರಲ್ಲಿ ರದ್ದಾದ ಸಂತೆಮರಳ್ಳಿ ಕ್ಷೇತ್ರದಲ್ಲಿದ್ದ ಕವಲಂದೆ ಹೋಬಳಿಯ ಭಾಗಶಃ ಪ್ರದೇಶ, ಈ ಹಿಂದೆ ಚಾಮುಂಡೇಶ್ವರಿ ಕ್ಷೇತ್ರದಲ್ಲಿದ್ದ ವರುಣಾ ಹೋಬಳಿ, ತಿ.ನರಸೀಪುರ ಮೀಸಲು ಕ್ಷೇತ್ರ ವ್ಯಾಪ್ತಿಯಲ್ಲಿದ್ದ ನಂಜನಗೂಡು ತಾಲೂಕಿನ ಬಿಳಿಗೆರೆ ಹೋಬಳಿ ಹಾಗೂ ಚಿಕ್ಕಯ್ಯನ ಛತ್ರ ಹೋಬಳಿ, ಕಸಬಾ ಹೋಬಳಿ ಭಾಗ ಈ ವರುಣಾ ಕ್ಷೇತ್ರದ ವ್ಯಾಪ್ತಿಗೆ ಸೇರಿದೆ. ಸಿದ್ದರಾಮಯ್ಯ ಅವರ ಹುಟ್ಟೂರು ಸಿದ್ದರಾಮನಹುಂಡಿ ಕೂಡ ಇದೇ ಕ್ಷೇತ್ರದಲ್ಲಿದೆ. ಇಲ್ಲಿ ವೀರಶೈವ ಲಿಂಗಾಯತರು, ಕುರುಬರು, ಅಲ್ಪಸಂಖ್ಯಾತರು, ಹಿಂದುಳಿದವರು ಹಾಗೂ ದಲಿತರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ.

ಅದ್ವಿತೀಯ ಗೆಲುವು: ಈವರೆಗಿನ ಮೂರು ಚುನಾವಣೆಗಳಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ 2 ಬಾರಿ ಹಾಗೂ ಅವರ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ ಒಮ್ಮೆ ಗೆಲುವು ಸಾಧಿಸಿ, ಶಾಸಕರಾಗಿದ್ದಾರೆ. 2008ರ ಮೊದಲ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿದ್ದರಾಮಯ್ಯನವರು 71,908 (ಶೇ.50.23) ಮತಗಳೊಂದಿಗೆ ಬಿಜೆಪಿ ಅಭ್ಯರ್ಥಿ ಎಲ್.ರೇವಣ್ಣ ಸಿದ್ದಯ್ಯ(53071, ಶೇ.37.07) ವಿರುದ್ಧ 18,837 ಮತಗಳ ಅಂತರದಲ್ಲಿ ಗೆಲುವು ದಾಖಲಿಸಿದ್ದರು. ಮೂರನೇ ಸ್ಥಾನದಲ್ಲಿ ಬಿಎಸ್‌ಪಿ ಅಭ್ಯರ್ಥಿ ಪಿ.ಗುರುಪಾದಸ್ವಾಮಿ 5426 ಮತ ಪಡೆದಿದ್ದರು. ಆಗ ಸಿದ್ದರಾಮಯ್ಯನವರು ಪ್ರತಿಪಕ್ಷ ನಾಯಕರಾದರು. 2013ರ ಚುನಾವಣೆಯಲ್ಲಿ ಕೆಜೆಪಿ ಅಭ್ಯರ್ಥಿ ಕಾಪು ಸಿದ್ದಲಿಂಗಸ್ವಾಮಿ ವಿರುದ್ಧ ಜಯ ಗಳಿಸಿದರು. ಸಿದ್ದರಾಮಯ್ಯ 84,385(ಶೇ.52.53) ಹಾಗೂ ಕಾಪು ಸಿದ್ದಲಿಂಗಸ್ವಾಮಿ 54744(ಶೇ.34.08) ಮತ ಪಡೆದರೆ ಜೆಡಿಎಸ್‌ನ ಚೆಲುವರಾಜ್‌ಗೆ 2686(ಶೇ.167) ಮತ ಸಂದಾಯವಾಗಿದ್ದವು. 29641 ಮತಗಳ ಅಂತರದಲ್ಲಿ ಚುನಾವಣೆ ಗೆದ್ದಿದ್ದ ಸಿದ್ದರಾಮಯ್ಯ, ಮುಖ್ಯಮಂತ್ರಿಯಾಗಿ ಡಿ.ದೇವರಾಜ ಅರಸು ಅವರ ನಂತರ 5 ವರ್ಷ ಪೂರ್ಣ ಆಡಳಿತ ನಡೆಸಿದರು.

ತಂದೆಗಿಂತ ಅಧಿಕ ಮತ: ಆರಂಭದಿಂದಲೂ ಸಿದ್ದರಾಮಯ್ಯ ಅವರ ಹಿರಿಯ ಪುತ್ರ ರಾಕೇಶ್ ಸಿದ್ದರಾಮಯ್ಯ ವರುಣಾ ಕ್ಷೇತ್ರದಲ್ಲಿ ಪಕ್ಷ ಸಂಘಟನೆಯಲ್ಲಿ ಸಕ್ರಿಯರಾಗಿದ್ದರು. 2018ರ ಚುನಾವಣೆಯಲ್ಲಿ ಅವರನ್ನೇ ಸ್ಪರ್ಧೆಗಿಳಿಸುವ ಯೋಜನೆಯಿತ್ತು. ಆದರೆ ಅವರ ಅಕಾಲಿಕ ಮರಣದ ಹಿನ್ನೆಲೆಯಲ್ಲಿ ದ್ವಿತೀಯ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯ, ತಂದೆಯ ಪರವಾಗಿ ಕ್ಷೇತ್ರದ ಉಸ್ತುವಾರಿ ನೋಡಿಕೊಳ್ಳುತ್ತಿದ್ದರು. ಆವರೆಗೆ ರಾಜಕೀಯದಿಂದ ದೂರವಿದ್ದ ಡಾ.ಯತೀಂದ್ರ 2018ರ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಬೇಕಾಯ್ತು. ಆ ಚುನಾವಣೆಯಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ ತಮ್ಮ ತಂದೆಗಿಂತಲೂ ಅಧಿಕ ಮತಗಳನ್ನು ಗಳಿಸಿದ್ದು ವಿಶೇಷ. ಪ್ರತಿಸ್ಪರ್ಧಿ ಬಿಜೆಪಿಯ ಟಿ.ಬಸವರಾಜು ವಿರುದ್ಧ 58,616 ಮತಗಳ ಭಾರೀ ಅಂತರದ ಗೆಲುವು ದಾಖಲಿಸಿದರು. ಡಾ.ಯತೀಂದ್ರ ಸಿದ್ದರಾಮಯ್ಯ– 96435 (ಶೇ.55.09), ಟಿ.ಬಸವರಾಜು 37819(ಶೇ.21.6) ಹಾಗೂ ಜೆಡಿಎಸ್‌ನ ಎಸ್.ಎಂ.ಅಭಿಷೇಕ್ 28123 (ಶೇ.16.07) ಮತ ಪಡೆದರು. ಪುತ್ರನಿಗೆ ವರುಣಾ ಕ್ಷೇತ್ರ ಬಿಟ್ಟುಕೊಟ್ಟು ಚಾಮುಂಡೇಶ್ವರಿ ಕ್ಷೇತ್ರಕ್ಕೆ ಮರಳಿದ್ದ ಸಿದ್ದರಾಮಯ್ಯ, ಅಲ್ಲಿ ಜೆಡಿಎಸ್ ಅಭ್ಯರ್ಥಿ ಜಿ.ಟಿ.ದೇವೇಗೌಡರ ವಿರುದ್ಧ ಭಾರೀ ಅಂತರದಲ್ಲಿ ಪರಾಜಿತರಾದರು.

ಗಮನಾರ್ಹ ಸಂಗತಿಗಳು: ಸಿದ್ದರಾಮಯ್ಯನವರಿಗೆ ವರುಣಾದಿಂದ ಮೊದಲ ಬಾರಿ ಗೆದ್ದಾಗ ಪ್ರತಿಪಕ್ಷ ನಾಯಕ ಸ್ಥಾನ ಹಾಗೂ 2ನೇ ಬಾರಿ ಗೆದ್ದಾಗ ರಾಜ್ಯದ ಮುಖ್ಯಮಂತ್ರಿ ಗಾದಿ ಒಲಿಯಿತು. ಮೊದಲ ಚುನಾವಣೆಯಲ್ಲಿ ಪ್ರತಿಸ್ಪರ್ಧಿಗಳಾಗಿದ್ದ ಎಲ್.ರೇವಣ್ಣ ಸಿದ್ದಯ್ಯ ಹಾಗೂ ಗುರುಪಾದಸ್ವಾಮಿ 2ನೇ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಗೆಲುವಿಗೆ ಶ್ರಮಿಸಿದರು. 2018ರ ಚುನಾವಣೆ ವೇಳೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಪುತ್ರ ಬಿ.ವೈ.ವಿಜಯೇಂದ್ರ, ಕ್ಷೇತ್ರದಲ್ಲೇ ಮನೆ ಮಾಡಿ 22 ದಿನಗಳ ಕಾಲ ನಿರಂತರ ಪ್ರವಾಸ ಮಾಡಿದ್ದರಾದರೂ ಅಂತಿಮವಾಗಿ ಸ್ಪರ್ಧಿಸಲು ಸಾಧ್ಯವಾಗಲಿಲ್ಲ.

ಮತ್ತೆ ಅಖಾಡಕ್ಕೆ ಸಿದ್ದರಾಮಯ್ಯ: 2023ರ ಚುನಾವಣೆಗೆ ವರುಣಾ ಕ್ಷೇತ್ರದಿಂದ ಹಾಲಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಮಾತ್ರ ಕೆಪಿಸಿಸಿಗೆ ಅರ್ಜಿ ಸಲ್ಲಿಸಿದ್ದರು. ಹಾಗೆಯೇ ಸಿದ್ದರಾಮಯ್ಯನವರು ಅರ್ಜಿ ಸಲ್ಲಿಸಿದ್ದರಾದರೂ ಕ್ಷೇತ್ರದ ಹೆಸರು ನಮೂದಿಸಿರಲಿಲ್ಲ. ಪರಿಣಾಮ ಬಾದಾಮಿ, ಕೋಲಾರ, ಚಾಮುಂಡೇಶ್ವರಿ, ವರುಣಾ ಹೀಗೆ ಯಾವ ಕ್ಷೇತ್ರದಲ್ಲಿ ಸ್ಪರ್ಧಿಸುತ್ತಾರೆಂಬ ಗೊಂದಲ ಮುಂದುವರೆದಿತ್ತು. ಇದು ಪ್ರತಿಪಕ್ಷಗಳ ಟೀಕೆಗೂ ಕಾರಣವಾಗಿತ್ತಲ್ಲದೆ, ಕಾಂಗ್ರೆಸ್ ಪಾಳಯದಲ್ಲೂ ಚರ್ಚೆ ಜೋರಾಗಿತ್ತು. ಈ ನಡುವೆ ಡಾ.ಯತೀಂದ್ರ, ನಮ್ಮ ತಂದೆಯವರನ್ನು ವರುಣಾಗೆ ಆಹ್ವಾನಿಸುವುದಾಗಿ ತಿಳಿಸಿದ್ದರು. ಅತ್ತ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ರಾಜ್ಯ ಕಾಂಗ್ರೆಸ್ ಚುನಾವಣಾ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಇನ್ನಿತರ ನಾಯಕರು 'ವರುಣಾ'ದಲ್ಲಿ ಸ್ಪರ್ಧಿಸುವುದೇ ಸುರಕ್ಷಿತ ಎಂಬ ಸಲಹೆ ನೀಡಿದ್ದರು. ಹಾಗೆಯೇ ಕಾಂಗ್ರೆಸ್ ಅಭ್ಯರ್ಥಿಗಳ ಮೊದಲ ಪಟ್ಟಿಯಲ್ಲಿ ಸಿದ್ದರಾಮಯ್ಯ ಅವರಿಗೆ ವರುಣಾ ಟಿಕೆಟ್ ಘೋಷಣೆಯಾಗಿದ್ದು, ಮೂರನೇ ಬಾರಿ ಅಖಾಡಕ್ಕಿಳಿದಿದ್ದಾರೆ. ಜೊತೆಗೆ ಕೋಲಾರದಿಂದಲೂ ಸ್ಪರ್ಧಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ವಿಜಯೇಂದ್ರ ಸ್ಪರ್ಧಿಸುತ್ತಾರಾ?

2018ರ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಪುತ್ರ ಬಿ.ವೈ.ವಿಜಯೇಂದ್ರ, ಡಾ.ಯತೀಂದ್ರ ಸಿದ್ದರಾಮಯ್ಯ ವಿರುದ್ಧ ಕಣಕ್ಕಿಳಿಯುವುದು ನಿಶ್ಚಿತ ಎನ್ನುವಂತಿತ್ತು. ಆದರೆ ಹಾಲಿ–ಮಾಜಿ ಸಿಎಂಗಳ ಪುತ್ರರ ಹಣಾ ಹಣಿ ಕಡೇಗಳಿಗೆಯಲ್ಲಿ ತಪ್ಪಿ ಹೋಯಿತು. ಇದೀಗ ಮತ್ತೆ ವಿಜಯೇಂದ್ರ ಅವರನ್ನು ಕ್ಷೇತ್ರದ ಜನ ಸ್ಪರ್ಧೆಗೆ ಆಹ್ವಾನಿಸಿದ್ದರು. ಆದರೆ ಇತ್ತೀಚೆಗೆ ಬಿ.ಎಸ್. ಯಡಿಯೂರಪ್ಪ ಹಾಗೂ ಬಿ.ವೈ.ವಿಜಯೇಂದ್ರ ಮೈಸೂರಿಗೆ ಬಂದಿದ್ದಾಗ ಗೊಂದಲಕ್ಕೆ ತೆರೆ ಎಳೆ ಯಲು ಯತ್ನಿಸಿದರು. ವಿಜಯೇಂದ್ರ ಶಿಕಾರಿಪುರ ಕ್ಷೇತ್ರದಿಂದಲೇ ಸ್ಪರ್ಧಿಸುತ್ತಾರೆ, ವರುಣಾಗೆ ಬರುವುದಿಲ್ಲ ಎಂದು ಬಿಎಸ್‌ವೈ ಹೇಳಿದರೆ, ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು. ಶಿಕಾರಿಪುರದಿಂದಲೂ ಟಿಕೆಟ್ ನೀಡಿದರೆ ಮಾತ್ರ ವರುಣಾದಿಂದಲೂ ಸ್ಪರ್ಧಿಸಲು ಒಪ್ಪುತ್ತಾರೆ ಎಂಬುದು ಮೂಲಗಳ ಮಾಹಿತಿ. ಅಂತಿಮ ಕ್ಷಣದಲ್ಲಿ ಹೀಗೆ ಆಗಲೂಬಹುದು ಎಂಬುದು ಕೆಲವರ ಅಭಿಪ್ರಾಯ. ಹಾಗಾಗಿ ವಿಜಯೇಂದ್ರ ವರುಣಾದಿಂದ ಸ್ಪರ್ಧಿಸುವುದೇ ಇಲ್ಲ ಎಂದು ನಿಶ್ಚಿತವಾಗಿ ಹೇಳಲಾಗದು.

ಬಿಜೆಪಿ ಆಕಾಂಕ್ಷಿಗಳ ದೊಡ್ಡ ಪಟ್ಟಿ

ಕಾಂಗ್ರೆಸ್‌ನಿಂದ ಮಾಜಿ ಸಿಎಂ ಸಿದ್ದರಾಮಯ್ಯ, ಜೆಡಿಎಸ್‌ನಿಂದ ಮತ್ತೆ ಅಭಿಷೇಕ್ ಅಖಾಡಕ್ಕಿಳಿಯುವುದು ನಿಶ್ಚಿತವಾಗಿದೆ. ಆದರೆ ಬಿಜೆಪಿ ಅಭ್ಯರ್ಥಿ ಘೋಷಣೆ ಮಾತ್ರ ಬಾಕಿ ಇದೆ. ಸದ್ಯ ಬಿಜೆಪಿಯಲ್ಲಿ ಸದಾನಂದ, ಎಲ್.ಆರ್.ಮಹದೇವಸ್ವಾಮಿ, ಕಾಪು ಸಿದ್ದಲಿಂಗಸ್ವಾಮಿ, ಮಂಗಳಾ ಸೋಮಶೇಖರ್, ಮಲ್ಲರಾಜಯ್ಯನಹುಂಡಿ ಗುರುಸ್ವಾಮಿ, ತೋಟದಪ್ಪ ಬಸವರಾಜು, ಶರತ್ ಪುಟ್ಟಬುದ್ಧಿ, ಪ್ರತಾಪ್ ದೇವನೂರು ಸೇರಿದಂತೆ ಅನೇಕರು ಟಿಕೆಟ್ ಆಕಾಂಕ್ಷಿಗಳಾಗಿದ್ದಾರೆ. ಆದರೆ ಬಿಜೆಪಿ ಅಂತಿಮವಾಗಿ ಯಾರನ್ನು ಕಣಕ್ಕಿಳಿಸಲಿದೆ ಎಂದು ಕಾದು ನೋಡಬೇಕಿದೆ.

ಯಾವುದೇ ಕಾರಣಕ್ಕೂ ಮಾನಸಿಕ ಚಿಂತನೆಗೆ ಒಳಗಾಗಿ ನಿಮ್ಮ ಪ್ರಾಣ ಹೋಗಬಾರದು



ಮಂಡ್ಯ: ಜೀವನದಲ್ಲಿ ಕೊನೆ ಹಂತಕ್ಕೆ ಬಂದುಬಿಟ್ಟಿದ್ದೇನೆ, ದೇವರು ನನ್ನನ್ನು ಕರೆದುಕೊಂಡು ಬಿಡ್ತಾನೆ ಎಂದು ತಿಳಿದುಕೊಂಡಿದ್ದೀರಾ? ಮನಸ್ಸಿನಲ್ಲಿರುವ ಈ ಯೋಚನೆ ತೆಗೆದು ಹಾಕಿ. ಶಿವ ನಿಮ್ಮನ್ನು ಸದ್ಯಕ್ಕೆ ಕರೆದುಕೊಳ್ಳಲ್ಲ. ನೀವು ಮಾಡಲಿಕ್ಕೆ ಆಗದ ಸಾಧನೆ ನಾನು ಮಾಡುತ್ತೇನೆ. ಇದನ್ನು ನೀವು ನಿಮ್ಮ ಕಣ್ಣಾರೆ ನೋಡಬೇಕು. ನಿಮ್ಮ ಆಸೆಯನ್ನು ಮಕ್ಕಳಾಗಿ ಈಡೇರಿಸುವ ಸವಾಲು ಸ್ವೀಕರಿಸಿದ್ದೇನೆ. ಅಲ್ಲಿಯವರೆಗೂ ನೀವು ಬದುಕಿರುತ್ತೀರಿ. ಯಾವುದೇ ಕಾರಣಕ್ಕೂ ಮಾನಸಿಕ ಚಿಂತನೆಗೆ ಒಳಗಾಗಿ ನಿಮ್ಮ ಪ್ರಾಣ ಹೋಗಬಾರದು ಎಂದು ದೇವೇಗೌಡರ ಬಗ್ಗೆ ಕುಮಾರಸ್ವಾಮಿ ಭಾವುಕರಾಗಿ ಮಾತನಾಡಿದರು. ಕೆಆರ್ ಪೇಟೆಯಲ್ಲಿ ಮಾತನಾಡಿದ ಹೆಚ್‌ಡಿಕೆ, ದೇವೇಗೌಡರು 60 ವರ್ಷ ರಾಜಕೀಯ ಮಾಡಿದ್ದಾರೆ. ಅದರಲ್ಲಿ ಅಧಿಕಾರ ಮಾಡಿದ್ದು 10 ತಿಂಗಳು ಪ್ರಧಾನ ಮಂತ್ರಿಯಾಗಿ, 15 ತಿಂಗಳು ಸಿಎಂ ಆಗಿ, 2–3 ವರ್ಷ ನೀರಾವರಿ ಮಂತ್ರಿಯಾಗಿ. ಉಳಿದ ವರ್ಷಗಳು ವಿರೋಧ ಪಕ್ಷದ ನಾಯಕರಾಗಿ ಕೆಲಸ ಮಾಡಿದ್ದಾರೆ. ಬಡವರು, ರೈತರ ಪರ ಕಾರ್ಯಕ್ರಮ ತರುವುದು ದೇವೇಗೌಡರ ಕನಸು. ಅವರ ಕನಸು ನನಸು ಮಾಡಲಿಕ್ಕೆ ನಾನು ಶ್ರಮಪಡುತ್ತಿದ್ದೇನೆ ಎಂದು ನುಡಿದರು.



ಮೈಸೂರು ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿ ಮಾಜಿ ಮೇಯರ್ ಸಂದೇಶ್‌ಸ್ವಾಮಿ ಸೋಮವಾರ ಬನ್ನಿಮಂಟಪ ಬಡಾವಣೆ ನಿವಾಸಿಗಳನ್ನು ಭೇಟಿ ನೀಡಿ, ಬಿಜೆಪಿ ಬೆಂಬಲಿಸುವಂತೆ ಮನವಿ ಮಾಡಿದರು.

ರಾಹುಲ್ ಗಾಂಧಿ ಅನರ್ಹತೆ: ಕಾಂಗ್ರೆಸ್‌ಗೆ ಪ್ರಚಾರದ ವಿಷಯ

ರಾಜ್ಯದಲ್ಲಿ ಬಿಜೆಪಿ ಸೋಲಿಗೆ ಕೊಡುಗೆ ನೀಡುತ್ತದೆ-ವೀರಪ್ಪ ಮೊಯ್ಲಿ



ಬೆಂಗಳೂರು: ರಾಹುಲ್ ಗಾಂಧಿ ಅವರನ್ನು ಲೋಕಸಭಾ ಸದಸ್ಯ ಸ್ಥಾನದಿಂದ ಅನರ್ಹಗೊಳಿಸಿರುವುದು ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಪ್ರಚಾರದ ವಿಷಯವಾಗಲಿದೆ ಮತ್ತು ಇದು ರಾಜ್ಯದಲ್ಲಿ ಬಿಜೆಪಿ ಸೋಲಿಗೆ ಕೊಡುಗೆ ನೀಡುತ್ತದೆ ಎಂದು ಪಕ್ಷದ ಹಿರಿಯ ನಾಯಕ ಎಂ.ವೀರಪ್ಪ ಮೊಯ್ಲಿ ಸೋಮವಾರ ಹೇಳಿದ್ದಾರೆ.

ಸುದ್ದಿಸಂಸ್ಥೆ ಪಿಟಿಐಗೆ ನೀಡಿದ ಸಂದರ್ಶನದಲ್ಲಿ, ರಾಜ್ಯದಲ್ಲಿ ಕಾಂಗ್ರೆಸ್‌ಗೆ ಬೆಂಬಲದ 'ಅಲೆ' ಇದೆ ಮತ್ತು ಭ್ರಷ್ಟಾಚಾರ ವಿಷಯಗಳ ಬಗ್ಗೆ ತಮ್ಮ ಪಕ್ಷದ ಪ್ರಚಾರವು ಕೆಲಸ ಮಾಡಿದೆ. ಆದರೆ ಬಿಜೆಪಿಯು 'ಬಲವಾದ ಆಡಳಿತ ವಿರೋಧಿ ಅಲೆ'ಯನ್ನು ಎದುರಿಸುತ್ತಿದೆ ಎಂದು ಹೇಳಿದರು.

ಚುನಾವಣೆ ನಡೆಯಲಿರುವ ರಾಜ್ಯದಲ್ಲಿ ರಾಹುಲ್ ಗಾಂಧಿಯವರ ಅನರ್ಹತೆಯು ಕಾಂಗ್ರೆಸ್‌ನ 'ರಾಜಕೀಯ ಲಾಭ'ಕ್ಕೆ ಸಹಾಯ ಮಾಡುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಮೊಯ್ಲಿ, ಖಂಡಿತವಾಗಿ, ಇದು (ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಅನರ್ಹತೆ) ಪ್ರಚಾರದ ವಿಷಯವಾಗಿದೆ. 'ಇದು ದೇಶದ ಎಲ್ಲೆಡೆ ಇದೆ; ಇದು ಸೇಡಿನ ರಾಜಕೀಯದ ಉತ್ತುಂಗವನ್ನು ತೋರಿಸುತ್ತದೆ' ಎಂದು ಹೇಳಿದರು. ಬಿಜೆಪಿ ಪತನಕ್ಕೆ ಕಾರಣವಾಗುವ ಅಂಶಗಳಲ್ಲಿ ಒಂದಾಗಿರುವ ಈ ವಿಷಯವು ಕಾಂಗ್ರೆಸ್ ಪರ ಭಾಗಶಃ ಅನುಕಂಪದ ಅಲೆಯನ್ನು ಸೃಷ್ಟಿಸುತ್ತದೆ ಎಂದು ಅವರು ಹೇಳಿದರು.

ತೊಡೆ ತಟ್ಟಿ ಹೇಳ್ತೇನೆ ಅಪ್ಪ–ಮಗ ಅಖಾಡಕ್ಕೆ ಬರಲಿ: ಈಶ್ವರಪ್ಪಗೆ ಸವಾಲೊಡ್ಡಿದ ಆಯನೂರು ಮಂಜುನಾಥ್



ಶಿವಮೊಗ್ಗ: ಶಿವಮೊಗ್ಗದಲ್ಲಿ ಕೇವಲ ಪ್ರಚೋದನೆ ಮಾಡಿ ಮಾತನಾಡುವುದೇ ಈಶ್ವರಪ್ಪನ ಸಾಧನೆ. ಅವರ ಸವಾಲನ್ನು ನಾನು ಸ್ವೀಕರಿಸಿ ಬಂಡಾಯ ಅಭ್ಯರ್ಥಿಯಾಗಿ ನಿಲ್ಲಲು ರೆಡಿಯಾಗಿದ್ದೇನೆ. ಈಗ ಅಖಾಡಕ್ಕೆ ತೊಡೆತಟ್ಟಿ ಇಳಿದಿದ್ದೇನೆ, ಪುಕ್ಕಲರಂತೆ ಹಿಂದೆ ಸರಿಯದೇ ಅಪ್ಪ– ಮಗ ಚುನಾವಣಾ ಅಖಾಡಕ್ಕೆ ಬರಲಿ ಎಂದು ವಿಧಾನಪರಿಷತ್ ಸದಸ್ಯ ಆಯನೂರು ಮಂಜುನಾಥ್ ಸವಾಲು ಹಾಕಿದ್ದಾರೆ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ಈಶ್ವರಪ್ಪ ನನಗೆ ಪತ್ರಿಕಾಗೋಷ್ಠಿಯಲ್ಲಿ ಏಕವಚನದಲ್ಲಿ ಅವನ್ಯಾರು ಎಂದು ಕರೆದಿದ್ದಾರೆ. ಅವನ್ಯಾವ ಲೆಕ್ಕ ಎಂದು ಹೇಳಿದ್ದಾರೆ. ನನಗೆ ಏಕವಚನದಲ್ಲಿ ಮಾತನಾಡಿದ ಈಶ್ವರಪ್ಪ ವಿರುದ್ಧ ಖಚಿತವಾಗಿ ಈ ಬಾರಿ ಶಿವಮೊಗ್ಗದಲ್ಲಿ ನಿಲ್ಲುತ್ತೇನೆ. ಕಣಕ್ಕಿಳಿಯಲೇಬೇಕೆಂಬ ಇಚ್ಛೆ ಅನುಸಾರ ಕಣಕ್ಕಿಳಿಯುತ್ತಿದ್ದೇನೆ. ನನ್ನ ಆಸೆಗೆ ಪೂರಕವಾಗಿ ಬಿಜೆಪಿ ಟಿಕೆಟ್ ಲಕ್ಷಣ ಕಂಡು ಬಂದಿಲ್ಲ. ಬದಲಾಗಿ ಅವರವರ ಮಕ್ಕಳ ಹೆಸರು ಓಡಾಡುತ್ತಿದೆ. ನಾನು ಎಂ.ಎಲ್.ಸಿ. ಸ್ಥಾನಕ್ಕೆ ರಾಜೀನಾಮೆ ನೀಡಿ ಅಖಾಡಕ್ಕೆ ಬರುತ್ತೇನೆ. ತೊಡೆ ತಟ್ಟಿ ನಾನು ಬಂದಿದ್ದೇನೆ. ಅಪ್ಪ–ಮಗ ಬಂದು ನನ್ನನ್ನು ಎದುರಿಸಿ ಎಂದು ಈಶ್ವರಪ್ಪಗೆ ಸವಾಲು ಹಾಕಿದರು.

ಶೀಘ್ರ ವಿಧಾನಪರಿಷತ್ ಸದಸ್ಯ ಸ್ಥಾನಕ್ಕೆ ರಾಜೀನಾಮೆ



ಶಿವಮೊಗ್ಗ: ವಿಧಾನಸಭೆ ಚುನಾವಣೆಗೆ ಶಿವಮೊಗ್ಗ ನಗರ ಕ್ಷೇತ್ರದಿಂದ ಸ್ಪರ್ಧಿಸುವ ಇಂಗಿತದಿಂದ ಶೀಘ್ರ ಪರಿಷತ್ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಲಿದ್ದೇನೆ ಎಂದು ಸೋಮವಾರ ಇಲ್ಲಿ ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಸದಸ್ಯ ಆಯನೂರು ಮಂಜುನಾಥ್ ಹೇಳಿದರು.

ಚುನಾವಣೆಗೆ ಸ್ಪರ್ಧಿಸಲು ಬಿಜೆಪಿಯಲ್ಲಿ ನನಗೆ ಅವಕಾಶ ಸಿಗುವ ಸಾಧ್ಯತೆ ಇಲ್ಲ. ಆದರೂ ಕಣದಿಂದ ಸ್ಪರ್ಧಿಸುವ ನಿರ್ಧಾರದಿಂದ ಹಿಂದೆ ಸರಿಯುವುದಿಲ್ಲ ಎಂದು ಹೇಳಿದ ಅವರು, ಕಾಂಗ್ರೆಸ್ ಸೇರುವ ವಿಚಾರದಲ್ಲಿ ಪ್ರತಿಕ್ರಿಯಿಸಲು ನಿರಾಕರಿಸಿದರು. ಈಶ್ವರಪ್ಪ ಹಾಗೂ ಅವರ ಪುತ್ರ ಯಾರೇ ನಿಂತರೂ ಸ್ಪರ್ಧೆ ಮಾಡುವೆ ಎಂದು ತಿಳಿಸಿದರು.

ಚುನಾವಣೆಯಲ್ಲಿ ಕಣಕ್ಕೆ ಇಳಿಯಬೇಕೆಂಬ ಕಾರಣಕ್ಕೆ ನನ್ನ ಭಾವನೆಯನ್ನು ಈ ಹಿಂದೆ ಪ್ರಕಟಿಸಿದ್ದೇನೆ. ಬಿಜೆಪಿ ನಾಯಕರ ಗಮನಕ್ಕೆ ತಂದಿದ್ದೆ. ಅದರೆ ಪಕ್ಷದಿಂದ ನನಗೆ ಟಿಕೆಟ್ ಸಿಗುವ ಲಕ್ಷಣಗಳು ಕಾಣುತ್ತಿಲ್ಲ ಎಂದರು. ಬಿಜೆಪಿ ಪಕ್ಷದ ಬಗ್ಗೆ ನನಗೆ ಆಕ್ಷೇಪವಿಲ್ಲ. ಆದರೆ ನಾಯಕರ ವಿರೋಧವಿದೆ. ಬಿ.ಎಸ್.ಯಡಿಯೂರಪ್ಪ ಪುತ್ರರನ್ನ ರಾಜಕೀಯಕ್ಕೆ ಕರೆತಂದಾಗ ವಿರೋಧಿಸಿದ್ದ ಈಶ್ವರಪ್ಪ ಈಗ ತಮ್ಮ ಮಗನನ್ನ ಚುನಾವಣೆ ರಾಜಕೀಯಕ್ಕೆ ಕರೆತರುವ ಪ್ರಯತ್ನ ಮಾಡುತ್ತಿರುವುದು ಏಕೆ ಎಂದು ವಾಗ್ದಾಳಿ ನಡೆಸಿದರು.

ಪುಕ್ಕಲನಂತೆ ಹಿಂದೆ ಸರಿಯಬೇಡಿ: ಈಶ್ವರಪ್ಪ ಆಡಿದ ಮಾತು ನನಗೆ ಇಷ್ಟವಾಗಿಲ್ಲ. ಈಶ್ವರಪ್ಪ ಅವರಿಗೆ ಯಾವಾಗಲೂ ಬಹುವಚನ ಪ್ರಯೋಗ ಮಾಡಿಯೇ ಗೊತ್ತಿಲ್ಲ. ಅವಂದೇನು ಲೆಕ್ಕ ಎಂದು ಹೇಳಿದ್ದಾರೆ. ನಾನು ಈಶ್ವರಪ್ಪನವರ ಮಾತನ್ನು ಸವಾಲಾಗಿ ಸ್ವೀಕರಿಸಿದ್ದೇನೆ. ಅವರು ಸಮರ್ಥರಿದ್ದರೆ ನನ್ನನ್ನು ಎದುರಿಸಲಿ. ಅಪ್ಪ–ಮಗ ಚುನಾವಣಾ ಅಖಾಡಕ್ಕೆ ಬಂದು ನನ್ನನ್ನು ಎದುರಿಸಿ. ನಾನು ಅಖಾಡಕ್ಕೆ ಇಳಿದು ತೊಡೆ ತಟ್ಟಿದ್ದೇನೆ. ಪುಕ್ಕಲನಂತೆ ಹಿಂದೆ ಸರಿಯಬೇಡಿ. ಬನ್ನಿ ಅಖಾಡಕ್ಕೆ, ನನ್ನನ್ನು ಎದುರಿಸಿ. ನಾನು ಎಂ.ಎಲ್.ಸಿ. ಸ್ಥಾನಕ್ಕೆ ರಾಜೀನಾಮೆ ನೀಡಿ ಅಖಾಡಕ್ಕೆ ಬರುತ್ತೇನೆ. ನೀವು ಬಂದು ನನ್ನನ್ನು ಎದುರಿಸಿ. ಅವರ ನೋಟ್ ಮಿಷನ್ ಮುಂದೆ ನಾನು ಚುನಾವಣೆಗೆ ನಿಲ್ಲಲು ರೆಡಿಯಾಗಿದ್ದೇನೆ ಎಂದು ಹೇಳಿದರು.

ಪ್ರಚೋದನಕಾರಿ ಭಾಷಣಕ್ಕಷ್ಟೇ ಸೀಮಿತ: ಕೇವಲ ಪ್ರಚೋದನೆ ಮಾಡಿ ಮಾತನಾಡುವುದೇ ಈಶ್ವರಪ್ಪ ಸಾಧನೆಯಾಗಿದೆ. ಶಿವಮೊಗ್ಗದಲ್ಲಿ ಒಂದೇ ಒಂದು ಯೋಜನೆಯನ್ನೂ ಈವರೆಗೂ ತಂದಿಲ್ಲ. ಶಿವಮೊಗ್ಗದಲ್ಲಿ ಏನಾದರೂ ಅಭಿವೃದ್ಧಿ ಆಗಿದ್ದರೆ ಅದು ಯಡಿಯೂರಪ್ಪ ಮತ್ತು ಸಂಸದ ಬಿ.ವೈ. ರಾಘವೇಂದ್ರ ಮಾಡಿರುವ ಅಭಿವೃದ್ಧಿ ಆಗಿದೆ. ಈಶ್ವರಪ್ಪ ಒಂದೇ ಒಂದು ಅಭಿವೃದ್ಧಿ ಯೋಜನೆ ತೋರಿಸಲಿ. ಒಂದೇ ಒಂದು ಯೋಜನೆ ತಾರದ ಇವರು, ಕೇವಲ ಪ್ರಚೋದನೆ ಮಾಡಿಕೊಂಡು ಓಡಾಡುತ್ತಾರೆ.

ಪ್ರಚೋದನಾ ಭಾಷಣ ಮಾಡುವುದಷ್ಟೇ ಇವರ ಬಂಡವಾಳವಾಗಿದೆ. ಕ್ಷೇತ್ರದ ಸಮಸ್ಯೆ, ಜನರ ಬಗ್ಗೆ ಸದನದಲ್ಲಿ ಒಂದೇ ಒಂದು ಮಾತನಾಡಿಲ್ಲ ಎಂದು ಟೀಕೆ ಮಾಡಿದರು.

ಶಿವಮೊಗ್ಗ ಬಿಟ್ಟರೆ ಬೇರೆಲ್ಲೂ ಗೆಲ್ಲೋಕಾಗಲ್ಲ: ಈಶ್ವರಪ್ಪನವರು ಎಷ್ಟು ಪ್ರಭಾವಿ ಎಂದರೆ ಶಿವಮೊಗ್ಗ ಬಿಟ್ಟರೆ ಬೇರೆ ಕಡೆ ಸ್ಪರ್ಧೆ ಮಾಡಿ ಗೆಲ್ಲೋಕೆ ಆಗಲ್ಲ. ನೀವಾಗಲಿ, ನಿಮ್ಮ ಮಗ ಆಗಲಿ ಸ್ಪರ್ಧೆಗೆ ಬನ್ನಿ. ಅವನ್ಯಾವ ಲೆಕ್ಕ ಎಂಬ ಮಾತಿಗೆ ರಾಜಕೀಯ ಲೆಕ್ಕ ಕೊಡುತ್ತೇನೆ. ನಿಮ್ಮ ಹಳೆಯ ಗೋಡೌನ್ ನಲ್ಲಿ ಇರುವ ಕೌಂಟಿಂಗ್ ಮಿಷನ್ ಹೊರಗೆ ತೆಗೆದುಕೊಂಡು ಬನ್ನಿ. ನಿಮ್ಮ ವ್ಯಕ್ತಿತ್ವವನ್ನು ಶಿವಮೊಗ್ಗ ಜನತೆಗೆ ಪರಿಚಯ ಮಾಡಿಕೊಡಿ ನನ್ನ ವ್ಯಕ್ತಿತ್ವವನ್ನು ಜನತೆಗೆ ಪರಿಚಯ ಮಾಡಿಕೊಡುತ್ತೇನೆ. ನಿರ್ಲಜ್ಜದಿಂದ ಸಂಕೋಚ ಬಿಟ್ಟು ನಿಮ್ಮ ಮಗನಿಗೆ ಟಿಕೆಟ್ ಕೇಳುತ್ತಿದ್ದೀರಾ? ನಿಮ್ಮನ್ನು ಮೂರನೇ ಸ್ಥಾನಕ್ಕೆ ತಳ್ಳಿದ ರುದ್ರೇಗೌಡರಿಗೆ ಟಿಕೆಟ್ ಕೇಳಲಿಲ್ಲ. ಭಾನುಪ್ರಕಾಶ್, ಗಿರೀಶ್ ಪಟೇಲ್, ಚನ್ನಬಸಪ್ಪ, ದತ್ತಾತ್ರಿ, ಸಿದ್ದರಾಮಣ್ಣ ಮೊದಲಾದವರಿಗೆ ಟಿಕೆಟ್ ಕೇಳಿಲ್ಲ. ನಾನಂತೂ ಸ್ಪರ್ಧೆ ಮಾಡುತ್ತಿದ್ದೇನೆ ಎಂದು ಹರಿಹಾಯ್ದರು.

ಮೈಸೂರು ಮಿತ್ರ ಮಂಗಳವಾರ 4 ಏಪ್ರಿಲ್ 2023

ಕೊಡವ ಕೌಟುಂಬಿಕ ಹಗ್ಗ ಜಗ್ಗಾಟ ಪಂದ್ಯಾವಳಿಗೆ ಚಾಲನೆ



ಮಡಿಕೇರಿ, ಏ.3– ಶ್ರೀಮಂಗಲದ ಟಿ.ಶೆಟ್ಟಿಗೇರಿ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಮೈದಾನದಲ್ಲಿ ಚೆಟ್ಟಂಗಡ ಕುಟುಂಬದ ಆಶ್ರಯದಲ್ಲಿ 2ನೇ ವರ್ಷದ ಕೊಡವ ಕೌಟುಂಬಿಕ ಹಗ್ಗ ಜಗ್ಗಾಟ ಪಂದ್ಯಾವಳಿಗೆ ಅದ್ಧೂರಿಯಾಗಿ ಚಾಲನೆ ದೊರೆತಿದೆ.

ಪಂದ್ಯಾವಳಿಗೆ ಮುನ್ನ ಟಿ.ಶೆಟ್ಟಿಗೇರಿ ಕೊಡವ ಸಮಾಜದಿಂದ ಆಟದ ಮೈದಾನದವರೆಗೆ ಕೊಡವ ಸಂಸ್ಕೃತಿಯ ಶ್ರೀಮಂತಿಕೆಯನ್ನು ಸಾರುವ ಸಾಂಸ್ಕೃತಿಕ ಮೆರವಣಿಗೆ ಗಮನ ಸೆಳೆಯಿತು. ಚೆಟ್ಟಂಗಡ ಕುಟುಂಬ ಹಗ್ಗ ಜಗ್ಗಾಟ ಪಂದ್ಯಾವಳಿಯಿಂದ ಟಿ.ಶೆಟ್ಟಿಗೇರಿ ಪಟ್ಟಣ ಮತ್ತು ಆಟದ ಮೈದಾನದಲ್ಲಿ ಹಬ್ಬದ ಸಡಗರ ಸಂಭ್ರಮ ಮೂಡಿಸಿದೆ. ಮೆರವಣಿಗೆಯಲ್ಲಿ ತಳಿಯತಕ್ಕಿ ಬೊಳಕ್, ದುಡಿಕೊಟ್ಟ್ ಪಾಟ್, ಬಾಳೋ ಪಾಟ್, ಒಡ್ಡೋಲಗ ಸಹಿತ ನೂರಾರು ಮಹಿಳೆಯರು, ಮಕ್ಕಳು, ಪುರುಷರು ಸಾಂಪ್ರದಾಯಿಕ ಉಡುಪಿನಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡು ಮೆರಗು ನೀಡಿದರು. ಮೈದಾನದಲ್ಲಿ ಊರ್‌ತಕ್ಕರಾದ ಚೆಟ್ಟಂಗಡ ಹ್ಯಾರಿ ಅವರು ಮೈದಾನವನ್ನು ಉದ್ಘಾಟಿಸಿದರು.

ನಂತರ ನಡೆದ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ದೇಶ ತಕ್ಕರು ಹಾಗೂ ಅಖಿಲ ಕೊಡವ ಸಮಾಜದ ಅಧ್ಯಕ್ಷರಾದ ಪರದಂಡ ಸುಬ್ರಮಣಿ ಕಾವೇರಪ್ಪ ಅವರು, ಹಗ್ಗ ಜಗ್ಗಾಟ ಕ್ರೀಡೆ ತುಂಬಾ ಹಳೆಯ ಇತಿಹಾಸವನ್ನು ಹೊಂದಿದೆ. 12ನೇ ಶತಮಾನದಲ್ಲಿ ಈ ಕ್ರೀಡೆ ಚಾಲ್ತಿಗೆ ಬಂದಿತ್ತು. ಕೊಡಗಿನಲ್ಲಿ ಪೊನ್ನೋಲತಂಡ ಕುಟುಂಬ ಕೊಡವ ಕೌಟುಂಬಿಕ ಪಂದ್ಯಾವಳಿಯಾಗಿ ಕಳೆದ ವರ್ಷ ನಡೆಸಿದ್ದು, ಹಗ್ಗ ಜಗ್ಗಾಟವನ್ನು ಜಿಲ್ಲೆಯಲ್ಲಿ ಜನಪ್ರಿಯಗೊಳಿಸಲು ಅಡಿಗಲ್ಲು ಹಾಕಿದೆ ಎಂದು ಶ್ಲಾಘಿಸಿದರು. ಕೊಡವ ಜನಾಂಗ ಹಾಕಿ ಕ್ರೀಡೆಗೆ ಸೀಮಿತವಲ್ಲ, ಇತರ ಕ್ರೀಡೆಯಲ್ಲೂ ಆಸಕ್ತಿ–ಪ್ರತಿಭೆ ಹೊಂದಿರುವುದು ಇದರಿಂದ ಗೊತ್ತಾಗುತ್ತದೆ ಎಂದು ಹೇಳಿದರು.

ತಾವಳಗೇರಿ ಮೂಂದ್‌ನಾಡ್, ನಾಡ್ ತಕ್ಕರಾದ ಕೈಬುಲೀರ ಹರೀಶ್ ಅಪ್ಪಯ್ಯ ಮಾತನಾಡಿ, ಪೊನ್ನೋಲತಂಡ ಕುಟುಂಬ ಕಳೆದ ವರ್ಷ ಪ್ರಥಮ ಬಾರಿಗೆ ಕೊಡವ ಕೌಟುಂಬಿಕ ಸ್ಪರ್ಧೆಯನ್ನು ಏರ್ಪಡಿಸುವ ಆಲೋಚನೆಯಲ್ಲಿದ್ದಾಗ ಜಿಲ್ಲೆಯಲ್ಲಿ ಈ ಕ್ರೀಡೆಗೆ ಎಷ್ಟರ ಮಟ್ಟಿಗೆ ಪ್ರೋತ್ಸಾಹ ಸಿಗಬಹುದೆಂಬ ಸಂಶಯ ವಿತ್ತು. ಆದರೂ ಕಳೆದ ವರ್ಷ 42 ತಂಡಗಳು ಭಾಗ ವಹಿಸಿದ್ದು, ಪ್ರಸಕ್ತ ವರ್ಷ 177 ತಂಡ ಭಾಗವಹಿಸಿವೆ. ಹಗ್ಗ ಜಗ್ಗಾಟಕ್ಕೆ ಜಿಲ್ಲೆಯಲ್ಲಿ ಉತ್ತಮ ಪ್ರೋತ್ಸಾಹ ದೊರೆ ಯುತ್ತದೆ ಎಂಬುದಕ್ಕೆ ಇದು ಸಾಕ್ಷಿಯಾಗಿದೆ ಎಂದರು.

ಮತ್ತೋರ್ವ ಅತಿಥಿ ಟಿ.ಶೆಟ್ಟಿಗೇರಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕುಂಞಂಗಡ ಅರುಣ್ ಭೀಮಯ್ಯ ಮಾತನಾಡಿ, ಸಣ್ಣ ಜಿಲ್ಲೆಯಾದರೂ ದೇಶದ ಕ್ರೀಡೆ ಹಾಗೂ ಸೇನೆಗೆ ಕೊಡಗು ಜಿಲ್ಲೆಯ ಕೊಡುಗೆ ಅಪಾರವಾಗಿದೆ. ಕೊಡವ ಹಾಕಿ ಉತ್ಸವವನ್ನು ಪಾಂಡಂಡ ಕುಟ್ಟಣಿ ಅವರು ಹುಟ್ಟು ಹಾಕಿದ ನಂತರ ಕೊಡಗು ಜಿಲ್ಲೆಯ ಕ್ರೀಡಾ ಚಿತ್ರಣವೇ ಬದಲಾಗಿದೆ. ಹಾಕಿ ಉತ್ಸವದ ಪ್ರೇರಣೆಯಿಂದ ಜಿಲ್ಲೆಯ ಇತರ ಜನಾಂಗಗಳು ಸಹ ಕ್ರೀಡಾಕೂಟವನ್ನು ಆಯೋಜಿಸುತ್ತಿವೆ. ಕೇವಲ ಕ್ರೀಡೆಯಾಗಿ ನೋಡದೇ ಹಬ್ಬದಂತೆ ನಡೆಸುತ್ತಿರುವುದು ವಿಶೇಷವಾಗಿದೆ ಎಂದರು.

ವೇದಿಕೆಯಲ್ಲಿ ಪೊನ್ನೋಲತಂಡ ಕುಟುಂಬದ ಅಧ್ಯಕ್ಷ ಮಿಟ್ಟು ಸೋಮಯ್ಯ, ಕೊಡವ ಹಗ್ಗ ಜಗ್ಗಾಟ ಅಕಾಡೆಮಿ ಸ್ಥಾಪಕಾಧ್ಯಕ್ಷ ಪೊನ್ನೋಳತಂಡ ಕಿರಣ್ ಪೊನ್ನಪ್ಪ, ಚೆಟ್ಟಂಗಡ ಕುಟುಂಬದ ಅಧ್ಯಕ್ಷ ವಿಜಯ್ ಕಾರ್ಯಪ್ಪ ಹಿರಿಯರಾದ ಮಣಿ ನಾಚಪ್ಪ ಊರ್ ತಕ್ಕ ಹ್ಯಾರಿ, ಶಾಲಾ ಎಸ್‌ಡಿಎಂಸಿ ಅಧ್ಯಕ್ಷೆ ಜ್ಯೋತಿ ಹಾಜರಿದ್ದರು. ಚೆಟ್ಟಂಗಡ ಕುಟುಂಬದ ಮಹಿಳಾ ತಂಡದಿಂದ ಸ್ವಾಗತ ನೃತ್ಯ, ಬಾಲಕಿ ಲೇಖನಾ ಉತ್ತಪ್ಪ ಅವರಿಂದ ಮೂಡಿ ಬಂದ ಭರತನಾಟ್ಯ ಗಮನ ಸೆಳೆಯಿತು.

ಮಹಿಳಾ ಪ್ರದರ್ಶನ ಪಂದ್ಯದಲ್ಲಿ ಬಾಂಡಿಂಗ್ ಬ್ಲೂಮ್ಸ್ ಪೊಮ್ಮಕ್ಕಡ ಕೂಟ ಮತ್ತು ಟಿ–ಶೆಟ್ಟಿಗೇರಿಯ ಸಂಭ್ರಮ ಮಹಿಳಾ ಸಾಂಸ್ಕೃತಿಕ ಮತ್ತು ಕ್ರೀಡಾ ಸಂಘ ಇದರ ನಡುವೆ ನಡೆದ ಪ್ರದರ್ಶನ ಪಂದ್ಯವನ್ನು ನಾಡ್ ತಕ್ಕರಾದ ಕೈಬುಲೀರ ಹರೀಶ್ ಅಪ್ಪಯ್ಯ ಅವರು ಬಾವುಟ ತೋರಿಸುವ ಮೂಲಕ ಚಾಲನೆ ನೀಡಿದರು. ಈ ಪಂದ್ಯದಲ್ಲಿ ಸಂಭ್ರಮ ಮಹಿಳಾ ಸಾಂಸ್ಕೃತಿಕ ಮತ್ತು ಕ್ರೀಡಾ ಸಂಸ್ಥೆ ಜಯಗಳಿಸಿತು.

— ಅಪ್ಪಚೆಟ್ಟೋಳಂಡ ಹಾಕಿ ನಮ್ಮೆ —

ಪಳಂಗಂಡ, ತೀತಮಾಡ, ಕಲಿಯಂಡ ಸೇರಿ 16 ತಂಡ ಮುಂದಿನ ಹಂತಕ್ಕೆ



ಪ್ರೀ ಕ್ವಾರ್ಟರ್ ಪಂದ್ಯಗಳು

8.30 ಚೌರೀರ – ಪುದಿಯೊಕ್ಕಡ
9.30 ಪೆಮ್ಮಂಡ – ಕುಲ್ಲೇಟೀರ
11.30 ಕಂಬೀರಂಡ – ಮುಕ್ಕಾಟೀರ (ಪುಲಿಕೋಟ್)
2.30 ನೆಲ್ಲಮಕ್ಕಡ – ಬೊವ್ವೇರಿಯಂಡ

ನಾಪೋಕ್ಲು, ಏ.3– ಕೊಡವ ಕುಟುಂಬಗಳ ನಡುವಿನ 23ನೇ ವರ್ಷದ ಕೌಟುಂಬಿಕ ಹಾಕಿ ಅಪ್ಪಚೆಟ್ಟೋಳಂಡ ಪಂದ್ಯದಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಲು ತ್ರೀವ್ರ ಪೈಪೋಟಿ ನಡೆಸುತ್ತಿದೆ. ಜನರಲ್ ತಿಮ್ಮಯ್ಯ ತಾಲೂಕು ಕ್ರೀಡಾಂಗಣದ ಮೈದಾನದಲ್ಲಿ ಸೋಮವಾರ ನಡೆದ ಪಂದ್ಯದಲ್ಲಿ 16 ತಂಡಗಳು ಗೆದ್ದು ಮುಂದಿನ ಹಂತ ಪ್ರವೇಶಿಸಿದವು.

ವಿವರ: ಪಳಂಗಂಡ ತಂಡ ಬೊಳ್ಳಂಡ ತಂಡದ ವಿರುದ್ಧ 6–1 ಗೋಲುಗಳ ಅಂತರದಲ್ಲಿ ಭರ್ಜರಿ ಗೆಲುವು ಪಡೆದುಕೊಂಡಿತು, ಅಮ್ಮಣಿಚಂಡ ತಂಡ ಮಾಚಿಮಂಡ ವಿರುದ್ಧ 8–7 ಗೋಲುಗಳ ಅಂತರದಲ್ಲಿ ಗೆಲುವಿನ ನಗೆ ಬೀರಿತು. ತೀತಮಾಡ ತಂಡ ಕುಲ್ಲೇಟೀರ ವಿರುದ್ಧ 3–0 ಗೋಲುಗಳ ಅಂತರದಲ್ಲಿ ಸೋಲನ್ನು ಒಪ್ಪಿಕೊಂಡಿತು. ಕಲಿಯಂಡ ತಂಡ ಮುಕ್ಕಾಟೀರ(ಕಡಗದಾಳು) ತಂಡದ ವಿರುದ್ಧ 1–0 ಗೋಲುಗಳಿಂದ ಜಯಭೇರಿ ಬಾರಿಸಿತು. ಬೊವ್ವೇರಿಯಂಡ ಕರವಟ್ಟೀರ ವಿರುದ್ಧ 5–3 ಗೋಲುಗಳಲ್ಲಿ, ಕುಪ್ಪಂಡ(ಕೈಕೇರಿ) ಮುಕ್ಕಾಟೀರ (ಹರಿಹರ) ವಿರುದ್ಧ 4–0 ಗೋಲುಗಳಿಂದ ಗೆದ್ದು ಸಂಭ್ರಮಿಸಿದರು. ಕುಪ್ಪಂಡ ಸೋಮಯ್ಯ ಹ್ಯಾಟ್ರಿಕ್ ಗೋಲು ದಾಖಲಿಸಿದರು. ಕರಿನೆರವಂಡ ಮೇಕೇರಿರ ವಿರುದ್ಧ 4–3 ಗೋಲುಗಳಿಂದ ಜಯಿಸಿದರು.

ಮುಕ್ಕಾಟೀರ(ಪುಲಿಕೋಟ್) ಚೇಂದಿರ ತಂಡವನ್ನು 2–1 ಗೋಲುಗಳ ಅಂತರದಲ್ಲಿ ಗೆಲುವು ಪಡೆದುಕೊಂಡರು. ಕೊಂಗಂಡ ಮಂಡೇಪಂಡ ತಂಡದ ವಿರುದ್ಧ 9–8 ಗೋಲುಗಳಲ್ಲಿ ಜಯಿಸಿತು. ಚೌರೀರ ಇಟ್ಟೀರ ವಿರುದ್ಧ 4–3 ಗೋಲುಗಳ ಅಂತರದಲ್ಲಿ ಗೆಲುವು ಸಾಧಿಸಿತು. ಪುದಿಯೊಕ್ಕಡ ಚೊಟ್ಟೆಯಂಡಮಾಡ ವಿರುದ್ಧ 3–2 ಗೋಲು ಹೊಡೆದು ಗೆಲುವಿನ ನಗೆ ಬೀರಿತು. ಮುರುವಂಡ ಅಚ್ಚಪಂಡ ವಿರುದ್ಧ 4–0 ಗೋಲುಗಳನ್ನು ಹೊಡೆಯುವುದರ ಮೂಲಕ ಗೆಲುವು ಪಡೆದುಕೊಂಡಿತು. ನೆಲ್ಲಮಕ್ಕಡ ಕಳ್ಳಿಚಂಡ ವಿರುದ್ಧ 2–0 ಗೋಲು ಹೊಡೆದು ಗೆದ್ದುಕೊಂಡರು.

ಪೆಮ್ಮಂಡ ತಂಡ ಕೊಲ್ಲೀರ ವಿರುದ್ಧ 3–0 ಗೋಲುಗಳಲ್ಲಿ ಭರ್ಜರಿ ಗೆಲುವು ಪಡೆದುಕೊಂಡರು, ಕಂಬೀರಂಡ ಕೂತಂಡ ತಂಡದ ವಿರುದ್ಧ 1–0 ಗೋಲು ಹೊಡೆದು ಗೆಲುವು ಸಾಧಿಸಿತು. ಚೆಕ್ಕೇರ ಪುಟ್ಟಿಚಂಡ ತಂಡ ವಿರುದ್ಧ 5–1 ಗೋಲುಗಳಲ್ಲಿ ಗೆದ್ದು ಸಂಭ್ರಮಿಸಿದರು.

ಮಡಿಕೇರಿ ಕ್ಷೇತ್ರದ ಕಮ್ಯೂನಿಸ್ಟ್ ಪಕ್ಷದ ಅಭ್ಯರ್ಥಿ ಹೆಚ್.ಎಂ. ಸೋಮಪ್ಪ

ಮಡಿಕೇರಿ, ಏ.3– ಕೊಡಗಿನ ಮಡಿಕೇರಿ ಕ್ಷೇತ್ರದಿಂದ ಇದೇ ಪ್ರಥಮ ಬಾರಿಗೆ ಭಾರತೀಯ ಕಮ್ಯೂನಿಸ್ಟ್ ಪಕ್ಷದ ಅಧಿಕೃತ ಅಭ್ಯರ್ಥಿಯನ್ನಾಗಿ ಹೆಚ್.ಎಂ. ಸೋಮಪ್ಪ ಅವರ ಹೆಸರನ್ನು ಪಕ್ಷದ ರಾಜ್ಯ ಘಟಕದ ಸಹ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಬಿ.ಅಮ್ಜದ್ ಘೋಷಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಪರ ಹೋರಾಟದ ಭಾಗವಾಗಿ ಈ ಬಾರಿ ಸಿಪಿಐ ಕೊಡಗಿನ ಮಡಿಕೇರಿ ಸೇರಿದಂತೆ ರಾಜ್ಯದ ಏಳು ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುತ್ತಿರುವುದಾಗಿ ಸ್ಪಷ್ಟಪಡಿಸಿದರು. ಮಡಿಕೇರಿ ಕ್ಷೇತ್ರದ ಸಿಪಿಐ ಅಭ್ಯರ್ಥಿ ಹಾಗೂ ಪಕ್ಷದ ಜಿಲ್ಲಾ ಸಹ ಕಾರ್ಯದರ್ಶಿ ಹೆಚ್.ಎಂ. ಸೋಮಪ್ಪ ಮಾತನಾಡಿ, ತಾವು ಕೊಡಗಿನ ಅನೇಕ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಪಕ್ಷದ ವತಿಯಿಂದ ನಿರಂತರ ಹೋರಾಟ ನಡೆಸಿಕೊಂಡು ಬಂದಿರುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕೆ.ವಿ. ಸುನಿಲ್, ರಫೀಕ್ ನವಲಗುಂದ, ರಮೇಶ್ ಮಾಯಮುಡಿ, ಎಸ್.ಹೆಚ್. ಶಬಾನ ಇದ್ದರು.

ಪಾಲೇಮಾಡು ನಿವಾಸಿಗರ ಧರಣಿ 7ನೇ ದಿನಕ್ಕೆ

ನಿವೇಶನ, ಮೂಲಭೂತ ಸೌಲಭ್ಯಕ್ಕೆ ಆಗ್ರಹ

ಚುನಾವಣೆ ಬಹಿಷ್ಕಾರ ಎಚ್ಚರಿಕೆ





ಮಡಿಕೇರಿ, ಏ.3– ಹೊದ್ದೂರು ಗ್ರಾಪಂ ವ್ಯಾಪ್ತಿಯ ಪಾಲೇಮಾಡು ನಿವಾಸಿಗಳು ಚುನಾವಣೆ ಬಹಿಷ್ಕಾರದ ಭಿತ್ತಿಪತ್ರಗಳನ್ನು ಲಗತ್ತಿಸಿ, ನಿವೇಶನ ಮತ್ತು ಮೂಲಭೂತ ಸೌಲಭ್ಯ ಒದಗಿಸಲು ಜಿಲ್ಲಾಧಿಕಾರಿಗಳು ಖುದ್ದು ಸ್ಥಳಕ್ಕೆ ಭೇಟಿ ನೀಡಬೇಕೆಂದು ಒತ್ತಾಯಿಸಿದ್ದಾರೆ.

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಅಂಗನವಾಡಿ ಕೇಂದ್ರದ ಬಳಿ ಆರಂಭಿಸಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹ 7ನೇ ದಿನಕ್ಕೆ ಕಾಲಿರಿಸಿದೆ. ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮತದಾನ ಮಾಡದೆ ಹೋರಾಟವನ್ನು ತೀವ್ರಗೊಳಿಸುವುದಾಗಿ ನಿವಾಸಿಗಳು ಎಚ್ಚರಿಕೆ ನೀಡಿದ್ದಾರೆ.

ಪಾಲೇಮಾಡು ನಿವಾಸಿಗಳಿಗೆ ವಿತರಿಸಿದ ನಿವೇಶನದ ಹಕ್ಕುಪತ್ರವನ್ನು ವಿಶೇಷ ಯೋಜನೆ ಎಂದು ಪರಿಗಣಿಸಿ ಲೋಪ ದೋಷಗಳನ್ನು ಸರಿಪಡಿಸಿ ಪ್ರತೀ ನಿವೇಶನ ರಹಿತ ಕುಟುಂಬಗಳಿಗೂ 40x50 ವಿಸ್ತೀರ್ಣದ ನಿವೇಶನ ಹಕ್ಕುಪತ್ರ ವಿತರಿಸಬೇಕೆಂದು ಒತ್ತಾಯಿಸಿದರು.

2005ರಿಂದಲೂ ಸರ್ಕಾರಿ ಜಾಗದಲ್ಲಿ ಪ್ಲಾಸ್ಟಿಕ್ ಗುಡಿಸಲು ನಿರ್ಮಿಸಿಕೊಂಡು ತಮ್ಮ ಕುಟುಂಬದೊಂದಿಗೆ ಜೀವನ ಸಾಗಿಸುತ್ತಿರುವ ಪಾಲೇಮಾಡು ನಿವಾಸಿಗಳು ತಮ್ಮ ಬದುಕಿಗಾಗಿ ಹೋರಾಟದಿಂದಲೇ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಪಡೆಯಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ಧರಣಿ ನಿರತರು ಬೇಸರ ವ್ಯಕ್ತಪಡಿಸಿದರು.

ತಾತ್ಕಾಲಿಕ ವಾಸಕ್ಕಾಗಿ ನಿರ್ಮಿಸಿರುವ ಮನೆಗೆ 10x10 ವಿಸ್ತೀರ್ಣದ ಹಕ್ಕುಪತ್ರ ವಿತರಿಸಲಾಗಿದೆ. ಇನ್ನುಳಿದ ಜಾಗಕ್ಕೆ 57ರ ನಮೂನೆಯಲ್ಲಿ ಸಲ್ಲಿಸಿರುವ ಅಕ್ರಮ ಸಕ್ರಮದಡಿ ಅರ್ಜಿ ತಿರಸ್ಕೃತವಾಗುತ್ತಿರುವುದು ಕಂಡು ಬಂದಿದೆ. ಇದು ಬಡವರಿಗೆ ಮಾಡಿರುವ ಅನ್ಯಾಯವಾಗಿದೆ ಎಂದು ಆರೋಪಿಸಿದರು. ಪಾಲೇಮಾಡುವಿನ 260 ಕುಟುಂಬಗಳ ಸಾವಿರಕ್ಕೂ ಹೆಚ್ಚು ಮತದಾರರು ಚುನಾವಣೆ ಬಹಿಷ್ಕರಿಸುವುದಾಗಿ ಜಿಲ್ಲಾಡಳಿತದ ಗಮನಕ್ಕೆ ತಂದಿದ್ದರೂ ಬಡವರ ಹೋರಾಟಕ್ಕೆ ಬೆಲೆಯೇ ಇಲ್ಲದಂತಾಗಿದೆ. ಜಿಲ್ಲಾಧಿಕಾರಿಗಳು ತಕ್ಷಣ ಸ್ಥಳಕ್ಕೆ ಬಂದು ಜನರ ಬೇಡಿಕೆಗೆ ಸ್ಪಂದಿಸುವಂತಾಗಬೇಕು ಎಂದು ಮಡಿಕೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಿದರು.

ರಾಜ್ಯ ಸರ್ಕಾರ ಉದ್ಯಮಿಗಳಿಗೆ ನೂರಾರು ಎಕರೆ ಸರಕಾರಿ ಜಾಗವನ್ನು ನೀಡುತ್ತಿದೆ. ಶ್ರೀಮಂತ ಭೂಮಾಲೀಕರಿಗೆ ಅವರ ಪಿತ್ರಾರ್ಜಿತ ಆಸ್ತಿ ಎಷ್ಟೇ ಇದ್ದರೂ, ಒತ್ತುವರಿ ಜಾಗವನ್ನು ಮೂವತ್ತು ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ನೀಡಲು ಮುಂದಾಗಿದೆ. ಬಡವರು ಕನಿಷ್ಠ ಸೂರಿಗಾಗಿ 94, 94ಸಿ ಅಡಿ ಅರ್ಜಿ ಸಲ್ಲಿಸಿ ವರ್ಷಗಟ್ಟಲೆ ಅಲೆದಾಡಿದರೂ ಯಾವುದೇ ಪ್ರಯೋಜನವಾಗುತ್ತಿಲ್ಲ. ಬಡವರಿಗೆ ಒಂದು ಮತ್ತು ಉಳ್ಳವರಿಗೊಂದು ನ್ಯಾಯ ಎನ್ನುವ ಪರಿಸ್ಥಿತಿ ನಿರ್ಮಾಣವಾಗಿದೆ. ಮಲತಾಯಿ ಧೋರಣೆ ಹೀಗೆ ಮುಂದುವರೆದರೆ ಯಾರೂ ಮತದಾನದಲ್ಲಿ ಪಾಲ್ಗೊಳ್ಳುವುದಿಲ್ಲವೆಂದು ನಿವಾಸಿಗಳು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಪಾಲೇಮಾಡು ನಿವಾಸಿಗಳಾದ ಪಿ.ಎ.ಧನಂಜಯ, ಪಿ.ಬಿ.ರಾಜು, ಪಿ.ಸಿ.ಸುರೇಶ್, ಹೆಚ್.ಜೆ.ವೀಣಾ, ಎಂ.ಆರ್. ಶೋಭ ಹಾಗೂ ಕೆ.ಎ.ಅಲಿ ಉಪಸ್ಥಿತರಿದ್ದರು.

ಚುನಾವಣೆ: ಅಬಕಾರಿ ಅಧಿಕಾರಿಗಳಿಂದ ಬಿಗಿ ವಾಹನ ತಪಾಸಣೆ

ಕುಶಾಲನಗರ, ಏ.3– ಮುಂಬರುವ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಪೊಲೀಸ್ ಹಾಗೂ ಅಬಕಾರಿ ಇಲಾಖೆ ಚೆಕ್‌ಪೋಸ್ಟ್‌ಗಳಲ್ಲಿ ಬಿಗಿ ತಪಾಸಣೆ ಆರಂಭಿಸಿದೆ.

ಸೋಮವಾರಪೇಟೆ ವಿಭಾಗದ ಅಬಕಾರಿ ಉಪ ಅಧೀಕ್ಷಕಿ ಆರ್.ಎಂ.ಚೈತ್ರಾ ಅವರ ಮಾರ್ಗದರ್ಶನದಲ್ಲಿ ತಪಾಸಣೆ ಆರಂಭಿಸಲಾಗಿದ್ದು, ಜಿಲ್ಲೆಯಿಂದ ಹೊರ ಹೋಗುವ, ಜಿಲ್ಲೆಗೆ ಆಗಮಿಸುವ ವಾಹನಗಳ ಬಗ್ಗೆ ತೀವ್ರ ನಿಗಾ ವಹಿಸಲಾಗುತ್ತಿದೆ. ಚುನಾವಣೆ ಹಿನ್ನೆಲೆಯಲ್ಲಿ ಹಣ, ಶಸ್ತ್ರಾಸ್ತ್ರ ಉಡುಗೊರೆ, ಮದ್ಯ ಸಾಗಾಟ ಸಹಿತ ಅಹಿತಕರ ಘಟನೆಗಳನ್ನು ತಡೆಯುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಪ್ರತಿದಿನ ಸಾವಿರಾರು ವಾಹನಗಳು ಸಂಚರಿಸುತ್ತಿದ್ದು, ಎಲ್ಲ ವಾಹನಗಳನ್ನು ತಪಾಸಣೆಗೊಳಪಡಿಸಲಾಗುತ್ತದೆ ಎಂದು ತಿಳಿದು ಬಂದಿದೆ. ಈ ಸಂದರ್ಭ ಸಿಬ್ಬಂದಿಗಳಾದ ಮಹಾದೇವ್, ರಾಜೇಂದ್ರ ಇದ್ದರು.

ಸೂಕ್ತ ದಾಖಲೆಗಳೊಂದಿಗೆ ಆರ್ಥಿಕ ವಹಿವಾಟು ನಿರ್ವಹಿಸಿ

ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಗೆ ಡಿಸಿ ರಮೇಶ್ ಸೂಚನೆ



ಚಾಮರಾಜನಗರ, ಏ.3– ವಿಧಾನಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ಜಿಲ್ಲೆಯ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಕಡ್ಡಾಯವಾಗಿ ಸೂಕ್ತ ದಾಖಲೆಗಳೊಂದಿಗೆ ಹಣಕಾಸು ವಹಿವಾಟು ನಿರ್ವಹಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಿ.ಎಸ್. ರಮೇಶ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಚುನಾವಣಾ ಹಿನ್ನೆಲೆಯಲ್ಲಿ ನಡೆದ ಜಿಲ್ಲೆಯ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಧಾನಸಭೆ ಚುನಾವಣೆ ನೀತಿ ಸಂಹಿತೆ ಅವಧಿಯಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ನಡೆಸುವ ದಿನನಿತ್ಯದ ವಹಿವಾಟುಗಳು ಪಾರದರ್ಶಕವಾಗಿರಬೇಕು. ಸಂಸ್ಥೆಯಿಂದ ನೀಡಲಾಗುವ ಸಾಲ, ಕಂತಿನ ಮರುಪಾವತಿ, ಗ್ರಾಹಕರು ಸಾಲ ಪಡೆದುಕೊಂಡ ವಿವರ, ಮೊತ್ತ ಎಲ್ಲವನ್ನೂ ದಾಖಲೆಗಳ ಸಮೇತ ಒದಗಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಂಸ್ಥೆಗಳು ಒಟ್ಟಾರೆ ವಹಿವಾಟಿನ ಮೊತ್ತವನ್ನು ಬ್ಯಾಂಕುಗಳಿಗೆ ಜಮೆ ಮಾಡುವಾಗ ಸೂಕ್ತ ದಾಖಲೆಗಳನ್ನು ಇಟ್ಟುಕೊಂಡಿರಬೇಕು. ಗ್ರಾಹಕರು, ಸಾಲ ಪಡೆದಿರುವವರಿಂದ ಕಂತು ವಸೂಲಿ ಮಾಡಿದ ಸಮಯದಲ್ಲಿ ರಶೀದಿ ಇನ್ನಿತರ ಪತ್ರಗಳು ಪಡೆದುಕೊಂಡಿರಬೇಕು. ಬ್ಯಾಂಕುಗಳಿಗೆ ದಾಖಲೆಗಳೊಂದಿಗೆ ವ್ಯವಹರಿಸಬೇಕು ಎಂದು ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹಾಗೂ ಮಾದರಿ ನೀತಿ ಸಂಹಿತೆ ಜಿಲ್ಲಾ ನೋಡಲ್ ಅಧಿಕಾರಿ ಎಸ್. ಪೂವಿತಾ ಅವರು ಮಾತನಾಡಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳು ನೀತಿ ಸಂಹಿತೆ ಅವಧಿಯಲ್ಲಿ ನಡೆಸುವ ಎಲ್ಲಾ ಆರ್ಥಿಕ ವಹಿವಾಟು ಕುರಿತು ನಿರ್ದಿಷ್ಟ ದಾಖಲೆಗಳನ್ನು ಆಯಾ ಸಮಯದಲ್ಲಿಯೇ ಒದಗಿಸಬೇಕಾಗುತ್ತದೆ. ನಗದು ಸಾಗಣೆ ಮಾಡುವಾಗ ಅಧಿಕೃತ ದಾಖಲೆಗಳನ್ನು ಹೊಂದಿರಬೇಕು ಎಂದರು.

ಜಿಲ್ಲಾ ವೆಚ್ಚ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಬಸವರಾಜು, ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಎಂ.ಎನ್. ಸುರೇಖಾ, ವಿವಿಧ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು ಸಭೆಯಲ್ಲಿ ಹಾಜರಿದ್ದರು.

ಡಾ. ಬಿ.ಆರ್. ಅಂಬೇಡ್ಕರ್, ಡಾ. ಬಾಬು ಜಗಜೀವನ್ ರಾಮ್ ಜಯಂತಿ ಅರ್ಥಪೂರ್ಣ ಆಚರಣೆಗೆ ತೀರ್ಮಾನ

ಚಾಮರಾಜನಗರ, ಏ.3– ಜಿಲ್ಲಾಡಳಿತದ ವತಿಯಿಂದ ಏಪ್ರಿಲ್ 5 ರಂದು ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಜಯಂತಿ ಹಾಗೂ ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆಯನ್ನು ವಿಧಾನಸಭಾ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಸಾಂಕೇತಿಕವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಣೆ ಮಾಡಲು ತೀರ್ಮಾನಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್ ರಾಮ್ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು.

ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರು ಮಾತನಾಡಿ, ವಿಧಾನಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಏಪ್ರಿಲ್ 5 ರಂದು ಡಾ. ಬಾಬು ಜಗಜೀವನ್ ರಾಮ್ ಜಯಂತಿ ಹಾಗೂ ಏಪ್ರಿಲ್ 14 ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಸರಳವಾಗಿ, ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು. ಏಪ್ರಿಲ್ 5 ರಂದು ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಬಾಬೂಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಜಯಂತಿ ಆಚರಿಸಲಾಗುವುದು. ಏಪ್ರಿಲ್ 14 ರಂದು ಜಿಲ್ಲಾಡಳಿತ ಭವನದ ಮುಂಭಾಗದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದರು.


ವಿವಿಧ ಸಂಘಟನೆಗಳ ಮುಖಂಡರು ಮಾತನಾಡಿ, ಚುನಾವಣೆ ಬಳಿಕ ಡಾ. ಬಿ.ಆರ್. ಅಂಬೇಡ್ಕರ್ ಅವರ ಹಾಗೂ ಬಾಬೂಜಿ ಅವರ ಜಯಂತಿಯನ್ನು ಅದ್ಧೂರಿಯಾಗಿ ಆಚರಣೆ ಮಾಡಬೇಕು. ಈ ಸಂಬಂಧ ವಿವಿಧ ಸಮಿತಿಗಳಿಗೆ ಜವಾಬ್ದಾರಿ ನೀಡಬೇಕು. ಶಿಕ್ಷಣ ಸಂಸ್ಥೆಗಳಲ್ಲಿ, ಗ್ರಾಮ ಪಂಚಾಯಿತಿಗಳಲ್ಲಿ ಮಹನೀಯರ ಜಯಂತಿ ಆಚರಣೆ ಮಾಡಬೇಕು ಎಂಬುದೂ ಸೇರಿದಂತೆ ಆಯೋಜನೆ ಸಂಬಂಧ ಇತರೆ ಸಲಹೆಗಳನ್ನು ನೀಡಿದರು.

ಜಿಲ್ಲಾಧಿಕಾರಿಯವರು ಮಾತನಾಡಿ, ಈ ಸಂಬಂಧ ಸಮಿತಿಗಳಿಗೆ ಸೂಚನೆ ನೀಡಲಾಗುವುದು. ಚುನಾವಣೆ ಮುಗಿದ ಬಳಿಕ ಇಬ್ಬರು ಮಹನೀಯರ ಜಯಂತಿಯನ್ನು ಒಂದೇ ದಿನ ಆಚರಣೆ ಮಾಡಲು ಮುಂದಾಗಿ ಎಂದು ಸಲಹೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ್, ಮುಖಂಡರಾದ ಸಿ.ಎಂ. ಕೃಷ್ಣಮೂರ್ತಿ, ಕೆ.ಎಂ. ನಾಗರಾಜು, ಸಿ.ಕೆ. ರವಿಕುಮಾರ್, ಸಿ.ಕೆ. ಮಂಜುನಾಥ್, ಆರ್.ಎಂ. ಕಾಂತರಾಜು, ರಾಮಸಮುದ್ರ ನಾಗರಾಜು, ಬಸವನಪುರ ರಾಜಶೇಖರ್, ಚಾ.ರಂ. ಶ್ರೀನಿವಾಸಗೌಡ, ಚಾ.ಗು. ನಾಗರಾಜು, ಯರಿಯೂರು ರಾಜಣ್ಣ, ಬ್ಯಾಡಮೂಡ್ಲು ಬಸವಣ್ಣ, ಶಂಕರ್, ಮಹದೇವಯ್ಯ, ಸಂಘಸೇನಾ, ನಾಗೇಶ್, ಶಿವಣ್ಣ, ಸಿ.ಎಂ. ನರಸಿಂಹಮೂರ್ತಿ, ನಾರಾಯಣ, ಜಿ. ಬಂಗಾರು, ಗು. ಪುರುಷೋತ್ತಮ್, ಮಹದೇವಸ್ವಾಮಿ, ಪಣ್ಯದಹುಂಡಿ ರಾಜು, ಮಹೇಶ್, ನಟರಾಜು, ಕಂದಹಳ್ಳಿ ನಾರಾಯಣ ಸೇರಿದಂತೆ ಇತರೆ ಮುಖಂಡರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಬಿಜೆಪಿ ಸರ್ಕಾರದಲ್ಲಿ ಅಭಿವೃದ್ಧಿ ಶೂನ್ಯ

ಕಾಂಗ್ರೆಸ್ ಘೋಷಿತ ಅಭ್ಯರ್ಥಿ ಗಣೇಶ್‌ಪ್ರಸಾದ್ ಆರೋಪ



ಬೇಗೂರು, ಏ.3– ರಾಜ್ಯ ಬಿಜೆಪಿಯ ಸರ್ಕಾರದ ದುರಾಡಳಿತ ಮತ್ತು ಭ್ರಷ್ಟಾಚಾರಗಳನ್ನು ಮುಂದಿಟ್ಟುಕೊಂಡು ಕ್ಷೇತ್ರದ ಜನತೆಯ ಮುಂದೆ ಮತಯಾಚನೆ ಮಾಡುವುದಾಗಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹೆಚ್.ಎಂ. ಗಣೇಶ್ ಪ್ರಸಾದ್ ಹೇಳಿದರು.

ತಾಲೂಕಿನ ಹೊಣಕನಪುರ ಸಮೀಪದ ಓಂಕಾರ ಸಿದ್ದೇಶ್ವರ ದೇವಸ್ಥಾನದಲ್ಲಿ ಸೋಮವಾರ ಪತ್ನಿ ವಿದ್ಯಾ ಹಾಗೂ ಸಾವಿರಾರು ಕಾರ್ಯಕರ್ತರ ಜತೆಗೂಡಿ ಪೂಜೆ ಸಲ್ಲಿಸಿ ಚುನಾವಣಾ ಪ್ರಚಾರಕ್ಕೆ ಅಧಿಕೃತ ಚಾಲನೆ ನೀಡಿ ಅವರು ಮಾತನಾಡಿದರು. ತಮ್ಮ ತಂದೆ ಎಚ್.ಎಸ್.ಮಹದೇವ ಪ್ರಸಾದ್, ತಾಯಿ ಗೀತಾ ಮಹದೇವಪ್ರಸಾದ್ ಅವಧಿಯಲ್ಲಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಾಗಿದೆ. ಆದರೆ ಕಳೆದ ಐದು ವರ್ಷಗಳಲ್ಲಿ ಹೇಳಿಕೊಳ್ಳುವಂತಹ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗಿಲ್ಲ, ಬದಲಾಗಿ ಭ್ರಷ್ಟಾಚಾರ ಮಾತ್ರ ವ್ಯಾಪಕವಾಗಿದ್ದು ಜನತೆ ಬೇಸತ್ತಿದ್ದಾರೆ. ಇದು ನನ್ನ ಮೊದಲನೆಯ ಚುನಾವಣೆಯಾಗಿದ್ದು ಪಕ್ಷದ ಹಿರಿಯ ನಾಯಕರ ಮಾರ್ಗದರ್ಶನದಲ್ಲಿ ಚುನಾವಣೆಯನ್ನು ಎದುರಿಸುತ್ತಿದ್ದೇನೆ. ಕಾಂಗ್ರೆಸ್ ಕಾರ್ಯಕರ್ತರು ಬಹಳ ಹುಮ್ಮಸ್ಸಿನಲ್ಲಿದ್ದು ಗೆಲುವಿನ ವಿಶ್ವಾಸ ವ್ಯಕ್ತಪಡಿಸುತ್ತಿದ್ದಾರೆ. ಆದ್ದರಿಂದ ಈ ಬಾರಿ ರಾಜ್ಯದಲ್ಲಿ ಹಾಗೂ ಕ್ಷೇತ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದರು.

ರಾಜ್ಯದಲ್ಲಿ ಬಿಜೆಪಿ ಬೆಳೆಯಲು ಶ್ರಮಿಸಿದ ಯಡಿಯೂರಪ್ಪನವರನ್ನು ಮೂಲೆಗುಂಪು ಮಾಡಲಾಗುತ್ತಿದೆ. ಆದರೆ ಕಾಂಗ್ರೆಸ್ ತನ್ನ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆಯವರಿಗೆ ರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ನೀಡಿದೆ. ಆದ್ದರಿಂದ ಕಾರ್ಯಕರ್ತರು ಪಕ್ಷದ ಗೆಲುವಿಗೆ ಶ್ರಮಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಮರಿಸ್ವಾಮಿ, ಕಾಡಾ ಮಾಜಿ ಅಧ್ಯಕ್ಷ ಎಚ್.ಎಸ್. ನಂಜಪ್ಪ, ಚಾಮುಲ್ ನಿರ್ದೇಶಕ ಎಚ್.ಎಸ್. ನಂಜುಂಡ ಪ್ರಸಾದ್, ಎಪಿಎಂಸಿ ಸದಸ್ಯರಾದ ಆರ್.ಎಸ್. ನಾಗರಾಜು, ಮಂಚಹಳ್ಳಿ ಮೂರ್ತಿ, ಜಿಲ್ಲಾ ಕಾಂಗ್ರೆಸ್ ವಕ್ತಾರ ಕೆರೆಹಳ್ಳಿ ನವೀನ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರಾದ ಎಚ್.ಎನ್. ಬಸವರಾಜು, ಎಸ್.ಎಸ್. ಮಧುಶಂಕರ್, ಜಗದೀಶ ಮೂರ್ತಿ, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರಾದ ಕೆ.ಎಸ್. ಮಹೇಶ್, ಬಿ.ಕೆ. ಬೊಮ್ಮಯ್ಯ, ಚೆನ್ನಪ್ಪ, ಮುಖಂಡರಾದ ನೀಲಕಂಠಪ್ಪ, ಸೇರಿದಂತೆ ಪಕ್ಷದ ಮುಖಂಡರು ಹಾಗೂ ನೂರಾರು ಕಾರ್ಯಕರ್ತರು ಹಾಜರಿದ್ದರು.

ಕಣ್ಣಿನ ಉಚಿತ ತಪಾಸಣಾ ಶಿಬಿರದಲ್ಲಿ 365 ಮಂದಿಗೆ ತಪಾಸಣೆ

ಚಾಮರಾಜನಗರ, ಏ.3– ರೋಟರಿ ಸಂಸ್ಥೆ ವತಿಯಿಂದ ನಗರದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು. ನಗರದ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ರೋಟರಿ ಭವನದಲ್ಲಿ ಪ್ರತಿ ತಿಂಗಳ ಮೊದಲನೆಯ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮ, ನಮ್ಮ ರೋಟರಿ ಸಂಸ್ಥೆ, ಅರವಿಂದ ಕಣ್ಣಿನ ಆಸ್ಪತ್ರೆ ಕೊಯಮತ್ತೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಉಚಿತ ಕಣ್ಣಿನ ತಪಾಸಣೆ ಶಿಬಿರದಲ್ಲಿ 365 ಮಂದಿ ತಪಾಸಣೆ ಮಾಡಿಸಿಕೊಂಡರು.

182 ಮಂದಿ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾಗಿದ್ದು, ಅವರ ಪೈಕಿಯಲ್ಲಿ 97 ಮಂದಿ ಕೊಯಮತ್ತೂರಿನ ಅರವಿಂದ ಕಣ್ಣಿನ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಯಿತು. ಉಳಿದ 95 ಮಂದಿ ಬುಧವಾರ ಕರೆದುಕೊಂಡು ಹೋಗಲಾಗುವುದು.

ಈ ವೇಳೆ ರೋಟರಿ ಅಧ್ಯಕ್ಷ ಕೆ.ಎಂ. ಮಹದೇವಸ್ವಾಮಿ ಮಾತನಾಡಿ, ಕಣ್ಣಿನ ದೃಷ್ಟಿ ಎಲ್ಲರಿಗೂ ಮಹತ್ವದ್ದು, ಅದರಲ್ಲೂ ವಿಶೇಷವಾಗಿ ಅಕ್ಕ–ಪಕ್ಕದ ಜಿಲ್ಲೆಗಳಿಂದ ಮಂಡ್ಯ, ಮೈಸೂರು ಜಿಲ್ಲೆಗಳಿಂದ ಬಂದು ತಪಾಸಣೆಗೆ ಒಳಪಟ್ಟಿರುವುದು ನಮ್ಮ ರೋಟರಿ ಸಂಸ್ಥೆಗೆ ಸಂತಸ ತಂದಿದೆ ಎಂದು.

ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರುವುದು ಖಚಿತ



ಶಾಸಕ ನಿರಂಜನ್ ಕುಮಾರ್ ವಿಶ್ವಾಸ

ಗುಂಡ್ಲುಪೇಟೆ, ಏ.3– ಮುಂದಿನ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದು ಶಾಸಕ ನಿರಂಜನ್ ಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

ಚುನಾವಣಾ ಪ್ರಚಾರದ ಅಂಗವಾಗಿ ಸೋಮವಾರ ತಾಲೂಕಿನ ಸ್ಕಂದಗಿರಿ ಪಾರ್ವತಾಂಭಾ ಬೆಟ್ಟದಲ್ಲಿ ಪತ್ನಿ ಸವಿತಾ ಹಾಗೂ ಪಕ್ಷದ ಮುಖಂಡರ ಜತೆಗೂಡಿ ಸೋಮೇಶ್ವರ ಸ್ವಾಮಿ ಮತ್ತು ಪಾರ್ವತಾಂಭೆಗೆ ಪೂಜೆ ಸಲ್ಲಿಸಿ ನಂತರ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದರು.

ಕಳೆದ ಐದು ವರ್ಷಗಳಿಂದ ತಾಲೂಕಿನಾದ್ಯಂತ ಮೂಲಭೂತಸೌಕರ್ಯ ಒದಗಿಸುವ ಕೆಲಸ ಮಾಡಲಾಗಿದೆ. ಜನರ ಸಮಸ್ಯೆಗಳನ್ನು ಆಲಿಸಲು ಜನಸಂಪರ್ಕ ಸಭೆ ಮಾಡಿ ಜನರ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ಅಲ್ಲದೆ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಆಗಿದೆ. ಇದನ್ನು ವಿರೋಧ ಪಕ್ಷದವರು ನಮ್ಮ ಅವಧಿಯಲ್ಲಿ ಆದ ಯೋಜನೆ ಎಂದು ಅಪಪ್ರಚಾರ ಮಾಡುತ್ತಾರೆ. ಈ ಯೋಜನೆಯನ್ನು ಮುಗಿಸಲು ಅವರಿಗೆ 25 ವರ್ಷಗಳು ಬೇಕಾಗಿತ್ತಾ ಎಂದು ಪ್ರಶ್ನಿಸಿದರು.

ಪಟ್ಟಣದಲ್ಲಿ 1058 ನಿವೇಶನ ಹಂಚಿಕೆ ಮಾಡಲಾಗಿದ್ದು ಹಲವಾರು ಸಮುದಾಯ ಭವನ ನಿರ್ಮಾಣ ಮಾಡಲಾಗಿದೆ ಕುಡಿಯುವ ನೀರಿನ ಬವಣೆ ಹೋಗಲಾಡಿಸಲು 34 ಹಳ್ಳಿಗಳಿಗೆ ಎಕ್ಸೆಸ್ ಲೈಫ್ ಯೋಜನೆ ಜಾರಿಗೆ ತರಲಾಗಿದೆ. ಸುಮಾರು 500 ರಿಂದ 600 ಜನರಿಗೆ ಸಾಗುವಳಿ ಪತ್ರ ವಿತರಿಸಲಾಗಿದೆ ಇದೆಲ್ಲವೂ ಅಭಿವೃದ್ಧಿ ಕಾರ್ಯಗಳಲ್ಲವೇ ಎಂದು ಪ್ರಶ್ನಿಸಿದರು.

ಪುರಸಭಾ ಅಧ್ಯಕ್ಷ ಪಿ.ಗಿರೀಶ್ ಮಾತನಾಡಿ, ಸುಮಾರು 800 ಕೋಟಿಗೂ ಹೆಚ್ಚು ಅನುದಾನ ತರುವ ಮೂಲಕ ಶಾಸಕರು ತಾಲೂಕನ್ನು ಅಭಿವೃದ್ಧಿ ಪಥದತ್ತ ಸಾಗಿಸುತ್ತಿದ್ದಾರೆ. ಬಿಜೆಪಿ ದಲಿತರ ವಿರೋಧಿ ಎಂದು ಬಿಂಬಿಸಲಾಗುತ್ತಿತ್ತು. ಆದರೆ ಅದೇ ಬಿಜೆಪಿ ಪಕ್ಷ ದಲಿತ ಮತ್ತು ಹಿಂದುಳಿದ ಸಮುದಾಯಕ್ಕೆ ನ್ಯಾಯ ಒದಗಿಸುವುದರ ಮೂಲಕ ಎಲ್ಲಾ ವರ್ಗಗಳನ್ನು ಸಮಾನತೆಯಿಂದ ಕಾಣುತ್ತಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲಾಧ್ಯಕ್ಷ ಡಿ.ಪಿ.ಜಗದೀಶ್, ಮಾಜಿ ಅಧ್ಯಕ್ಷ ಎನ್.ಮಲ್ಲೇಶ್, ವೀರಶೈವ ಮಹಾಸಭಾ ಮಾಜಿ ಜಿಲ್ಲಾಧ್ಯಕ್ಷ ಕೊಡಸೋಗೆ ಶಿವಬಸಪ್ಪ, ಬಗರ್‌ಹುಕುಂ ಸಮಿತಿಯ ಉಪಾಧ್ಯಕ್ಷ ನಿಟ್ರೆ ನಾಗರಾಜಪ್ಪ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಪ್ರಣಯ್, ಎಪಿಎಂಸಿ ಅಧ್ಯಕ್ಷ ರವಿ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಹೊರೆಯಾಲ ಮಹೇಶ್, ಮಾಧ್ಯಮ ವಕ್ತಾರ ಎಸ್.ಸಿ. ಮಂಜುನಾಥ್, ಗ್ರಾಮ ಪಂಚಾಯಿತಿ ಸದಸ್ಯ ಎಸ್.ಟಿ.ಮಹದೇವ ಸ್ವಾಮಿ ಸೇರಿದಂತೆ ಜನಪ್ರತಿನಿಧಿಗಳು ಹಾಗೂ ಕಾರ್ಯಕರ್ತರು ಹಾಜರಿದ್ದರು.

ಒಂದನೇ ಪುಟದಿಂದ

310.49 ಕೋಟಿ ತೆರಿಗೆ ಸಂಗ್ರಹ

ಪಾರ್ಕ್ ಅಭಿವೃದ್ಧಿ ಮತ್ತು ನಿರ್ವಹಣಕ್ಕಾಗಿ ಸಿಂಹಪಾಲು ಹಣ ವ್ಯಯಮಾಡಬೇಕಾಗುತ್ತದೆ. ಅದೇ ರೀತಿ ಪೌರಕಾರ್ಮಿಕರಿಗೆ ವಿಶೇಷ ಸೌಲಭ್ಯ, ಪಾಲಿಕೆಗಳ ದೈನಂದಿನ ಖರ್ಚು-ವೆಚ್ಚ, ಕಟ್ಟಡಗಳ ನಿರ್ವಹಣೆ ಹಾಗೂ ಅಧಿಕಾರಿಗಳ ಹಾಗೂ ಸ್ವಚ್ಛತಾ ಕಾರ್ಯದ ವಾಹನಗಳ ಇಂಧನ ಮತ್ತಿತರ ಖರ್ಚುಗಳು ಪಾಲಿಕೆಗೆ ಪ್ರಮುಖ ಹೊರೆಯಾಗಿದೆ.

ಈ ವೆಚ್ಚಗಳಿಗೆ ಪಾಲಿಕೆಯೇ ಆದಾಯ ಕ್ರೋಢೀಕರಿಸಿಕೊಳ್ಳಬೇಕಾಗಿದ್ದು, ಅಧಿಕಾರಿಗಳು ತೆರಿಗೆಗಳನ್ನು ಪರಿಣಾಮಕಾರಿಯಾಗಿ ವಸೂಲಿ ಮಾಡದಿದ್ದಲ್ಲಿ ನಗರವನ್ನು ಸುವ್ಯವಸ್ಥಿತವಾಗಿ ನಿಭಾಯಿಸಲು ಸಾಧ್ಯವಾಗದು. ವಿವಿಧ ಬಾಬ್ತಿನ ತೆರಿಗೆಯೇ ಪಾಲಿಕೆಯ ಮೂಲ ಸಂಪನ್ಮೂಲವಾಗಿದೆ. ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಜಿ. ಲಕ್ಷ್ಮೀಕಾಂತ ರೆಡ್ಡಿ ತಮ್ಮ ವಿಶಿಷ್ಟ ಕಾರ್ಯವೈಖರಿ ಮೂಲಕ ಮೇಯರ್, ಉಪ ಮೇಯರ್, ಕಾರ್ಪೊರೇಟರ್‌ಗಳ ಸಹಕಾರದಿಂದ ಅಧೀನಾಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರಿಗೆ ಒತ್ತಾಸೆಯಾಗಿ ಹುರಿದುಂಬಿಸಿದ ಪರಿಣಾಮ 2022-23ನೇ ಸಾಲಿನಲ್ಲಿ ತೆರಿಗೆ ವಸೂಲಾತಿಯಲ್ಲಿ ಗಣನೀಯ ಸಾಧನೆ ಮಾಡಿದ್ದಾರೆ.

310.49 ಕೋಟಿ ತೆರಿಗೆ ಸಂಗ್ರಹ: ಪ್ರಸಕ್ತ ಸಾಲಿನಲ್ಲಿ ಒಟ್ಟು 31,048.79 ಲಕ್ಷ ರೂ. (310.49 ಕೋಟಿ ರೂ.) ಗಳನ್ನು ಮೈಸೂರು ಮಹಾನಗರಪಾಲಿಕೆಯು ತೆರಿಗೆ ರೂಪದಲ್ಲಿ ಸಂಗ್ರಹಿಸಿದೆ. ಆಸ್ತಿ ತೆರಿಗೆಯಿಂದ ಬರೋಬ್ಬರಿ 16,900 ಕೋಟಿ ರೂ., ಕುಡಿಯುವ ನೀರಿನ ತೆರಿಗೆಯಿಂದ 9,309.92 ಲಕ್ಷ ರೂ. ನಗರ ಯೋಜನಾ ವಿಭಾಗದಿಂದ ನೀಡಲಾಗುತ್ತಿರುವ ಕಟ್ಟಡ ನಕ್ಷೆ ಅನುಮೋದನೆ, ಪ್ರೋರೇಟಾ ಶುಲ್ಕದಿಂದ 1440.05 ಲಕ್ಷ ರೂ., ದೇವರಾಜ ಮಾರುಕಟ್ಟೆ, ಕೃಷ್ಣರಾಜ ಮಾರುಕಟ್ಟೆ ಇನ್ನಿತರೆ ವಾಣಿಜ್ಯ ಸಂಕೀರ್ಣಗಳ ಬಾಡಿಗೆಯಿಂದ 352.71 ಲಕ್ಷ ರೂ. ಉದ್ದಿಮೆ ರಹದಾರಿ (Trade Licence) ಶುಲ್ಕದಿಂದ 668.21 ಲಕ್ಷ ರೂ. ನಗರದಾದ್ಯಂತ ಅನುಮತಿ ನೀಡಿರುವ ಜಾಹೀರಾತು ಶುಲ್ಕದಿಂದ 64.71 ಲಕ್ಷ ರೂ. ಹಾಗೂ ಖಾತಾ ನೋಂದಣಿ, ವರ್ಗಾವಣೆ ಮತ್ತು ಇನ್ನಿತರ ಸೇವೆಗಳಿಂದ 2,313.19 ಲಕ್ಷ ರೂ. ಸೇರಿ ಒಟ್ಟು 31,048.79 ಲಕ್ಷ ರೂ.ಗಳನ್ನು ತೆರಿಗೆ ರೂಪದಲ್ಲಿ ವಸೂಲಿ ಮಾಡಿ ಅಧಿಕಾರಿಗಳು ಪಾಲಿಕೆ ಆದಾಯವನ್ನು ಹೆಚ್ಚಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಹಿಂದಿನ ವರ್ಷಗಳಲ್ಲಿ: ಈ ಹಿಂದೆ ಮೂಲಸೌಲಭ್ಯ ನಿರ್ವಹಿಸಲು ಅನಿವಾರ್ಯವಾಗಿ ಹಣ ವೆಚ್ಚ ಮಾಡುತ್ತಿದ್ದ ಪಾಲಿಕೆಯು, ಸಂಪನ್ಮೂಲ ಕ್ರೋಢೀಕರಣ ನಿರೀಕ್ಷಿತ ಪ್ರಮಾಣದಲ್ಲಿರಲಿಲ್ಲವಾದ್ದರಿಂದ ರಸ್ತೆ, ಚರಂಡಿ, ಫುಟ್‌ಪಾತ್ ಅಭಿವೃದ್ಧಿ ಕಾಮಗಾರಿ ಮಾಡಿದ್ದ ಗುತ್ತಿಗೆದಾರರ ಬಿಲ್‌ಗಳನ್ನು ಬಾಕಿ ಉಳಿಸಿಕೊಳ್ಳುತ್ತಿತ್ತು. 2021-22ನೇ ಸಾಲಿನಲ್ಲಿ ಎಲ್ಲಾ ಬಾಬ್ತುಗಳ ತೆರಿಗೆಯಿಂದ ಪಾಲಿಕೆಯು 28,069.15 ಲಕ್ಷ ರೂ. ಸಂಗ್ರಹಿಸಿತ್ತು. 2020-21 ರಲ್ಲಿ ಕೋವಿಡ್ ಪರಿಸ್ಥಿತಿಯಿಂದಾಗಿ ಕೇವಲ 20,495.90 ಲಕ್ಷ ರೂ. ವಸೂಲಿಗೆ ತೃಪ್ತಿಪಡಬೇಕಾಗಿತ್ತು. 2019-20 ರಲ್ಲಿ 21,815.42 ಲಕ್ಷ ರೂ., 2018-19 ರಲ್ಲಿ 21,047.41 ಲಕ್ಷ ರೂ., 2017-18 ರಲ್ಲಿ 19,479.80 ಲಕ್ಷ ರೂ. ಹಾಗೂ 2016-17ನೇ ಸಾಲಿನಲ್ಲಿ ಪಾಲಿಕೆಯು 17,597.11 ಲಕ್ಷ ರೂ.ತೆರಿಗೆ ವಸೂಲಿ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ. 2016-17ನೇ ಸಾಲಿಗೆ ಹೋಲಿಕೆ ಮಾಡಿದಲ್ಲಿ ಮೈಸೂರು ಮಹಾನಗರ ಪಾಲಿಕೆಯು ಈ ವರ್ಷ ತೆರಿಗೆ ವಸೂಲಾತಿಯಲ್ಲಿ ದುಪ್ಪಟ್ಟು ಸಾಧನೆ ಮಾಡಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಅದೇ ಕಾರಣಕ್ಕಾಗಿ ಸುಮಾರು ಬಿಲ್ ಅನ್ನು ಸೀನಿಯಾರಿಟಿ ಮತ್ತು ಆದ್ಯತೆ ಮೇಲೆ ಪಾವತಿಸಲು ಸಾಧ್ಯವಾಗಿದೆ.

ಆಸ್ತಿ ತೆರಿಗೆ ಮತ್ತು ನೀರಿನ ತೆರಿಗೆಯನ್ನು ತ್ವರಿತಗತಿಯಲ್ಲಿ ವಸೂಲಿ ಮಾಡಲಾಗುತ್ತಿದ್ದು, ಏಪ್ರಿಲ್ ಮಾಹೆಯಲ್ಲಿ ಇನ್ನೂ 100 ಕೋಟಿ ರೂ. ಸಂಗ್ರಹವಾಗಬಹುದೆಂದು ನಿರೀಕ್ಷಿಸಲಾಗಿದೆ. ಪ್ರಸ್ತುತ ಮೈಸೂರು ಮಹಾನಗರ ಪಾಲಿಕೆಯು ಆರ್ಥಿಕವಾಗಿ ಸದೃಢವಾಗುತ್ತಿದ್ದು, ಅವಶ್ಯ ಬಾಬ್ತುಗಳಿಗೆ ತಡಮಾಡದೇ ಬಿಲ್ ಪಾವತಿ ಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ.

31ಕ್ಕೂ ಅಧಿಕ ಮಂದಿಗೆ ಗಾಯ

ಬಳಿ ತರೀಪುರ ಕ್ರಾಸ್‌ನಲ್ಲಿ ಗೂಡ್ಸ್ ಆಟೋ ಪಲ್ಟಿಯಾಗಿ 11 ಮಂದಿ ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ. **ಪಾಂಡವಪುರ:** ಚಾಲಕನ ನಿಯಂತ್ರಣ ಕಳೆದುಕೊಂಡ ಕೆಎಸ್‌ಆರ್‌ಟಿಸಿ ಬಸ್ ರಸ್ತೆ ಬದಿ ನಿಂತಿದ್ದ ಎತ್ತಿನಗಾಡಿಗೆ ಡಿಕ್ಕಿ ಹೊಡೆದು ಕಬ್ಬಿನ ಗದ್ದೆಗೆ ನುಗ್ಗಿದ ಪರಿಣಾಮ ಬಸ್‌ನಲ್ಲಿದ್ದ 20ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿರುವ ಘಟನೆ ತಾಲೂಕಿನ ಕನಗನಮರಡಿ ಗ್ರಾಮದ ಸರ್ಕಾರಿ ಶಾಲೆ ಬಳಿ ನಡೆದಿದೆ.

ಮಂಡ್ಯದಿಂದ ಹುಲಿಕೆರೆ ಬುಗ, ವದೇ ಸಮುದ್ರ ಮಾರ್ಗವಾಗಿ ಕನಗನಮರಡಿಗೆ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಗ್ರಾಮದ ನಿವಾಸಿ ಶಿವಣ್ಣಗೌಡ ಅವರು ರಸ್ತೆ ಬದಿ ನಿಲ್ಲಿಸಿದ್ದ ಎತ್ತಿನಗಾಡಿಗೆ ಡಿಕ್ಕಿ ಹೊಡೆದು ಕಬ್ಬಿನ ಗದ್ದೆಗೆ ನುಗ್ಗಿದೆ. ಈ ವೇಳೆ ಬಸ್‌ನಲ್ಲಿದ್ದ ಶಂಭುಲಿಂಗಯ್ಯ, ಪ್ರಕಾಶ್, ಸೌಂದರ್ಯ, ಪುಷ್ಪಾವತಿ, ಮಾನಸ, ಪ್ರದೀಪ, ಸಾವಿತ್ರಮ್ಮ, ಪಂಕಜಾ, ಲಕ್ಷ್ಮಮ್ಮ, ಪಾರ್ವತಮ್ಮ, ಪ್ರಜ್ವಲ್ ಸೇರಿದಂತೆ ಸುಮಾರು 20ಕ್ಕೂ ಹೆಚ್ಚು ಪ್ರಯಾಣಿಕರು ಮತ್ತು ಶಾಲಾ ಮಕ್ಕಳಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ವೇಳೆ ಸ್ಥಳದಲ್ಲಿದ್ದವರು ಗಾಯಗೊಂಡವರನ್ನು ಬಸ್‌ನಿಂದ ಕೆಳಗಿಳಿಸಿ ಆಂಬುಲೆನ್ಸ್‌ಗೆ ಕರೆ ಮಾಡಿದರಾದರೂ, ತಕ್ಷಣಕ್ಕೆ ಆಂಬುಲೆನ್ಸ್ ಆಗಮಿಸಲಿಲ್ಲ. ಈ ವೇಳೆ ದುದ್ದದಲ್ಲಿ ನಡೆದ ಖಾಸಗಿ ಕಾರ್ಯಕ್ರಮ ಮುಗಿಸಿಕೊಂಡು ಅದೇ ಮಾರ್ಗವಾಗಿ ವಾಪಸ್ಸಾಗುತ್ತಿದ್ದ ಬಿಜೆಪಿ ಮುಖಂಡ ಡಾ.ಎನ್.ಎಸ್.ಇಂದ್ರೇಶ್, ತಮ್ಮ ಇನ್ನೋವಾ ಕಾರು ಸೇರಿದಂತೆ ಇನ್ನಿತರ ವಾಹನದಲ್ಲಿ ಗಾಯಾಳುಗಳನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಎಲ್ಲರಿಗೂ ಪ್ರಾಥಮಿಕ ಚಿಕಿತ್ಸೆ ಕೊಡಿಸಲು ನೆರವಾದರು. ಇಂದೇಶ್ ಅವರ ಈ ಮಾನವೀಯ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಶಾಸಕ ಸಿಎಸ್‌ಪಿ ಭೇಟಿ: ವಿಷಯ ತಿಳಿದು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿದ ಶಾಸಕ ಸಿ.ಎಸ್.ಪುಟ್ಟರಾಜು ಗಾಯಾಳುಗಳ ಆರೋಗ್ಯ ವಿಚಾರಿಸಿದರು. ಅಲ್ಲದೇ ಗಾಯಗೊಂಡ ಪ್ರಯಾಣಿಕರಿಗೆ ಚಿಕಿತ್ಸೆ ಹಾಗೂ ಪರಿಹಾರ ನೀಡುವಂತೆ ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೇ, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವಂತೆ ಸೂಚಿಸಿದರು.

ಎತ್ತಿನಗಾಡಿ ಮಾಲೀಕನಿಗೆ ಪರಿಹಾರ: ಎತ್ತಿನಗಾಡಿ ಮಾಲೀಕ ಕನಗನಮರಡಿ ಗ್ರಾಮದ ರೈತ ಶಿವಣ್ಣಗೌಡ ಕಂಗಾಲಾಗಿದ್ದು, ಶಾಸಕ ಪುಟ್ಟರಾಜು ಮೊರೆ ಹೋದರು. ರೈತನ ಸಂಕಷ್ಟಕ್ಕೆ ಸ್ಪಂದಿಸಿದ ಶಾಸಕರು ರೈತನಿಗೆ 1 ಲಕ್ಷ ರೂ. ಪರಿಹಾರ ನೀಡುವಂತೆ ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ತಾಕೀತು ಮಾಡಿದರು. ಶಾಸಕರ ನಿರ್ದೇಶನದಂತೆ ಸ್ಥಳದಲ್ಲೇ ಎತ್ತಿನಗಾಡಿ ಮಾಲೀಕನಿಗೆ 20 ಸಾವಿರ ಹಾಗೂ ಕಬ್ಬಿನ ಗದ್ದೆ ಮಾಲೀಕನಿಗೆ 2 ಸಾವಿರ ರೂ. ಪರಿಹಾರ ನೀಡಲಾಯಿತು. ಇನ್ಸ್‌ಪೆಕ್ಟರ್ ಎಂ.ಆರ್.ಲವ ಹಾಗೂ ಎಸ್‌ಐ ಮಂಜುನಾಥ್ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಷುಗರ್ ಮಾಜಿ ಅಧ್ಯಕ್ಷ ಜೆ.ಶಿವಲಿಂಗೇಗೌಡ, ಮುಖಂಡರಾದ ಸಂದೇಶ್, ನವೀನ್‌ಕುಮಾರ್, ಡಿಪೋ ಮ್ಯಾನೇಜರ್ ಅಪ್ಪಿರೆಡ್ಡಿ, ಜೆಡಿಎಸ್ ಮುಖಂಡರಾದ ಸೋಮೇಗೌಡ, ಬೊಮ್ಮರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಳೆದ ನಾಲ್ಕು ವರ್ಷಗಳ ಹಿಂದೆ ಕನಗನಮರಡಿ ಬಳಿ ನಾಲೆಗೆ ಖಾಸಗಿ ಬಸ್ ಉರುಳಿ ಸುಮಾರು 30 ಮಂದಿ ಸಾವನ್ನಪ್ಪಿದ್ದನ್ನು ಸ್ಮರಿಸಬಹುದು.

ಶ್ರೀರಂಗಪಟ್ಟಣ: ಗೂಡ್ಸ್ ಆಟೋ ಪಲ್ಟಿಯಾಗಿ 11 ಮಂದಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಗಾಯಗೊಂಡಿರುವ ಘಟನೆ ತಾಲೂಕಿನ ಮಹದೇವಪುರ ಗ್ರಾಮದ ಬಳಿಯ ತರೀಪುರ ಕ್ರಾಸ್‌ನಲ್ಲಿ ನಡೆದಿದೆ. ತಾಲೂಕಿನ ಚಿಕ್ಕಂಕನಹಳ್ಳಿ ಪ್ರೌಢಶಾಲೆಯ 17 ಮಂದಿ ವಿದ್ಯಾರ್ಥಿಗಳು ಮಹದೇವಪುರ ಸರ್ಕಾರಿ ಶಾಲೆಯ ಪರೀಕ್ಷಾ ಕೇಂದ್ರದಲ್ಲಿ ಗಣಿತ ಪರೀಕ್ಷೆ ಬರೆದು ಮನೆಗೆ ಹಿಂದಿರುಗುತ್ತಿದ್ದ ವೇಳೆ ತಾಲೂಕಿನ ತರೀಪುರ ಕ್ರಾಸ್‌ನಲ್ಲಿ ಗೂಡ್ಸ್ ಆಟೋ ಪಲ್ಟಿಯಾಗಿದೆ. ಪರಿಣಾಮ 11 ಮಂದಿ ವಿದ್ಯಾರ್ಥಿಗಳಿಗೆ ಗಾಯಗೊಂಡಿದ್ದು, ಎಲ್ಲಾ ವಿದ್ಯಾರ್ಥಿಗಳನ್ನು ಮೈಸೂರಿನ ಚೆಲುವಾಂಬ ಆಸ್ಪತ್ರೆಗೆ ದಾಖಲಿಸಲಾಗಿದೆ. ವಿಷಯ ತಿಳಿದು ಆಸ್ಪತ್ರೆಗೆ ಭೇಟಿ ನೀಡಿದ ಶಾಸಕ ರವೀಂದ್ರ ಶ್ರೀಕಂಠಯ್ಯ, ಘಟನೆ ಬಗ್ಗೆ ಮಾಹಿತಿ ಪಡೆದರು. ಅಲ್ಲದೇ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳುವಂತೆ ಬಿಇಓ ಅನಂತರಾಜು ಅವರಿಗೆ ಸೂಚನೆ ನೀಡಿದ್ದು, ವಿದ್ಯಾರ್ಥಿಗಳಿಗೆ ಸೂಕ್ತ ಚಿಕಿತ್ಸೆ ಕೊಡಿಸಲು ನಾನು ಸಿದ್ದನಿದ್ದು, ಅವಶ್ಯವಿದ್ದಲ್ಲಿ ಅತ್ಯಾಧುನಿಕ ಆಸ್ಪತ್ರೆಗೆ ವಿದ್ಯಾರ್ಥಿಗಳನ್ನು ದಾಖಲಿಸುವಂತೆ ವೈದ್ಯರಿಗೆ ತಿಳಿಸಿದ್ದಾರೆ. ಅಲ್ಲದೇ ವಿದ್ಯಾರ್ಥಿಗಳು ಮುಂದಿನ ಪರೀಕ್ಷೆ ಬರೆಯಲು ಸಹಾಯಕರ ಸಹಾಯದೊಂದಿಗೆ ಸೂಕ್ತ ವ್ಯವಸ್ಥೆ ಮಾಡಿಕೊಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಿದ್ದೇನೆ ಎಂದರು. ಈ ಸಂಬಂಧ ಅರಕೆರೆ ಪೊಲೀಸರು ಪ್ರಕರಣ ಪ್ರಕರಣ ದಾಖಲಿಸಿಕೊಂಡಿದ್ದಾರೆ.

2ನೇ ಪಟ್ಟಿ ಬಿಡುಗಡೆ ಮುಂದೂಡಿಕೆ!

ಹಾಸನ ಜಿದ್ದಾ ಜಿದ್ದಿಯಿಂದ ವಿಳಂಬ: ತೀವ್ರ ಕುತೂಹಲ ಮೂಡಿಸಿದ್ದ ಹಾಸನ ವಿಧಾನಸಭಾ ಕ್ಷೇತ್ರದ ಟಿಕೆಟ್‌ಗೆ ಸಂಬಂಧಿಸಿದಂತೆ ಪಕ್ಷದ ವರಿಷ್ಠ ನಾಯಕ ಎಚ್.ಡಿ. ದೇವೇಗೌಡ ಅವರ ನೇತೃತ್ವದಲ್ಲಿ ಏಪ್ರಿಲ್ 1 ರಂದು ನಡೆದ ಸಂಧಾನ ಸಭೆ ವಿಫಲವಾಗಿದೆ. ಭವಾನಿ ರೇವಣ್ಣ ಅವರಿಗೆ ಹಾಸನ ಟಿಕೆಟ್ ಕೈತಪ್ಪಿದೆ. ಪದ್ಮನಾಭ ನಗರದ ಮನೆಯಲ್ಲಿ ನಡೆದ ಸಂಧಾನ ಸಭೆಯಲ್ಲಿ ಗೌಡರು ತಮ್ಮ ನಿಲುವು ವ್ಯಕ್ತಪಡಿಸಿದ ಬಳಿಕ ಆಕ್ರೋಶಗೊಂಡ ಭವಾನಿ ಮತ್ತು ಎಚ್.ಡಿ.ರೇವಣ್ಣ ಮುನಿಸಿಕೊಂಡು ಸಭೆಯ ಅರ್ಧದಲ್ಲೇ ಪ್ರತ್ಯೇಕವಾಗಿ ನಿರ್ಗಮಿಸಿದ್ದರು. ಕುಟುಂಬದವರಿಗೆ ಟಿಕೆಟ್ ಬೇಡ ಎಂಬ ಬಲವಾದ ನಿಲುವು ವ್ಯಕ್ತಪಡಿಸಿದ್ದ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಅವರ ಮಾತಿಗೇ ದೇವೇಗೌಡರು ಸಹಮತ ವ್ಯಕ್ತಪಡಿಸಿದ್ದರು. ಈ ಬೆಳವಣಿಗೆ ಹಿನ್ನೆಲೆಯಲ್ಲಿ ಸೋಮವಾರ ಜೆಡಿಎಸ್‌ನ ಎರಡನೇ ಪಟ್ಟಿ ಪ್ರಕಟಗೊಳ್ಳುವುದೇ, ಒಂದು ವೇಳೆ ಪ್ರಕಟಗೊಂಡರೂ ಅದರಲ್ಲಿ ಹಾಸನ ಕ್ಷೇತ್ರದ ಅಭ್ಯರ್ಥಿ ಹೆಸರು ಇರಲಿದೆಯೇ ಎಂಬುದು ಕುತೂಹಲಕರ ಮೂಡಿತ್ತು. ಕೊನೆಗೂ ಜೆಡಿಎಸ್‌ನ ಎರಡನೇ ಪಟ್ಟಿಪ್ರಕಟ ವಿಳಂಬವಾಗಿದೆ.

ಅನಧಿಕೃತ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಿ: ಡಿಸಿ ಸೂಚನೆ

ಮೈಸೂರು,ಏ.3(ಎಂಟಿವೈ) – ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಅನಧಿಕೃತ ಮದ್ಯ ಮಾರಾಟ ಹಾಗೂ ಸಾಗಾಣಿಕೆಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚಿಸಿದ್ದಾರೆ.



ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಅಬಕಾರಿ ಹಾಗೂ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಚುನಾವಣೆ ಸಂದರ್ಭ ಮಾತ್ರವಲ್ಲದೆ ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ ಮತ್ತು ಸಾಗಾಣಿಕೆಯನ್ನು ತಡೆಗಟ್ಟಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಹೆಚ್.ಡಿ.ಕೋಟೆ, ಸರಗೂರು ತಾಲೂಕಿನ ಗುಡ್ಡಗಾಡು ಪ್ರದೇಶದಲ್ಲಿ ಕಳಭಟ್ಟಿ ಪ್ರಕರಣಗಳ ಬಗ್ಗೆ ದೂರು ಕೇಳಿ ಬಂದಿದೆ. ಈ ಭಾಗದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಕಳಭಟ್ಟಿ ಪ್ರಕರಣ ಕಂಡು ಬಂದರೆ ಕಠಿಣ ಕ್ರಮಕೈಗೊಳ್ಳಬೇಕು ಎಂದರು.

ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿರುವ ಮದ್ಯ ಮಾರಾಟ ಮಳಿಗೆಗಳಿಗೆ ನಿತ್ಯವೂ ಭೇಟಿ ನೀಡಿ ಪರಿಶೀಲಿಸಬೇಕು. ಮತದಾರರಿಗೆ ಆಮಿಷವೊಡ್ಡಲು ಲಿಕ್ಕರ್ ಶಾಪ್, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಜನರಿಗೆ ಮದ್ಯ ಕೊಡಿಸಿ ಬೇರೆಯವರು ಹಣ ಪಾವತಿ ಮಾಡುವ ಬಗ್ಗೆ ಗಮನಹರಿಸಬೇಕು. ಈ ಕುರಿತು ಬಾರ್ ಅಂಡ್ ರೆಸ್ಟೋರೆಂಟ್ ಮಾಲೀಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಬಾರ್‌ಗಳಿಂದ ಮನೆಗಳಿಗೆ ಹೆಚ್ಚಿನ ಪ್ರಮಾಣ (ಬಲ್ಕ್)ದಲ್ಲಿ ಮದ್ಯ ಸರಬರಾಜು ಮಾಡುವ ಬಗ್ಗೆ ಗಮನಹರಿಸಬೇಕು. ಗ್ರಾಮೀಣ ಪ್ರದೇಶದಲ್ಲಿರುವ ಕಿರಾಣಿ ಅಂಗಡಿಗಳಲ್ಲಿ ಹಾಗೂ ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ದೂರು ಬಂದರೆ ಕೂಡಲೇ ಪರಿಶೀಲಿಸಬೇಕು. ಮಾರಾಟ ಮಾಡುವುದು ಕಂಡುಬಂದರೆ ಪ್ರಕರಣ ದಾಖಲಿಸಬೇಕು. ಅಲ್ಲದೆ ಮದ್ಯ ಮಾರಾಟ ಮಳಿಗೆಗಳಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರ ವಹಿಸುವಂತೆ ಸೂಚಿಸಿದರು.

ಅಬಕಾರಿ ಇಲಾಖೆ ವತಿಯಿಂದ ಚೆಕ್ ಪೋಸ್ಟ್‌ಗಳಲ್ಲಿ ಪರಿಶೀಲನೆ ನಡೆಸಬೇಕು. ಮತದಾನಕ್ಕೂ ಮುನ್ನ 48 ಗಂಟೆ ಒಣ ದಿನಗಳಲ್ಲಿ ಮದ್ಯ ಮಾರಾಟ ನಿಷೇಧಿಸಲಾಗುತ್ತಿದ್ದು, ಆ ದಿನಗಳಲ್ಲಿ ಅಬಕಾರಿ ಇಲಾಖೆ ಅಗತ್ಯ ಕ್ರಮ ವಹಿಸಬೇಕು ಎಂದರು.

ವಾಣಿಜ್ಯ ತೆರಿಗೆ ಇಲಾಖೆ: ಎಲ್ಲ ಚೆಕ್ ಪೋಸ್ಟ್‌ಗಳಲ್ಲಿ ವಾಣಿಜ್ಯ ತೆರಿಗೆ ಇಲಾಖೆ ವತಿಯಿಂದ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಕೇರಳದಿಂದ ಬರುವ ವಾಣಿಜ್ಯ ವಾಹನಗಳ ಪರಿಶೀಲಿಸಬೇಕು. ಅಂತರ ರಾಜ್ಯ ಗಡಿ ಭಾಗದ ಚೆಕ್‌ಪೋಸ್ಟ್ ಸೇರಿದಂತೆ ವಿವಿಧ ಚೆಕ್‌ಪೋಸ್ಟ್‌ಗಳಿಗೆ ಭೇಟಿ ನೀಡಿ ವಾಣಿಜ್ಯ ತೆರಿಗೆ ಇಲಾಖೆಯವರು ಪರಿಶೀಲನೆ ನಡೆಸಬೇಕು. ಜನರಿಗೆ ಆಮಿಷವೊಡ್ಡಲು ಹಲವು ಬಗೆಯ ಪ್ರಯತ್ನಗಳು ನಡೆಯುವ ಸಾಧ್ಯತೆಗಳಿರುತ್ತವೆ. ಹೆಚ್ಚಿನ ಮೊತ್ತದ ನಗದು, ಸೀರೆ, ಕುಕ್ಕರ್, ಪಾತ್ರೆ, ಬಟ್ಟೆ ಸೇರಿದಂತೆ ಮತ್ತಿತರ ಸಾಮಗ್ರಿಗಳನ್ನು ಅಕ್ರಮವಾಗಿ ಸಾಗಣೆ ಮಾಡುವ ಸಂಭವವಿರುತ್ತದೆ. ಇದಕ್ಕೆ ಕಡಿವಾಣ ಹಾಕಲು ವಾಹನಗಳ ತಪಾಸಣೆ ನಡೆಸಬೇಕು. ಇದನ್ನು ವಿಡಿಯೋ ಚಿತ್ರೀಕರಣ ಮಾಡಬೇಕು. ಯಾವುದೇ ಸಾಮಗ್ರಿಗಳ ಸಾಗಣೆ ಬಗ್ಗೆ ಸಂಶಯ ಬಂದಲ್ಲಿ ಸಮಗ್ರ ತಪಾಸಣೆ ನಡೆಸಿ, ಅಕ್ರಮ ಕಂಡು ಬಂದಲ್ಲಿ ಕೂಡಲೆ ಕ್ರಮ ಕೈಗೊಂಡು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಚೆಕ್‌ಪೋಸ್ಟ್‌ಗಳು ದಿನದ 24 ಗಂಟೆಯೂ ಕಾರ್ಯ ನಿರ್ವಹಿಸುವುದರಿಂದ, ಪಾಳಿಗೆ ಅನುಗುಣವಾಗಿ ಕರ್ತವ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನಿಯೋಜಿಸಬೇಕು. ಸಂಬಂಧಪಟ್ಟ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಅಬಕಾರಿ ಇಲಾಖೆಯ ಜಿಲ್ಲಾ ಅಧಿಕಾರಿ ರವಿಶಂಕರ್, ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿ ಕಂಬಣ್ಣ, ಅಬಕಾರಿ ಹಾಗೂ ಸಾರಿಗೆ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಮಾಜಿ ಸಿಎಂ ಸಿದ್ದರಾಮಯ್ಯರ ಬಗ್ಗೆ ಮಾತನಾಡುವ ಯೋಗ್ಯತೆ ಛಲವಾದಿ ನಾರಾಯಣಸ್ವಾಮಿಗಿಲ್ಲ

ಕೆಪಿಸಿಸಿ ವಕ್ತಾರ ಜಿ.ವಿ.ಸೀತಾರಾಮು ವಾಗ್ದಾಳಿ



ಮೈಸೂರು,ಏ.3(ಪಿಎಂ)- ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯಾಧ್ಯಕ್ಷ ಛಲವಾದಿ ನಾರಾಯಣಸ್ವಾಮಿ ಒಬ್ಬ ಪಂಚರ್ ಗಿರಾಕಿ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಮಾತನಾಡುವ ಯೋಗ್ಯತೆ ಛಲವಾದಿ ನಾರಾಯಣಸ್ವಾಮಿ ಅವರಿಗಿಲ್ಲ ಎಂದು ಕೆಪಿಸಿಸಿ ವಕ್ತಾರ ಜಿ.ವಿ.ಸೀತಾರಾಮು ವಾಗ್ದಾಳಿ ನಡೆಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಛಲವಾದಿ ನಾರಾಯಣಸ್ವಾಮಿ ಮೊನ್ನೆ ಮೈಸೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ. ಸಿದ್ದರಾಮಯ್ಯರನ್ನು ಟೀಕಿಸಲೆಂದೇ ಬಿಜೆಪಿಯವರು ಇವರನ್ನು ಎಂಎಲ್‌ಸಿ ಮಾಡಿದ್ದಾರೆ ಎಂದು ಟೀಕಿಸಿದರು.

ಬಿಜೆಪಿ ದಲಿತ ಸಮುದಾಯದ ಶ್ರೇಯೋಭಿವೃದ್ಧಿಗೆ ಹೆಚ್ಚು ಅನುದಾನ ಕಲ್ಪಿಸಿತು ಎಂದು ಛಲವಾದಿ ನಾರಾಯಣಸ್ವಾಮಿ ಪದೇ ಪದೆ ಸುಳ್ಳು ಹೇಳುತ್ತಿದ್ದಾರೆ. ರಾಜ್ಯ ಬಜೆಟ್‌ನಲ್ಲಿ ಶೇ.24.1ರಷ್ಟನ್ನು ಮೀಸಲಿಡುವ ಎಸ್‌ಸಿಎಸ್‌ಪಿ-ಟಿಎಸ್‌ಪಿ ಕಾಯ್ದೆಯನ್ನು ಕಾಂಗ್ರೆಸ್ ಜಾರಿಗೊಳಿಸಿತು. 2008ರಿಂದ 2013ರವರೆಗೆ ಬಿಜೆಪಿ ಸರ್ಕಾರ ದಲಿತ ಸಮಾಜದ ಅಭಿವೃದ್ಧಿಗಾಗಿ ಕೇವಲ 22 ಸಾವಿರ ಕೋಟಿ ಅನುದಾನ ಬಳಸಿದೆ. ಆದರೆ ಕಾಂಗ್ರೆಸ್ ಸರ್ಕಾರ 2013ರಿಂದ 2018ರವರೆಗಿನ ಆಡಳಿತಾವಧಿಯಲ್ಲಿ ಸುಮಾರು 88 ಸಾವಿರ ಕೋಟಿ ಅನುದಾನ ಕಲ್ಪಿಸಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರದಲ್ಲಿ 2 ಲಕ್ಷ ಕೋಟಿ ಬಜೆಟ್ ಇದ್ದಾಗ ಸುಮಾರು 30 ಸಾವಿರ ಕೋಟಿ ರೂ ಅನ್ನು ಎಸ್‌ಸಿಎಸ್‌ಪಿ-ಟಿಎಸ್‌ಪಿಗೆ ಮೀಸಲಿಟ್ಟಿತು. ಆದರೆ 2019ರಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿ 3.90 ಲಕ್ಷ ರೂ. ಬಜೆಟ್ ಮಂಡಿಸಿದರೂ ಕೇವಲ 30 ಸಾವಿರ ಕೋಟಿ ಮೀಸಲಿಟ್ಟಿರುವುದು ಅನ್ಯಾಯವಲ್ಲವೇ? ಬಿಜೆಪಿ ಮತ್ತು ಆರ್‌ಎಸ್‌ಎಸ್‌ನವರು ಸಂವಿಧಾನ ಬದಲಿಸುವ ಮಾತುಗಳನ್ನಾಡಿದರೂ ಅದಕ್ಕೆ ವಿರೋಧ ವ್ಯಕ್ತಪಡಿಸದ ನಾರಾಯಣಸ್ವಾಮಿ, ಬಿಜೆಪಿಯಲ್ಲಿ ಗುಲಾಮರಂತೆ ಬಿದ್ದಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಧ್ರುವನಾರಾಯಣ ಇದ್ದಾಗೇಕೆ ಹೇಳಲಿಲ್ಲ: ರಾಜ್ಯ ಬಿಜೆಪಿ ಸರ್ಕಾರವು ಭೋವಿ, ಕೊರಮ, ಕೊರಚ ಮತ್ತು ಲಂಬಾಣಿ ಸಮುದಾಯಗಳಿಗೆ ಶೇ.4.5ರಷ್ಟು ಒಳ ಮೀಸಲಾತಿ ಹಂಚಿಕೆ ಮಾಡಿರುವುದು ಸಂವಿಧಾನದ 9ನೇ ಶೆಡ್ಯೂಲ್‌ಗೆ ಸೇರಿಸದೇ ಊರ್ಜಿತವಾಗದು. ಧ್ರುವನಾರಾಯಣ್ ಅವರ ಮೇಲೆ ಸಿದ್ದರಾಮಯ್ಯರ ವಕ್ರದೃಷ್ಟಿ ಇತ್ತು ಎಂದು ಛಲವಾದಿ ನಾರಾಯಣಸ್ವಾಮಿ ಸುಳ್ಳು ಹೇಳಿದ್ದಾರೆ. ಈಗ ಹೇಳುವ ಬದಲು ಧ್ರುವನಾರಾಯಣ ಅವರು ಬದುಕಿದ್ದಾಗಲೇ ಹೇಳಿದ್ದರೆ ಅದನ್ನು ಅವರು ಸ್ಪಷ್ಟಪಡಿಸುತ್ತಿದ್ದರು. ಆದರೆ ಈಗ ಹೇಳುತ್ತಿರುವ ಉದ್ದೇಶವೇನು? ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೆಂಗಳೂರು, ಮೈಸೂರು ಮೂಲದ ಕಂಟ್ರಾಕ್ಟರ್‌ಗಳಿಂದ ಬಾದಾಮಿ ಕ್ಷೇತ್ರದಲ್ಲಿ ಕಾಮಗಾರಿ ಮಾಡಿಸಿ 40 ಪರ್ಸೆಂಟ್ ಕಮಿಷನ್ ಪಡೆಯುತ್ತಿದ್ದಾರೆ ಎಂದು ಛಲವಾದಿ ನಾರಾಯಣಸ್ವಾಮಿ ಸುಳ್ಳು ಹೇಳಿದ್ದು, ಅವರು ಕಮಿಷನ್ ಕೊಟ್ಟವರ ಹೆಸರುಗಳನ್ನು ಹೇಳಬೇಕು ಎಂದು ಆಗ್ರಹಿಸಿದರು. ಕಾಂಗ್ರೆಸ್ ಮುಖಂಡರಾದ ಬಸವರಾಜ ನಾಯಕ, ಕೋಟೆ ಹುಂಡಿ ಮಹದೇವ್ರು, ಪಿ.ಬಸವರಾಜು, ಜೆಪಿ ನಗರ ಪರಮೇಶ್ ಗೋಷ್ಠಿಯಲ್ಲಿದ್ದರು.

13 ಕ್ಷೇತ್ರಗಳಲ್ಲಿ ಎಸ್‌ಯುಸಿಐ ಕಮ್ಯುನಿಸ್ಟ್ ಪಕ್ಷ ಸ್ಪರ್ಧೆ

ಮೈಸೂರಿನ ಕೆಆರ್ ಕ್ಷೇತ್ರದಲ್ಲಿ ಪಿ.ಎಸ್.ಸಂಧ್ಯಾ ಕಣಕ್ಕೆ



ಮೈಸೂರು,ಏ.3(ಪಿಎಂ)- ಈ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್/ಎಸ್‌ಯುಸಿಐ) ಪಕ್ಷ ಮೈಸೂರಿನ ಕೆಆರ್ ಕ್ಷೇತ್ರ ಸೇರಿದಂತೆ 13 ಕ್ಷೇತ್ರಗಳಲ್ಲಿ ಸ್ಪರ್ಧೆ ಮಾಡಲಿದೆ ಎಂದು ಪಕ್ಷದ ರಾಜ್ಯ ಸಮಿತಿ ಸದಸ್ಯ ಹಾಗೂ ಜಿಲ್ಲಾ ಕಾರ್ಯದರ್ಶಿ ಬಿ.ರವಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಕೆಆರ್ ಕ್ಷೇತ್ರದ ಪಕ್ಷದ ಅಭ್ಯರ್ಥಿಯಾಗಿ ಹಲವು ಜನಪರ ಹೋರಾಟದಲ್ಲಿ ಗುರುತಿಸಿಕೊಂಡಿರುವ ಪಿ.ಎಸ್.ಸಂಧ್ಯಾ ಕಣಕ್ಕಿಳಿಯುತ್ತಿದ್ದಾರೆ. ದುಡಿಯುವ ಜನತೆ, ರೈತರು, ವಿದ್ಯಾರ್ಥಿಗಳು, ಯುವಜನರು, ಮಹಿಳೆಯರಿಗೆ ದನಿಯಾಗಬೇಕೆಂಬ ನಿಟ್ಟಿನಲ್ಲಿ ಎಸ್‌ಯುಸಿಐ ಸ್ಪರ್ಧೆ ಮಾಡುತ್ತಿದೆ ಎಂದರು.

ರಾಜಾಜಿನಗರ ಕ್ಷೇತ್ರದಲ್ಲಿ ಟಿ.ಸಿ.ರಮ್ಯಾ, ರಾಜರಾಜೇಶ್ವರಿನಗರದಲ್ಲಿ ಕೆ.ವೇಣುಗೋಪಾಲ್ (ಕೆ.ವಿ.ಭಟ್), ಬಳ್ಳಾರಿ ನಗರದಲ್ಲಿ ಸೋಮಶೇಖರಗೌಡ, ಕುಷ್ಟಿಯಲ್ಲಿ ದೇವದಾಸ್, ದಾವಣಗೆರೆ ದಕ್ಷಿಣದಲ್ಲಿ ಭಾರತಿ, ಧಾರವಾಡದಲ್ಲಿ ಮಧುಲತಾ ಗೌಡರ್, ಕಲಬುರ್ಗಿ ದಕ್ಷಿಣದಲ್ಲಿ ಎಸ್.ಬಿ.ಮಹೇಶ್, ಕಲಬುರ್ಗಿ ಗ್ರಾಮೀಣದಲ್ಲಿ ಗಣಪತ್ ರಾವ್ ಮಾನೆ, ರಾಯಚೂರು ಕ್ಷೇತ್ರದಲ್ಲಿ ಎನ್.ಎಸ್.ವೀರೇಶ್, ತುಮಕೂರು ನಗರದಲ್ಲಿ ಎಸ್.ನಾಗವೀರಭದ್ರಸ್ವಾಮಿ, ಬಿಜಾಪುರ ನಗರದಲ್ಲಿ ಮಲ್ಲಿಕಾರ್ಜುನ್ ತಳವಾರ್ ಮತ್ತು ಯಾದಗಿರಿಯಲ್ಲಿ ಕೆ.ಸೋಮಶೇಖರ್ ಪಕ್ಷದ ಅಭ್ಯರ್ಥಿಗಳಾಗಿ ಸ್ಪರ್ಧೆ ಮಾಡಲಿದ್ದಾರೆ ಎಂದು ವಿವರಿಸಿದರು.

ಪಕ್ಷ ಸ್ಪರ್ಧೆ ಮಾಡದ ಕ್ಷೇತ್ರಗಳಲ್ಲಿ ಜೆಸಿಬಿ ಮತ್ತು ಕೋಮುವಾದಿ ಮತ್ತಿತರ ವಿಭಜಕವಾದಿ ಪಕ್ಷಗಳನ್ನು ಹೊರತುಪಡಿಸಿ, ಜನಪರ ಹೋರಾಟಗಳಲ್ಲಿ ತೊಡಗಿರುವ ಪ್ರಾಮಾಣಿಕ ಅಭ್ಯರ್ಥಿಗಳನ್ನು ಬೆಂಬಲಿಸಬೇಕೆಂದು ರಾಜ್ಯದ ಜನತೆಯಲ್ಲಿ ಮನವಿ ಮಾಡಿದರು. ಅಭ್ಯರ್ಥಿ ಪಿ.ಎಸ್.ಸಂಧ್ಯಾ, ಪಕ್ಷದ ಪದಾಧಿಕಾರಿಗಳಾದ ಚಂದ್ರಶೇಖರ ಮೇಟಿ, ಉಮಾದೇವಿ, ಸೀಮಾ ಗೋಷ್ಠಿಯಲ್ಲಿದ್ದರು.

'ಶ್ರೀ ವಿದ್ಯಾವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ ಗ್ರಂಥ' ಕೃತಿ ಬಿಡುಗಡೆ

ಮೈಸೂರು, ಏ.3(ಎಸ್‌ಪಿಎನ್)- ಲೇಖಕ ವಿದ್ವಾನ್ ವಿ.ನಂಜುಂಡಸ್ವಾಮಿ ರಚಿತ 'ಶ್ರೀ ವಿದ್ಯಾವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ ಗ್ರಂಥ'ವನ್ನು ಸೋಮವಾರ ಬಿಡುಗಡೆಗೊಳಿಸಲಾಯಿತು.



ಮೈಸೂರು ಕುವೆಂಪುನಗರದ ಗಾನಭಾರತೀ ಆವರಣದ ರಮಾಗೋವಿಂದ ಕಲಾವೇದಿಕೆಯಲ್ಲಿ ನೃತ್ಯಗಿರಿ ಪ್ರದರ್ಶಕ ಕಲೆಗಳ ಸಂಶೋಧನಾ ಕೇಂದ್ರದ ವತಿಯಿಂದ ಆಯೋಜಿಸಿದ್ದ ವಿದ್ವಾನ್ ವಿ.ನಂಜುಂಡಸ್ವಾಮಿ ರಚಿತ ಶ್ರೀ ವಿದ್ಯಾವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ ಗ್ರಂಥವನ್ನು ಹಿರಿಯ ಪಿಟೀಲು ವಾದಕರಾದ ಮೈಸೂರು ಎಂ. ನಾಗರಾಜ್ ಮತ್ತು ಮೈಸೂರು ಎಂ.ಮಂಜುನಾಥ್ ಬಿಡುಗಡೆಗೊಳಿಸಿದರು.

ನಂತರ ಮೈಸೂರು ಎಂ.ನಾಗರಾಜು ಮಾತನಾಡಿ, ಲೇಖಕರು ಕೃತಿಯನ್ನು ವಿಸ್ತಾರವಾಗಿ ರಚನೆ ಮಾಡಿದ್ದಾರೆ. ಈ ಪುಸ್ತಕದಲ್ಲಿ ಸಂಗೀತ ಕುರಿತು ತಿಳಿಸುವ, ಮನಸ್ಸಿಗೆ ಹಿತ ನೀಡುವ ಕುರಿತ ಮಾರ್ಗದರ್ಶನ ನೀಡುವ ಮನಸ್ಥಿತಿ ಲೇಖಕರದ್ದಾಗಿದೆ. ಅಲ್ಲದೆ, ಮತ್ತಷ್ಟು ಇಂತಹ ಕೃತಿಗಳು ಹೊರಬರಲಿ ಎಂದು ಹಾರೈಸಿದರು.

ಕೃತಿ ಕುರಿತು ಪ್ರೊ.ಕೆ.ರಾಮಮೂರ್ತಿ ರಾವ್ ಮಾತನಾಡಿ, ಶ್ರೀ ವಿದ್ಯಾ ವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ ಗ್ರಂಥವು ಸಂಗೀತ, ನೃತ್ಯ ಮತ್ತು ಮೈಸೂರು ಒಡೆಯರ್ ಕುರಿತು ಮಾಹಿತಿ ಇರುವ ಪ್ರಮುಖ ಮೌಲಿಕ ಗ್ರಂಥವಾಗಿದೆ. ಲೇಖಕ ವಿದ್ವಾನ್ ವಿ.ನಂಜುಂಡಸ್ವಾಮಿ ಅವರು ಅರ್ಥ, ಭಾವಾರ್ಥ ಸೇರಿಸಿ ಸೃಜನಶೀಲವಾಗಿ ಕೃತಿಯನ್ನು ರಚಿಸಿದ್ದಾರೆ. ಸಂಗೀತ ಪ್ರೇಮಿಗಳು ಬಳಸಿಕೊಳ್ಳಲು ಶಾಶ್ವತವಾದ ರೂಪದಲ್ಲಿ ಗ್ರಂಥವನ್ನು ಹೊರತಂದಿದ್ದಾರೆ ಎಂದು ತಿಳಿಸಿದರು.

ಈ ಗ್ರಂಥವು 456 ಪುಟಗಳನ್ನು ಒಳಗೊಂಡಿದ್ದು, 98 ಲೇಖನಗಳನ್ನೊಳಗೊಂಡಿದೆ. ಮೂರು ವಿಭಾಗಗಳನ್ನಾಗಿ ವಿಂಗಡಿಸಲಾಗಿದೆ. ಇದರಲ್ಲಿ ಸಂಗೀತ ಕೃತಿಗಳು ವಾಗ್ಗೇಯಕಾರರ ರಚನೆ, ಮೈಸೂರು ಮತ್ತು ಒಡೆಯರ್ ಕುರಿತಾದ ಮಾಹಿತಿ ಕಣಜ, ವಿದ್ವಾಂಸರ ಪ್ರತಿಕ್ರಿಯೆಗಳ ಕುರಿತು ಲೇಖನಗಳನ್ನೊಳಗೊಂಡಿದೆ ಎಂದು ತಿಳಿಸಿದರು. ವೇದಿಕೆ ಕಾರ್ಯಕ್ರಮದ ನಂತರ ವಿದ್ವಾನ್ ಸುಮಂತ್, ವಿದ್ವಾನ್ ಮಂಜುನಾಥ್, ವಿದ್ವಾನ್ ಎ.ರಾಧೇಶ್, ವಿದ್ವಾನ್ ಎಸ್. ಮಂಜುನಾಥ್ ಪಿಟೀಲು ವಾದನ ನಡೆಸಿಕೊಟ್ಟರು. ಜಯ ಚಾಮರಾಜೇಂದ್ರ ಒಡೆಯರ್ ರಚಿತ ಸಾಹಿತ್ಯ ಆಧಾರಿತ ಮೈಸೂರಿನ ವಿವಿಧ ನೃತ್ಯಶಾಲೆಗಳ ಗುರುಗಳು ಮತ್ತು ಶಿಷ್ಯವೃಂದದವರಾದ ವಿದ್ವಾನ್ ಬದ್ರಿ, ದಿವ್ಯ ಭೂಷಣ್, ವಿದ್ವಾನ್ ಕೆಆರ್.ವಿಶ್ವಘೋಷ, ವಿದುಷಿ ಸಿಂಧು, ವಿದುಷಿ ಜ್ಯೋತಿ ಹೆಗಡೆ ಮತ್ತು ಶಿಷ್ಯ ವೃಂದ, ವಿದುಷಿ ಚೇತನಾ ರಾಧಾಕೃಷ್ಣ ಮತ್ತು ಶಿಷ್ಯವೃಂದ, ವಿದುಷಿ ಅಂಜನಾ ಭೂಷಣ್, ವಿದುಷಿ ವಾರಿಜಾ ನಳಿಗೆ ಮತ್ತು ಶಿಷ್ಯವೃಂದದಿಂದ ಪ್ರದರ್ಶಿಸಿದ ಭರತನಾಟ್ಯ ಎಲ್ಲರ ಮನಸೂರೆಗೊಂಡಿತು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಾಂತ ಕಾರ್ಯಕಾರಿಣಿ ಸದಸ್ಯ ಮ. ವೆಂಕಟರಾಮು ಅಧ್ಯಕ್ಷತೆ ವಹಿಸಿದ್ದರು. ಡಾ.ಕೃಪಾ ಫಡ್ಕೆ, ಎಚ್.ಎಸ್. ಉಮಾದೇವಿ ನಂಜುಂಡಸ್ವಾಮಿ ಮತ್ತಿತರರಿದ್ದರು.

ಮಹಾವೀರ ಜಯಂತಿ: ನೀರಿನ ತೊಟ್ಟಿ ಅಳವಡಿಕೆ

ಮೈಸೂರು, ಏ. 3- ವಿಶ್ವ ಶಾಂತಿ ಮತ್ತು ಮನುಕುಲದ ಏಳಿಗೆಗಾಗಿ ಶ್ರಮಿಸಿದ ಭಗವಾನ್ ಮಹಾವೀರ್ ಜಯಂತಿ ಅಂಗವಾಗಿ ಪಿ ಕೆ ಟ್ರಸ್ಟ್ ವತಿಯಿಂದ ಪ್ರಾಣಿ-ಪಕ್ಷಿಗಳಿಗೆ ನೀರಿನ ತೊಟ್ಟಿ ಅಳವಡಿಸುವ ಮೂಲಕ ಆಚರಣೆಯನ್ನು ಏಪ್ರಿಲ್ 4ರಂದು ಬೆಳಿಗ್ಗೆ 11 ಗಂಟೆಗೆ ನಗರದ ಚಾಮುಂಡಿಬೆಟ್ಟದ ಪಾದದಲ್ಲಿ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್ ತಿಳಿಸಿದ್ದಾರೆ.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಕೇಂದ್ರ ಪ್ರಾಣಿಗಳ ಕಲ್ಯಾಣ ಮಂಡಳಿಯ ರಾಜ್ಯ ಅಧ್ಯಕ್ಷ ಮಿತ್ತಲ್, ಮೃಗಾಲಯ ಪ್ರಾಧಿಕಾರ ಅಧ್ಯಕ್ಷರಾದ ಶಿವಕುಮಾರ್, ಉರಗ ತಜ್ಞ ಸ್ನೇಕ್ ಶಾಮ್, ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷರಾದ ಹೇಮಾ ನಂದೀಶ್, ಪರಿಸರ ಪ್ರೇಮಿ ಮಹೇಂದ್ರ ಸಿಂಗ್ ಕಾಳಪ್ಪ, ದೇವೇಂದ್ರ ಪಾರಿಯಾರ್, ಪೃಥ್ವಿ ಸಿಂಗ್ ಚಂದಾವತ್ ಇನ್ನಿತರರು ಭಾಗವಹಿಸಲಿದ್ದಾರೆ ಎಂದು ತಿಳಿಸಲಾಗಿದೆ.

ಶ್ರೀ ವೈಷ್ಣವ ವಟುಗಳಿಗೆ ಸಾಮೂಹಿಕ ಉಪನಯನ

ಮೈಸೂರು, ಏ. 3- ಮೈಸೂರಿನ ಕೃಷ್ಣಮೂರ್ತಿಪುರಂನ ಶ್ರೀ ವೈಷ್ಣವ ಸಾಮೂಹಿಕ ಉಪನಯನ ಸಮಿತಿ ವತಿಯಿಂದ ಮೇ 22ರಂದು ಕೃಷ್ಣಮೂರ್ತಿಪುರಂನ ಶ್ರೀರಾಮ ಮಂದಿರದಲ್ಲಿ ಶ್ರೀ ವೈಷ್ಣವ ವಟುಗಳಿಗೆ ಸಾಮೂಹಿಕ ಉಪನಯನ ಏರ್ಪಡಿಸಲಾಗಿದೆ.

ಆಸಕ್ತರು ಮೇ 10ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಮೊ. 9448872458, 9448330197 ಸಂಪರ್ಕಿಸಬಹುದು.

ಉಚಿತ ಸ್ತ್ರೀರೋಗ ತಪಾಸಣಾ ಶಿಬಿರ

ಮೈಸೂರು, ಏ. 3- ಮೈಸೂರಿನ ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯಲ್ಲಿ ಏ. 3 ರಿಂದ 8 ರವರೆಗೆ ಉಚಿತ ಸ್ತ್ರೀರೋಗ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞವೈದ್ಯರಾದ ಡಾ.ಶಶಿಕಲಾ ಜಿ ಹಾಗೂ ಡಾ.ಹೆಚ್.ಎನ್. ಗೀತಾ ಅವರ ನೇತೃತ್ವದಲ್ಲಿ ಈ ಶಿಬಿರ ನಡೆಯಲಿದೆ. ಶಿಬಿರದಲ್ಲಿ ಪಿ.ಸಿ.ಓ.ಡಿ, ಮುಟ್ಟಿನ ಸಮಸ್ಯೆಗಳು, ಬಿಳಿ ವಿಸರ್ಜನೆ, ಹೊಟ್ಟೆನೋವು, ಹೊಟ್ಟೆಯಲ್ಲಿ ಗೆಡ್ಡೆ ಬಂಜೆತನ, ಸ್ತನದಲ್ಲಿ ನೋವು ಅಥವಾ ಗೆಡ್ಡೆ ಮುಂತಾದ ಸಮಸ್ಯೆಗಳಿರುವವರು ಕೂಡಲೇ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ 0821-2533600, 9986399862 ಸಂಪರ್ಕಿಸಬಹುದು.

ಬಿಜೆಪಿ ಬೆಂಬಲಿಸಿದ್ದಕ್ಕೆ ಪರಿಷತ್ ಸದಸ್ಯ ವಿಶ್ವನಾಥ್ 'ಪಶ್ಚಾತ್ತಾಪ' ಧರಣಿ

ಮೈಸೂರು,ಏ.3(ಎಂಟಿವೈ)- ರಾಜ್ಯದಲ್ಲಿ ಪರಮ ಭ್ರಷ್ಟಾಚಾರದ ಸರ್ಕಾರ ಅಧಿಕಾರಕ್ಕೆ ಬರಲು ಕಾರಣವಾಗಿದ್ದಕ್ಕೆ ಮೈಸೂರಲ್ಲಿ ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ತಮ್ಮ ಬೆಂಬಲಿಗರು ಹಾಗೂ ಹಿತೈಷಿಗಳೊಂದಿಗೆ 'ಪಶ್ಚಾತ್ತಾಪ' ಧರಣಿ ನಡೆಸಿದರು.



ಮೈಸೂರಿನ ನ್ಯಾಯಾಲಯದ ಮುಂದೆ ಇರುವ ಮಹಾತ್ಮಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಧರಣಿ ನಡೆಸಿದರು. ನ್ಯಾಯಾಲಯದ ಮುಂಭಾಗ ಭಿತ್ತಿಪತ್ರ ಪ್ರದರ್ಶಿಸಿ ಬಿಜೆಪಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

50 ವರ್ಷದ ರಾಜಕಾರಣ: ಧರಣಿ ವೇಳೆ ಮಾತನಾಡಿದ ಎ.ಹೆಚ್.ವಿಶ್ವನಾಥ್, ನಾನು ಮೈಸೂರು ಭಾಗದಲ್ಲಿ 50 ವರ್ಷದಿಂದ ರಾಜಕಾರಣ ಮಾಡಿಕೊಂಡು ಬರುತ್ತಿದ್ದೇನೆ. ನನ್ನ ಸುದೀರ್ಘ ಯಾನ ಕಾಂಗ್ರೆಸ್‌ನಲ್ಲೇ ಆಗಿದೆ. ವಿದ್ಯಾರ್ಥಿ ನಾಯಕ, ಶಾಸಕ, ವಕೀಲನಾಗಿ ಕೆಲಸ ಮಾಡಿಕೊಂಡು ಬಂದಿದ್ದೇನೆ. ಈ ಭಾಗದ ಜನ ಶಾಸಕ, ಸಚಿವನಾಗಿ, ಸಂಸದನಾಗಿ ಕೆಲಸ ಮಾಡಲು ಆಶೀರ್ವಾದ ಮಾಡಿದ್ದಾರೆ. ಆದರೆ, ಬಿಜೆಪಿ ಸೇರಿದ್ದು, ನೋವುಂಟಾಗಿದೆ. ಮಹಾವೀರ ಜಯಂತಿಯ ಪುಣ್ಯ ದಿನದಂದು ಪಶ್ಚಾತ್ತಾಪ ಸತ್ಯಾಗ್ರಹ ನಡೆಸುತ್ತಿದ್ದೇನೆ ಎಂದರು.

ಮಂತ್ರಿಗಿರಿಗಾಗಿ ಅಲ್ಲ: ಕೆಲವರು ಮಂತ್ರಿಗಿರಿ ಸಿಗಲಿಲ್ಲ ಅದಕ್ಕೆ ಜೆಡಿಎಸ್ ಬಿಟ್ಟು ಬಿಜೆಪಿಗೆ ಹೋದೆ ಎಂದಿದ್ದಾರೆ. ನಾನು ಎಂ.ವೀರಪ್ಪ ಮೊಯ್ಲಿ ಎಸ್.ಎಂ.ಕೃಷ್ಣ ಅವಧಿಯಲ್ಲಿ ಮಂತ್ರಿಯಾಗಿ ನಾಡು ಮೆಚ್ಚುವ ಕೆಲಸ ಮಾಡಿದ್ದೇನೆ. ನನಗೆ ಅಧಿಕಾರ ಮುಖ್ಯವಲ್ಲ. ನಾಡಿನ ಹಿತ ಕಾಯುವಲ್ಲಿ ಸಮ್ಮಿಶ್ರ ಸರ್ಕಾರ ವಿಫಲವಾಗಿದ್ದಕ್ಕೆ ಅದು ಪತನವಾಯಿತು.

ತಪ್ಪನ್ನು ಟೀಕಿಸುವುದೇ ನನ್ನ ಧರ್ಮ: ನಾನು ಯಾವುದೇ ಪಕ್ಷದಲ್ಲಿರಲೀ ತಪ್ಪಿನ ವಿರುದ್ಧ ಮಾತನಾಡುತ್ತಲೇ ಬಂದಿದ್ದೇನೆ. ನಿರ್ಭೀತಿಯಿಂದ ಹೇಳೋದು ಆಜನ್ಮ ಸಿದ್ದ ಹಕ್ಕು. ನನ್ನ ನಾಲಿಗೆಯನ್ನು ಮೊಂಡು ಮಾಡಬೇಕು ಎಂದು ಬಯಸಿದರೆ ಸಾಧ್ಯವಾಗುವುದಿಲ್ಲ. ಹಾಗಾಗಿ ಕರ್ನಾಟಕ ರಾಜ್ಯ ರಾಜಕಾರಣ ಹಾಗೂ ಸಾರ್ವಜನಿಕ ಜೀವನದ ಸಾಕ್ಷಿ ಪ್ರಜ್ಞೆಯಾಗಿದ್ದೇನೆ ಎಂದು ತಿಳಿಸಿದರು.

ಸ್ವತಂತ್ರ ಹಕ್ಕಿ ನಾನು: ಕೆಲವರು ನಾನು ವಿಧಾನಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕೆಂದು ಹೇಳಿದ್ದಾರೆ. ಆದರೆ, ಅವರಿಗೆ ವಾಸ್ತವ ಸಂಗತಿ ತಿಳಿದಿಲ್ಲ. ನನ್ನನ್ನು ಬಿಜೆಪಿ ಸರ್ಕಾರ ಎಂಎಲ್ಸಿ ಮಾಡಿಲ್ಲ. ಸಾಹಿತ್ಯ ಕೋಟಾದಿಂದ ರಾಜ್ಯಪಾಲರು ನೇಮಕ ಮಾಡಿದ್ದಾರೆ. ನಾನು ಸರ್ವ ಸ್ವತಂತ್ರ, ಸ್ವಚ್ಛಂದವಾಗಿ ಹಾರುವ ಹಳ್ಳಿ ಹಕ್ಕಿ. ಯಾರ ಮರ್ಜಿನಲ್ಲೂ ಇಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಬೆಂಬಲಿಸಿ: ಬಿಜೆಪಿ ಸರ್ಕಾರದ ಅತಿಯಾದ ಭ್ರಷ್ಟಾಚಾರ, ನೇಮಕಾತಿಯಲ್ಲಿ ಅಕ್ರಮ, ದುರಾಡಳಿತದಿಂದ ಜನ ಬೇಸತ್ತಿದ್ದಾರೆ. ಇದರಿಂದ ನನ್ನನ್ನೂ ಒಳಗೊಂಡಂತೆ ಹಲವರು ಬಿಜೆಪಿಯಿಂದ ಹೊರ ಬಂದು ಕಾಂಗ್ರೆಸ್ ಬೆಂಬಲಿಸುತ್ತಿದ್ದಾರೆ. ಜನ ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಪಶ್ಚಾತ್ತಾಪ ಧರಣಿಯಲ್ಲಿ ಸಾಹಿತಿ ಪ್ರೊ.ಕೆ.ಎಸ್. ಭಗವಾನ್, ಹಿರಿಯ ರಂಗಕರ್ಮಿ ಸಿ.ಬಸವಲಿಂಗಯ್ಯ, ರಾಜ್ಯ ಕುರುಬರ ಸಂಘದ ಅಧ್ಯಕ್ಷ ಸುಬ್ರಹ್ಮಣ್ಯ, ರಾಜ್ಯ ವಕ್ಫ್‌ಬೋರ್ಡ್ ಅಧ್ಯಕ್ಷ ಆಸಿಕ್ ಸೇಠ್, ಪತ್ರಕರ್ತ ಟಿ.ಗುರುರಾಜ್, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್. ಶಿವರಾಮ್, ನವೀನ್ ಕುಮಾರ್, ಕೆ.ಆರ್. ಗೋಪಾಲಕೃಷ್ಣ, ಬೀರಪ್ಪ ರೇವಣ್ಣ ನಂದೀಶ್ ಅರಸ್, ಎನ್.ಆರ್. ನಾಗೇಶ್, ಯೋಗೀಶ್ ಉಪ್ಪಾರ್, ಡೈರಿ ವೆಂಕಟೇಶ್ ಇತರರು ಇದ್ದರು.

ಡಬಲ್ ಇಂಜಿನ್ ಸರ್ಕಾರ ಹೆಸರು ನೀಡಿದ್ದು ನಾವೇ

ಸಮ್ಮಿಶ್ರ ಸರ್ಕಾರ ಪತನಗೊಳಿಸಿದ ಬಳಿಕ ನಾಡಿಗೆ ಒಳ್ಳೆಯದಾಗುತ್ತದೆ ಎಂದು ಭಾವಿಸಿ ಬಿಜೆಪಿಗೆ ಬೆಂಬಲ ನೀಡಿದೆವು. ಕೇಂದ್ರದಲ್ಲೂ ಬಿಜೆಪಿ, ರಾಜ್ಯದಲ್ಲೂ ಬಿಜೆಪಿ ಸರ್ಕಾರವಿದ್ದರೆ, ನಾಡಿನ ಅಭಿವೃದ್ಧಿ ಕಾರ್ಯ ನಡೆಯುತ್ತದೆ ಎಂದುಕೊಂಡೆವು. ಅದಕ್ಕಾಗಿ ಡಬಲ್ ಇಂಜಿನ್ ಸರ್ಕಾರ ಹೆಸರು ಕೊಟ್ಟಿದ್ದೇ ನಾವು. ಆದರೆ, ನಮ್ಮ ನಿರೀಕ್ಷೆ ಹುಸಿಯಾಯಿತು. ರಾಜ್ಯದಲ್ಲಿ ಐತಿಹಾಸಿಕ ಪರಮ ಭ್ರಷ್ಟ ಸರ್ಕಾರಕ್ಕೆ ನಾವು ಕಾರಣವಾದೆವು ಎಂಬ ನೋವು ಕಾಡುತ್ತಿದೆ ಎಂದು ಹೆಚ್.ವಿಶ್ವನಾಥ್ ವಿಷಾದಿಸಿದರು.













ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ರಾಜಸ್ಥಾನ್	1	1	0	0	2
ಆರ್‌ಸಿಬಿ	1	1	0	0	2
ಲಕ್ನೋ	2	1	1	0	2
ಗುಜರಾತ್	1	1	0	0	2
ಪಂಜಾಬ್	1	1	0	0	2
ಸಿಎಸ್‌ಕೆ	2	1	1	0	2
ಕೊಲ್ಕತ್ತಾ	1	0	1	0	0
ಮುಂಬೈ	1	0	1	0	0
ಡೆಲ್ಲಿ	1	0	1	0	0
ಎಸ್‌ಆರ್‌ಹೆಚ್	1	0	1	0	0




ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಸಿಎಸ್‌ಕೆಗೆ ಭರ್ಜರಿ ಜಯ

ಚೆನ್ನೈ, ಏ.3– ಋತುರಾಜ್ ಗಾಯಕವಾಡ್ ಅವರ ಅರ್ಧಶತಕ ಹಾಗೂ ಮೊಯಿನ್ ಅಲಿ ಅವರ ಸ್ಪಿನ್ ಮೋಡಿ ನೆರವಿನಿಂದ ಚೆನ್ನೈ ಸೂಪರ್ ಕಿಂಗ್ಸ್, ಲಖನೌ ಸೂಪರ್ ಜೈಂಟ್ ವಿರುದ್ಧ 12 ರನ್‌ಗಳ ಭರ್ಜರಿ ಜಯ ದಾಖಲಿಸಿತು. ಇದರೊಂದಿಗೆ ಧೋನಿ ಪಡೆ ಟೂರ್ನಿಯಲ್ಲಿ ಮೊದಲ ಜಯ ದಾಖಲಿಸಿತು.

ಇಲ್ಲಿನ ಎಂ.ಎ.ಚಿದಂಬರಂ ಮೈದಾನದಲ್ಲಿ ಸೋಮವಾರ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್‌ಗೆ ಋತುರಾಜ್ ಗಾಯಕವಾಡ್ ಹಾಗೂ ಡೆವೊನ್ ಕಾನ್ವೆ ಉತ್ತಮ ಆರಂಭ ಒದಗಿಸಿದರು. ಇವರಿಬ್ಬರೂ ಮೊದಲ ವಿಕೆಟ್‌ಗೆ 110 ರನ್‌ಗಳ ಜೊತೆಯಾಟದ ಕಾಣಿಕೆ ನೀಡಿದರು. ಇನ್ನಿಂಗ್ಸ್ ಆರಂಭದಿಂದಲೂ ಬಿರುಸಿನ ಆಟಕ್ಕಿಳಿದ ಋತುರಾಜ್ ಗಾಯಕವಾಡ್ 31 ಎಸೆತಗಳಲ್ಲಿ 4 ಸಿಕ್ಸರ್, 3 ಬೌಂಡರಿ ಒಳಗೊಂಡ 57 ರನ್ ಗಳಿಸಿದರೇ, ಡೆವೊನ್ ಕಾನ್ವೆ 29 ಎಸೆತಗಳಲ್ಲಿ 2 ಸಿಕ್ಸರ್, 5 ಬೌಂಡರಿ ಒಳಗೊಂಡ 47 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಬಂದ ಶಿವಂ ದುಬೆ 3 ಸಿಕ್ಸರ್, 1 ಬೌಂಡರಿ ಒಳಗೊಂಡ ಬಿರುಸಿನ 27ರನ್ ಗಳಿಸಿ ನಿರ್ಗಮಿಸಿದರು. ಮೊಯಿನ್ ಅಲಿ 3 ಬೌಂಡರಿ ಒಳಗೊಂಡ 13 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇನ್ನಿಂಗ್ಸ್ ಕೊನೆಯಲ್ಲಿ ಅಬ್ಬರಿಸಿದ ಅಂಬಟಿ ರಾಯುಡು 14 ಎಸೆತಗಳಲ್ಲಿ ತಲಾ 2 ಸಿಕ್ಸರ್, ಬೌಂಡರಿ ಒಳಗೊಂಡ 27ರನ್ ಗಳಿಸಿ ಅಜೇಯರಾಗುಳಿದರು. ಅಂತಿಮವಾಗಿ ಚೆನ್ನೈ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 217 ರನ್ ಪೇರಿಸಿತು. ಲಖನೌ ಪರ ಮಾರ್ಕ್‌ವುಡ್ ಹಾಗೂ ರವಿ ಬಿಷ್ಣೋಯಿ ತಲಾ 3, ಆವೇಶ್ ಖಾನ್ 1 ವಿಕೆಟ್ ಕಬಳಿಸಿದರು.

218 ರನ್‌ಗಳ ಬೃಹತ್ ಗೆಲುವಿನ ಗುರಿ ಬೆನ್ನತ್ತಿದ ಲಖನೌ ಸೂಪರ್ ಜೈಂಟ್ಸ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 205 ರನ್ ಗಳಿಸಲಷ್ಟೇ ಶಕ್ತವಾಯಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ನಾಯಕ ಕೆ.ಎಲ್.ರಾಹುಲ್ ಹಾಗೂ ಕೈಲ್ ಮೇಯರ್ಸ್ ಮೊದಲ 33 ಎಸೆತಗಳಲ್ಲಿ 79 ರನ್ ಬಾರಿಸುವ ಮೂಲಕ ಉತ್ತಮ ಆರಂಭ ಒದಗಿಸಿದರು. ಬಿರುಸಿನ ಬ್ಯಾಟಿಂಗ್ ನಡೆಸಿದ ಕೈಲ್ ಮೇಯರ್ಸ್ ಕೇವಲ 22 ಎಸೆತಗಳಲ್ಲಿ 8 ಬೌಂಡರಿ, 2 ಸಿಕ್ಸರ್ ಒಳಗೊಂಡ 53ರನ್ ಗಳಿಸಿ ಔಟಾದರು. ಇದರ ಬೆನ್ನಲ್ಲೇ ತಂಡದ ಮೊತ್ತ 82 ರನ್ ಆಗಿದ್ದ ವೇಳೆ ದೀಪಕ್ ಹೂಡಾ 2, ಕೆ.ಎಲ್.ರಾಹುಲ್ 20 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಬಂದ ಕೃನಾಲ್ ಪಾಂಡ್ಯ 9 ರನ್ ಗಳಿಸಿ ಬಹುಬೇಗ ನಿರ್ಗಮಿಸಿದರು. ಭಾರೀ ನಿರೀಕ್ಷೆ ಇಟ್ಟುಕೊಂಡಿದ್ದ ಮಾರ್ಕ್ ಸ್ಟೋಯಿನಿಸ್ 18 ಎಸೆತಗಳಲ್ಲಿ ಒಂದು ಆಕರ್ಷಕ ಸಿಕ್ಸರ್ ಇದ್ದ 22 ರನ್ ಬಾರಿಸಿ ಔಟಾದರು. ನಂತರ ಬಂದ ನಿಕೋಲಸ್ ಪೂರನ್ 3 ಸಿಕ್ಸರ್, 2 ಬೌಂಡರಿ ಒಳಗೊಂಡ 32 ರನ್ ಪೇರಿಸಿ ವಿಕೆಟ್ ಒಪ್ಪಿಸಿದರು. ಉಳಿದಂತೆ ಆಯುಷ್ ಬಡೋನಿ 23, ಕೃಷ್ಣಪ್ಪ ಗೌತಮ್ 17, ಮಾರ್ಕ್‌ವುಡ್ 10 ರನ್ ಗಳಿಸಿದರು. ಚೆನ್ನೈ ಸೂಪರ್ ಕಿಂಗ್ಸ್ ಪರ ಮೊಯಿನ್ ಅಲಿ 4, ತುಷಾರ್ ದೇಶಪಾಂಡೆ 2, ಮಿಚೆಲ್ ಸ್ಯಾಂಟನರ್ 1 ವಿಕೆಟ್ ಪಡೆದರು. ಆಲ್‌ರೌಂಡ್ ಆಟ ಪ್ರದರ್ಶಿಸಿದ ಮೊಯಿನ್ ಅಲಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



ಕವಿಗೋಷ್ಠಿ, 'ಕರ್ವಾಲೊ' ಕಾದಂಬರಿಯ ಅವಲೋಕನ, ಪುಸ್ತಕ ಬಿಡುಗಡೆ

ಮೈಸೂರು, ಏ. 3– ಮೈಸೂರಿನ ಅಭಿರುಚಿ ಬಳಗ, ಎನ್.ವ್ಹಿ. ರಮೇಶ್ ಕಲಾ ಬಳಗ, ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ಮೈಸೂರು ವಿಭಾಗ ಹಾಗೂ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಎನ್.ವ್ಹಿ. ರಮೇಶ್ ಅವರ 'ಮಧುಚಂದ್ರಕ್ಕಾಗಿ ಆಹ್ವಾನಿಸುತ್ತಿವೆ. 'ವಿದೇಶಗಳ ವಿಶೇಷ ಸ್ಥಳಗಳು' ಪುಸ್ತಕ ಬಿಡುಗಡೆ ಮತ್ತು 'ಮಹಾವೀರ ಜಯಂತಿ' ಮತ್ತು 'ಗುಡ್‌ಫ್ರೈಡೆ' ಕವಿಗೋಷ್ಠಿ ಕಾರ್ಯಕ್ರಮವನ್ನು ಏಪ್ರಿಲ್ 4ರಂದು ಮಧ್ಯಾಹ್ನ 2.30 ಗಂಟೆಗೆ ಮೈಸೂರಿನ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಹಿರಿಯ ಪತ್ರಕರ್ತ ವೀರಭದ್ರಪ್ಪ ಬಿಸ್ಲಳ್ಳಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸುಶೀಲ ಶ್ಯಾಮಸುಂದರ್ ಆಗಮಿಸಲಿದ್ದಾರೆ. ಮುಕ್ತಕ ಕವಿಗಳಾದ ಮುತ್ತುಸ್ವಾಮಿ 'ಮಧುಚಂದ್ರಕ್ಕಾಗಿ ಆಹ್ವಾನಿಸುತ್ತಿವೆ ವಿದೇಶಗಳ ವಿಶೇಷ ಸ್ಥಳಗಳು' ಪುಸ್ತಕದ ಬಗ್ಗೆ ಮಾತನಾಡಲಿದ್ದಾರೆ. ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರದ ಅಧ್ಯಕ್ಷರಾದ ಮಲೆಯೂರು ಪ್ರಭುಸ್ವಾಮಿ ಅಧ್ಯಕ್ಷತೆ ವಹಿಸಲಿದ್ದಾರೆ. ನಂತರ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ 'ಕರ್ವಾಲೊ' ಕಾದಂಬರಿಯ ಅವಲೋಕನವಿದೆ ಮತ್ತು 'ಮಹಾವೀರ ಜಯಂತಿ' ಮತ್ತು 'ಗುಡ್‌ಫ್ರೈಡೆ' ಸಂದರ್ಭದ ಕವಿಗೋಷ್ಠಿಯಲ್ಲಿ ಭಾಗವಹಿಸುವವರು ಏ.3ರೊಳಗೆ ಮೊ. 9845565238 ಅನ್ನು ಸಂಪರ್ಕಿಸುವುದು.

ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಏ. 3–ಮೈಸೂರಿನ ಲಕ್ಷ್ಮಿಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಏ.6ರಂದು ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.



ಐಐಎಂಎಸ್ ವತಿಯಿಂದ ನಡೆದ ಜಿಲ್ಲಾ ಮಟ್ಟದ ಸಾಮಾನ್ಯ ಜ್ಞಾನ ಪರೀಕ್ಷೆಯಲ್ಲಿ 636 ಅಭ್ಯರ್ಥಿಗಳು ಭಾಗವಹಿಸಿದ್ದು, ಅದರಲ್ಲಿ ಪ್ರಥಮ ಬಹುಮಾನ ಗಳಿಸಿದ ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ಹೆಚ್.ಆರ್.ಲಕ್ಷ್ಮಿ ಅವರನ್ನು ಕಾಲೇಜಿನ ಪ್ರಾಂಶುಪಾಲರಾದ ಸಿ.ಕೆ.ಅಶೋಕ್ ಕುಮಾರ್ ಅಭಿನಂದಿಸಿ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನ ನೀಡುತ್ತಿರುವುದು. ಉಪನ್ಯಾಸಕರಾದ ಹೆಚ್.ಆರ್.ಪರಮೇಶ್, ಮುಷಿರ್, ರಾಜೇಂದ್ರ ಪ್ರಸಾದ್ ಹೊನ್ನಲಗೆರೆ, ಉಪನ್ಯಾಸಕಿ ಕಾವ್ಯಶ್ರೀ ಆರ್.ರಾವ್, ಐಐಎಂಎಸ್‌ನ ಸಂಚಾಲಕರಾದ ಮಂಜುನಾಥ್ ಅವರನ್ನು ಚಿತ್ರದಲ್ಲಿ ಕಾಣಬಹುದು.

ನಾಲ್ವಡಿ, ಯುವ ಚೇತನ ಪ್ರಶಸ್ತಿಗೆ ಆಯ್ಕೆ

ಮೈಸೂರು: ಸ್ಪಂದನ ಸಾಂಸ್ಕೃತಿಕ ಪರಿಷತ್ ವತಿಯಿಂದ ನೀಡಲಾಗುವ ರಾಜ್ಯ ಮಟ್ಟದ 'ನಾಲ್ವಡಿ ಕೃಷ್ಣರಾಜ ಒಡೆಯರ್ ಸಮಾಜಮುಖಿ ಪ್ರಶಸ್ತಿ'ಗೆ ಆರು ಮಂದಿ ಮತ್ತು 'ಯುವ ಚೇತನ ಪ್ರಶಸ್ತಿ'ಗೆ ಆರು ಮಂದಿ ವಿವಿಧ ಕ್ಷೇತ್ರದ ಗಣ್ಯರು ಆಯ್ಕೆಯಾಗಿದ್ದಾರೆ ಎಂದು ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಟಿ. ಸತೀಶ್ ಜವರೇಗೌಡ ತಿಳಿಸಿದ್ದಾರೆ.

ವಿವಿಧ ಕ್ಷೇತ್ರದ ಹಿರಿಯ ಸಾಧಕರಾದ ಮಂಡ್ಯದ ಹಿರಿಯ ಲೇಖಕಿ ಎಸ್.ಗುಣಸಾಗರಿ ನಾಗರಾಜು, ಬೆಂಗಳೂರಿನ ಸಮ್ಮಿಲನ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷ ಕುವರ ಯಲ್ಲಪ್ಪ, ತುಮಕೂರಿನ ಅಕ್ಷಯ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ಬಿ.ಆರ್. ರಾಮಚಂದ್ರಯ್ಯ, ಬೆಂಗಳೂರಿನ ಅಹಲ್ಯಾ ಬಾಯಿ ಹೋಳ್ಕರ್ ಮಹಿಳಾ ಪತ್ತಿನ ಸಹಕಾರ ಸಂಘದ ಸಂಸ್ಥಾಪಕ ಅಧ್ಯಕ್ಷೆ ಕೆ.ಆರ್. ಪ್ರಭಾವತಿ, 'ವಿಸ್ಮಯ ವಿಜೇತ' ಸ್ಪರ್ಧಾತ್ಮಕ ಮಾಸಪತ್ರಿಕೆಯ ಪ್ರಧಾನ ಸಂಪಾದಕ ಹಾಸನದ ಎಸ್.ಕೆ. ಶಿವಕುಮಾರ್, ಬೆಂಗಳೂರಿನ ಶಿವಾಜಿನಗರ ಪೊಲೀಸ್ ಠಾಣೆಯ ಹೆಡ್ ಕಾನ್ಸ್‌ಟೇಬಲ್ ಎಸ್.ಡಿ. ಲಕ್ಷ್ಮಿನರಸಿಂಹ ಅವರು ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಯುವ ಸಾಧಕರಾದ ಮೈಸೂರು ತಾಲೂಕು ಪಂಚಾಯಿತಿಯ ಗ್ರಾಮೀಣ ಉದ್ಯೋಗದ ಸಹಾಯಕ ನಿರ್ದೇಶಕ ಕೆ.ಎಂ. ರಘುನಾಥ್, ಬೆಂಗಳೂರಿನ ಹೂವಿನಹೊಳೆ ಪ್ರತಿಷ್ಠಾನದ ಅಧ್ಯಕ್ಷ ನಂದಿ ಜೆ. ಹೂವಿನಹೊಳೆ, ಮೈಸೂರಿನ ಕವಯಿತ್ರಿ ಹಾಗೂ ರಂಗಕರ್ಮಿ ಡಾ.ಬಿ.ಎಸ್. ದಿನಮಣಿ, ಮಂಡ್ಯದ ಮಡಿಲು ಸೇವಾ ಟ್ರಸ್ಟಿನ ರಾಜ್ಯ ಸಂಯೋಜಕ ಅರಸು ಮಡಿಲು, ಕೋಲಾರದ ರೋಟರಿ ಕ್ಲಬ್ ಅಧ್ಯಕ್ಷ ಬಿ. ಶಿವಕುಮಾರ್, ಮೈಸೂರಿನ ಸಾಹಿತಿ ಮತ್ತು ಸಂಘಟಕ ಎಸ್. ಶಿಶಿರಂಜನ್ ಅವರು 'ಯುವ ಚೇತನ ಪ್ರಶಸ್ತಿ'ಗೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ವಿಸ್ಮಯ ಪ್ರಕಾಶನದ ಸಹಯೋಗದಲ್ಲಿ ವಿಜಯನಗರದಲ್ಲಿನ ಜಿಲ್ಲಾ ಸಾಹಿತ್ಯ ಭವನದಲ್ಲಿ ಏ.7ರಂದು ನಡೆಯಲಿರುವ ರಾಜ್ಯ ಮಟ್ಟದ 'ಯುಗಾದಿ ಕಾವ್ಯ ಮೇಳ'ದಲ್ಲಿ ಈ 12 ಮಂದಿ ಸಾಧಕರಿಗೂ ಗಣ್ಯ ಅತಿಥಿಗಳು ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

ನ್ಯಾಯದ ಬ್ರ್ಯಾಂಡ್ ಆಗಿ ಸಿಬಿಐ ಹೊರಹೊಮ್ಮಿದೆ: ನರೇಂದ್ರ ಮೋದಿ

ನವದೆಹಲಿ: ಕೇಂದ್ರಿಯ ತನಿಖಾ ದಳವು (ಸಿಬಿಐ) ಈಗ ನ್ಯಾಯದ ಬ್ರ್ಯಾಂಡ್ ಆಗಿ ಹೊರಹೊಮ್ಮಿದೆ. ಅದು ಸಾಮಾನ್ಯ ನಾಗರಿಕರಿಗೆ ಹೊಸ ಭರವಸೆ ಹಾಗೂ ಧೈರ್ಯವನ್ನು ನೀಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಸಿಬಿಐನ ವಜ್ರ ಮಹೋತ್ಸವದ ವಾರ್ಷಿಕ ಸಮಾರಂಭದಲ್ಲಿ ಮಾತನಾಡಿದ ಅವರು, ಸಿಬಿಐನಂತಹ ವೃತ್ತಿಪರ ಹಾಗೂ ದಕ್ಷ ಸಂಸ್ಥೆ ಇಲ್ಲದಿದ್ದರೆ ಭಾರತ ಮುಂದೆ ಸಾಗಲು ಸಾಧ್ಯವಿಲ್ಲ. ಬ್ಯಾಂಕ್ ಮೋಸದಿಂದ ಹಿಡಿದು ಅರಣ್ಯ ಜೀವಿ ವಂಚನೆವರೆಗೂ, ಸಿಬಿಐನ ಕೆಲಸದ ವ್ಯಾಪ್ತಿ ಹಲವು ಪಟ್ಟು ಹೆಚ್ಚಾಗಿದೆ. ಆದರೆ ದೇಶವನ್ನು ಭ್ರಷ್ಟಾಚಾರ ಮುಕ್ತವನ್ನಾಗಿಸುವುದು ಸಿಬಿಐನ ಪ್ರಮುಖ ಜವಾಬ್ದಾರಿಯಾಗಿದೆ ಎಂದರು.

ಮಾನಹಾನಿ ಪ್ರಕರಣ: ಮೇಲ್ಮನವಿ ಸಲ್ಲಿಸಿದ ರಾಹುಲ್ ಗಾಂಧಿಗೆ ಜಾಮೀನು

ಸೂರತ್: 2019ರ ಮಾನಹಾನಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಸೂರತ್ ಸೆಷನ್ಸ್ ನ್ಯಾಯಾಲಯ ಸೋಮವಾರ ಜಾಮೀನು ಮಂಜೂರು ಮಾಡಿದ್ದು ಮುಂದಿನ ವಿಚಾರಣೆಯನ್ನು ಮೇ 3ಕ್ಕೆ ನಿಗದಿಪಡಿಸಿದೆ.



ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಸೂರತ್ ನ್ಯಾಯಾಲಯ ನೀಡಿರುವ ಶಿಕ್ಷೆಯನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಅವರು ಇಂದು ಮೇಲ್ಮನವಿ ಸಲ್ಲಿಸಿದರು. ಮೇಲ್ಮನವಿ ಸ್ವೀಕರಿಸಿದ ಕೋರ್ಟ್, ಆರೋಪಿ ಕಾಂಗ್ರೆಸ್ ನಾಯಕನಿಗೆ ಜಾಮೀನು ಮಂಜೂರು ಮಾಡಿ, ವಿಚಾರಣೆಯನ್ನು ಮೇ 3ಕ್ಕೆ ಮುಂದೂಡಿದೆ.

2019ರ ಲೋಕಸಭಾ ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಕರ್ನಾಟಕದ ಕೋಲಾರದಲ್ಲಿ ನಡೆದ ಕಾರ್ಯಕ್ರಮದಲ್ಲಿ ನೀರವ್ ಮೋದಿ, ಲಲಿತ್ ಮೋದಿ, ನರೇಂದ್ರ ಮೋದಿ ಇವರೆಲ್ಲರ ಸರ್‌ನೇಮ್ ಒಂದೇ ಆಗಿದ್ದು, ಈ ಎಲ್ಲಾ ಕಳ್ಳರು ದೇಶವನ್ನು ಲೂಟಿ ಮಾಡಿದ್ದಾರೆ ಎಂದು ರಾಹುಲ್ ತಮ್ಮ ಭಾಷಣದಲ್ಲಿ ಹರಿಹಾಯ್ದಿದ್ದರು.

ಈ ಹೇಳಿಕೆಯನ್ನು ಆಧರಿಸಿ ಬಿಜೆಪಿ ಶಾಸಕ ಮತ್ತು ಗುಜರಾತ್ ಮಾಜಿ ಸಚಿವ ಪೂರ್ಣೇಶ್ ಮೋದಿ ಅವರು ಕ್ರಿಮಿನಲ್ ಮಾನಹಾನಿ ದೂರು ದಾಖಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಸೂರತ್ ನ್ಯಾಯಾಲಯ ರಾಹುಲ್ ಗಾಂಧಿ ಎರಡು ವರ್ಷ ಜೈಲು ಶಿಕ್ಷೆ ವಿಧಿಸಿದೆ. ಈ ಶಿಕ್ಷೆಯನ್ನು ಆಧರಿಸಿ ರಾಹುಲ್ ಗಾಂಧಿ ಅವರನ್ನು ಲೋಕಸಭಾ ಸದಸ್ಯತ್ವದಿಂದ ಅನರ್ಹಗೊಳಿಸಲಾಗಿದೆ.

ವಿಚಾರಣೆ ಮೇ 3ಕ್ಕೆ ಮುಂದೂಡಿಕೆ

ಇದು ಮಿತ್ರಕಾಲ ವಿರುದ್ಧದ ಹೋರಾಟ, ಸತ್ಯವೇ ನನ್ನ ಅಸ್ತ್ರ: ರಾಹುಲ್ ಗಾಂಧಿ

ನವದೆಹಲಿ: 2019ರ ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಜಾಮೀನು ಪಡೆದ ಟ್ವೀಟ್ ಮಾಡಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಇದು ಪ್ರಜಾಪ್ರಭುತ್ವವನ್ನು ಉಳಿಸಲು "ಮಿತ್ರಕಾಲ" ವಿರುದ್ಧದ ಹೋರಾಟ. ಈ ಹೋರಾಟದಲ್ಲಿ ಸತ್ಯವೇ ನನ್ನ ಅಸ್ತ್ರವಾಗಿದೆ ಎಂದು ಸೋಮವಾರ ಹೇಳಿದ್ದಾರೆ.

ಇಂದು ಕೆಲವೇ ನಿಮಿಷಗಳಲ್ಲಿ ಸೂರತ್ ಸೆಷನ್ಸ್ ನ್ಯಾಯಾಲಯ ಜಾಮೀನು ಮಂಜೂರು ಮಾಡಿದ ನಂತರ, ಹಿಂದಿಯಲ್ಲಿ ಟ್ವೀಟ್ ಮಾಡಿದ ರಾಹುಲ್ ಗಾಂಧಿ, "ಇದು ಪ್ರಜಾಪ್ರಭುತ್ವವನ್ನು ಉಳಿಸಲು 'ಮಿತ್ರಕಾಲ'ದ ವಿರುದ್ಧದ ಹೋರಾಟ. ಈ ಹೋರಾಟದಲ್ಲಿ, ಸತ್ಯವೇ ನನ್ನ ಅಸ್ತ್ರ ಮತ್ತು ಸತ್ಯವೇ ನನ್ನ ಆಸರೆ!" ಎಂದು ಪರೋಕ್ಷವಾಗಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಪ್ರಧಾನಿ ಮೋದಿ ಅವರು ತಮ್ಮ ಬಂಡವಾಳಶಾಹಿ ಮಿತ್ರರಿಗೆ ನೆರವು ನೀಡುತ್ತಿದ್ದಾರೆ ಎಂಬರ್ಥದಲ್ಲಿ ರಾಹುಲ್ ಗಾಂಧಿ ಟೀಕಿಸಿದ್ದಾರೆ.

ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಸೂರತ್ ನ್ಯಾಯಾಲಯ ನೀಡಿರುವ ಶಿಕ್ಷೆಯನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಅವರು ಇಂದು ಮೇಲ್ಮನವಿ ಸಲ್ಲಿಸಿದರು. ಮೇಲ್ಮನವಿ ಸ್ವೀಕರಿಸಿದ ಕೋರ್ಟ್, ಆರೋಪಿ ಕಾಂಗ್ರೆಸ್ ನಾಯಕನಿಗೆ ಜಾಮೀನು ಮಂಜೂರು ಮಾಡಿ, ವಿಚಾರಣೆಯನ್ನು ಮೇ 3ಕ್ಕೆ ಮುಂದೂಡಿದೆ.

ದೆಹಲಿ ಅಬಕಾರಿ ನೀತಿ ಹಗರಣ: ಸಿಸೋಡಿಯಾ ನ್ಯಾಯಾಂಗ ಬಂಧನ ಏ. 17 ರವರೆಗೆ ವಿಸ್ತರಣೆ

ನವದೆಹಲಿ: ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐನಿಂದ ಬಂಧನಕ್ಕೊಳಗಾಗಿರುವ ದೆಹಲಿ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ನ್ಯಾಯಾಂಗ ಬಂಧನದ ಅವಧಿಯನ್ನು ರೋಸ್ ಅವೆನ್ಯೂ ಕೋರ್ಟ್ ಏಪ್ರಿಲ್ 17 ರವರೆಗೆ ವಿಸ್ತರಿಸಿದೆ.



ಸಿಸೋಡಿಯಾ ನ್ಯಾಯಾಂಗ ಬಂಧನ ಅವಧಿ ಇಂದು ಅಂತ್ಯವಾದ ಹಿನ್ನೆಲೆಯಲ್ಲಿ ಎಎಪಿ ನಾಯಕನ ನ್ಯಾಯಾಂಗ ಬಂಧನ ವಿಸ್ತರಿಸುವಂತೆ ಕೋರಿ ಸಿಬಿಐ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದು, ತನಿಖೆಯು "ನಿರ್ಣಾಯಕ ಹಂತದಲ್ಲಿದೆ" ಎಂದು ಹೇಳಿದೆ. ಕೋರ್ಟ್ ಸಿಬಿಐ ಮನವಿಯನ್ನು ಪುರಸ್ಕರಿ ಏಪ್ರಿಲ್ 17ರವರೆಗೆ ನ್ಯಾಯಾಂಗ ಬಂಧನ ವಿಸ್ತರಿಸಿದೆ.

ಈಗ ರದ್ದಾಗಿರುವ ಅಬಕಾರಿ ನೀತಿಯಲ್ಲಿನ ಅಕ್ರಮಗಳಿಗೆ ಸಂಬಂಧಿಸಿದಂತೆ ಸಿಬಿಐ ಸಿಸೋಡಿಯಾ ಅವರನ್ನು ಫೆಬ್ರವರಿ 26 ರಂದು ಬಂಧಿಸಿದ್ದು, ಮನೀಶ್ ಸಿಸೋಡಿಯಾಗೆ ದೆಹಲಿ ನ್ಯಾಯಾಲಯವು ಶುಕ್ರವಾರ ಜಾಮೀನು ನಿರಾಕರಿಸಿದೆ.

ಕಾಂಗ್ರೆಸಿಗರಿಂದ ಜಯ ಮೃತ್ಯುಂಜಯ ಸ್ವಾಮೀಜಿಗೆ ಬೆದರಿಕೆ: ಭದ್ರತೆ ಕೊಡಲು ಸಿಎಂ ಆದೇಶ

ಬೆಂಗಳೂರು, ಏ.3–ರಾಜ್ಯದಲ್ಲಿ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಬಿಜೆಪಿ ಸರ್ಕಾರದಿಂದ 2ಡಿ ಮೀಸಲಾತಿ ಕಲ್ಪಿಸಿದ ಹಿನ್ನೆಲೆಯಲ್ಲಿ ಕೂಡಲಸಂಗಮ ಪಂಚಮಸಾಲಿ ಮಠದ ಪೀಠಾಧ್ಯಕ್ಷ ಬಸವ ಜಯ ಮೃತ್ಯುಂಜಯ ಸ್ವಾಮೀಜಿಗೆ ಕೊಲೆ ಬೆದರಿಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಸ್ವಾಮೀಜಿಗೆ ಭದ್ರತೆ ನಿಡುವಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆದೇಶ ನೀಡಿದ್ದಾರೆ. ಜಯ ಮೃತ್ಯುಂಜಯ ಸ್ವಾಮೀಜಿ ಅವರು ರಾಜ್ಯದಲ್ಲಿ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡುವಂತೆ ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಹೋರಾಟ ಮಾಡಿದ್ದರ ಫಲವಾಗಿ ಇತ್ತೀಚೆಗೆ ರಾಜ್ಯ ಸರ್ಕಾರ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ 2ಡಿ ಮೀಸಲಾತಿ ಸೃಷ್ಟಿಸಿದೆ. ಆದರೆ, ಇದರಿಂದ ಬಿಜೆಪಿಗೆ ಕ್ರೆಡಿಟ್ ಹೋಗಿದ್ದು, ಕಾಂಗ್ರೆಸ್‌ಗೆ ಬರಬೇಕಿದ್ದ ಎಲ್ಲ ಪಂಚಮಸಾಲಿ ಮತ್ತು ಲಿಂಗಾಯತ ಮತಗಳು ಬಿಜೆಪಿಗೆ ಹೋಗಲಿವೆ. ಇದರಿಂದ ಕುಪಿತಗೊಂಡ ಕೆಲವು ಜನಪ್ರತಿನಿಧಿಗಳು ರಾತ್ರಿ ವೇಳೆ ಕುಡಿದು ಸ್ವಾಮೀಜಿಗೆ ಕರೆ ಮಾಡಿ ಕೊಲೆ ಬೆದರಿಕೆ ಹಾಕುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಜಯ ಮೃತ್ಯುಂಜಯ ಸ್ವಾಮೀಜಿಗೆ ಸೂಕ್ತ ಭದ್ರತೆಯನ್ನು ನೀಡುವಂತೆ ಸಿಎಂ ಬಸವರಾಜ ಬೊಮ್ಮಾಯಿ ಆದೇಶಿಸಿದ್ದಾರೆ.



ಭದ್ರತೆಗಾಗಿ ಶಾಸಕರಿಂದ ಮನವಿ: ಜಯ ಮೃತ್ಯುಂಜಯ ಸ್ವಾಮೀಜಿ ಅವರಿಗೆ ಬೆದರಿಕೆ ಕರೆಗಳು ಬರುತ್ತಿರುವ ಬಗ್ಗೆ ಶಾಸಕ ಅರವಿಂದ ಬೆಲ್ಲದ್ ಅವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಗೆ ಮಾಹಿತಿ ನೀಡಿದ್ದಾರೆ. ಜೊತೆಗೆ ಸ್ವಾಮೀಜಿಗೆ ಭದ್ರತೆ ಕೊಡಲು ಮನವಿ ಮಾಡಿದ ಹಿನ್ನೆಲೆ ಯಲ್ಲಿ ಕೂಡಲೇ ಜಯಮೃತ್ಯುಂಜಯ ಸ್ವಾಮೀಜಿಗೆ ಭದ್ರತೆಯನ್ನು ಕೊಡುವಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಆದೇಶ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಸರ್ಕಾರದ ಮೀಸಲಾತಿ ಕ್ರಮದಿಂದ ಮುಸ್ಲಿಂ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೊಡೆತ

ಶಿಕ್ಷಣ ತಜ್ಞರ ಆಕ್ರೋಶ

ಬೆಂಗಳೂರು: ಮುಸ್ಲಿಮರಿಗೆ ಇದ್ದ ಪ್ರತ್ಯೇಕ ಜಾತಿ ಮೀಸಲಾತಿಯನ್ನು ಕಸಿದುಕೊಂಡಿರುವ ಸರ್ಕಾರದ ಕ್ರಮದ ವಿರುದ್ಧ ವಕೀಲರು ಹಾಗೂ ಶಿಕ್ಷಣ ತಜ್ಞರು ವಾಗ್ದಾಳಿ ನಡೆಸಿದ್ದಾರೆ.

ಆಲ್ ಇಂಡಿಯಾ ಸ್ಟೂಡೆಂಟ್ಸ್ ಅಸೋಸಿಯೇಷನ್ (ಎಐಎಸ್‌ಎ) ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸರ್ಕಾರದ ಮೀಸಲಾತಿ ಕುರಿತ ನಿರ್ಧಾರ ಸಮುದಾಯದ ಮೇಲೆ, ವಿಶೇಷವಾಗಿ ಉತ್ತಮ ಶಿಕ್ಷಣ ಪಡೆಯಲು ಹೆಣಗಾಡುತ್ತಿರುವ ಮುಸ್ಲಿಂ ಹುಡುಗಿಯರ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದರ ಮೇಲೆ ಬೆಳಕು ಚೆಲ್ಲಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವಕೀಲ ಹಾಗೂ ಶಿಕ್ಷಣ ತಜ್ಞರು ಸರ್ಕಾರದ ವಿರುದ್ಧ ಕಿಡಿಕಾರಿದರು.

ಮುಸ್ಲಿಂ ಹುಡುಗಿಯರು ಶಿಕ್ಷಣ ಪಡೆದುಕೊಳ್ಳಲು ಹೆಣಗಾಡುತ್ತಿದ್ದಾರೆ. ವೃತ್ತಿಯಾಗಿ ವಿವಿಧ ಆಯ್ಕೆಗಳನ್ನು ಅನುಸರಿಸುತ್ತಿದ್ದಾರೆ. ಮೀಸಲಾತಿಯನ್ನು ರದ್ದುಪಡಿಸಿ, ಅವರನ್ನು ಇಡಬ್ಲ್ಯೂಎಸ್ ವರ್ಗದ ಅಡಿಯಲ್ಲಿ ತಂದ ನಂತರ, ಮುಸ್ಲಿಂ ಹೆಣ್ಣು ಮಕ್ಕಳು ಸಂಕಷ್ಟಕ್ಕೆ ಸಿಲುಕಿಕೊಂಡಿದ್ದಾರೆಂದು ಸಾಹಿತಿ ಡಾ.ಕೆ.ಷರೀಫಾ ಹೇಳಿದ್ದಾರೆ.

ಅಖಿಲ ಭಾರತ ವಕೀಲರ ಸಂಘದ ರಾಷ್ಟ್ರೀಯ ಅಧ್ಯಕ್ಷ ಮೈತ್ರೇಯಿ ಕೃಷ್ಣನ್ ಅವರು ಸರ್ಕಾರದ ನಿರ್ಧಾರವನ್ನು ಸಂವಿಧಾನದ ಮೇಲಿನ "ದಾಳಿ" ಎಂದು ಕರೆದರು. ಸರ್ಕಾರದ ಈ ಕ್ರಮವು ಅಲ್ಪಸಂಖ್ಯಾತರು ಮತ್ತು ತುಳಿತಕ್ಕೊಳಗಾದವರ ಅಸಮಾನತೆ ಮತ್ತು ದುರ್ಬಲತೆಯನ್ನು ಉಲ್ಬಣಗೊಳಿಸುತ್ತದೆ, ಸರ್ಕಾರವು ಮೀಸಲಾತಿ ನೀತಿಯನ್ನು ವಿರೂಪಗೊಳಿಸಿದೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ಗೆಲುವಿನ ಹೆಜ್ಜೆ ಕಂಡು ಹಲವರು 'ಕೈ' ಹಿಡಿಯಲು ಮುಂದಾಗಿದ್ದಾರೆ

● ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯೆ ● ಯಾರೂ ಯಾವ ಸ್ಥಾನಮಾನ ಕೇಳದೆ ಪಕ್ಷದ ಸಿದ್ಧಾಂತಕ್ಕೆ ಮಾರುಹೋಗಿದ್ದಾರೆ



ಬೆಂಗಳೂರು, ಏ. 3 (ಕೆಂಶಿ)–ರಾಜ್ಯದ ಜನ ಕಾಂಗ್ರೆಸ್ ಪರ ಒಲವು ತೋರುತ್ತಿದ್ದು, ಕಾಂಗ್ರೆಸ್ ಪಕ್ಷ ಗೆಲುವಿನತ್ತ ಹೆಜ್ಜೆ ಹಾಕುತ್ತಿದೆ. ಈ ಕಾರಣಕ್ಕೆ ಅನೇಕ ನಾಯಕರು ಬಿಜೆಪಿ ತೊರೆದು ಕಾಂಗ್ರೆಸ್ ಸೇರುತ್ತಿದ್ದಾರೆ ಎಂದು ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು

ಗೋಪಾಲಕೃಷ್ಣ ಅವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಇಂದು ಕಾಂಗ್ರೆಸ್ ಸೇರಿದ್ದಾರೆ. ಗೋಪಾಲಕೃಷ್ಣ ಅವರು ಯಾವುದೇ ಷರತ್ತು ಇಲ್ಲದೆ, ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ದುಡಿಯಲು ಸಿದ್ಧನಿದ್ದೇನೆ ಎಂದು ನಮ್ಮ ಬಳಿ ಇಚ್ಛೆ ವ್ಯಕ್ತಪಡಿಸಿದರು. ಅವರು ಪಕ್ಷ ಸೇರುವ ಇಂಗಿತ ವ್ಯಕ್ತಪಡಿಸಿದಾಗ ನೀವು ಈಗಾಗಲೇ ಶಾಸಕರಾಗಿದ್ದು ಕಾಂಗ್ರೆಸ್ ಸೇರುತ್ತಿರುವುದೇಕೇ ಎಂದು ನಾನು ಕೇಳಿದೆ. ಅದಕ್ಕೆ ಅವರು ಉತ್ತರಿಸಿ, ನಾನು ಬಿಜೆಪಿಯನ್ನು ನೋಡಿದ್ದೇನೆ. ನಾನು ಸಾಯುವ ಮುನ್ನ ಕಾಂಗ್ರೆಸಿಗನಾಗಿ ಸಾಯಬೇಕು. ಅದಕ್ಕಾಗಿ ನಾನು ಕಾಂಗ್ರೆಸ್ ಸೇರಲು ಬಯಸುತ್ತೇನೆ' ಎಂದರು.

ಇವರ ಸಹೋದರ ನ್ಯಾಯಾಧೀಶರಾಗಿದ್ದರೂ, ಸಂಸತ್ ಸದಸ್ಯರಾಗಿದ್ದರು. ಅವರು ನೀನು ಬಿಜೆಪಿಗೆ ಹೋಗಿದ್ದರೂ ನಾನು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುತ್ತೇನೆ ಎಂದಿದ್ದರು. ಈ ರೀತಿ ಕಾಂಗ್ರೆಸ್ ಪಕ್ಷದ ಸಿದ್ಧಾಂತಕ್ಕೆ ಬೆರೆತಿರುವ ನಾಯಕರು ಮತ್ತೆ ತಮ್ಮ ಮನೆಗೆ ಮರಳಿದ್ದಾರೆ. ಅವರ ಜತೆ ಸಾವಿರಾರು ಕಾರ್ಯಕರ್ತರು ಇಂದು ಪಕ್ಷ ಸೇರುತ್ತಿದ್ದಾರೆ. ಇಲ್ಲಿರುವ ಎಲ್ಲರೂ ಮೊದಲು ಕಾರ್ಯಕರ್ತರು, ನಂತರ ನಾಯಕರಾಗಿದ್ದಾರೆ ಎಂದು ಹೇಳಿದರು.

ಇನ್ನು ಜೆಡಿಎಸ್ ಶಾಸಕರಾದ ಶಿವಲಿಂಗೇಗೌಡರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, 9ರಂದು ತಮ್ಮ ಕ್ಷೇತ್ರದಲ್ಲಿ ಪಕ್ಷ ಸೇರಲು ಕೋರಿದ್ದಾರೆ. ಪಕ್ಷಕ್ಕೆ ಅರ್ಜಿ ಹಾಕುವಂತೆ ನಾವು ಸೂಚನೆ ನೀಡಿದ್ದೇವೆ. ಜೆಡಿಎಸ್ ಹಾಗೂ ಬಿಜೆಪಿ ಶಾಸಕರು ಸ್ವಯಂ ಪ್ರೇರಿತರಾಗಿ ಕಾಂಗ್ರೆಸ್ ಸೇರುತ್ತಿದ್ದಾರೆ. ಈ ಸಂದರ್ಭದಲ್ಲಿ ದಲಿತ ಕವಿ ಸಿದ್ದಲಿಂಗಯ್ಯ ಅವರ ಮಾತು ನೆನಪಾಗುತ್ತಿದೆ. ಹೋರಾಟ ಸಾಗರ. ಸಾವಿರಾರು ನದಿಗಳು ಸೇರಿದಂತೆ ಎಂದು ಹೇಳಿದ್ದಾರೆ. ಅದೇ ರೀತಿ ಕಾಂಗ್ರೆಸ್ ಎಂದರೆ ಹೋರಾಟದ ಸಾಗರವಾದರೆ ಈ ಪಕ್ಷಕ್ಕೆ ಸೇರುತ್ತಿರುವ ಶಾಸಕರು, ನಾಯಕರು ನದಿಯಾಗಿದ್ದಾರೆ ಎಂದು ಹೇಳಿದರು.

ಭ್ರಷ್ಟಾಚಾರ ಹಾಗೂ ಬೆಲೆ ಏರಿಕೆ ವಿರೋಧಿಸಿ ರಾಜ್ಯದ ಜನ ಕಾಂಗ್ರೆಸ್‌ಗೆ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಮೂರ್ನಾಲ್ಕು ಬಾರಿ ಶಾಸಕರಾಗಿದ್ದ ನಾಯಕರೆಲ್ಲರೂ ತಮ್ಮ ಅಧಿಕಾರ ಅವಧಿ ಇದ್ದರೂ ಅದನ್ನು ತ್ಯಜಿಸಿ ಕಾಂಗ್ರೆಸ್ ಪಕ್ಷ ಸೇರಿದ್ದಾರೆ. ಪುಟ್ಟಣ್ಣ ಅವರು ಪರಿಷತ್‌ನಲ್ಲಿ ನಾಲ್ಕು ವರ್ಷ ಅಧಿಕಾರ ಹೊಂದಿದ್ದರು, ಬಾಬುರಾವ್ ಚಿಂಚನಸೂರು ಅವರು ಕೂಡ ಅಧಿಕಾರ ಅವಧಿ ಇತ್ತು. ಗೋಪಾಲಕೃಷ್ಣ ಅವರು ಕೂಡ ಈಗ ಬಂದಿದ್ದಾರೆ. ದಳದಿಂದ ಅನೇಕ ನಾಯಕರು ಕಾಂಗ್ರೆಸ್ ಸೇರಿದ್ದಾರೆ. ಡಬಲ್ ಇಂಜಿನ್ ಸರ್ಕಾರದಿಂದ ಯಾವುದೇ ರೀತಿಯ ಅನುಕೂಲವಾಗಿಲ್ಲ ಎಂದು ಜನ ರಾಜ್ಯದಲ್ಲಿ ಬದಲಾವಣೆಗೆ ತೀರ್ಮಾನ ಮಾಡಿದ್ದಾರೆ.

ಬೀದರ್‌ನಿಂದ ಚಾಮರಾಜನಗರದವರೆಗೂ ಅನೇಕ ಮಾಜಿ ಹಾಗೂ ಹಾಲಿ ಶಾಸಕರು ಪಕ್ಷ ಸೇರುತ್ತಿದ್ದಾರೆ. ಈ ಬಗ್ಗೆ ನಾನು ಹಾಗೂ ಸಿದ್ದರಾಮಯ್ಯ ಅವರು ಚರ್ಚೆ ಮಾಡಿದ್ದೇವೆ. ಅನೇಕ ನಾಯಕರು ರಾಜೀನಾಮೆ ನೀಡಿ ಕಾಂಗ್ರೆಸ್ ಬಾಗಿಲು ತಟ್ಟುತ್ತಿದ್ದಾರೆ. ಈಗ ಅವರ ಹೆಸರು ಹೇಳಲು ಬಯಸುವುದಿಲ್ಲ. ಅರ್ಜಿ ಬಂದ ನಂತರ ಉಳಿದ ವಿಚಾರ ಮಾತನಾಡುತ್ತೇವೆ. ಪಕ್ಷಕ್ಕೆ ಬರುವವರೆಲ್ಲರಿಗೂ ಸ್ಥಾನಮಾನ ನೀಡಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಬಹಳ ಸೂಕ್ಷ್ಮವಾಗಿ ಪಕ್ಷ ಸೇರ್ಪಡೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮೈಸೂರು ಮಿತ್ರ

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸಿ: ದರ್ಶನ್

ಮಲ್ಕುಂಡಿ, ಏ.3– ಕ್ಷೇತ್ರದ ಸಮಗ್ರ ಅಭಿ ವೃದ್ಧಿಗೆ ಕಾಂಗ್ರೆಸ್ ಬೆಂಬಲಿಸುವ ಮೂಲಕ ತಮ್ಮ ಸೇವೆಗೆ ಅವಕಾಶ ಕೊಡಿ ಎಂದು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ದರ್ಶನ್ ಧ್ರುವನಾರಾಯಣ್ ಮನವಿ ಮಾಡಿದರು.

ಕ್ಷೇತ್ರದ ಬೇಲದಕುಪ್ಪೆ ಮಹದೇಶ್ವರ ದೇವಸ್ಥಾನದಲ್ಲಿ ಕಾಂಗ್ರೆಸ್ ಕಾರ್ಯಕರ್ತರೊಂದಿಗೆ ವಿಶೇಷ ಪೂಜೆ ಸಲ್ಲಿಸಿ, ಚುನಾವಣೆ ಪ್ರಚಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನನ್ನ ತಂದೆ ಧ್ರುವನಾರಾಯಣ್ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ. ಅವರ ಅಭಿವೃದ್ಧಿ ಕಾರ್ಯಗಳೇ ನನ್ನ ಗೆಲುವಿಗೆ ಶ್ರೀರಕ್ಷೆ ಯಾಗಲಿದೆ ಎಂದರು.

ಭ್ರಷ್ಟಾಚಾರದಲ್ಲಿ ನಿರತವಾಗಿರುವ ರಾಜ್ಯ ಬಿಜೆಪಿ ಸರ್ಕಾರದಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ. ಹಾಗೆಯೇ ನಂಜನಗೂಡು ಕ್ಷೇತ್ರ ದಲ್ಲೂ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ. ನನ್ನ ತಂದೆ ಆರ್.ಧ್ರುವನಾರಾಯಣ್ ಅವರು ಸಂಸದರಾಗಿದ್ದ ಸಂದರ್ಭ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ನೀಡಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ನನ್ನ ತಂದೆ ಧ್ರುವನಾರಾಯಣ್ ಅವರು ನಂಜನಗೂಡಿನಿಂದ ಸ್ಪರ್ಧಿಸಲು ಬಯಸಿದ್ದರು. ಆದರೆ ಆ ದೇವರು ಅವರನ್ನು ನಮ್ಮಿಂದ ದೂರ ಮಾಡಿದ್ದಾರೆ. ನನ್ನ ತಂದೆ ಆಶಯದಂತೆ ಕ್ಷೇತ್ರದ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದ ದರ್ಶನ್, ನನ್ನ ತಂದೆ ಧ್ರುವನಾರಾಯಣ್ ಅವರಿಗೆ ಕೊಟ್ಟ ಪ್ರೀತಿಯನ್ನು ನನಗೂ ನೀಡುವ ಮೂಲಕ ತಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದರು. ಈ ವೇಳೆ ಮಾಜಿ ಶಾಸಕ ಕಳಲೆ ಕೇಶವ ಮೂರ್ತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಹಿಂದುಳಿದ ವರ್ಗದ ಜಿಲ್ಲಾಧ್ಯಕ್ಷ ಕೆ. ಮಾರುತಿ, ಎಸ್‌ಟಿ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ದೊರೆಸ್ವಾಮಿ ನಾಯಕ, ಜಿಪಂ ಮಾಜಿ ಅಧ್ಯಕ್ಷೆ ಲತಾ, ಹುಲ್ಲಹಳ್ಳಿ ಬ್ಲಾಕ್ ಅಧ್ಯಕ್ಷ ಶ್ರೀಕಂಠನಾಯಕ, ನಗರ ಬ್ಲಾಕ್ ಅಧ್ಯಕ್ಷ ಸಿ.ಎಂ.ಶಂಕರ್, ಎಸ್ಸಿ ಘಟಕದ ಜಿಲ್ಲಾ ಉಪಾಧ್ಯಕ್ಷ ಮಹದೇವು, ಉಸ್ತುವಾರಿ ಶ್ರೀಕಂಠು, ಸೋಮೇಶ್, ಗ್ರಾಪಂ ಸದಸ್ಯ ಗೋವಿಂದರಾಜು, ಪಟೇಲ್, ಶಿವಪ್ಪದೇವರು, ಮುಖಂಡರಾದ ಶ್ರೀನಿವಾಸ್‌ಮೂರ್ತಿ, ನಾಗ ರಾಜೇಗೌಡ, ಸುಬ್ರಹ್ಮಣ್ಯ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.



ಹೋಟೆಲ್ ಮೇಲೆ ದಾಳಿ: 5 ಲೀ ಮದ್ಯ ವಶ

ಹುಣಸೂರು, ಏ.3– ಹೋಟೆಲ್‌ನಲ್ಲಿ ಅಕ್ರಮವಾಗಿ ಮದ್ಯ ದಾಸ್ತಾನು ಮಾಡಿರು ವುದನ್ನು ಪತ್ತೆ ಹಚ್ಚಿರುವ ಅಬಕಾರಿ ಇಲಾಖೆ ಅಧಿಕಾರಿಗಳು ಹೋಟೆಲ್ ಮಾಲೀಕನನ್ನು ಬಂಧಿಸಿ, 5 ಲೀಟರ್ ಮದ್ಯ ವಶಕ್ಕೆ ಪಡೆದಿದ್ದಾರೆ.

ತಾಲೂಕಿನ ಚಿಲ್ಕುಂದ ಗ್ರಾಮದ ಹೋಟೆಲ್ ಮಾಲಿಕ ನಾಗೇಂದ್ರ ಬಂಧಿತ ಆರೋಪಿ. ಅಬಕಾರಿ ಇಲಾಖೆಗೆ ಬಂದ ಖಚಿತ ಮಾಹಿತಿ ಮೇರೆಗೆ ಹುಣಸೂರು ವಲಯದ ಅಬಕಾರಿ ಇನ್ಸ್‌ಪೆಕ್ಟರ್ ನಾಗಲಿಂಗಸ್ವಾಮಿ ನೇತೃತ್ವದ ತಂಡ ನಾಗೇಂದ್ರ ಅವರ ಹೋಟೆಲ್ ಮೇಲೆ ದಾಳಿ ನಡೆಸಿದ ವೇಳೆ ವಿವಿಧ ಬ್ರಾಂಡಿನ 5.040 ಲೀಟರ್ ಮದ್ಯದ ಸ್ಯಾಚೆಟ್‌ಗಳು ಪತ್ತೆಯಾಗಿದ್ದು, ಆರೋಪಿಯನ್ನು ಮಾಲು ಸಹಿತ ಬಂಧಿಸಿ, ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಿದ ವೇಳೆ ನ್ಯಾಯಾಧೀಶರು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆಂದು ಅಬಕಾರಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಸಿಬ್ಬಂದಿಗಳಾದ ಕೆ.ಪಿ.ಶಿವಕುಮಾರ್, ಸಿ.ವಿ.ರಾಘವೇಂದ್ರ ಎಲ್.ವಿ.ರಾಮಚಂದ್ರ ಭಾಗವಹಿಸಿದ್ದರು.

ಕಸಾಯಿಖಾನೆಗೆ ಸಾಗಿಸುತ್ತಿದ್ದ ಏಳು ಕರುಗಳ ರಕ್ಷಣೆ



ಹುಣಸೂರು, ಏ.3– ಟಾಟಾ ಏಸ್ ವಾಹನದಲ್ಲಿ ಕಸಾಯಿಖಾನೆಗೆ ಸಾಗಿಸುತ್ತಿದ್ದ 7 ಕರುಗಳನ್ನು ಹುಣಸೂರು ಪೊಲೀಸರು ರಕ್ಷಿಸಿರುವ ಘಟನೆ ಭಾನುವಾರ ರಾತ್ರಿ ನಡೆದಿದೆ.

ನಗರದ ಸಲೀಂ ಪ್ಯಾಲೇಸ್ ಬಳಿ ಇನ್ಸ್‌ಪೆಕ್ಟರ್ ದೇವೇಂದ್ರ ಹಾಗೂ ಸಿಬ್ಬಂದಿ ಗಸ್ತಿನಲ್ಲಿದ್ದ ವೇಳೆ ಟಾಟಾ ಏಸ್(ಕೆಎ–45, ಎ.1874)ನಲ್ಲಿ ಕರುಗಳನ್ನು ಸಾಗಿಸಲಾಗುತ್ತಿತ್ತು. ಈ ವೇಳೆ ಪೊಲೀಸರು ಅನುಮಾನಗೊಂಡು ಟಾಟಾ ಏಸ್ ಅನ್ನು ಹಿಂಬಾಲಿಸಿ ತಡೆದು ತಪಾಸಣೆಗೊಳಪಡಿಸಿದಾಗ ಕರುಗಳು ಪತ್ತೆಯಾಗಿವೆ. ಈ ವೇಳೆ ಚಾಲಕ ವಾಹನ ಬಿಟ್ಟು ಪರಾರಿಯಾಗಿದ್ದಾನೆ. ಬಳಿಕ ಕರುಗಳನ್ನು ರಕ್ಷಿಸಿ ಪೊಲೀಸರು ಮೈಸೂರಿನ ಪಿಂಜರಾ ಪೋಲ್‌ಗೆ ಕಳುಹಿಸಿದ್ದಾರೆ. ಈ ಸಂಬಂಧ ವಾಹನ ಮಾಲೀಕ ಪ್ರಕಾಶ್ ಹಾಗೂ ಚಾಲಕನ ವಿರುದ್ಧ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಟಿಕೆಟ್ ವಿಚಾರವಾಗಿ ವಜ್ರೇಗೌಡರ ಮೇಲೆ ಬೋಸ್‌ರಿಂದ ಹಲ್ಲೆ ಗಾಳಿಸುದ್ದಿ ಹಿನ್ನೆಲೆ

ನನ್ನ, ಸುನೀಲ್ ಬೋಸ್ ನಡುವೆ ಜಗಳವಾಗಿಲ್ಲ

ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ವಜ್ರೇಗೌಡ ಸ್ಪಷ್ಟನೆ



ತಿ.ನರಸೀಪುರ, ಏ.3– ಕಳೆದ ಚುನಾವಣೆ ಯಲ್ಲಿ ಸೋತಿರುವ ಕಾಂಗ್ರೆಸ್ ಅನ್ನು ಈ ಬಾರಿಯೂ ಸೋಲಿಸಲು ಷಡ್ಯಂತ್ರ ನಡೆಸುತ್ತಿರುವ ವಿರೋಧಿಗಳು ಟಿಕೆಟ್ ವಿಚಾರವಾಗಿ 'ವಜ್ರೇಗೌಡರಿಗೆ ಸುನೀಲ್ ಬೋಸ್ ಹೊಡೆದರಂತೆ' ಎಂದು ಗಾಳಿ ಸುದ್ದಿ ಹಬ್ಬಿಸಿದ್ದಾರೆ. ಶ್ರೀವಡ್ಗಲ್ ಶ್ರೀರಂಗ ನಾಥಸ್ವಾಮಿ ಸಾಕ್ಷಿಯಾಗಿ ಬೋಸ್ ನನ್ನ ನಡುವೆ ಯಾವುದೇ ಜಗಳವಾಗಿಲ್ಲ. ನಾನೂ ಕೂಡ ಮಹದೇವಪ್ಪ ಕುಟುಂಬದ ಹಿರಿಯ ಸದಸ್ಯನಂತಿದ್ದೇನೆ ಎಂದು ಪಿಕಾರ್ಡ್ ಬ್ಯಾಂಕ್ ನಿರ್ದೇಶಕ, ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ ಸ್ಪಷ್ಟಪಡಿಸಿದರು.

ತಾಲೂಕಿನ ಅತ್ತಹಳ್ಳಿ ಗ್ರಾಮದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಕಳೆದ 3 ತಿಂಗಳಿಂದ ವಜ್ರೇ ಗೌಡರಿಗೆ ಸುನೀಲ್ ಬೋಸ್ ಹೊಡೆದು ಬಿಟ್ರಂತೆ. ಟಿಕೆಟ್‌ಗಾಗಿ ಅಪ್ಪ ಮಗನಿಗೆ ಫೈಟಿಂಗ್ ಅಂತೆ, ಮಹದೇವಪ್ಪ ನಿಂತರೆ ಸರಿ, ಸುನೀಲ್ ಸ್ಪರ್ಧಿಸಿದರೆ ಕಷ್ಟವಾಗ್ತಿತ್ತು. ಕೈಲಾಗದ ವಿರೋಧಿಗಳಿಂದ ಕಾಂಗ್ರೆಸ್ ವಿರುದ್ಧದ ಇಂತಹ ಅಪಪ್ರಚಾರ ಇನ್ನೂ ನಿಂತಿಲ್ಲವೆಂದು ಆರೋಪಿಸಿದರು.

ಚುನಾವಣೆ ಘೋಷಣೆಯಾಗಿರುವುದ ರಿಂದ ಇಂತಹ ಅಪಪ್ರಚಾರಗಳಿಗೆ ಜನರು ಕಿಮ್ಮತ್ತು ನೀಡಬಾರದು. ಬಿಜೆಪಿ ದುರಾಡಳಿತ ಮತ್ತು ಜೆಡಿಎಸ್ ಸಮ್ಮಿಶ್ರ ಸರ್ಕಾರದಲ್ಲಿ ಯಾವುದೇ ಅಭಿವೃದ್ಧಿ ಆಗದ್ದನ್ನು ನೋಡಿ ಬೇಸತ್ತಿರುವ ಜನರು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಲು ಒಲವು ವ್ಯಕ್ತಪಡಿಸುತ್ತಿದ್ದಾರೆ. ಮಹದೇವಪ್ಪ ಅವರಿಗೆ ಇದು ಕೊನೆ ಚುನಾವಣೆ. ಶಾಸಕರಾಗಿ ಆಯ್ಕೆ ಗೊಂಡರೆ ಸರ್ಕಾರದಲ್ಲಿ ಮತ್ತೆ ಸಚಿವರಾ ಗಲಿದ್ದಾರೆ. ಕ್ಷೇತ್ರದ ಜನರೂ ಅದರಲ್ಲೂ ಬನ್ನೂರು ಭಾಗದ ಒಕ್ಕಲಿಗ ಸಮುದಾ ಯದವರು ಕಾಂಗ್ರೆಸ್ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪ ಗೌಡ, ಮೈಮುಲ್ ನಿರ್ದೇಶಕ ಆರ್.ಚೆಲುವ ರಾಜು, ಬನ್ನೂರು ಪುರಸಭೆ ಮಾಜಿ ಅಧ್ಯಕ್ಷ ಡಿ.ಪದ್ಮನಾಭ ಮಾತನಾಡಿದರು. ಇದೇ ವೇಳೆ ಅತ್ತಹಳ್ಳಿ ಗ್ರಾಮದ ಯುವ ಮುಖಂಡರು ಜೆಡಿಎಸ್ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

ಅದ್ಧೂರಿ ಸ್ವಾಗತ: ಕಾಂಗ್ರೆಸ್ ಅಭ್ಯರ್ಥಿ ಡಾ.ಮಹದೇವಪ್ಪ ಅವರಿಗೆ ತಾಲೂಕಿನ ಬೇವಿನ ಹಳ್ಳಿಯಲ್ಲಿ ಒಕ್ಕಲಿಗ ಸಮುದಾಯದ ಮುಖಂಡರು ಅದ್ಧೂರಿ ಸ್ವಾಗತ ನೀಡಿದರು. ಚಾಮನಹಳ್ಳಿಯಲ್ಲೂ ಮತಯಾಚಿಸಿದ ಮಹದೇವಪ್ಪ ಅವರನ್ನೂ ಬೆಂಬಲಿಸಿ ಹತ್ತಾರು ಯುವಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

ಜಿಪಂ ಮಾಜಿ ಸದಸ್ಯೆ ಎಂ.ಸುಧಾ, ರಾಜ್ಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ಬೃಂದಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚನ್ನಕೇಶವ, ಮಹಿಳಾ ಅಧ್ಯಕ್ಷೆ ವೀಣಾ ಶಿವಕುಮಾರ್, ಮೈಮುಲ್ ಮಾಜಿ ನಿರ್ದೇಶಕ ಕೇತುಪುರ ಪ್ರಭಾಕರ್, ಗ್ರಾಪಂ ಸದಸ್ಯ ಎ.ಎನ್.ಮಹೇಶ್, ಗುತ್ತಿಗೆದಾರ ಬಸವಣ್ಣ, ಕೆ.ಎಂ.ಮಧುಕುಮಾರ್, ಮುಖಂಡರಾದ ವನಗಿರಿಗೌಡ, ರವಿ, ಲೋಕೇಶ್, ಡಾ.ಬಿ.ಕೆ.ಜ್ಞಾನಪ್ರಕಾಶ್, ಪುಟ್ಟರಾಜು, ಶಿವಕುಮಾರ್ ಇದ್ದರು.

ಜೆಡಿಎಸ್ ಕಟ್ಟಿದ್ದೇ ನಾವು

ರಾಜ್ಯದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಜೊತೆಗೆ ಜೆಡಿಎಸ್ ಪಕ್ಷ ಕಟ್ಟಿದ್ದೇ ಸಿದ್ದರಾಮಯ್ಯ ಹಾಗೂ ನಾವು. ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುತ್ತಿದ್ದಂತೆ ಪ್ರಮುಖ ಧಾರ್ಮಿಕ ಕೇಂದ್ರ ಶ್ರೀವಡ್ಗಲ್ಲು ಶ್ರೀರಂಗ ನಾಥಸ್ವಾಮಿ ಬೆಟ್ಟವನ್ನು ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಪಡಿಸೋಣ. ಜನರ ಜೊತೆಗಿನ ಬಾಂಧ ವ್ಯಕ್ಕೆ ಚ್ಯುತಿ ಬಾರದಂತೆ ನಡೆದುಕೊಳ್ಳೋಣ. ಕ್ಷೇತ್ರದಲ್ಲಿ ಬಾಕಿ ಉಳಿದಿರುವ ಅಭಿವೃದ್ಧಿ ಕೆಲಸಗಳನ್ನು ಪೂರ್ಣಗೊಳಿಸಲು ಬನ್ನೂರು ಭಾಗದ ಜನರು ಚುನಾವಣೆಯಲ್ಲಿ ನನ್ನ ಕೈ ಹಿಡಿಯಬೇಕು. –ಡಾ.ಹೆಚ್.ಸಿ.ಮಹದೇವಪ್ಪ ಕಾಂಗ್ರೆಸ್ ಅಭ್ಯರ್ಥಿ.

ಜೆಡಿಎಸ್ ಮುಖಂಡ ಕೆ.ಎಂ.ಕೃಷ್ಣನಾಯಕ ಬಿಜೆಪಿಗೆ ಸೇರ್ಪಡೆ



ಹೆಚ್.ಡಿ.ಕೋಟೆ, ಏ.3– ಹೆಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಟಿಕೆಟ್ ಕೈ ತಪ್ಪಿದ ಹಿನ್ನೆಲೆಯಲ್ಲಿ ಮುಖಂಡ ಕೆ.ಎಂ. ಕೃಷ್ಣನಾಯಕ ಅವರು ಸೋಮವಾರ ತಮ್ಮ ಅಪಾರ ಬೆಂಬಲಿಗರೊಂದಿಗೆ ಜೆಡಿಎಸ್ ತೊರೆದು ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಗೊಂಡರು.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಪಕ್ಷದ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರು ಕೃಷ್ಣನಾಯಕ ಅವರಿಗೆ ಪಕ್ಷದ ಬಾವುಟ ನೀಡಿ ಪಕ್ಷಕ್ಕೆ ಬರಮಾಡಿಕೊಂಡರು.

ನಂತರ ಮಾತನಾಡಿದ ಕೃಷ್ಣನಾಯಕ, ಕಳೆದ ಮೂರು ವರ್ಷಗಳಿಂದ ಹೆಚ್.ಡಿ. ಕೋಟೆಯಲ್ಲಿ ಹಲವು ಸಮಾಜಸೇವೆ ಮಾಡುವ ಮೂಲಕ ಜೆಡಿಎಸ್ ಪಕ್ಷ ಸಂಘ ಟನೆಯಲ್ಲಿ ತೊಡಗಿಸಿಕೊಂಡಿದ್ದೆ. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ಕ್ಷೇತ್ರದ ಜೆಡಿಎಸ್ ಟಿಕೆಟ್ ನೀಡುವ ಭರವಸೆ ನೀಡಿದ್ದರು. ಆದರೆ ಕೊನೆ ಘಳಿಗೆ ಯಲ್ಲಿ ಮೈಸೂರು ಜಿಲ್ಲೆಯ ಕೆಲ ಜಿಲ್ಲಾ ಮಟ್ಟದ ನಾಯಕರು ನನಗೆ ಟಿಕೆಟ್ ತಪ್ಪಿಸಿ ದರು. ಈ ಬಗ್ಗೆ ನೇರವಾಗಿ ಬೆಂಗಳೂರಿ ನಲ್ಲಿ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಕೇಳಲಾಗಿ ಟಿಕೆಟ್ ಕೊಡಲು ಸಾಧ್ಯ ವಿಲ್ಲ ಎಂದರು. ಈ ವಿಷಯ ತಿಳಿದು ನನ್ನ ಮನಸ್ಸಿಗೆ ಬೇಸರವಾಯಿತು. ಹೀಗಾಗಿ ಕೋಟೆಯಲ್ಲಿ ನನ್ನ ಬೆಂಬಲಿಗರ ಸಭೆ ಕರೆದು ಚರ್ಚಿಸಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಕೇಂದ್ರ ಸಚಿವ ಭಗವಂತ್ ಖೂಬಾ, ರಾಮನಗರ ಬಿಜೆಪಿ ಜಿಲ್ಲಾಧ್ಯಕ್ಷ ದೇವರಾಜ್, ಮೈಸೂರು ಜಿಲ್ಲಾ ಧ್ಯಕ್ಷೆ ಮಂಗಳ ಸೋಮಶೇಖರ್ ಹಾಗೂ ಬಿಜೆಪಿ ಪಕ್ಷದ ಪ್ರಮುಖರ ಸಮ್ಮುಖದಲ್ಲಿ ನಮ್ಮ ಮುಖಂಡರು ಹಾಗೂ ಕಾರ್ಯ ಕರ್ತರ ಜೊತೆ ಅಧಿಕೃತವಾಗಿ ಬಿಜೆಪಿಗೆ ಸೇರ್ಪಡೆಗೊಂಡಿದ್ದೇನೆ ಎಂದರು.



ತಿ.ನರಸೀಪುರದ ಕೆಎಸ್‌ಐಸಿ ಮೈಸೂರು ಸಿಲ್ಕ್ ವೀವಿಂಗ್ ಫ್ಯಾಕ್ಟರಿ ವತಿಯಿಂದ ನಡೆದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ತಿ.ನರಸೀಪುರ ಕೆಎಸ್‌ಐಸಿ ಘಟಕದ ಕಾರ್ಮಿಕರು ಪ್ರಥಮ ಬಹುಮಾನ ಪಡೆದರು. ಪ್ರದೀಪ್, ಕಾರ್ತಿಕ್, ಮಂಜಪ್ಪ, ಶಿವು, ಪ್ರಸಾದ್, ಸತೀಶ್, ಅವಿನಾಶ್, ರಾಕೇಶ್, ಮನು, ಭರತ್, ಮನೋರಂಜನ್, ಮಧು, ರಘು, ಭರತ್, ವಿಜಯ್, ಗಂಗಾ, ಮಹದೇವ ಪ್ರಸಾದ್, ಶಾಂತಕುಮಾರ್, ಸ್ವಾಮಿ ಇತರರಿದ್ದರು.

ಬೆಂಬಲಿಗರೊಂದಿಗೆ 'ಕೈ' ಹಿಡಿದ ಹೊನ್ನೇನಹಳ್ಳಿ ರವಿಗೌಡ



ಹುಣಸೂರು, ಏ.3– ಹುಣಸೂರು ಎಪಿಎಂಸಿ ಮಾಜಿ ಅಧ್ಯಕ್ಷ, ಜೆಡಿಎಸ್ ಮುಖಂಡ ಹೊನ್ನೇನಹಳ್ಳಿ ರವಿಗೌಡ ಜೆಡಿಎಸ್ ತೊರೆದು ತಮ್ಮ ಬೆಂಬಲಿಗರೊಂದಿಗೆ ಶಾಸಕ ಮಂಜುನಾಥ್ ಸಮ್ಮುಖದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಕಾಂಗ್ರೆಸ್ ಮುಖಂಡ ರವಿ ಸಾಲಿಯಾನ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಸೇರ್ಪಡೆಗೊಂಡ ರವಿಗೌಡರನ್ನು ಶಾಸಕ ಮಂಜುನಾಥ್ ಕಾಂಗ್ರೆಸ್ ಪಕ್ಷದ ಶಾಲು ಹಾಕಿ ಬರಮಾಡಿಕೊಂಡರು.

ಈ ವೇಳೆ ಮಾತನಾಡಿದ ರವಿಗೌಡ, ಯಾವುದೇ ಆಮಿಷಕ್ಕೆ ಒಳಗಾಗದೆ ಶಾಸಕ ಮಂಜುನಾಥರ ಜನಪರ ಕಾಳಜಿ ಮೆಚ್ಚಿ ತಮ್ಮ ಬೆಂಬಲಿಗರೊಂದಿಗೆ ಪಕ್ಷ ಸೇರ್ಪಡೆ ಯಾಗಿದ್ದು, ಪಕ್ಷ ವಹಿಸುವ ಜವಾಬ್ದಾರಿ ನಿರ್ವಹಿಸುವುದಾಗಿ ತಿಳಿಸಿದರು.

ಈ ವೇಳೆ ಮಾಜಿ ಶಾಸಕ ಕೋಡಿ ವಿ.ಪಾಪಣ್ಣ ಅವರ ಪುತ್ರ ಪ್ರಕಾಶ್ ಪಾಪಣ್ಣ, ತಾಲೂಕು ಒಕ್ಕಲಿಗರ ಸಂಘದ ಮಾಜಿ ಅಧ್ಯಕ್ಷ ಲೇ.ಟಿ.ಸುಂದರಣ್ಣ ಅವರ ಪುತ್ರ ಮಹೇಶ್, ಹೆಚ್.ಎನ್. ರವಿ, ಉದ್ಯಮಿಗಳಾದ ರಾಜು ಶಿವರಾಜೇಗೌಡ, ಟಿ.ಕೃಷ್ಣ, ತಾಪಂ ಮಾಜಿ ಸದಸ್ಯರಾದ ದೇವರಾಜ್, ಚಿನ್ನವೀರಯ್ಯ, ಗ್ರಾಪಂ ಮಾಜಿ ಅಧ್ಯಕ್ಷ ಆರ್.ಸ್ವಾಮಿ, ಸದಸ್ಯರಾದ ರಾಜಣ್ಣ, ತಟ್ಟೆಕೆರೆ ನವೀನ್, ಚನ್ನರಾಜು, ಹೊನ್ನೇನಹಳ್ಳಿ ಸೊಸೈಟಿ ನಿರ್ದೇಶಕ ಸೋಮಶೇಖರ್, ಮುಖಂಡರಾದ ರವಿ, ತೊಂಡಾಳು ಕೃಷ್ಣಶೆಟ್ಟಿ, ಬಿಳಿಕೆರೆ ಬಾಬು, ಈಶ್ವರ್, ದಿನೇಶ್, ಶ್ರೀಕಂಠ, ಪ್ರವೀಣ ಸೇರಿದಂತೆ ಅನೇಕರಿದ್ದರು.

ಟ್ರಾಕ್ಟರ್‌ಗೆ ಬೈಕ್ ಡಿಕ್ಕಿ: ಸವಾರ ಸಾವು

ಹುಣಸೂರು, ಏ.3– ಟ್ರಾಕ್ಟರ್‌ಗೆ ಹಿಂದಿನಿಂದ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ್ದರೆ, ಹಿಂಬದಿ ಸವಾರ ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ತಾಲೂಕಿನ ರತ್ನಪುರಿ ರಸ್ತೆಯ ಸಣ್ಣೇಗೌಡರ ಕಾಲೋನಿ ಬಳಿ ನಡೆದಿದೆ.

ಧರ್ಮಾಪುರ ಗ್ರಾಪಂ ವಾಟರ್‌ಮೆನ್ ತರಿಕಲ್ ಗ್ರಾಮದ ನಿವಾಸಿ ಕುಮಾರ್ ಅವರ ಪುತ್ರ ಮನುಕುಮಾರ್(22) ಸಾವನ್ನಪ್ಪಿದವರು. ಮನುಕುಮಾರ್ ತನ್ನ ಸ್ನೇಹಿತ ನೊಂದಿಗೆ ಹುಣಸೂರಿನಿಂದ ಸ್ವಗ್ರಾಮಕ್ಕೆ ತೆರಳುತ್ತಿದ್ದ ವೇಳೆ ನಿಯಂತ್ರಣ ತಪ್ಪಿ ಮುಂದೆ ಹೋಗುತ್ತಿದ್ದ ಜಲ್ಲಿ ತುಂಬಿದ್ದ ಟ್ರಾಕ್ಟರ್‌ಗೆ ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮ ಮನುಕುಮಾರ್ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದ್ದರೆ, ಹಿಂಬದಿ ಸವಾರ ಸಣ್ಣಪುಟ್ಟ ಗಾಯಗೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಈ ಸಂಬಂಧ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ತಿ.ನರಸೀಪುರ ವೈದ್ಯ ಡಾ.ರೇವಣ್ಣ ಬಿಜೆಪಿಗೆ ಸೇರ್ಪಡೆ



ತಿ.ನರಸೀಪುರ, ಏ.3– ಪಟ್ಟಣದ ಸರ್ಕಾರಿ ಆಸ್ಪತ್ರೆ ಖ್ಯಾತ ಶಸ್ತ್ರಚಿಕಿತ್ಸಕ ಡಾ. ರೇವಣ್ಣ ತಮ್ಮ ವೈದ್ಯಕೀಯ ವೃತ್ತಿಗೆ ರಾಜೀನಾಮೆ ನೀಡಿ ರಾಜಕೀಯ ಪ್ರವೇ ಶಿಸಿದ್ದು, ಸೋಮವಾರ ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಅಧಿಕೃತವಾಗಿ ಬಿಜೆಪಿಗೆ ಸೇರ್ಪಡೆಯಾದರು.

ಕಳೆದ ಕೆಲ ತಿಂಗಳಿಂದಲೂ ಡಾ. ರೇವಣ್ಣ ರಾಜಕೀಯ ಪ್ರವೇಶಿಸುತ್ತಾರೆ ಎಂಬ ಊಹಾಪೋಹಕ್ಕೆ ಅವರು ಬಿಜೆಪಿ ಪಕ್ಷ ಸೇರುವ ಮೂಲಕ ತೆರೆ ಎಳೆದಿದ್ದು, ತಿ.ನರಸೀಪುರ ಕ್ಷೇತ್ರದ ಟಿಕೆಟ್ ಅವರಿಗೆ ಸಿಗಬಹುದೆಂಬ ಮಾಹಿತಿ 'ಮೈಸೂರು ಮಿತ್ರ'ನಿಗೆ ದೊರಕಿದೆ.

ತಿ.ನರಸೀಪುರ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳ ಆರೋಗ್ಯದ ಬಗ್ಗೆ ಕಾಳಜಿ ವಹಿಸುತ್ತಿದ್ದ ಡಾ.ರೇವಣ್ಣ ರಾಜಕೀಯ ಪ್ರವೇಶಿಸುವ ಮೂಲಕ ಎಲ್ಲರಲ್ಲೂ ಕುತೂಹಲ ಕೆರಳುವಂತೆ ಮಾಡಿದ್ದಾರೆ. ತಮ್ಮ ಸರಳ, ಸಜ್ಜನಿಕೆಯಿಂದ ತಾಲೂಕಿ ನಲ್ಲಿ ಪ್ರಸಿದ್ಧ ವೈದ್ಯರಾಗಿದ್ದ ಇವರು ರಾಜಕೀಯದಲ್ಲಿ ಜನರ ನಾಡಿಮಿಡಿತ ಅರಿಯಲು ಮುಂದಾಗಿದ್ದಾರೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಪಕ್ಷದ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ರೇವಣ್ಣರಿಗೆ ಪಕ್ಷದ ಬಾವುಟ ನೀಡಿ ಸ್ವಾಗತ ಕೋರಿದರು. ಈ ವೇಳೆ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಕೇಂದ್ರ ಸಚಿವರಾದ ಭಗವಂತ ಖೂಬಾ, ಮಾಜಿ ಸಚಿವ ಸಿ.ಪಿ.ಯೋಗೇಶ್ವರ್, ಮೈಸೂರು ಜಿಲ್ಲಾ ಗ್ರಾಮಾಂತರ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ತಿ.ನರಸೀಪುರ ಮಂಡಲ ಅಧ್ಯಕ್ಷ ಕೆ.ಸಿ. ಲೋಕೇಶ್ ನಾಯಕ್, ಯುವ ಮೋರ್ಚಾ ಅಧ್ಯಕ್ಷ ಶಿವು, ಉಪಾಧ್ಯಕ್ಷ ಸಿ.ಬಿ.ಹುಂಡಿ ಸಿದ್ದು, ಮುಖಂಡರಾದ ಶಿವಕುಮಾರ್, ಲೋಕೇಶ್ ಗೌಡ, ಯೋಗೇಶ್, ಎಸ್‌ಎಂಆರ್ ಪ್ರಕಾಶ್, ಶೇಖರಪ್ಪ, ನಂಜುಂಡಸ್ವಾಮಿ ಇತರರಿದ್ದರು.

ಐದು ವರ್ಷದ ನಂತರ ನಮ್ಮ ಊರು ನೆನಪಿಗೆ ಬಂತಾ!

ಶಾಸಕ ಹರ್ಷವರ್ಧನ್‌ಗೆ ದೇವನೂರು ಯುವಕರ ತರಾಟೆ

ನಂಜನಗೂಡು, ಏ.3– ಗೆದ್ದು 5 ವರ್ಷದ ನಂತರ ನಮ್ಮ ಗ್ರಾಮ ನೆನಪಿಗೆ ಬಂತಾ? ನಮ್ಮ ಗ್ರಾಮಕ್ಕೆ ಯಾವುದೇ ಅಭಿವೃದ್ಧಿ ಕೆಲಸ ಮಾಡದೇ ಇರುವ ನಿಮಗೆ ಯಾಕೆ ಓಟ್ ಹಾಕ್ಬೇಕು? ಎಂದು ನಂಜನಗೂಡು ಶಾಸಕ ಹರ್ಷವರ್ಧನ್ ಅವರನ್ನು ಯುವಕರ ತಂಡ ತೀವ್ರ ತರಾಟೆಗೆ ತೆಗೆದುಕೊಂಡ ಘಟನೆ ತಾಲೂಕಿನ ದೇವನೂರು ಗ್ರಾಮದಿಂದ ವರದಿಯಾಗಿದೆ.


ಗ್ರಾಮದಲ್ಲಿರುವ ಶ್ರೀ ಗುರುಮಲ್ಲೇಶ್ವರ ಮಠಕ್ಕೆ ಇಂದು ತೆರಳಿದ್ದ ಶಾಸಕ ಹರ್ಷವರ್ಧನ್ ಅವರು, ತಮ್ಮ ಅವಧಿಯಲ್ಲಿ 823 ಕೋಟಿ ರೂ. ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿರುವುದಾಗಿ ಶ್ವೇತಪತ್ರವೊಂದನ್ನು ನೀಡಿ ಸ್ವಾಮೀಜಿಯವರ ಆಶೀರ್ವಾದ ಪಡೆದು ಹೊರಬರುತ್ತಿದ್ದಂತೆಯೇ ಗ್ರಾಮದ ಯುವಕರ ತಂಡ ಅವರಿಗೆ ಘೇರಾವ್ ಹಾಕಿ, 5 ವರ್ಷದ ನಂತರ ನಮ್ಮ ಗ್ರಾಮ ನೆನಪಿಗೆ ಬಂತೆ? ಮಠದ ಮುಂದೆ ಇರುವ ಬೀದಿ ದೀಪವನ್ನೂ ಕೂಡ ಶಾಸಕರಾಗಿ ನೀವು ಸರಿಪಡಿಸಲಿಲ್ಲ. ಈ ಗ್ರಾಮಕ್ಕೆ ಯಾವ ಅಭಿವೃದ್ಧಿ ಮಾಡಿದ್ದೀರಿ? ನಮ್ಮ ಗ್ರಾಮಕ್ಕೆ ಸಮರ್ಪಕವಾಗಿ ನೀರಿನ ಸೌಲಭ್ಯವನ್ನು ಕಲ್ಪಿಸಿಲ್ಲ. ನಿಮಗ್ಯಾಕೆ ಓಟು ಹಾಕಬೇಕು ಎಂದು ತರಾಟೆಗೆ ತೆಗೆದುಕೊಂಡರು. ಈ ವೇಳೆ ಶಾಸಕರ ನೆರವಿಗೆ ಬಂದ ಅವರ ಬೆಂಬಲಿಗರನ್ನೂ ಕೂಡ ಯುವಕರು ತರಾಟೆಗೆ ತೆಗೆದುಕೊಂಡಾಗ ಅವರೆಲ್ಲಾ ಅಸಹಾಯಕರಾಗಬೇಕಾಯಿತು.

ಈ ವೇಳೆ ಅಭಿವೃದ್ಧಿ ಬಗ್ಗೆ ಶಾಸಕರು ಶ್ವೇತಪತ್ರ ಹೊರಡಿಸಿರುವ ಕುರಿತು ಕಿಚಾಯಿಸಿದ ಯುವಕರು, ಶಾಸಕರೇ, ನಿಮ್ಮ ಶ್ವೇತಪತ್ರ ಯಾರಿಗೆ ಬೇಕು? ಬರೀ ದುರಸ್ತಿಗಾಗಿ ಹಣ ಬಿಡುಗಡೆ ಮಾಡಿ ನಿಮಗೆ ಬೇಕಾದವರಿಗೆ ಕಾಂಟ್ರಾಕ್ಟ್ ಕೊಟ್ಟು ಅದನ್ನೇ ಅಭಿವೃದ್ಧಿ ಎಂದು ಹೇಳುತ್ತಿದ್ದೀರಾ ಎಂದು ಖಾರವಾಗಿ ಪ್ರಶ್ನಿಸಿದಾಗ ಶಾಸಕರು ತಬ್ಬಿಬಾಗಿ, ಕಾರು ಹತ್ತಿ ತೆರಳಿದರು.

823 ಕೋಟಿ ವೆಚ್ಚದಲ್ಲಿ ನಂ.ಗೂಡು ಅಭಿವೃದ್ಧಿ: ಬಿ.ಹರ್ಷವರ್ಧನ್

ನಂಜನಗೂಡು, ಏ.3– ನನ್ನ ಅಧಿಕಾರ ವಧಿಯಲ್ಲಿ ಸರ್ಕಾರದಿಂದ 823 ಕೋಟಿ ರೂ. ಅನುದಾನ ತಂದು ಕ್ಷೇತ್ರವನ್ನು ಅಭಿವೃದ್ಧಿಗೊಳಿ ಸಿದ್ದೇನೆ. ನಾನು ಕೊಟ್ಟ ಮಾತಿನಂತೆ ಶ್ವೇತಪತ್ರ ಹೊರಡಿಸಿ ಚುನಾವಣಾ ಪ್ರಚಾರಕ್ಕೆ ಇಳಿದಿ ದ್ದೇನೆ ಎಂದು ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.

ತಾಲೂಕಿನ ದೇವನೂರು ಗುರುಮಲ್ಲೇಶ್ವರ ಮಠಕ್ಕೆ ಸೋಮವಾರ ಭೇಟಿ ನೀಡಿ ದೇವನೂರು ಶ್ರೀಮಹಾಂತ ಸ್ವಾಮಿಗಳಿಗೆ ಅಭಿವೃದ್ಧಿ ಕಾರ್ಯಗಳ ಶ್ವೇತಪತ್ರ ನೀಡಿ, ಆಶೀರ್ವಾದ ಪಡೆದು ನಂತರ ಅವರು ಮಾತನಾಡಿದರು. ಈ ಹಿಂದೆ ನುಡಿದಂತೆ ಕ್ಷೇತ್ರದ ಪ್ರತಿ ಗ್ರಾಪಂ ವಾರು ನಡೆಸಲಾಗಿರುವ ಅಭಿವೃದ್ಧಿ ಯೋಜನೆ ಗಳನ್ನು ಒಳಗೊಂಡ ಶ್ವೇತಪತ್ರ ಹೊರಡಿಸಿ ಚುನಾವಣಾ ಪ್ರಚಾರ ಆರಂಭಿಸಿದ್ದೇನೆ.



ಕ್ಷೇತ್ರದ ಪ್ರತಿ ಹಳ್ಳಿಗಳಲ್ಲಿ ಸಂಸದ ಶ್ರೀನಿವಾಸ ಪ್ರಸಾದ್, ಶಾಸಕರ ನಿಧಿ ಹಾಗೂ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೀಡಿದ ವಿಶೇಷ ಅನುದಾನ ಬಳಸಿ ಅಭಿವೃದ್ಧಿ ಕಾರ್ಯ ನಡೆಸ ಲಾಗಿದೆ. ನುಗು ಏತ ನೀರಾವರಿ ಕಾಮಗಾರಿ ಶೇ.80ರಷ್ಟು ಮುಗಿದಿದ್ದು, ಸೆಪ್ಟಂಬರ್ ಅಂತ್ಯಕ್ಕೆ 15 ರಿಂದ 20 ಸಾವಿರ ರೈತರ ಜಮೀನುಗಳಿಗೆ ನೀರು ಹರಿಯಲಿದೆ. ಶ್ರೀಕಂಠೇಶ್ವರ ದೇವಾಲ ಯದ ಆವರಣದಲ್ಲಿ ಭಕ್ತರ ಅನುಕೂಲಕ್ಕಾಗಿ 16.52 ಕೋಟಿ ವೆಚ್ಚದ 75 ಕೊಠಡಿಗಳ ಅತಿಥಿಗೃಹ ನಿರ್ಮಾಣಕ್ಕಾಗಿ ನೀಲನಕ್ಷೆ ಸಿದ್ಧವಾಗಿದೆ ಎಂದರು. ಕವಲಂದೆ ಭಾಗದಲ್ಲಿ ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಪೈಪ್‌ಲೈನ್ ಒಡೆದು ಹೋಗಿ ಕೊನೆಯ ಗ್ರಾಮಗಳಿಗೆ ಕುಡಿ ಯುವ ನೀರು ಲಭ್ಯವಾಗುತ್ತಿರಲಿಲ್ಲ. ಅದನ್ನು 8 ಕೋಟಿ ವೆಚ್ಚದಲ್ಲಿ ದುರಸ್ತಿಗೊಳಿಸಿ ಗ್ರಾಮಗಳಿಗೆ ಕುಡಿಯುವ ನೀರು ಒದಗಿಸಲಾಗುತ್ತಿದೆ. ನನ್ನ ಅಭಿವೃದ್ಧಿ ಕಾರ್ಯ ಗಮನಿಸಿ ಕ್ಷೇತ್ರದ ಮತದಾರರು ಮತ್ತೊಂದು ಅವಕಾಶ ನೀಡಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ಪಿ.ಮಹೇಶ್, ಜಿಲ್ಲಾ ಉಪಾಧ್ಯಕ್ಷ ಕೆಂಡಗಣ್ಣಪ್ಪ, ನಗರಸಭಾಧ್ಯಕ್ಷ ಹೆಚ್. ಎಸ್.ಮಹದೇವಸ್ವಾಮಿ, ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ, ರಂಗನಾಥ್, ಪುಟ್ಟಿಮೂರ್ತಿ, ಶ್ಯಾಂಪಟೇಲ್, ಎಪಿಎಂಸಿ ಮಾಜಿ ಸದಸ್ಯ ಗುರು ಸ್ವಾಮಿ, ಮಹೇಶ್, ಜಗದೀಶ್, ಚಿಕ್ಕಣ್ಣ, ಸಣ್ಣಯ್ಯ, ಗಂಗಾಧರ, ನಾಗಣ್ಣ, ಜಾವೀದ್, ಸಿದ್ದರಾಜು, ಗಂಗಾಧರ, ಸಣ್ಣಯ್ಯ, ತಾಪಂ ಮಾಜಿ ಸದಸ್ಯ ಶಿವಣ್ಣ, ಮಹದೇವನಾಯಕ ಉಪಸ್ಥಿತರಿದ್ದರು.



ಶ್ರೀ ಸಿ.ಶೇಖರ್ ರವರಿಗೆ
50ನೇ ವರ್ಷದ
ಹುಟ್ಟುಹಬ್ಬದ ಶುಭಾಶಯಗಳು
ನ್ಯೂ ರುಚಿತ್ ಗ್ಲಾಸ್ ಅಂಡ್ ಪ್ಲೈವುಡ್ ಹಾರ್ಡ್‌ವೇರ್ ಮಾಲೀಕರು,
ಜೆ.ಡಿ.ಎಸ್ ಮುಖಂಡರು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ
ವಾರ್ಡ್ ನಂ.45, ಶಾರದದೇವಿನಗರ, ಮೈಸೂರು
ಶುಭಕೋರುವವರು :
ಕೆ.ಎನ್.ಕುಮಾರ್, ನವೀನ್ ಕುಮಾರ್, ಚೆಲುವರಾಜು, ಬಾಳಗಾ, ವಿರುಪಾಕ್ಷ, ರಾಕೇಶ್, ಚರಣ್, ಶಿವು
ಹರೀಶ್, ಚೇತನ್, ಅನೀಲ್, ಜೆಡಿಎಸ್ ಕಾರ್ಯಕತರುಗಳು, ಮುಖಂಡರುಗಳು ಹಾಗೂ ಅಭಿಮಾನಿಗಳು ಶಾರದದೇವಿನಗರ, ಮೈಸೂರು